
ಮೈಸೂರು ಮಿತ್ರ

ಮೈಸೂರು–ಮಂಡ್ಯ–ಚಾಮರಾಜನಗರ–ಕೊಡಗು–ಹಾಸನ
ಬೆಳಗಿನ ಪ್ರಾದೇಶಿಕ ದಿನಪತ್ರಿಕೆ
ಡಿಸೆಂಬರ್ 18 ಬುಧವಾರ 2024
ಸಂಪುಟ: 45 | ಸಂಚಿಕೆ: 241 | ಪುಟಗಳು: 12
ಮೈಸೂರು ಸುದ್ದಿ: ದೂರವಾಣಿ: 2496520/21/26/27/28 ಜಾಹೀರಾತು: 2496522/23
ನಗರ ಕಚೇರಿಗಳು: ಕೆ.ಆರ್. ಸರ್ಕಲ್, ವಿಶ್ವೇಶ್ವರಯ್ಯ ಕಟ್ಟಡ Ph: 2431774, ಡಿ.ದೇವರಾಜ ಅರಸು ರಸ್ತೆ, Ph: 2428695
ಸುದ್ದಿ ಜಾಹೀರಾತಿಗಾಗಿ–ಮಂಡ್ಯ: 8762960325, ಚಾಮರಾಜನಗರ: 9242265657, ಕೊಡಗು: 9731469871
ಸುದ್ದಿ, ಫೋಟೋಗೆ: news@mysurumithra.com
ಜಾಹೀರಾತು: ad@mysurumithra.com, website: www.mysurumithra.com
₹4



ಗೈರಾದ ಬಿಜೆಪಿ ಸಂಸದರಿಗೆ ನೋಟಿಸ್

ನವದೆಹಲಿ, ಡಿ.17– ಲೋಕಸಭೆಯಲ್ಲಿ 'ಒನ್ ನೇಷನ್ ಒನ್ ಎಲೆಕ್ಷನ್'ನಲ್ಲಿ ಮತದಾನ ಮಾಡಲು ತಪ್ಪಿದ 20 ಸಂಸದರಿಗೆ ಬಿಜೆಪಿ ನೋಟಿಸ್ ಕಳುಹಿಸಿದೆ ಎನ್ನಲಾಗಿದೆ. ಲೋಕಸಭೆಯಲ್ಲಿ ಇಂದು ಒನ್ ನೇಷನ್ ಒನ್ ಎಲೆಕ್ಷನ್(ಒಎನ್‌ಒಇ) ಮಸೂದೆ ಮಂಡನೆ, ಮತದಾನದ ವೇಳೆ ಗೈರು ಹಾಜರಾದ ಪಕ್ಷದ 20ಕ್ಕೂ ಹೆಚ್ಚು ಸಂಸದರಿಗೆ ನೋಟಿಸ್ ಕಳುಹಿಸಲು ಬಿಜೆಪಿ ನಿರ್ಧರಿಸಿದೆ ಎಂದು ಮೂಲಗಳು ತಿಳಿಸಿವೆ. ಸದನದಲ್ಲಿ ಉಳಿಯುವಂತೆ ಈ ಮೊದಲೇ ಸಂಸದರಿಗೆ ಪಕ್ಷ ವ್ಹಿಪ್ ಜಾರಿ ಮಾಡಿತ್ತು. ಮಂಗಳವಾರ ಲೋಕಸಭೆಯಲ್ಲಿ ಒಂದು ರಾಷ್ಟ್ರ, ಒಂದು ಚುನಾವಣೆ ಮಸೂದೆಯನ್ನು ಮಂಡಿಸಲಾಯಿತು. ಇದು ಸಂಸತ್ತಿನ ಕೆಳಮನೆ, ರಾಜ್ಯ ಅಸೆಂಬ್ಲಿಗಳು ಮತ್ತು ಸ್ಥಳೀಯ ಸಂಸ್ಥೆಗಳಿಗೆ ಏಕಕಾಲದಲ್ಲಿ ಚುನಾವಣೆಗಳನ್ನು ನಡೆಸುವ ಗುರಿಯನ್ನು ಹೊಂದಿದೆ. ಡಿ.12ರಂದು ಪ್ರಧಾನಿ ಮೋದಿ ಅಧ್ಯಕ್ಷತೆಯಲ್ಲಿ ನಡೆದ ಸಂಪುಟ ಸಭೆ ಪ್ರಸ್ತಾವನೆಗೆ ಅನುಮೋದನೆ ನೀಡಿತ್ತು.

ಮಸೂದೆ ಅಸಂವಿಧಾನಿಕ; ಪ್ರತಿಪಕ್ಷಗಳು


ನವದೆಹಲಿ, ಡಿ.17–ಒಂದು ರಾಷ್ಟ್ರ ಒಂದು ಚುನಾವಣೆ ಮಸೂದೆಗೆ ಪ್ರತಿಪಕ್ಷಗಳು ತೀವ್ರ ವಿರೋಧ ವ್ಯಕ್ತಪಡಿಸಿದ್ದು, ಇದು ಅಸಂವಿಧಾನಿಕ, ಪ್ರಜಾಪ್ರಭುತ್ವವನ್ನು ದುರ್ಬಲಗೊಳಿಸುತ್ತದೆ ಮತ್ತು ಸಂವಿಧಾನದ ಮೂಲ ರಚನೆಯನ್ನು ಉಲ್ಲಂಘಿಸುತ್ತದೆ ಎಂದು ವಾದಿಸಿವೆ. ಮಸೂದೆಗೆ ಕಾಂಗ್ರೆಸ್, ಟಿಎಂಸಿ, ಎಸ್ಪಿ ಸೇರಿದಂತೆ ಹಲವು ಪಕ್ಷಗಳು ವಿರೋಧ ವ್ಯಕ್ತಪಡಿಸಿವೆ. ಈ ಮಸೂದೆ ತರುವ ಅಗತ್ಯ ಏನಿದೆ ಎಂದು ಸಮಾಜವಾದಿ ಪಕ್ಷದ ಸಂಸದ ಧರ್ಮೇಂದ್ರ ಯಾದವ್ ಪ್ರಶ್ನಿಸಿದ್ದಾರೆ. ಕಳೆದ ವಾರ ಪ್ರಧಾನಿ ನರೇಂದ್ರ ಮೋದಿ ಅಧ್ಯಕ್ಷತೆಯಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ಒಂದು ದೇಶ, ಒಂದು ಚುನಾವಣೆ ಮಸೂದೆಗೆ ಒಪ್ಪಿಗೆ ನೀಡಲಾಗಿದೆ. ಲೋಕಸಭೆ ಮತ್ತು ರಾಜ್ಯ ವಿಧಾನಸಭೆಗಳಿಗೆ ಏಕಕಾಲದಲ್ಲಿ ಚುನಾವಣೆ ನಡೆಸುವುದು ಇದರ ಉದ್ದೇಶವಾಗಿದೆ.

1 ರಾಷ್ಟ್ರ 1 ಚುನಾವಣೆ



ಲೋಕಸಭೆಯಲ್ಲಿ ವಿಧೇಯಕ ಮಂಡನೆ

● ಪ್ರಸ್ತಾವಕ್ಕೆ 269 ಪರ, 198 ವಿರುದ್ಧ ಮತ ● ಅಂತಿಮವಾಗಿ ವಿಸ್ತೃತ ಚರ್ಚೆಗಾಗಿ ಜೆಪಿಸಿಗೆ ಒಪ್ಪಿಸಲು ನಿರ್ಧಾರ



ಅರ್ಜುನ್ ರಾಮ್ ಮೇಘವಾಲ್



ನವದೆಹಲಿ, ಡಿ.17– ಪ್ರಸ್ತಾವಿತ ಒಂದು ದೇಶ, ಒಂದು ಚುನಾವಣೆ ವಿಧೇಯಕವು ಲೋಕಸಭೆಯಲ್ಲಿ ಇಂದು ಮಂಡನೆಯಾಯಿತು. ಆದರೆ, ವಿಪಕ್ಷಗಳ ವಿರೋಧದ ಹಿನ್ನೆಲೆಯಲ್ಲಿ ವಿಸ್ತೃತ ಚರ್ಚೆಗಾಗಿ ಜಂಟಿ ಸಂಸದೀಯ ಸಮಿತಿಗೆ (ಜೆಪಿಸಿ) ನೀಡಲು ಕೇಂದ್ರ ಸರ್ಕಾರ ಒಪ್ಪಿಗೆ ಸೂಚಿಸಿದೆ.

ಲೋಕಸಭೆ ಮತ್ತು ರಾಜ್ಯ ವಿಧಾನಸಭೆಗಳಿಗೆ ಏಕಕಾಲದಲ್ಲಿ ಚುನಾವಣೆ ನಡೆಸಲು ಉದ್ದೇಶಿಸಿರುವ ಸಂವಿಧಾನದ 129ನೇ ತಿದ್ದುಪಡಿ ಮಸೂದೆಯನ್ನು ಕೇಂದ್ರ ಕಾನೂನು ಸಚಿವ ಅರ್ಜುನ್ ರಾಮ್ ಮೇಘವಾಲ್ ಅವರು ಇಂದು ಲೋಕಸಭೆಯಲ್ಲಿ ಮಂಡಿಸಿದರು. ವಿಧೇಯಕದ ಮೇಲಿನ ಚರ್ಚೆಯಲ್ಲಿ ವಿಪಕ್ಷಗಳು ತೀವ್ರ ವಿರೋಧ ವ್ಯಕ್ತಪಡಿಸಿದವು. ಸ್ಪೀಕರ್ ಓಂ ಬಿರ್ಲಾ ಅವರು ವಿಧೇಯಕವನ್ನು ಧ್ವನಿ ಮತಕ್ಕೆ ಹಾಕಿದರು. ಇದಾದ ಬಳಿಕ ನಿಖರ ಫಲಿತಾಂಶಕ್ಕಾಗಿ ಎಲೆಕ್ಟ್ರಾನಿಕ್ ಮತದಾನ ನಡೆಸಲಾಯಿತು. ಈ ವೇಳೆ ವಿಧೇಯಕದ ಪರವಾಗಿ 269, ವಿರುದ್ಧವಾಗಿ 198 ಮತಗಳು ಬಿದ್ದಿವೆ ಎಂದು ಸ್ಪೀಕರ್ ಪ್ರಕಟಿಸಿದರು.

ವಿಸ್ತೃತ ಚರ್ಚೆಗಾಗಿ ಜೆಪಿಸಿಗೆ: ಲೋಕಸಭೆಯಲ್ಲಿ ವಿಧೇಯಕವು ಅಂಗೀಕಾರ ಪಡೆದುಕೊಂಡರೂ, ಹಲವು ವಿಚಾರಗಳ ಕುರಿತು ಆಡಳಿತ ಮತ್ತು ವಿಪಕ್ಷಗಳ ನಡುವೆ ವಿರೋಧಾಭಾಸ ಉಂಟಾಯಿತು. ಪ್ರಸ್ತಾವಿತ ವಿಧೇಯಕವನ್ನು ವಿಸ್ತೃತ ಚರ್ಚೆಗಾಗಿ ಜಂಟಿ ಸಂಸದೀಯ ಸಮಿತಿ (ಜೆಪಿಸಿ)ಗೆ ವಹಿಸಬೇಕು ಎಂದು ವಿಪಕ್ಷಗಳು ಬೇಡಿಕೆ ಇಟ್ಟವು. ಇದಕ್ಕೆ ಕೇಂದ್ರವು ಒಪ್ಪಿಗೆ ಸೂಚಿಸಿತು. ಕಾನೂನು ಸಚಿವ ಅರ್ಜುನ್ ರಾಮ್ ಮೇಘವಾಲ್ ಅವರು 'ಒಂದು ರಾಷ್ಟ್ರ, ಒಂದು ಚುನಾವಣೆ'ಯ ಸಂವಿಧಾನದ 129ನೇ ತಿದ್ದುಪಡಿ ವಿಧೇಯಕವನ್ನು ಜೆಪಿಸಿಗೆ ನೀಡುವುದಾಗಿ ನಂತರ ಸದನಕ್ಕೆ ತಿಳಿಸಿದರು.

ಚರ್ಚೆಗೆ ಸೂಚಿಸಿದ್ದ ಪ್ರಧಾನಿ: ಈ ವೇಳೆ ಮಧ್ಯಪ್ರವೇಶಿಸಿ ಮಾತನಾಡಿದ ಗೃಹ ಸಚಿವ ಅಮಿತ್ ಶಾ ಅವರು, 'ಒಂದು ರಾಷ್ಟ್ರ, ಒಂದು ಚುನಾವಣಾ' ವಿಧೇಯಕಕ್ಕೆ ಸಚಿವ ಸಂಪುಟದಲ್ಲಿ ಅಂಗೀಕಾರ ಸಿಕ್ಕ ವೇಳೆ, ಅದರ ವಿಸ್ತೃತ ಚರ್ಚೆಗೆ ಜೆಪಿಸಿಗೆ ಕಳುಹಿಸಬೇಕು ಎಂದು ಪ್ರಧಾನಿ ನರೇಂದ್ರ ಮೋದಿ ಅವರೇ ಸಲಹೆ ನೀಡಿದ್ದರು. ಮಹತ್ವದ ವಿಧೇಯಕವು ಹೆಚ್ಚಿನ ಚರ್ಚೆಗೆ ಒಳಪಡಬೇಕು ಎಂಬುದೂ ಸರ್ಕಾರದ ನಿರ್ಧಾರವಾಗಿದೆ ಎಂದು ತಿಳಿಸಿದ್ದರು. ಪ್ರಸ್ತಾವಿತ 'ಒಂದು ದೇಶ, ಒಂದು ಚುನಾವಣೆ' ವಿಧೇಯಕವು

■ 9ನೇ ಪುಟಕ್ಕೆ

ಬಿಜೆಪಿ ಬಣ ಬಡಿದಾಟಕ್ಕೆ ಕೊನೆಯಿಲ್ಲ...

ದಾವಣಗೆರೆಯಲ್ಲಿ ಉಭಯ ಬಣಗಳ ಬಲ ಪ್ರದರ್ಶನ

● ಫೆ.27, ಬಿಎಸ್‌ವೈ ಹುಟ್ಟುಹಬ್ಬದ ನೆಪದಲ್ಲಿ ವಿಜಯೇಂದ್ರ ಬಣದಿಂದ ಸಮಾವೇಶ ● ಸಂಕ್ರಾಂತಿ ನಂತರ ಯತ್ನಾಳ್ ಬಣದಿಂದ ಶಕ್ತಿ ಪ್ರದರ್ಶನ; ಮಹಾ ಸಿಎಂ ಫಡ್ನವೀಸ್ ಜೊತೆಗೆ ರಮೇಶ್ ಜಾರಕಿಹೊಳಿ ಚರ್ಚೆ



ವಿಜಯೇಂದ್ರ



ಯತ್ನಾಳ್

ಬೆಂಗಳೂರು, ಡಿ.17 (ಕೆಎಂಶಿ)– ಬಿ.ವೈ.ವಿಜಯೇಂದ್ರ ಅವರನ್ನು ಬಿಜೆಪಿ ರಾಜ್ಯಾಧ್ಯಕ್ಷರಾಗಿ ಮುಂದುವರೆಸಬೇಕು ಎಂದು ಒಂದು ಬಣ ವಾದಿಸಿದರೆ, ಇನ್ನೊಂದು ಬಣ ಅವರನ್ನು ಕೆಳಗಿಳಿಸಬೇಕೆಂದು ಒತ್ತಾಯಿಸಿ ದಾವಣಗೆರೆಯಲ್ಲಿ ಪ್ರತ್ಯೇಕ ಸಮಾವೇಶಗಳ ಹಮ್ಮಿ ಕೊಂಡಿವೆ. ಫೆಬ್ರವರಿ 27ರಂದು ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರ ಹುಟ್ಟುಹಬ್ಬದ ಅಂಗವಾಗಿ ವಿಜಯೇಂದ್ರ ಬೆಂಬಲಿಗರು ದಾವಣಗೆರೆಯಲ್ಲಿ ಸಮಾವೇಶ ಹಮ್ಮಿಕೊಂಡಿದ್ದಾರೆ.

ಈ ಸಮಾವೇಶಕ್ಕೆ ಪಕ್ಷದ ರಾಷ್ಟ್ರೀಯ ನಾಯಕರನ್ನು ಆಹ್ವಾನಿಸಲು ಮಾಜಿ ಸಚಿವ ಎಂ.ಪಿ.ರೇಣುಕಾಚಾರ್ಯ ದೆಹಲಿಯಲ್ಲಿ ಬಿಡಾರ ಹೂಡಿದ್ದಾರೆ.

ಇದಕ್ಕೂ ಮುನ್ನ ವಿರೋಧಿ ಬಣ ಸಂಕ್ರಾಂತಿ ನಂತರ ಜನವರಿಯಲ್ಲಿ ದಾವಣಗೆರೆಯಲ್ಲೇ ಸಮಾವೇಶದ ಸಿದ್ಧತೆ ನಡೆಸಿದೆ. ಸಮಾವೇಶಕ್ಕೆ ಮಹಾರಾಷ್ಟ್ರ ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್, ಕೇಂದ್ರ ಸಚಿವರಾದ ಪ್ರಹ್ಲಾದ್ ಜೋಷಿ, ವಿ.ಸೋಮಣ್ಣ ಹಾಗೂ ಶೋಭಾ ಕರಂದ್ಲಾಜೆ ಅವರನ್ನು ಆಹ್ವಾನಿಸಲು ಸಿದ್ಧತೆ ನಡೆಸಿದೆ. ವಿರೋಧಿ ಬಣದ ಪ್ರಮುಖ

■ 9ನೇ ಪುಟಕ್ಕೆ

ಸುವರ್ಣಸೌಧದಲ್ಲಿ ಸರಿರಾತ್ರಿವರೆಗೆ ಕಲಾಪ!

ಸತತ 15 ಗಂಟೆ; ದಾಖಲೆ ಸೃಷ್ಟಿ

ಬೆಳಗಾವಿ,ವಿಧಾನಮಂಡಲ, ಡಿ.17 (ಕೆಎಂಶಿ)– ಸುವರ್ಣಸೌಧದಲ್ಲಿ ನಡೆಯುತ್ತಿರುವ ವಿಧಾನಸಭೆ ಕಲಾಪವು ಇದೇ ಮೊದಲ ಬಾರಿಗೆ ಮಧ್ಯರಾತ್ರಿ 1 ಗಂಟೆಯವರೆಗೂ ನಡೆದು ದಾಖಲೆ ಸೃಷ್ಟಿಸಿದೆ.

ಸೋಮವಾರ ಬೆಳಗ್ಗೆ 10–40ಕ್ಕೆ ಆರಂಭವಾದ ಕಲಾಪ ಮಧ್ಯರಾತ್ರಿ 1 ಗಂಟೆಯವರೆಗೂ, ಅಂದರೆ, ಸತತ 15 ಗಂಟೆಗಳ ಕಾಲ ನಡೆಯಿತು.

ಸಭಾಧ್ಯಕ್ಷ ಯು.ಟಿ.ಖಾದರ್, ಇದು ದಾಖಲೆಯ ಕಲಾಪವಾಗಿದ್ದು, ಈ ಅವಧಿಯಲ್ಲಿ ವಿವಿಧ ವಿಷಯಗಳ ಚರ್ಚೆ ಜೊತೆಗೆ 8 ವಿಧೇಯಕಗಳ ಅಂಗೀಕಾರ ಮಾಡಲಾಗಿದೆ ಎಂದರು. ರಾತ್ರಿ 11 ಗಂಟೆ ವೇಳೆ ಸಚಿವ ಕೃಷ್ಣಭೈರೇಗೌಡ, ಸಭಾಧ್ಯಕ್ಷರೇ ಬೆಳಗ್ಗೆವರೆಗೆ ಕಲಾಪ ನಡೆಸೋಣ ನಿಮ್ಮ

■ 9ನೇ ಪುಟಕ್ಕೆ

ಜೈಲಿನಿಂದ ಹೊರಬಂದ ಪವಿತ್ರಾಗೌಡ ದೈವದ ಮೊರೆ



ಪವಿತ್ರಾಗೌಡ

ಬೆಂಗಳೂರು, ಡಿ.17–ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಜೈಲು ಸೇರಿದ್ದ ಪವಿತ್ರಾಗೌಡ ಇಂದು ಪರಪ್ಪನ ಅಗ್ರಹಾರದಿಂದ ಬಿಡುಗಡೆಯಾಗಿದ್ದಾರೆ.

6 ತಿಂಗಳ ಹಿಂದೆ ಜೈಲು ಸೇರಿದ್ದ ದರ್ಶನ್ ಗೆಳತಿ ಪವಿತ್ರಾ ಗೌಡ ಮತ್ತು ಇತರರಿಗೆ ಶುಕ್ರವಾರ ಹೈಕೋರ್ಟ್‌ನ ನ್ಯಾ. ಎಸ್.ವಿಶ್ವಜಿತ್ ಶೆಟ್ಟಿ ಅವರಿದ್ದ ಏಕ ಸದಸ್ಯ ಪೀಠ ಜಾಮೀನು ಮಂಜೂರು ಮಾಡಿತ್ತು. ಸೋಮವಾರ ಜಾಮೀನು ಪ್ರಕ್ರಿಯೆಗಳು ಎಲ್ಲಾ ಪೂರ್ಣಗೊಂಡ ಹಿನ್ನೆಲೆಯಲ್ಲಿ ಇಂದು ಬೆಳಗ್ಗೆ ಜೈಲಿನಿಂದ ಬಿಡುಗಡೆಯಾಗಿದ್ದಾರೆ. ಪವಿತ್ರಾ ಗೌಡ ಜೊತೆ 14ನೇ ಆರೋಪಿ ಪ್ರದೂಶ್ ಬಿಡುಗಡೆಯಾಗಿದ್ದಾನೆ.

■ 2ನೇ ಪುಟಕ್ಕೆ

ಸಂವಿಧಾನ ಬಲದಿಂದಲೇ ನಾನು ಸಿಎಂ, ಪ್ರಧಾನಿಯಾದೆ

● ಸಂವಿಧಾನ ನನಗೆ ಎಲ್ಲವನ್ನೂ ಕೊಟ್ಟಿದೆ, ಭಾವುಕರಾದ ಮಾಜಿ ಪ್ರಧಾನಿ ● ತುರ್ತು ಪರಿಸ್ಥಿತಿ ಕರಾಳತೆ, ತಮ್ಮ ಬಂಧನವನ್ನು ನೆನಪಿಸಿಕೊಂಡ ಹೆಚ್‌ಡಿಡಿ

ನವದೆಹಲಿ,ಡಿ.17–ಅತ್ಯಂತ ಬಡ ರೈತನ ಮಗನಾದ ನನಗೆ ಈ ದೇಶದ ಸಂವಿಧಾನ ಎಲ್ಲವನ್ನೂ ಕೊಟ್ಟಿದೆ ಎಂದು ರಾಜ್ಯಸಭೆಯಲ್ಲಿ ಮಂಗಳವಾರ ಭಾವುಕರಾಗಿ ಮಾತನಾಡಿದ ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡರು, ಸಂವಿಧಾನದ ಬಲದಿಂದಲೇ ನಾನು ಮುಖ್ಯಮಂತ್ರಿ, ಪ್ರಧಾನಮಂತ್ರಿ ಆದೆ ಎಂದರು.

ಸಂವಿಧಾನವನ್ನು ಅಳವಡಿಸಿಕೊಂಡ 75 ವರ್ಷಗಳ ಸಂದರ್ಭದಲ್ಲಿ ರಾಜ್ಯಸಭೆಯಲ್ಲಿ ಭಾಷಣ ಮಾಡಿದ ಅವರು; ಸಂವಿಧಾನ ನನಗೆ ಎಲ್ಲವನ್ನೂ ಕೊಟ್ಟಿದೆ. ಒಬ್ಬ ಬಡ ರೈತನ ಮಗನಾಗಿ, ದೂರದ ಕುಗ್ರಾಮದಿಂದ ಹಳ್ಳಿಯಿಂದ, ಅದೂ

> “ನಮ್ಮ ಸಂವಿಧಾನ ವಿಶ್ವದ ಅತ್ಯುತ್ತಮ ಸಂವಿಧಾನಗಳಲ್ಲಿ ಒಂದು. ಇದರ ಸಂರಚನೆ ನಮ್ಮ ವೈವಿಧ್ಯತೆ ಮತ್ತು ಒಕ್ಕೂಟ ವ್ಯವಸ್ಥೆಯ ರಚನೆಯನ್ನು ಗುರುತಿಸುವಾಗ ಪ್ರಜಾಪ್ರಭುತ್ವದ ವಿವಿಧ ಸಾಂಸ್ಥಿಕ ಸ್ತಂಭಗಳ ನಡುವೆ ಅಧಿಕಾರದ ಸಮತೋಲನವನ್ನು ಸಂವಿಧಾನವು ಅತ್ಯಂತ ಬಲವಾಗಿ ಎತ್ತಿ ಹಿಡಿದಿದೆ.
> –ಹೆಚ್.ಡಿ.ದೇವೇಗೌಡ, ಮಾಜಿ ಪ್ರಧಾನಿ

ಜಾತಿ ಸ್ತರದ ಕೆಳಮಟ್ಟದಿಂದ ಬಂದು ಮುಖ್ಯಮಂತ್ರಿ ಮತ್ತು ಪ್ರಧಾನಿಯಾಗಲು ಸಾಧ್ಯವಾಗಿದ್ದರೆ ಅದು ನಮ್ಮ ಸಂವಿಧಾನದಿಂದ ಮಾತ್ರ ಎಂದರು. ಕಳೆದ 75 ವರ್ಷಗಳ ಅವಧಿಯಲ್ಲಿ ಸಂವಿಧಾನದ ಚೌಕಟ್ಟಿನಲ್ಲಿ ಭಾರತ ಬೆಳೆದು ಬಂದ ರೀತಿ, ಮಾಡಿದ ಸಾಧನೆಗಳ ಬಗ್ಗೆ ಮಾಜಿ ಪ್ರಧಾನಿಗಳು ಅನೇಕ ಮಹತ್ವಪೂರ್ಣ ಅಂಶಗಳನ್ನು ಸದನದಲ್ಲಿ ಹಂಚಿಕೊಂಡರು. ಆಧುನಿಕ ಭಾರತವನ್ನು ರೂಪಿಸುವಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಅವರ ದೂರದೃಷ್ಟಿಯ ಸಂವಿಧಾನ ಅಸಾಧಾರಣ ಕೊಡುಗೆ ನೀಡಿದೆ. ಬಾಬಾ ಸಾಹೇಬ್ ಅವರ ನೇತೃತ್ವದಲ್ಲಿ ರಚನೆಯಾದ ನಮ್ಮ ಸಂವಿಧಾನವು ಅನೇಕ ಒತ್ತಡಗಳು ಮತ್ತು ನಮ್ಮ ಕಾಲದ ರಾಜಕೀಯವನ್ನು ತಡೆದುಕೊಂಡು ನಿಂತಿದೆ ಎಂದು ಹೇಳಿದರು.



ಸಂವಿಧಾನದ ಮೇಲಿನ ಚರ್ಚೆಯ ಸಂದರ್ಭದಲ್ಲಿ ತುರ್ತು ಪರಿಸ್ಥಿತಿ ನೆನಪು ಮಾಡಿಕೊಂಡ ಅವರು, ಅದೊಂದು ಕರಾಳ ಅವಧಿ. ಐವತ್ತು ವರ್ಷದ ಹಿಂದೆ ತುರ್ತು ಪರಿಸ್ಥಿತಿ

■ 9ನೇ ಪುಟಕ್ಕೆ



ಮುಖ್ಯಮಂತ್ರಿ ಸಿದ್ದರಾಮಯ್ಯ ಒಳಗೊಂಡ ಮುಡಾ ನಿವೇಶನ ಹಂಚಿಕೆ ಹಗರಣ

ಕೋರ್ಟ್‌ಗೆ ತನಿಖಾ ವರದಿ ಸಲ್ಲಿಸಲು ಲೋಕಾಯುಕ್ತರಿಗೆ ಇನ್ನು 7 ದಿನ ಬಾಕಿ!

● ಡಿಸೆಂಬರ್ 24 ವರದಿ ಸಲ್ಲಿಕೆಗೆ ಗಡುವು ● ಆದರೆ ಕಾಲಾವಕಾಶ ಕೋರುವ ಸಾಧ್ಯತೆ
● ದಿನೇಶ್‌ಕುಮಾರ್ ಇನ್ನೂ ವಿಚಾರಣೆ ಮಾಡಿಲ್ಲ ● ಲೋಕಾಯುಕ್ತರ ನಡೆ ನಿಗೂಢ

ಮೈಸೂರು, ಡಿ.17(ಬಿಎಲ್‌ಯು)– ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧದ ಮುಡಾ ಹಗರಣದ ಬಗ್ಗೆ ಬೆಂಗಳೂರಿನ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯಕ್ಕೆ ತನಿಖಾ ವರದಿ ಸಲ್ಲಿಸಲು ಮೈಸೂರು ಲೋಕಾಯುಕ್ತರಿಗೆ ಇನ್ನು ಕೇವಲ 7 ದಿನ ಮಾತ್ರ ಬಾಕಿ ಇದೆ.

ಮೈಸೂರಿನ ವಿಜಯನಗರ ಮೂರನೇ ಹಂತದಲ್ಲಿ ಸಿದ್ದರಾಮಯ್ಯ ಪತ್ನಿ ಪಾರ್ವತಿ ಅವರು ಅಕ್ರಮವಾಗಿ 14 ನಿವೇಶನ ಪಡೆದಿದ್ದಾರೆಂಬ ಆರೋಪದ ಬಗ್ಗೆ ತನಿಖೆ ನಡೆಸಿ ಡಿ.24 ರೊಳಗೆ ವರದಿ ನೀಡುವಂತೆ ಬೆಂಗಳೂರಿನ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ಮೈಸೂರಿನ ಲೋಕಾಯುಕ್ತ ಎಸ್ಪಿ ಟಿ.ಜೆ. ಉದೇಶ್ ಅವರಿಗೆ ಆದೇಶ ನೀಡಿತ್ತು.

ಆದರೆ, ಒಂದು ಮೂಲದ ಪ್ರಕಾರ ತನಿಖಾ ವರದಿ ಸಲ್ಲಿಸಲು ಲೋಕಾಯುಕ್ತರು ನ್ಯಾಯಾಲಯದಲ್ಲಿ ಕಾಲಾವಕಾಶ ಕೇಳುವ ಸಾಧ್ಯತೆ ಇದೆ ಎಂದು ತಿಳಿದು ಬಂದಿದೆ. ಲೋಕಾಯುಕ್ತರು ಪ್ರಕರಣದ ಬಗ್ಗೆ ಈಗಾಗಲೇ ಹಲವು ಆಯಾಮಗಳಲ್ಲಿ ತನಿಖೆ ನಡೆಸಿದ್ದಾರೆ.



ಆದರೆ ಮುಡಾದ ಹಿಂದಿನ ಆಯುಕ್ತ ಜಿ.ಟಿ. ದಿನೇಶ್‌ಕುಮಾರ್ ಅವರನ್ನು ಇನ್ನು ವಿಚಾರಣೆ ಮಾಡಬೇಕಿದೆ. ಜೊತೆಗೆ ಮತ್ತಷ್ಟು ದಾಖಲಾತಿಗಳನ್ನು ಸಂಗ್ರಹಿಸಬೇಕಿದೆ. ಆದ ಕಾರಣ ತನಿಖಾ ವರದಿ ಸಲ್ಲಿಸಲು ಕಾಲಾವಕಾಶ ಕೇಳುವ ಸಾಧ್ಯತೆ ಇದೆ ಎನ್ನಲಾಗಿದೆ. ಸಿದ್ದರಾಮಯ್ಯ ವಿರುದ್ಧದ ಮುಡಾ ಪ್ರಕರಣವನ್ನು ಸಿಬಿಐಗೆ ವಹಿಸುವ ಸಂಬಂಧ ವಿಚಾರಣೆ ನಡೆಸುತ್ತಿರುವ ನ್ಯಾಯಮೂರ್ತಿ ನಾಗಪ್ರಸನ್ನ ನೇತೃತ್ವದ ಏಕ ಸದಸ್ಯ ಪೀಠಕ್ಕೆ ವರದಿ ಸಲ್ಲಿಸಲು ಈಗಾಗಲೇ ಲೋಕಾಯುಕ್ತರು ಕಾಲಾವಕಾಶ ಪಡೆದಿದ್ದಾರೆ. ಅದರಂತೆ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯದಲ್ಲಿ ಕೂಡ ಕಾಲಾವಕಾಶ ಕೋರುವ ಸಾಧ್ಯತೆ ಇದೆ

■ 9ನೇ ಪುಟಕ್ಕೆ

ತನಿಖಾ ವರದಿ ಸಲ್ಲಿಸುವ ಬಗ್ಗೆ ಡಿ.24 ರಂದೇ ತೀರ್ಮಾನ



ಟಿ.ಜೆ.ಉದೇಶ್

ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧದ ಮುಡಾ ಹಗರಣದ ಬಗ್ಗೆ ತನಿಖಾ ವರದಿ ಸಲ್ಲಿಸುವ ಬಗ್ಗೆ ಡಿಸೆಂಬರ್ 24ರಂದೇ ತೀರ್ಮಾನಿಸಲಾಗುವುದು ಎಂದು ಮೈಸೂರು ಲೋಕಾಯುಕ್ತ ಎಸ್ಪಿ ಟಿ.ಜೆ.ಉದೇಶ್ ಸ್ಪಷ್ಟಪಡಿಸಿದ್ದಾರೆ. ಡಿಸೆಂಬರ್ 24ರೊಳಗೆ ವರದಿ ಸಲ್ಲಿಸುತ್ತೀರೊ ಅಥವಾ ವರದಿ ಸಲ್ಲಿಕೆಗೆ ಕಾಲಾವಕಾಶ ಕೋರುತ್ತೀರೊ ಎಂಬ 'ಮೈಸೂರು ಮಿತ್ರ' ಪ್ರಶ್ನೆಗೆ ಪ್ರತಿಕ್ರಿಯೆ ನೀಡಿದ ಉದೇಶ್ ಅವರು, ಈ ಬಗ್ಗೆ ಅಂದೇ ತೀರ್ಮಾನವಾಗುತ್ತದೆ ಎಂದು ಹೇಳಿದರು. ಡಿ.24ರಂದೇ ತನಿಖಾ ವರದಿ ಸಲ್ಲಿಸುತ್ತೇವೊ ಅಥವಾ ಕಾಲಾವಕಾಶ ಕೋರುತ್ತೇವೊ ಎಂದು ಖಚಿತವಾಗಿ ಹೇಳಲು ಸಾಧ್ಯವಿಲ್ಲ. ಮುಡಾ ಹಿಂದಿನ ಆಯುಕ್ತ ದಿನೇಶ್ ಕುಮಾರ್ ಅವರನ್ನು ಇನ್ನು ವಿಚಾರಣೆ ಮಾಡದಿರುವ ಬಗ್ಗೆ ಪ್ರತಿಕ್ರಿಯಿಸಿದ ಉದೇಶ್ ಅವರು, ವಿಚಾರಣೆಗೆ ಇನ್ನು ದಿನಾಂಕ ನಿಗದಿ ಮಾಡಿಲ್ಲ ಎಂದು ಸ್ಪಷ್ಟನೆ ನೀಡಿದರು. ಡಿಸೆಂಬರ್ 24ರಂದೇ ವರದಿ ಸಲ್ಲಿಸುತ್ತಾರೋ ಅಥವಾ ಕಾಲಾವಕಾಶ ಕೋರುತ್ತಾರೋ ಎಂಬ ಲೋಕಾಯುಕ್ತರ ನಡೆ ನಿಗೂಢವಾಗಿದೆ.





ಕಬ್ಬಿನ ದರ ಟನ್‌ಗೆ 4500 ರೂ. ನಿಗದಿಪಡಿಸುವಂತೆ ಪರಿಷತ್ ಸದಸ್ಯ ವಿವೇಕಾನಂದ ಮನವಿ

ಮೈಸೂರು,ಡಿ.17– ಕಬ್ಬು ಬೆಳೆಯುವ ರೈತರಿಗೆ ಸರ್ಕಾರ ಏನಾದರೂ ಅನುಕೂಲ ಮಾಡಿಕೊಡಬೇಕೆಂದಿದ್ದರೆ ಟನ್ ಕಬ್ಬಿಗೆ ತಕ್ಷಣ 4500 ರೂ. ದರ ನಿಗದಿಪಡಿಸುವಂತೆ ದಕ್ಷಿಣ ಶಿಕ್ಷಕರ ಕ್ಷೇತ್ರದ ವಿಧಾನಪರಿಷತ್ ಸದಸ್ಯ ಕೆ.ವಿವೇಕಾನಂದ ಮನವಿ ಮಾಡಿದ್ದಾರೆ.



ಕೆ.ವಿವೇಕಾನಂದ

ಬೆಳಗಾವಿ ಚಳಿಗಾಲದ ಅಧಿವೇಶನದಲ್ಲಿ ವಿಧಾನಪರಿಷತ್‌ನಲ್ಲಿ ಕೃಷಿ ಮಾರುಕಟ್ಟೆ ಹಾಗೂ ಸಕ್ಕರೆ ಸಚಿವ ಶಿವಾನಂದ ಪಾಟೀಲ್ ಅವರನ್ನುದ್ದೇಶಿಸಿ ಮಾತನಾಡಿದ ವಿವೇಕಾನಂದ ಅವರು, ಸರ್ಕಾರ ಈಗ ಟನ್ ಕಬ್ಬಿಗೆ ರೈತರಿಗೆ ನೀಡುತ್ತಿರುವ 3151 ರೂ. ದರ ಏನೇನೂ ಸಾಲದು. ವಾಸ್ತವವಾಗಿ 1 ಟನ್ ಕಬ್ಬು ಬೆಳೆಯಲು ರೈತರು 1500 ರೂ. ಖರ್ಚು ಮಾಡಬೇಕಾಗುತ್ತದೆ. ಬೆಳೆದ ಕಬ್ಬನ್ನು ಕಟಾವು ಮಾಡಿ ಕಾರ್ಖಾನೆಗಳಿಗೆ ಸಾಗಣೆ ಮಾಡಲು ಮತ್ತೆ 800 ರೂ. ಖರ್ಚಾಗುತ್ತದೆ. ಒಟ್ಟಾರೆ 1 ಟನ್‌ಗೆ 2300ರಿಂದ 2500 ರೂ. ವೆಚ್ಚವಾಗುತ್ತದೆ.

ಅದೇ ಗುಜರಾತ್, ಪಂಜಾಬ್ ಇನ್ನಿತರ ರಾಜ್ಯಗಳಲ್ಲಿ ಟನ್ ಕಬ್ಬಿಗೆ 4500 ರಿಂದ 4700 ರೂ. ದರ ನಿಗದಿಪಡಿಸಲಾಗಿದೆ. ಇದಕ್ಕೆ ಹೋಲಿಸಿದರೆ ರಾಜ್ಯದ ರೈತರಿಗೆ ನೀಡುತ್ತಿರುವ ದರ ತೀರಾ ಕಡಿಮೆ. ಹಾಗಾಗಿ ರೈತರ ಸಂಕಷ್ಟ ನಿವಾರಿಸುವ ಉದ್ದೇಶ ಸರ್ಕಾರಕ್ಕೆ ಇದ್ದಲ್ಲಿ ತಕ್ಷಣ ಟನ್ ಕಬ್ಬಿಗೆ 4500 ರೂ. ನಿಗದಿಪಡಿಸುವಂತೆ ವಿವೇಕಾನಂದ ಆಗ್ರಹಪಡಿಸಿದರು.

ರಾಜ್ಯ ಮತ್ತು ದೇಶದ ಜನತೆ ಈಗ ರೈತರನ್ನು ಅವಲಂಬಿಸಿದ್ದಾರೆ. ನಾವೆಲ್ಲರೂ ಅನ್ನದಾತನ ಹೆಸರಲ್ಲಿ ಪ್ರಮಾಣ ವಚನ ಸ್ವೀಕರಿಸಿದ್ದೇವೆ. ಅನ್ನದೇವ ಪ್ರಾಣ, ಪ್ರಾಣ ಪರಬ್ರಹ್ಮ ಅನ್ನದಾತೋ ಸುಖೀಭವ! ಎಂಬುದು ನಮ್ಮ ಮಂತ್ರವಾಗಬೇಕಿದೆ. ಟನ್ ಕಬ್ಬಿಗೆ 2500 ರೂ. ಖರ್ಚು ಮಾಡಿ ಬೆಳೆದು ಅದನ್ನು 3151 ರೂಗೆ ಮಾರಾಟ ಮಾಡಿದರೆ ರೈತರಿಗೆ ಉಳಿಯುವುದು ಕೇವಲ 650 ರೂ. ಮತ್ತೊಂದು ಸಂಗತಿಯೆಂದರೆ, ಈಗ ಕೃಷಿ ಚಟುವಟಿಕೆಗಳಲ್ಲಿ ಕೂಲಿಯ ದರ ಹೆಚ್ಚಾಗಿದೆ. 650ರಿಂದ 750 ರೂ. ಕೂಲಿ ಭರಿಸಬೇಕಿದೆ. ಇಷ್ಟು ನೀಡಿದರೂ ಕೂಲಿಕಾರರು ಸಿಗುವುದು ಕಷ್ಟ. ಇದೆಲ್ಲವನ್ನು ಮನವರಿಕೆ ಮಾಡಿಕೊಂಡು ರೈತರ ಕಬ್ಬಿಗೆ ಕೂಡಲೇ ದರ ಹೆಚ್ಚಳ ಮಾಡಬೇಕು ಎಂದು ಸರ್ಕಾರಕ್ಕೆ ವಿಧಾನಪರಿಷತ್ ಸದಸ್ಯ ವಿವೇಕಾನಂದ ಮನವಿ ಮಾಡಿದರು.

ಡಿ.20ರಿಂದ 'ಮಧುಮೇಹ ಮುನ್ಸೂಚನೆ ತಡೆಗಟ್ಟುವಿಕೆ, ಉಪಚಾರ' ಸಮ್ಮೇಳನ

ಮೈಸೂರು,ಡಿ.17(ಎಂಟಿವೈ)– ಮೈಸೂರಿನ ಜೆಎಸ್‌ಎಸ್ ವೈದ್ಯಕೀಯ ಕಾಲೇಜಿನ ಸಭಾಂಗಣದಲ್ಲಿ ಡಿ.20, 21 ಮತ್ತು 22ರಂದು 'ಮಧುಮೇಹದ ಮುನ್ಸೂಚನೆ ತಡೆಗಟ್ಟುವಿಕೆ ಮತ್ತು ಉಪಚಾರ' ವಿಷಯ ಕುರಿತು ರಾಜ್ಯಮಟ್ಟದ ಸಮ್ಮೇಳನ ಆಯೋಜಿಸಲಾಗಿದೆ ಎಂದು ಕರ್ನಾಟಕ ರಾಜ್ಯ ಮಧುಮೇಹ ಅಧ್ಯಯನ ಮತ್ತು ಸಂಶೋಧನಾ ಸಂಸ್ಥೆ ಛೇರ್ಮನ್ ಡಾ.ವೈ.ಎಸ್.ರವಿಕುಮಾರ್ ತಿಳಿಸಿದ್ದಾರೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕರ್ನಾಟಕ ರಾಜ್ಯ ಮಧುಮೇಹ ಅಧ್ಯಯನ ಮತ್ತು ಸಂಶೋಧನಾ ಸಂಸ್ಥೆ (ಕೆಆರ್‌ಎಸ್‌ಎಸ್‌ಡಿಐ) ಈ ಸಮ್ಮೇಳನ ಆಯೋಜಿಸಿದೆ. ಸಮ್ಮೇಳನದಲ್ಲಿ ಮಧುಮೇಹ ಮುನ್ಸೂಚನೆ ತಡೆಗಟ್ಟುವಿಕೆ ಮತ್ತು ಉಪಚಾರ ವಿಷಯ ಕುರಿತು ದೇಶದ 70ಕ್ಕೂ ಹೆಚ್ಚು ಪ್ರಸಿದ್ಧ ಮಧುಮೇಹ ತಜ್ಞರು ತಮ್ಮ ಅನುಭವ ಮತ್ತು ಸಂಶೋಧನೆಗಳ ಬಗ್ಗೆ ಮಾಹಿತಿ ನೀಡಲಿದ್ದಾರೆ. ಅಲ್ಲದೆ, 100ಕ್ಕೂ ಹೆಚ್ಚು ಯುವ ಸಂಶೋಧಕರು ಪ್ರಬಂಧ ಮಂಡಿಸಲಿದ್ದಾರೆ. ಮೊದಲ ದಿನ ವಿವಿಧ ವಿಷಯಗಳಲ್ಲಿ 6 ಕಾರ್ಯಾಗಾರಗಳು ನಡೆಯಲಿವೆ ಎಂದು ತಿಳಿಸಿದರು.

ಡಿ.21ರಂದು ಬೆಳಗ್ಗೆ 10ಕ್ಕೆ ಡಾ.ಶಶಾಂಕ್ ಆರ್.ಜೋಶಿ ಸಮ್ಮೇಳನ ಉದ್ಘಾಟಿಸುವರು. ರಾಜವಂಶಸ್ಥೆ ಪ್ರಮೋದಾದೇವಿ ಒಡೆಯರ್, ಜೆಎಸ್‌ಎಸ್ ಉನ್ನತ ಶಿಕ್ಷಣ ಮತ್ತು ಸಂಶೋಧನಾ ಅಕಾಡೆಮಿ ಉಪಕುಲಪತಿ ಹೆಚ್.ಬಸವನಗೌಡಪ್ಪ, ಪ್ರೊ.ಚಾನ್ಸಲರ್ ಬಿ.ಸುರೇಶ್ ಪಾಲ್ಗೊಳ್ಳುವರು. ಸುಮಾರು 20 ವೈದ್ಯಕೀಯ ಕಾಲೇಜುಗಳ ಸ್ನಾತಕೋತ್ತರ ವಿದ್ಯಾರ್ಥಿಗಳ ತಂಡಗಳು ಭಾಗವಹಿಸಲಿವೆ. 2 ದಿನ ಯೋಗ ಕಲಿಕೆ ಪ್ರಾತ್ಯಕ್ಷಿಕೆಯೂ ನಡೆಯಲಿದೆ ಎಂದರು. ಗೋಷ್ಠಿಯಲ್ಲಿ ಸಂಸ್ಥೆಯ ಸಂಘಟನಾ ಕಾರ್ಯದರ್ಶಿ ಡಾ.ಕೆ.ಎಂ.ಶ್ರೀಕಾಂತ್, ಖಜಾಂಚಿ ಡಾ.ಕೆ.ಸಿ.ಶಶಿಧರ, ಜಂಟಿ ಕಾರ್ಯದರ್ಶಿ ಡಾ.ಎಂ.ಸಿ.ಪ್ರಸಾದ್ ಇದ್ದರು.

ಸಿದ್ದೇಗೌಡರಿಗೆ ಸನ್ಮಾನ...



ಕರ್ನಾಟಕ ರಾಜ್ಯ ಚಲನಚಿತ್ರ ವಾಣಿಜ್ಯ ಮಂಡಳಿ ನೂತನ ನಿರ್ದೇಶಕರಾಗಿ ನಿರ್ಮಾಪಕರ ವಲಯದಿಂದ ಆಯ್ಕೆಯಾದ ಮೈಸೂರಿನ ಬಿ.ಸಿದ್ದೇಗೌಡ ಅವರನ್ನು ಚಲನಚಿತ್ರ ನಿರ್ಮಾಪಕ ಜಯಪುರ ಮಹದೇವೇಗೌಡ, ಉದ್ಯಮಿ ಹಾಗೂ ಸಮಾಜ ಸೇವಕರಾದ ಎಸ್.ಶ್ರೀಕಾಂತ್ ಆತ್ಮೀಯವಾಗಿ ಅಭಿನಂದಿಸಿದರು. ಈ ವೇಳೆ ಬೆಳವಾಡಿ ದಿವಾಕರ್ ಮತ್ತು ಮುಂತಾದವರು ಉಪಸ್ಥಿತರಿದ್ದರು.

ಸೈನಸೈಟಿಸ್ ಸಮಸ್ಯೆಗೆ ಮೈಸೂರಲ್ಲಿ ಚಿಕಿತ್ಸೆ

ಮೈಸೂರು,ಡಿ.17(ಜಿಎ)–ದೀರ್ಘ ಕಾಲದ ಸೈನಸೈಟಿಸ್ ಸಮಸ್ಯೆಯಿಂದ ಬಳಲುತ್ತಿರುವವರಿಗೆ ವರ್ಲ್ಡ್ ಪ್ರಾಣಿಕ್ ಹೀಲಿಂಗ್ ಸಂಸ್ಥೆ ಮತ್ತು ಡರ್ಲಾಸ್ ಹೆಲ್ತ್‌ಕೇರ್ ವತಿಯಿಂದ ಪ್ರಾಣಿಕ್ ಹೀಲಿಂಗ್ ಪದ್ಧತಿಯಿಂದ ದೊರೆಯುವ ಅನುಕೂಲ ಬಗ್ಗೆ ಪರೀಕ್ಷೆಗೆ ಅಧ್ಯಯನ ನಡೆಸಲಾಗುತ್ತಿದೆ ಎಂದು ಸಂಸ್ಥೆಯ ಮುಖ್ಯಸ್ಥ ಶ್ರೀಕಾಮತ್ ಜೋಯಿಸ್ ತಿಳಿಸಿದರು.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಧ್ಯಯನದಲ್ಲಿ 18ರಿಂದ 65 ವರ್ಷದೊಳಗಿನ ಸೈನಸೈಟಿಸ್ ರೋಗಿಗಳು ಭಾಗವಹಿಸಬಹುದಾಗಿದೆ. ಈ ವೇಳೆ ಉಚಿತ ಇಎನ್‌ಟಿ ಸಮಾಲೋಚನೆ, ವೈದ್ಯಕೀಯ ಪರೀಕ್ಷೆ, ಔಷಧಿ, ಪ್ರಯಾಣ ವೆಚ್ಚ ನೀಡಲಾಗುವುದು. ಈ ಅಧ್ಯಯನವು ಪೂರಕ ಚಿಕಿತ್ಸೆಯಾಗಿ ಪ್ರಾಣಿಕ್ ಹೀಲಿಂಗ್ ಪರಿಣಾಮಕಾರಿತ್ವ ಅಳೆಯುವ ಉದ್ದೇಶದ್ದಾಗಿದೆ. ಅಲರ್ಜಿ, ಅಸ್ತಮಾ ಇರುವವರಿಗೆ ಅವಕಾಶವಿಲ್ಲ. ಪ್ರಾಥಮಿಕ ಪರೀಕ್ಷೆ ಬಳಿಕ ಆಯ್ಕೆ ಮಾಡಲಾಗುತ್ತದೆ. ಹೆಚ್ಚಿನ ಮಾಹಿತಿಗೆ ಸರಸ್ವತಿಪುರಂ ಈಜುಕೊಳ ರಸ್ತೆಯ ಏಳನೇ ಮುಖ್ಯ ರಸ್ತೆಯ ಡರ್ಲಾಸ್ ಹೆಲ್ತ್‌ಕೇರ್, ಇಲ್ಲವೇ ಸರಸ್ವತಿಪುರಂ ನಾಲ್ಕನೇ ಮುಖ್ಯ ರಸ್ತೆಯ 44ನೇ ಸಂಖ್ಯೆ ವಿಶ್ವ ಪ್ರಾಣಿಕ್ ಹೀಲಿಂಗ್ ಫೌಂಡೇಷನ್, ಇಲ್ಲವೇ ದೂ. 94815 80673 ಅನ್ನು ಸಂಪರ್ಕಿಸಬಹುದಾಗಿದೆ ಎಂದು ತಿಳಿಸಿದರು. ಸುದ್ದಿಗೋಷ್ಠಿಯಲ್ಲಿ ಡಾ.ಕೆ.ನಾಗೇಂದ್ರಪ್ರಸಾದ್, ಡಾ.ಸೌಮ್ಯ ಎನ್.ಘೋಷ್, ರೂಪಾ ಉಪಸ್ಥಿತರಿದ್ದರು.

ಒಂದನೇ ಪುಟದಿಂದ

ಪವಿತ್ರಾಗೌಡ ದೈವದ ಮೊರೆ

ಎಲ್ಲಾ ಆರೋಪಿಗಳು ತಲಾ 1 ಲಕ್ಷ ರೂ. ಮೊತ್ತದ ವೈಯಕ್ತಿಕ ಬಾಂಡ್ ಹಾಗೂ ಇಷ್ಟೇ ಮೊತ್ತಕ್ಕೆ ಇಬ್ಬರ ಭದ್ರತೆ ನೀಡಬೇಕು ಸೇರಿದಂತೆ ಹಲವು ಷರತ್ತುಗಳನ್ನು ಕೋರ್ಟ್ ವಿಧಿಸಿದೆ.

ಆರೋಪಿಗಳನ್ನು ಬಂಧಿಸಿದ ನಂತರ ಪ್ರಾಸಿಕ್ಯೂಷನ್ ತಕ್ಷಣವೇ ಇವರನ್ನು ಯಾಕೆ ಬಂದಿಸಿದ್ದೇವೆ ಎನ್ನುವುದಕ್ಕೆ ಸರಿಯಾದ ಕಾರಣ ನೀಡಿಲ್ಲ. ಹೀಗಾಗಿ ಕಾನೂನಿನ ಈ ಲೋಪದ ಆಧಾರದಡಿ ಎಲ್ಲರ ಜಾಮೀನು ಅರ್ಜಿಗಳನ್ನು ಪುರಸ್ಕರಿಸಲಾಗುತ್ತಿದೆ ಎಂದು ನ್ಯಾಯಪೀಠ ತನ್ನ 68 ಪುಟಗಳ ತೀರ್ಪಿನಲ್ಲಿ ಹೇಳಿತು.

ದೇವಸ್ಥಾನದಲ್ಲಿ ಅರ್ಚನೆ: ಜೈಲಿನಿಂದ ಬಿಡುಗಡೆಯಾದ ಕೂಡಲೇ ಪವಿತ್ರಾ ಗೌಡ ತನ್ನ ತವರು ಆನೇಕಲ್ ತಾಲೂಕಿನ ತಲಘಟ್ಟಪುರದ ವಜ್ರಮುನೇಶ್ವರ ದೇಗುಲಕ್ಕೆ ತೆರಳಿ ಪ್ರದಕ್ಷಿಣೆ ಹಾಕಿ ಪೂಜೆ ಸಲ್ಲಿಸಿದ್ದಾರೆ. ದೇಗುಲದಲ್ಲಿ ತೀರ್ಥಸ್ನಾನ ಮಾಡಿ, ಹಣೆಗೆ ವಿಭೂತಿ ಹಚ್ಚಿ, ಶ್ವೇತವಸ್ತ್ರ ಧರಿಸಿ ಪೂಜೆ ಸಲ್ಲಿಸಿದ್ದಾರೆ.

ತಲಘಟ್ಟಪುಪುರದ ವಜ್ರ ಮುನೇಶ್ವರ ದೇವಸ್ಥಾನಕ್ಕೆ ತಾಯಿ ಜೊತೆ ನಟಿ ಭೇಟಿ ನೀಡಿದ್ದ ವೇಳೆ ದರ್ಶನ್ ಹೆಸರಲ್ಲಿ ಪವಿತ್ರಾ ತಾಯಿ ಅರ್ಚನೆ ಮಾಡಿಸಿದ್ದಾರೆ. ಪೂಜೆ ಸಲ್ಲಿಸುವ ವೇಳೆ ಕುಟುಂಬಸ್ಥರ ಹೆಸರಿನ ಜೊತೆ ದರ್ಶನ್ ಹೆಸರನ್ನು ಕೂಡ ತಾಯಿ ಭಾಗ್ಯ ಹೇಳಿ ಅರ್ಚನೆ ಮಾಡಿಸಿದ್ದಾರೆ. ಈ ವೇಳೆ, ದೇಗುಲದಲ್ಲಿ ನಟಿ ಕಣ್ಣೀರಿಟ್ಟಿದ್ದಾರೆ. ಮನೆ ದೇವರಿಗೆ ವಿಶೇಷ ಪೂಜೆ ಸಲ್ಲಿಸಿ ಇದೀಗ ಆರ್‌ಆರ್ ನಗರದ ನಿವಾಸದತ್ತ ಪವಿತ್ರಾ ಕುಟುಂಬ ತೆರಳಿದ್ದಾರೆ.

ಗೌರವ ಧನ ಹೆಚ್ಚಳ ಸೇರಿ ವಿವಿಧ ಬೇಡಿಕೆ ಈಡೇರಿಕೆಗೆ ಆಗ್ರಹಿಸಿ ಅಂಗನವಾಡಿ ನೌಕರರ ಸಂಘದಿಂದ ಪ್ರತಿಭಟನೆ



ಗೌರವಧನ ಹೆಚ್ಚಳ ಸೇರಿದಂತೆ ವಿವಿಧ ಬೇಡಿಕೆ ಈಡೇರಿಕೆಗೆ ಒತ್ತಾಯಿಸಿ ರಾಜ್ಯ ಅಂಗನವಾಡಿ ನೌಕರರ ಸಂಘದಿಂದ ಜಿಲ್ಲಾಧಿಕಾರಿ ಕಚೇರಿ ಬಳಿ ಪ್ರತಿಭಟನೆ ನಡೆಸಲಾಯಿತು.

ಮೈಸೂರು, ಡಿ.17(ಜಿಎ)–ಗೌರವಧನ ಹೆಚ್ಚಳ ಸೇರಿದಂತೆ ವಿವಿಧ ಬೇಡಿಕೆ ಈಡೇರಿಕೆಗೆ ಒತ್ತಾಯಿಸಿ ಕರ್ನಾಟಕ ರಾಜ್ಯ ಅಂಗನವಾಡಿ ನೌಕರರ ಸಂಘದಿಂದ ಮೈಸೂರು ಜಿಲ್ಲಾಧಿಕಾರಿ ಕಚೇರಿ ಬಳಿ ಮಂಗಳವಾರ ಪ್ರತಿಭಟನೆ ನಡೆಸಲಾಯಿತು.

ಸುಪ್ರೀಂಕೋರ್ಟ್ ಮತ್ತು ಗುಜರಾತ್ ಹೈಕೋರ್ಟ್ ಅಂಗನವಾಡಿ ನೌಕರರನ್ನು 3 ಮತ್ತು 4ನೇ ಗ್ರೇಡ್ ನೌಕರರನ್ನಾಗಿ ಪರಿಗಣಿಸಲು ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಜಂಟಿ ನಿಯಮ ರೂಪಿಸಬೇಕೆಂದು ತೀರ್ಪು ನೀಡಿದೆ. ಜತೆಗೆ ಸುಪ್ರೀಂ ಕೋರ್ಟ್ 1972 ಗ್ರಾಚ್ಯುಟಿ ಪಾವತಿ ಕಾಯ್ದೆಯಡಿ ಅರ್ಹರೆಂದೂ ತೀರ್ಪು ನೀಡಿದೆ. ದೇಶದ ಅಭಿವೃದ್ಧಿಗೆ ಪೂರಕವಾಗಿರುವ ಮಾನವ ಸಂಪನ್ಮೂಲಗಳಾದ ಅಪೌಷ್ಟಿಕತೆ, ಅಂಗವೈಕಲ್ಯತೆಗಳಿಂದ ಕಾಪಾಡಿ, ಮಾನಸಿಕ ಮತ್ತು ದೈಹಿಕವಾಗಿ ಬೆಳೆಸಿ ಮಾನವ ಸಮಾಜದ ಪುನರುತ್ಪಾದನೆಗೆ ಅಂಗನವಾಡಿ ನೌಕರರು ಕೊಡುಗೆ ನೀಡುತ್ತಿದ್ದಾರೆ. ಆದರೆ, ಅಂಗನವಾಡಿ ನೌಕರರ ವೇತನ ಹೆಚ್ಚಳ ಮಾಡದೇ ಹೊಸ ಆಕರ್ಷಕ ಘೋಷಣೆಗಳಿಗೆ ಮಾತ್ರವೇ ಸೀಮಿತವಾಗುತ್ತಿವೆ ಎಂದು ಕಿಡಿಕಾರಿದರು.

ರಾಜ್ಯದಲ್ಲಿ ಅಂಗನವಾಡಿ ಕೇಂದ್ರಗಳನ್ನು ಬಲಹೀನಗೊಳಿಸಲು ಶಿಕ್ಷಣ ಇಲಾಖೆ 4 ವರ್ಷದ ಮೇಲ್ಪಟ್ಟ ಮಕ್ಕಳನ್ನು ಸ್ಥಳಾಂತರಿಸಲು ಬೇರೆ ಬೇರೆ ಸ್ವರೂಪಗಳಲ್ಲಿ ಪ್ರಯತ್ನಿಸುತ್ತಿದೆ. ಇದಕ್ಕೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ತಡೆ ಹಾಕಿ ಅಂಗನವಾಡಿ ಕೇಂದ್ರಗಳನ್ನು ಪೂರ್ವ ಪ್ರಾಥಮಿಕ ಶಿಕ್ಷಣ ಕೇಂದ್ರಗಳಾಗಿ ಪರಿವರ್ತಿಸಲು ತೀರ್ಮಾನಿಸಿದೆ. ಇದೊಂದು ಐತಿಹಾಸಿಕ ತೀರ್ಮಾನ. ಆದರೆ ಇದಕ್ಕೆ ಬೇಕಾದಂತಹ ಅನುದಾನ ಬಿಡುಗಡೆಗೊಳಿಸಿ. ಇದರ ಮೇಲ್ವಿಚಾರಣೆಗೆ ಐಸಿಡಿಎಸ್ ಪ್ರತ್ಯೇಕ ನಿರ್ದೇಶನಾಲಯ ಮಾಡಿದರೆ ಮಾತ್ರವೇ ಈ ತೀರ್ಮಾನಗಳನ್ನು ಪುಷ್ಟೀಕರಿಸಿದಂತಾಗುತ್ತದೆ ಎಂದು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ಅಧ್ಯಕ್ಷೆ ಎಚ್.ಎಸ್. ಸುನಂದ, ಖಜಾಂಚಿ ಕಾವೇರಮ್ಮ.ಕೆ.ಪಿ, ಸಂಘಟನಾ ಕಾರ್ಯದರ್ಶಿ ಲೀಲಾವತಿ, ಪ್ರಧಾನ ಕಾರ್ಯದರ್ಶಿ ಪುಷ್ಪಲತಾ ಸೇರಿದಂತೆ ನೂರಾರು ಅಂಗನವಾಡಿ ಕಾರ್ಯಕರ್ತೆಯರು ಪಾಲ್ಗೊಂಡಿದ್ದರು.

> ❝ ಗುಜರಾತ್ ಹೈಕೋರ್ಟ್ ತೀರ್ಪಿನಂತೆ ಕಾರ್ಯಕರ್ತೆ, ಸಹಾಯಕಿಯರನ್ನು ವರ್ಗ 3 ಮತ್ತು 4 ಎಂದು ಪರಿಗಣಿಸಿ ಕಾಯಂ ಮಾಡಬೇಕು. 2023ರ ಆದೇಶದ ಪ್ರಕಾರ ಕೂಡಲೇ ಗ್ರಾಚ್ಯುಟಿ ಹಣ ಬಿಡುಗಡೆ ಮಾಡಬೇಕು. 2018ರಿಂದ ಕೇಂದ್ರ ಸರ್ಕಾರ ಯಾವುದೇ ಗೌರವಧನ ಹೆಚ್ಚಳ ಮಾಡಿಲ್ಲವಾದ್ದರಿಂದ 26,000 ರೂ. ಗಳಿಗೆ ಗೌರವಧನ ಹೆಚ್ಚಿಸಬೇಕು. 2023ರ ವಿಧಾನಸಭಾ ಚುನಾವಣೆ ಸಂದರ್ಭದಲ್ಲಿ ಘೋಷಣೆ ಮಾಡಿದಂತೆ 15 ಸಾವಿರ ರೂ. ಗಳಿಗೆ ಗೌರವಧನ ಹೆಚ್ಚಿಸಬೇಕು. ನಿವೃತ್ತಿಯಾದವರಿಗೆ ಇಡಿಗಂಟು ಹಣ, 10 ಸಾವಿರ ಮಾಸಿಕ ಪಿಂಚಣಿ ನೀಡಬೇಕು. ಎಲ್ಲಾ ಅಂಗನವಾಡಿ ಕೇಂದ್ರಗಳನ್ನು ಮೇಲ್ದರ್ಜೆಗೇರಿಸಿ ಅಂಗನವಾಡಿ ಕೇಂದ್ರಗಳಲ್ಲಿಯೇ ಎಲ್‌ಕೆಜಿ–ಯುಕೆಜಿ ಪ್ರಾರಂಭಿಸಬೇಕು. ಐಸಿಡಿಎಸ್ ಯೋಜನೆಗೆ ಪ್ರತ್ಯೇಕ ನಿರ್ದೇಶನಾಲಯ ಸ್ಥಾಪಿಸಬೇಕು. ಅಂಗನವಾಡಿ ನೌಕರರನ್ನು ಚುನಾವಣಾ ಕೆಲಸಗಳಿಂದ ಮುಕ್ತಿಗೊಳಿಸಬೇಕು. **–ಅಂಗನವಾಡಿ ನೌಕರರ ಸಂಘದ ಪ್ರತಿಭಟನಾಕಾರರು.**

ಜವಾಹರ್ ನವೋದಯ ವಿದ್ಯಾಲಯಕ್ಕೆ ಪ್ರವೇಶ ಪತ್ರ ಪ್ರಕಟ

ಮೈಸೂರು,ಡಿ.17– ಜವಾಹರ್ ನವೋದಯ ವಿದ್ಯಾಲಯಕ್ಕೆ 2025–26ನೇ ಸಾಲಿನ 6ನೆಯ ತರಗತಿಗೆ ಪ್ರವೇಶಕ್ಕೆ ಅರ್ಜಿ ಸಲ್ಲಿಸಿರುವ ಅಭ್ಯರ್ಥಿಗಳ ಪ್ರವೇಶ ಪರೀಕ್ಷೆಯು ಜನವರಿ 18ರಂದು ಜಿಲ್ಲೆಯ ಎಲ್ಲಾ ತಾಲೂಕು ಕೇಂದ್ರಗಳಲ್ಲಿ ನಡೆಯಲಿದ್ದು, ಅಭ್ಯರ್ಥಿಗಳು ಪ್ರವೇಶ ಪತ್ರಗಳನ್ನು www.navodaya.gov.inನಲ್ಲಿ ಪ್ರಕಟಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಡಿ.ಎಂ.ಜಿ ಹಳ್ಳಿಯಲ್ಲಿರುವ ಜವಾಹರ್ ನವೋದಯ ವಿದ್ಯಾಲಯದ ಪ್ರಾಂಶುಪಾಲರ ದೂ.ಸಂ.0821–2970040 ಅನ್ನು ಸಂಪರ್ಕಿಸಬಹುದು.

ಇಂದು ಮೈಸೂರಲ್ಲಿ ಸಾಂಸ್ಕೃತಿಕ ಕಾರ್ಯಕ್ರಮ


ಮೈಸೂರು,ಡಿ.17(ಜಿಎ)–ಮೈಸೂರಿನ ಎಂ.ಬಿ.ಅನಂತಸ್ವಾಮಿ ಸಾಂಸ್ಕೃತಿಕ ಮತ್ತು ಸೇವಾ ಟ್ರಸ್ಟ್‌ನ ವಾರ್ಷಿಕೋತ್ಸವ ಅಂಗವಾಗಿ ಡಿ.18ರಂದು ಮಧ್ಯಾಹ್ನ 2.30ಕ್ಕೆ ನಗರದ ಪುರಭವನದಲ್ಲಿ ಸಾಂಸ್ಕೃತಿಕ ಕಾರ್ಯಕ್ರಮ ಆಯೋಜಿಸಲಾಗಿದೆ. ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಟ್ರಸ್ಟ್ ಅಧ್ಯಕ್ಷ ಎ.ಕಾಂತರಾಜು ಈ ವಿಷಯ ತಿಳಿಸಿ, ಕಾರ್ಯಕ್ರಮದಲ್ಲಿ ಈ ವೇಳೆ ವಿವಿಧ ಪ್ರಶಸ್ತಿ ಪುರಸ್ಕೃತರಾದ ಡಿ.ರಾಮು, ಪಿ.ರಾಜಗೋಪಾಲ್, ಮಳವಳ್ಳಿ ಮಹದೇವಸ್ವಾಮಿ ಗಣೇಶ್, ಮೋಹನ್ ದೇವಯ್ಯ, ಜಯಲಕ್ಷ್ಮಿ ನಾಯ್ಡು ಅವರನ್ನು ಅಭಿನಂದಿಸಲಾಗುವುದು. ಬಳಿಕ ಅರುಣ ರಾಗ ಕ್ರಿಯೇಷನ್ಸ ಡಾ.ರೇಖಾ ಅರುಣ್, ಕಿರಗಸೂರು ರಾಜಪ್ಪ ತಂಡ, ಎಂ.ಆರ್. ಮಂಜುನಾಥ ಮತ್ತು ವೃಂದ, ಪದ್ಮಶ್ರೀ ಧನುರ್ ವೀಣಾ ಪೀಠ ತಂಡಗಳಿಂದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಲಿದ್ದು, ಮುಖ್ಯ ಅತಿಥಿಗಳಾಗಿ ಮಲ್ಲಿಕಾರ್ಜುನ್, ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್, ವಿಕ್ರಂ ಅಯ್ಯಂಗಾರ್, ಸಿ.ರಮೇಶ್, ಡಾ.ಗಣೇಶ್, ಡಾ.ರೇಖಾ ಅರುಣ್ ಆಗಮಿಸಲಿದ್ದಾರೆ ಎಂದರು. ಸುದ್ದಿಗೋಷ್ಠಿಯಲ್ಲಿ ಚಂದ್ರು, ಕೆ.ಮಂಜುನಾಥ್, ಸುಗುಣ ಕಾಂತರಾಜು ಉಪಸ್ಥಿತರಿದ್ದರು.

ಜ.5ರವರೆಗೆ ಅರಮನೆ ಧ್ವನಿ–ಬೆಳಕು ಕಾರ್ಯಕ್ರಮ ತಾತ್ಕಾಲಿಕ ರದ್ದು

ಮೈಸೂರು,ಡಿ.17– ಅರಮನೆ ಮಂಡಳಿ ವತಿಯಿಂದ ಅರಮನೆ ಆವರಣದಲ್ಲಿ 2024ರ ಡಿಸೆಂಬರ್ ಮಾಹೆಯಲ್ಲಿ ಫಲಪುಷ್ಪ ಪ್ರದರ್ಶನ ಕಾರ್ಯಕ್ರಮ ಏರ್ಪಡಿಸಲಾಗಿದ್ದು, ಸದರಿ ಫಲಪುಷ್ಪ ಪ್ರದರ್ಶನಕ್ಕೆ ಸಂಬಂಧಿಸಿದಂತೆ, ಪೂರ್ವಭಾವಿ ಕಾರ್ಯಕ್ರಮಗಳು ಪ್ರಗತಿಯಲ್ಲಿರುವುದರಿಂದ ಡಿ.17ರಿಂದ ಜ.5ರವರೆಗೆ ಮೈಸೂರು ಅರಮನೆ ಆವರಣದಲ್ಲಿ ಸಂಜೆ 7ರಿಂದ 8ರವರೆಗೆ ನಡೆಸಲ್ಪಡುವ 'ಧ್ವನಿ ಮತ್ತು ಬೆಳಕು' ಕಾರ್ಯಕ್ರಮವನ್ನು ತಾತ್ಕಾಲಿಕವಾಗಿ ರದ್ದುಗೊಳಿಸಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.



ಮೈಸೂರು ಹಾಗೂ ಸುತ್ತಮುತ್ತ ಇಂದು...



ಇಂದಿನ ಪಂಚಾಂಗ

18.12.2024 ಬುಧವಾರ, ಮಳೆ ನಕ್ಷತ್ರ: ಮೂಲ, 16.12.2024ರಿಂದ 28.12.2024
ಕ್ರೋಧಿನಾಮ ಸಂವತ್ಸರ, ದಕ್ಷಿಣಾಯನ, ಹೇಮಂತ ಋತು, ಧನುರ್ಮಾಸ, ಕೃಷ್ಣ ಪಕ್ಷ,
ತಿಥಿ: ತದಿಗೆ, ನಕ್ಷತ್ರ: ಪುಷ್ಯ, ರಾಹುಕಾಲ: ಮಧ್ಯಾಹ್ನ 12 ರಿಂದ 1.30ರವರೆಗೆ

■ **ಪಾಳ್ಯಂ ಶ್ರೀ ಶಾಸ್ತಾಪೀಠ, ಅಭಯದಾಯಕ ಶ್ರೀ ಅಯ್ಯಪ್ಪ ಸ್ವಾಮಿ ದೇವಸ್ಥಾನಂ:** ಧನುರ್ಮಾಸದ ವಿಶೇಷ ಪೂಜಾ ಲಕ್ಷಾರ್ಚನಾ ಮತ್ತು ವಾರ್ಷಿಕ ಕುಂಬಾಭಿಷೇಕ ಪೂಜಾ ಮಹೋತ್ಸವ, ಮಹತೋಭಾರ ಶ್ರೀ ಧರ್ಮಶಾಸ್ತಾ ಸ್ವಾಮಿಯವರಿಗೆ ಮಹಾಭಿಷೇಕ, ಅಲಂಕಾರಸೇವೆ, ನಾಮಾರ್ಚನೆ, ಮಹಾನಿವೇದನೆ, ಮಂಗಳಾರತಿ, ತೀರ್ಥಪ್ರಸಾದ ವಿನಿಯೋಗ, ಸ್ಥಳ: ದೇವಸ್ಥಾನದ ಪ್ರಾಂಗಣ, ರಾಘವೇಂದ್ರನಗರ.

■ **ಸಕ್ಷಮ:** ರಾಷ್ಟ್ರೀಯ ದಿವ್ಯಾಂಗ ಸಬಲೀಕರಣ ದಿನ, ಸಾಂಸ್ಕೃತಿಕ ಕಾರ್ಯಕ್ರಮ, ಮುಖ್ಯ ಅತಿಥಿಗಳು: ನೃತ್ಯಾಲಯ ಟ್ರಸ್ಟ್ ನಿರ್ದೇಶಕ ಡಾ.ತುಳಸಿ ರಾಮಚಂದ್ರ, ಉಪಸ್ಥಿತರು: ಸಕ್ಷಮ ಮಹಾಪೋಷಕ ಡಾ.ಚಂದ್ರಶೇಖರ್, ಸಕ್ಷಮ ಸಂಯೋಜಕ ಅರುಣಾಚಲ ಶರ್ಮ, ಅಧ್ಯಕ್ಷತೆ: ಸಕ್ಷಮ ಮೈಸೂರು ಘಟಕ ಅಧ್ಯಕ್ಷ ಬಿ.ಎನ್.ಜಯರಾಮ, ಸ್ಥಳ: ಗಾನಭಾರತಿ ರಮಾಗೋವಿಂದ ಕಲಾ ವೇದಿಕೆ, ಕುವೆಂಪುನಗರ, ಬೆಳಗ್ಗೆ 9ಕ್ಕೆ.

■ **ಮರಿಮಲ್ಲಪ್ಪನವರ ವಿದ್ಯಾಸಂಸ್ಥೆ, ಮರಿಮಲ್ಲಪ್ಪ ಪ್ರೌಢಶಾಲೆ:** ಶಾಲಾ ವಾರ್ಷಿಕೋತ್ಸವ, ವಿದ್ಯಾರ್ಥಿ ಸಂಘದ ಸಮಾರೋಪ ಸಮಾರಂಭ, ಅಧ್ಯಕ್ಷತೆ: ಮರಿಮಲ್ಲಪ್ಪ ವಿದ್ಯಾಸಂಸ್ಥೆ ಕಾರ್ಯದರ್ಶಿ ಪ್ರೊ.ಪಂಚಾಕ್ಷರಸ್ವಾಮಿ, ಮುಖ್ಯ ಅತಿಥಿಗಳು: ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಧರ್ಮಪ್ರಸಾದ್, ಉಪಸ್ಥಿತರು: ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಜವರೇಗೌಡ, ಕ್ಷೇತ್ರ ಶಿಕ್ಷಣಾಧಿಕಾರಿ ಸಿ.ಎನ್. ರಾಜು, ಶೈಕ್ಷಣಿಕ ಅಧಿಕಾರಿ ಮಂಗಳ ಮುದ್ದುಮಾದಪ್ಪ, ಸ್ಥಳ: ಕಲಾಮಂದಿರ, ವಿನೋಬಾ ರಸ್ತೆ, ಬೆಳಗ್ಗೆ 9ಕ್ಕೆ.

■ **ರಾಮ್‌ಸನ್ಸ್ ಪ್ರತಿಷ್ಠಾನ:** ಬೊಂಬೆ ಮನೆ ದಸರೆ ಬೊಂಬೆ ಪ್ರದರ್ಶನ 20ನೇ ಅವತರಣಿಕೆ, ಸ್ಥಳ: ರಾಮ್‌ಸನ್ಸ್ ಬೊಂಬೆ ಮನೆ, 91, ಆಮ್ರಪಾಲಿ ಸೀರೆ ಮಳಿಗೆ ಮೇಲೆ, ನಜರ್‌ಬಾದ್ ಮುಖ್ಯರಸ್ತೆ, ಬೆಳಗ್ಗೆ 10ರಿಂದ.

■ **ಸಂಯೋಗ್ ಆಸ್ಪತ್ರೆ :** ಉಚಿತ ಸೈನಸೈಟಿಸ್ ತಪಾಸಣಾ ಶಿಬಿರ, ಸ್ಥಳ: ಆಸ್ಪತ್ರೆ ಆವರಣ, ರಾಮಕೃಷ್ಣನಗರ, ಬೆಳಗ್ಗೆ 10ರಿಂದ.

■ **ಶಾಸ್ತ್ರೀಯ ಕನ್ನಡ ಅತ್ಯುನ್ನತ ಅಧ್ಯಯನ ಕೇಂದ್ರ, ಭಾರತೀಯ ಭಾಷಾ ಸಂಸ್ಥಾನ, ತೆಲುಗು ಅಧ್ಯಯನ ಮತ್ತು ಸಂಶೋಧನಾ ವಿಭಾಗ, ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ:** ಶಾಸ್ತ್ರೀಯ ಕನ್ನಡ–ತೆಲುಗು ಸಾಂಸ್ಕೃತಿಕ ಬಾಂಧವ್ಯ ಕುರಿತು ವಿಚಾರ ಸಂಕಿರಣ, ಪ್ರಾಸ್ತಾವಿಕ ಭಾಷಣ: ಶಾಸ್ತ್ರೀಯ ಕನ್ನಡ ಅತ್ಯುನ್ನತ ಅಧ್ಯಯನ ಕೇಂದ್ರದ ಯೋಜನಾ ನಿರ್ದೇಶಕ ಪ್ರೊ.ಎನ್.ಎಂ.ತಳವಾರ, ಉದ್ಘಾಟನೆ: ಕರಾಮುವಿವಿ ಕುಲಸಚಿವ ಪ್ರೊ.ಪ್ರವೀಣ, ಮುಖ್ಯ ಅತಿಥಿಗಳು: ನಿವೃತ್ತ ಪ್ರಾಧ್ಯಾಪಕ ಪ್ರೊ.ಆರ್ವಿಯಸ್ ಸುಂದರಂ, ಕರಾಮುವಿವಿ ಡೀನ್ ಪ್ರೊ.ಎಂ.ರಾಮನಾಥಂ ನಾಯುಡು, ಅಧ್ಯಕ್ಷತೆ: ಭಾರತೀಯ ಭಾಷಾ ಸಂಸ್ಥಾನ ನಿರ್ದೇಶಕ ಪ್ರೊ.ಶೈಲೇಂದ್ರ ಮೋಹನ್, ಸ್ಥಳ: ಬಿಒಎಂ ಸಭಾಂಗಣ, ಕರಾಮುವಿವಿ, ಮುಕ್ತಗಂಗೋತ್ರಿ, ಬೆಳಗ್ಗೆ 10ರಿಂದ.

■ **ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತು, ಕದಳಿ ಮಹಿಳಾ ವೇದಿಕೆ, ಕನ್ನಡ ಸಾಹಿತ್ಯ ಕಲಾಕೂಟ:** 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ನಿಯೋಜಿತ ಸಮ್ಮೇಳನಾಧ್ಯಕ್ಷ ನಾಡೋಜ ಡಾ.ಗೊ.ರು. ಚನ್ನಬಸಪ್ಪ ಅವರಿಗೆ ಅಭಿನಂದನಾ ಹಾಗೂ ಅಪ್ರಚಲಿತ ವಚನಕಾರರ 'ಶರಣ ದರ್ಶನ' ಕೃತಿ ಬಿಡುಗಡೆ ಸಮಾರಂಭ, ಕೃತಿ ಲೋಕಾರ್ಪಣೆ: ಸುತ್ತೂರು ಶ್ರೀ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ, ಅಭಿನಂದಿತರು: ಗೊ.ರು. ಚನ್ನಬಸಪ್ಪ, ಅಭಿನಂದನಾ ನುಡಿ: ಪ್ರೊ.ಎಂ.ಕೃಷ್ಣೇಗೌಡ, ಕೃತಿ ಕುರಿತು: ಡಾ. ಜ್ಯೋತಿಶಂಕರ್, ಸ್ಥಳ: ಜೆಎಸ್‌ಎಸ್ ಮಹಿಳಾ ಕಾಲೇಜಿನ ನವಜ್ಯೋತಿ ಸಭಾಂಗಣ, ಸರಸ್ವತಿಪುರಂ, ಬೆಳಿಗ್ಗೆ 10.30ಕ್ಕೆ.

■ **ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯ:** ಕ್ಯೂಜಿಐಎಸ್ ಕುರಿತು ರಾಷ್ಟ್ರ ಮಟ್ಟದ ಕಾರ್ಯಾಗಾರ, ಪ್ರಾಸ್ತಾವಿಕ ನುಡಿ: ಬೆಂಗಳೂರು ವಿವಿ ಭೌಗೋಳಿಕ ಮತ್ತು ಜಿಯೋ ಇನ್‌ಫಾರ್ಮಾಟಿಕ್ಸ್ ವಿಭಾಗದ ಅಧ್ಯಕ್ಷ ಪ್ರೊ.ಅಶೋಕ್ ಹಂಜಗಿ, ಮುಖ್ಯ ಅತಿಥಿಗಳು: ಮೈಸೂರು ವಿವಿ ಭೌಗೋಳಿಕ ಅಧ್ಯಯನ ವಿಭಾಗದ ಅಧ್ಯಕ್ಷ ಪ್ರೊ.ಅರುಣ್‌ದಾಸ್, ಅಧ್ಯಕ್ಷತೆ: ಕರಾಮುವಿ ಕುಲಪತಿ ಪ್ರೊ.ಶರಣಪ್ಪ ಹಲಸೆ, ಉಪಸ್ಥಿತರು: ಕರಾಮುವಿ ಕುಲಸಚಿವ ಪ್ರೊ.ಕೆ.ಬಿ.ಪ್ರವೀಣ, ಡೀನ್ ಪ್ರೊ.ಲಕ್ಷ್ಮಿ, ಸ್ಥಳ: ನಳ ಸಭಾಂಗಣ, ಕರಾಮುವಿ, ಬೆಳಗ್ಗೆ 10.30ಕ್ಕೆ.

■ **ಶಬರಿ ಮಲೆ ಶ್ರೀ ಅಯ್ಯಪ್ಪ ಪೂಜಾ ಸಮಿತಿ, ಶ್ರೀ ಅಯ್ಯಪ್ಪ ಸ್ವಾಮಿ ಮತ್ತು ಶ್ರೀ ಗುರುವಾಯೂರಪನ್ ದೇವಾಲಯ:** 64ನೇ ವಾರ್ಷಿಕ ಪೂಜಾ ಮಹೋತ್ಸವ, ಅನ್ನದಾನ, ಸ್ಥಳ: ದೇವಸ್ಥಾನದ ಆವರಣ, ಚಾಮುಂಡಿಬೆಟ್ಟದ ಪಾದ, 12.30 ರಿಂದ.

■ **ಪ್ರವಾಸೋದ್ಯಮ ಇಲಾಖೆ, ಕರ್ನಾಟಕ ವಸ್ತುಪ್ರದರ್ಶನ ಪ್ರಾಧಿಕಾರ ಮಹಿಳಾ ಮತ್ತು ಮಕ್ಕಳ ಉಪಸಮಿತಿ:** ಮಹಿಳೆಯರಿಗಾಗಿ ಆಟೋಟ ಸ್ಪರ್ಧೆ, ದೇಸಿ ಆಟಗಳು, ಸ್ಥಳ: ಪಿ. ಕಾಳಿಂಗರಾವ್ ಗಾನ ಮಂಟಪ, ಪ್ರಾಧಿಕಾರದ ಆವರಣ, ಮಧ್ಯಾಹ್ನ 2 ರಿಂದ.

■ **ಅಭಿರುಚಿ ಬಳಗ, ಎನ್.ವ್ಹಿ. ರಮೇಶ್ ಕಲಾ ಬಳಗ, ಆಸಕ್ತಿ ಪ್ರಕಾಶನ, ಕರ್ನಾಟಕ ಚುಟುಕು ಸಾಹಿತ್ಯ ಪರಿಷತ್, ಮೈಸೂರು ವಿಭಾಗ :** 140ನೇ ಮನೆ ಮನೆ ಕವಿಗೋಷ್ಠಿ, ಭಾಗವಹಿಸುವವರು : ಸೌಗಂಧಿಕಾ ಜೋಯಿಸ್, ಸುಶೀಲಾ ಶ್ಯಾಮಸುಂದರ್, ಸುಮಾ ಪಂಚವಳ್ಳಿ, ಸುಮತಿ ಸುಬ್ರಹ್ಮಣ್ಯ, ಯಶೋದಾ ರಾಮಕೃಷ್ಣ, ವಿಮಲ, ಚಂದ್ರಶೇಖರ್, ಶಮಾ ಅಹಮದ್, ಅಲಮೇಲಮ್ಮ ಮರಿಗೌಡರ್, ಅಮೀನಾ ಬೇಗಂ, ಡಿ. ಪುಟ್ಟಸ್ವಾಮಿ, ಕಮಲ, ಕುಸುಮ, ಲೀಲಾವತಿ, ತೇಜೋವತಿ, ಶಾಂತಕುಮಾರಿ, ಮಮತ ಸುಧೀಂದ್ರ, ಮಂಜುಳ ರಮೇಶ್, ಪದ್ಮಿನಿ ಆನಂದ್, ಡಾ.ಪರಮೇಶ್ ಉತ್ತನಹಳ್ಳಿ, ಹೆಚ್.ಎಸ್. ಯದುಗಿರಿ, ಉಮಾ ರಮೇಶ್, ಸ್ಥಳ: ಅಭಿರುಚಿ ಬಳಗದ ಕಚೇರಿ, ಕುವೆಂಪುನಗರ, ಮಧ್ಯಾಹ್ನ 3ಕ್ಕೆ.

ಮೈಸೂರು ಆಕಾಶವಾಣಿ



ಬೆಳಗ್ಗೆ: 6.10 ಚಿಂತನ, 6.15 ಗೀತಾರಾಧನ, 6.35 ಮತ್ತು ಸಂಜೆ 6.10 ವಾದ್ಯ ವೈಭವ–ಸಂಗೀತ ವಾದ್ಯಗಳ ಪರಿಚಯ ಮಾಲಿಕೆ, ಪ್ರಸ್ತುತಿ –ಚೈತ್ರಿಕಾ. ಎಸ್., 6.40 ಅರಿವಿನ ಶಿಖರ : ಸರ್ವಜ್ಞನ ತ್ರಿಪದಿಗಳನ್ನಾಧರಿಸಿದ ಬಾನುಲಿ ಸರಣಿ, ಗಾಯನ–ಪಿ.ಸುರಭಿ, ಡಿ. ಪುರುಷೋತ್ತಮ್, ವ್ಯಾಖ್ಯಾನ–ಕೆ.ಎಲ್.ಪದ್ಮಿನಿ ಹೆಗಡೆ, 6.50 ರೈತರಿಗೆ ಸಲಹೆ, 7.15 ಭಾವಗೀತೆಗಳು, 8.30 ಚಿತ್ರಗೀತೆಗಳು, 9.00 ವೃತ್ತಿ ಮಾರ್ಗದರ್ಶನ: 'ವಿಜುಅಲ್ ಕಮ್ಯುನಿಕೇಷನ್ ವಿಷಯದಲ್ಲಿ ಇರುವ ಅಧ್ಯಯನ ಮತ್ತು ವೃತ್ತಿಪರ ಅವಕಾಶಗಳು' ಕುರಿತು ಅಮೃತ ವಿಶ್ವವಿದ್ಯಾಪೀಠಂ, ಮೈಸೂರು ಕ್ಯಾಂಪಸ್‌ನ ವಿಜುಅಲ್ ಕಮ್ಯುನಿಕೇಷನ್ ವಿಭಾಗದ ಮುಖ್ಯಸ್ಥರಾದ ಡಾ. ಮೌಲ್ಯಾ ಬಾಲಾಡಿ ಅವರೊಂದಿಗೆ ಮಾತುಕತೆ. ಇವರೊಂದಿಗೆ ಭಾಗವಹಿಸುತ್ತಾರೆ : ಬೇದ್ರೆ ಮಂಜುನಾಥ್, 10.00 ಹಿಂದೂಸ್ಥಾನಿ ಶಾಸ್ತ್ರೀಯ ಸಂಗೀತ: ಜಯತೀರ್ಥ ಮೇವುಂಡಿ –ಹಾಡುಗಾರಿಕೆ, 10.30 ಹಿಂದಿ ಚಿತ್ರಗೀತೆಗಳು, 11.00 ನಿಮ್ಮೊಂದಿಗೆ ಮೈಸೂರು ಆಕಾಶವಾಣಿ ಹಾಗೂ ಪತ್ರೋತ್ತರ **ಮಧ್ಯಾಹ್ನ:** 12.35 ಆಯುಷ್‌ವಾಣಿ–ಪ್ರಾಯೋಜಿತ ಕಾರ್ಯಕ್ರಮ, ಪ್ರಾಯೋಜಕರು: ಆಯುಷ್ ಇಲಾಖೆ, ಕರ್ನಾಟಕ ಸರ್ಕಾರ, 12.40 ದೇವರನಾಮ–ಎಂ.ಎಸ್.ಶೀಲಾ, 12.45 ಜನಪದ ಸಂಗೀತ, 1.00 ಪ್ರಗತಿಪಥ – ಕೇಂದ್ರ ಸರ್ಕಾರದ ವಿವಿಧ ಅಭಿವೃದ್ಧಿ ಯೋಜನೆಗಳ ಸರಣಿ, 1.20 ಸಕ್ಕರೆ ನಾಡಿನ ಅಕ್ಕರೆಯ ಲೇಖಕರು, ಲೇಖನ ಹಾಗೂ ಪ್ರಸ್ತುತಿ : ಶಭಾನ ಮತ್ತು ಕೀರ್ತಿ. ಎಸ್.ಬೈಂದೂರು, ಪರಿಕಲ್ಪನೆ: ಅಬ್ದುಲ್ ರಶೀದ್, 2.40 ಚಿತ್ರಗೀತೆಗಳು, 3.00 ಕರ್ನಾಟಕ ಶಾಸ್ತ್ರೀಯ ಸಂಗೀತ: ಎಂ.ಪ್ರಭಾಕರ್–ಹಾಡುಗಾರಿಕೆ, 4.00–ಮಹಿಳಾರಂಗ, 4.45 ಹಿಂದಿ ಪಾಠ–ಎಸ್. ಈಶ್ವರಭಟ್, 6.50 ಕೃಷಿರಂಗ: ಮಂಡ್ಯದ ವಿ.ಸಿ.ಫಾರಂ ವಲಯ ಕೃಷಿ ಸಂಶೋಧನಾ ಕೇಂದ್ರದ ಕೋಲ್ಮನ್ ಸಭಾಂಗಣದಲ್ಲಿ ನಡೆದ ಮೇವು–ಮೆಲುಕು ಮೇವಿನ ಬೆಳೆಗಳ ಬೇಸಾಯ ತಾಂತ್ರಿಕತೆಗಳನ್ನು ಕುರಿತ ಬಾನುಲಿ ಸರಣಿಯ ಉದ್ಘಾಟನಾ ಸಮಾರಂಭದ ಬಾನುಲಿ ವರದಿ. ಪ್ರಸ್ತುತಿ : ಎನ್. ಕೇಶವಮೂರ್ತಿ, 7.45 ವಿಧಾನಮಂಡಲದಲ್ಲಿ ಇಂದು, 8.00 ಸಂಸತ್ ಸಮೀಕ್ಷಾ, 9.30 ಕ್ರೀಡಾಲೋಕ, 10.00 ಸಂಸತ್ತಿನ ಪ್ರಶ್ನೋತ್ತರ ಅವಧಿಯ ಕಲಾಪಗಳ ಧ್ವನಿಮುದ್ರಣ

■ **ಅಭಿರುಚಿ ಪ್ರಕಾಶನ:** ಪ್ರೊ.ಎಂ.ಎಸ್.ಶೇಖರ್ ಅವರ ಚಿತ್ತಾರ ಜೋಳಿಗೆ ಕವನ ಸಂಕಲನ ಲೋಕಾರ್ಪಣೆ ಸಮಾರಂಭ, ಪುಸ್ತಕ ಲೋಕಾರ್ಪಣೆ : ಕವಿ, ನಾಟಕಕಾರ ಪ್ರೊ.ಹೆಚ್.ಎಸ್.ಶಿವಪ್ರಕಾಶ್, ಕೃತಿ ಕುರಿತು: ವಿಮರ್ಶಕಿ ಪ್ರೊ.ಎಂ.ಎಸ್.ಆಶಾದೇವಿ, ಮುಖ್ಯ ಅತಿಥಿಗಳು: ಕವಯಿತ್ರಿ ಪ್ರೊ.ಚ.ಸರ್ವಮಂಗಳಾ, ರಂಗಕರ್ಮಿ ಜನ್ನಿ (ಜನಾರ್ಧನ್), ಅಧ್ಯಕ್ಷತೆ: ಸಾಹಿತಿ ಪ್ರೊ.ಕಾಳೇಗೌಡ ನಾಗವಾರ, ಉಪಸ್ಥಿತರು: ಕೃತಿಕಾರ ಪ್ರೊ.ಎಂ.ಎಸ್. ಶೇಖರ್, ಸ್ಥಳ: ಇನ್‌ಸ್ಟಿಟ್ಯೂಟ್ ಆಫ್ ಇಂಜಿನಿಯರ್ಸ್, ಜೆಎಲ್‌ಬಿ ರಸ್ತೆ, ಸಂಜೆ 4ಕ್ಕೆ.

■ **ಗಾನ ಗಂಗೋತ್ರಿ ಕಲಾ ಬಳಗ:** ಹವ್ಯಾಸಿ ಗಾಯಕರ 'ನೋಡ ಬನ್ನಿ ನಮ್ಮ ಹಾಡ ಕರೋಕೆ ಗಾಯನ' ಕಾರ್ಯಕ್ರಮ, ಸ್ಥಳ: ನಾದಬ್ರಹ್ಮ ಸಂಗೀತ ಸಭಾ, ಲಕ್ಷ್ಮೀಪುರಂ, ಸಂಜೆ 4ಕ್ಕೆ.

■ **ದೇಸಿರಂಗ ಸಾಂಸ್ಕೃತಿಕ ಟ್ರಸ್ಟ್ :** ರಂಗ ತರಬೇತಿ ಶಿಬಿರದ ಉದ್ಘಾಟನಾ ಸಮಾರಂಭ, ಉದ್ಘಾಟನೆ: ರಂಗ ನಿರ್ದೇಶಕ ಸಿ. ಬಸವಲಿಂಗಯ್ಯ, ಅಧ್ಯಕ್ಷತೆ : ಕದಂಬ ರಂಗ ವೇದಿಕೆ ಅಧ್ಯಕ್ಷ ರಾಜಶೇಖರ ಕದಂಬ, ಉಪಸ್ಥಿತರು : ಶಿಬಿರದ ನಿರ್ದೇಶಕ ಕೃಷ್ಣ ಜನಮನ, ದೇಸಿರಂಗ ಸಾಂಸ್ಕೃತಿಕ ಟ್ರಸ್ಟ್ ಕಾರ್ಯದರ್ಶಿ ಡಾ. ದಿನಮಣಿ ಬಿ.ಎಸ್., ಸ್ಥಳ: ರಂಗತಾಲೀಮು ಕೊಠಡಿ, ಕಲಾಮಂದಿರ ಆವರಣ, ಸಂಜೆ 5ಕ್ಕೆ.

■ **ಶ್ರೀ ಗಣಪತಿ ಸಚ್ಚಿದಾನಂದ ಆಶ್ರಮ :** ಬೆಂಗಳೂರಿನ ಪ್ರವಚನ ಚಕ್ರವರ್ತಿ ಡಾ.ಪಾವಗಡ ಪ್ರಕಾಶ್ ರಾವ್ ಇವರಿಂದ 'ಉಪನಿಷತ್ ದರ್ಶನ' ವಿಷಯ ಕುರಿತು ಪ್ರವಚನ ಮಾಲಿಕೆ, ಸಮಾರೋಪ ಸಮಾರಂಭದಲ್ಲಿ 'ದತ್ತಾವಧೂತರ ಅವತಾರ' ವಿಷಯ ಕುರಿತು ಗುರುದ್ವಯರ ಸನ್ನಿಧಿಯಲ್ಲಿ ಉಪನ್ಯಾಸ, ಅತಿಥಿಗಳು : ಬೆಂಗಳೂರಿನ ವಿಪ್ರ ಮುಖಂಡ ರಘುನಾಥ, ಜ್ಯೋತಿ ಸಮೂಹ ಸಂಸ್ಥೆಯ ನರಸಿಂಹನ್, ವಿಪ್ರ ಮುಖಂಡ ಲಕ್ಷ್ಮೀಕಾಂತ್, ಉದ್ಯಮಿ ರಾಜಶೇಖರ್, ಕಾಂಗ್ರೆಸ್ ಮುಖಂಡ ಎಂ.ಎನ್.ನವೀನ್ ಕುಮಾರ್, ಜಿಲ್ಲಾ ಬ್ರಾಹ್ಮಣ ಮಹಾಸಭಾದ ಅಧ್ಯಕ್ಷ ಡಾ.ನಟರಾಜ ಜೋಯಿಸ್, ವಿಪ್ರ ವಕೀಲ ಪರಿಷತ್ ಅಧ್ಯಕ್ಷ ರವೀಂದ್ರ, ಸ್ಥಳ: ಶ್ರೀ ಗಣಪತಿ ಸಚ್ಚಿದಾನಂದ ಆಶ್ರಮದ ನಾದಮಂಟಪ, ಊಟಿ ರಸ್ತೆ, ಸಂಜೆ 5.30ಕ್ಕೆ.

■ **ಹೆಬ್ಬಾರ್ ಶ್ರೀ ವೈಷ್ಣವ ಸಭಾ ; ಹೆಬ್ಬಾರ್ ಶ್ರೀ ವೈಷ್ಣವ ಉಪಸಭಾ:** ತಿರುಪ್ಪಾವೈ ಪ್ರವಚನ, ಮಹಾರಾಣಿ ಕಾಲೇಜು (ಬೆಂಗಳೂರು) ನಿವೃತ್ತ ಸಂಸ್ಕೃತ ಪ್ರಾಧ್ಯಾಪಕ ಕೆ.ಎಸ್.ಶ್ರೀಧರನ್, ಸ್ಥಳ: ಸನಾತನೀ ಸಭಾ, ಜಯನಗರ, ಸಂಜೆ 6.15ರಿಂದ

■ **ಶ್ರೀ ಶ್ರೀ ನಾಗಾನಂದ ದತ್ತಾತ್ತೇಯ ಮಠ: ಕ್ರೋಧಿನಾಮ ಸಂವತ್ಸರದ ಭಗವಾನ್** ಶ್ರೀ ದತ್ತಾತ್ರೇಯ ಸ್ವಾಮಿಯವರ 48ನೇ ವರ್ಷದ ಸಪ್ತಾಹ, ಬೆಳಗ್ಗೆ ಕಳಸ ಸ್ಥಾಪನೆ, ಗಣಪತಿ ಪೂಜೆ, ವರುಣ, ಪೂಜೆ, ಕಂಕಣ ಬಂಧನ, ಅಭಿಷೇಕ, ವಿಷ್ಣು ಸಹಸ್ರನಾಮ, ಶ್ರೀ ಗುರುಚರಿತ್ರೆ ಪಾರಾಯಣ, ಬೆಳಗ್ಗೆ 11 ರಿಂದ ಮಧ್ಯಾಹ್ನ 1ರವರೆಗೆ ಭಜನೆ, ದತ್ತಾತ್ರೇಯ ಉತ್ಸವ, ಔದಂಬರ ಪೂಜೆ, ಮಧ್ಯಾಹ್ನ 1.30ಕ್ಕೆ ಮಹಾಮಂಗಳಾರತಿ, ಶ್ರೀಯವರಿಂದ ಪ್ರವಚನ, ಸಂಜೆ 6.30ಕ್ಕೆ ಭಜನೆ, ರಾತ್ರಿ 8 ಗಂಟೆಗೆ ಪೂಜೆ, ಪ್ರಸಾದ ವಿನಿಯೋಗ, ಸ್ಥಳ : ದೇವಸ್ಥಾನದ ಆವರಣ, ಬೆಲವತ್ತ ಗ್ರಾಮ (ಮಂಟಿ).

■ **ವೇಣು ಗೋಪಾಲಸ್ವಾಮಿ ದೇವಸ್ಥಾನ:** ತಿರುಪ್ಪಾವೈ ಪ್ರವಚನ ಕಾರ್ಯಕ್ರಮ, ಮಹಾರಾಣಿ ಕಾಲೇಜು ನಿವೃತ್ತ ಸಂಸ್ಕೃತ ಪ್ರಾಧ್ಯಾಪಕ ವಿದುಷಿ ಡಾ.ಕೆ.ಎಲ್.ಪ್ರಸನ್ನಾಕ್ಷಿ ಅವರಿಂದ ತಿರುಪ್ಪಾವೈ ಪ್ರವಚನ, ಸ್ಥಳ: ದೇವಸ್ಥಾನ, ತ್ಯಾಗರಾಜ ರಸ್ತೆ, ಶ್ರೀ ಚಿಕ್ಕಾಂಜನೇಯ ಸ್ವಾಮಿ ದೇವಸ್ಥಾನದ ಸಮೀಪ, ಸಂಜೆ 6.30ಕ್ಕೆ.

ಹಲಗಯ್ಯನಹುಂಡಿ, ಮೈಸೂರು ತಾಲೂಕು.

■ **ಮಹಾರಾಜ ಸರ್ಕಾರಿ ಪದವಿ ಪೂರ್ವ ಕಾಲೇಜು, ರಾಷ್ಟ್ರೀಯ ಸೇವಾ ಯೋಜನೆ:** ವಾರ್ಷಿಕ ವಿಶೇಷ ಶಿಬಿರ 2024–25, ಲಯನ್ ಇ.ಸಿ. ನಿಂಗರಾಜೇಗೌಡ ಅವರಿಂದ ಉತ್ತಮ ಸಮಾಜ ನಿರ್ಮಾಣದಲ್ಲಿ ವಿದ್ಯಾರ್ಥಿಗಳ ಪಾತ್ರ ಕುರಿತು ಉಪನ್ಯಾಸ, ಅಧ್ಯಕ್ಷತೆ : ಲಯನ್ಸ್ ಕ್ಲಬ್ ಆಫ್ ಮೈಸೂರು ಗಾರ್ಡನ್ ಸಿಟಿ ಅಧ್ಯಕ್ಷ ಲಯನ್ ಬಿ.ಎಸ್. ಉಮಾಶಂಕರ್, ಸ್ಥಳ: ಹಲಗಯ್ಯನಹುಂಡಿ, ಮೈಸೂರು ತಾಲೂಕು, ಸಂಜೆ 6ಕ್ಕೆ

ಬರಡನಪುರ ಗ್ರಾಮ, ಮೈಸೂರು ತಾಲೂಕು.

■ **ಜೆಎಸ್‌ಎಸ್ ಮಹಿಳಾ ಪಾಲಿಟೆಕ್ನಿಕ್, ರಾಷ್ಟ್ರೀಯ ಸೇವಾ ಯೋಜನೆ:** ವಾರ್ಷಿಕ ವಿಶೇಷ ಶಿಬಿರ 2024–25, ಬೆಳಗ್ಗೆ 6.30ಕ್ಕೆ ಶ್ರೀ ಪರಶಿವಮೂರ್ತಿ ಮಹಾಸ್ವಾಮೀಜಿಗಳಿಂದ ಧ್ವಜಾರೋಹಣ, ಬೆಳಗ್ಗೆ 10ರಿಂದ ಅಗ್ನಿ ಶಾಮಕದಳ ಇವರಿಂದ ಜಾಗೃತಿ ಮತ್ತು ಅರಿವು, ಸಂಜೆ 5.30ರಿಂದ ಡಾ.ಸುರೇಶ್ ಅವರಿಂದ ಉಪನ್ಯಾಸ, ಅಧ್ಯಕ್ಷತೆ: ಶ್ರೀಮತಿ ಮಂಜುಳ ಕೆ. ಶ್ರೀಧರ್, ಮುಖ್ಯ ಅತಿಥಿಗಳು : ಜೆಎಸ್‌ಎಸ್ ಪಾಲಿಟೆಕ್ನಿಕ್ ಎನ್‌ಎಸ್‌ಎಸ್ ಅಧಿಕಾರಿ ಕೆ.ಬಿ.ಚಂದ್ರಶೇಖರ್, ಹೆಚ್.ಪಿ.ರಾಜೇಶ್, ಸ್ಥಳ: ಬರಡನಪುರ ಗ್ರಾಮ.

ಜಯನಗರ ಉದ್ಯಾನವನದ ಕಟ್ಟಡ ನಿರ್ಮಾಣ ನೆಲಸಮ; ಸಾರ್ವಜನಿಕರ ಲಕ್ಷಾಂತರ ರೂ. ತೆರಿಗೆ ಹಣ ಪೋಲು

● ಕಟ್ಟುವುದಕ್ಕೆ ಕೈ ಹಾಕುವ ಮುನ್ನ ಕಾನೂನು-ನಿಯಮ ಪರಿಶೀಲಿಸಬೇಕಿತ್ತಲ್ಲವೇ? ● ಈ ಪಾರ್ಕಿಗೆ ಬೇಕಿದೆ ಕಾಯಕಲ್ಪ ● ಪಾರ್ಕಿನಲ್ಲಿ ಬಿದ್ದಿವೆ ಮದ್ಯದ ಬಾಟಲಿ, ನಿತ್ಯವೂ ಬಿಡಾಡಿ ದನಗಳ ಹಾವಳಿ



ಪಾರ್ಕಿನಲ್ಲಿ ವಿಶ್ರಾಂತಿಗೆ ಜಾರಿರುವ ಬಿಡಾಡಿ ಎಮ್ಮೆ ಮತ್ತು ಹಸು.



ಮೈಸೂರಿನ ಜಯನಗರದ 2ನೇ ಮುಖ್ಯ ರಸ್ತೆಯಲ್ಲಿರುವ ಚಿಕ್ಕ ಉದ್ಯಾನವನದಲ್ಲಿ (ಸಮುದಾಯ ಆರೋಗ್ಯ ಕೇಂದ್ರದ ಎದುರು) ವಿಶ್ರಾಂತಿ ಕುಟೀರ ನೆಲಸಮಗೊಳಿಸಲು ಚಾಲನೆ ನೀಡಿರುವುದು.

ಮೈಸೂರು,ಡಿ.17(ಪಿಎಂ)– ಮೈಸೂರಿನ ಜಯನಗರದ 2ನೇ ಮುಖ್ಯ ರಸ್ತೆಯಲ್ಲಿರುವ ಚಿಕ್ಕ ಉದ್ಯಾನವನದಲ್ಲಿ ನಿರ್ಮಿಸಲಾಗುತ್ತಿದ್ದ ಹಿರಿಯ ನಾಗರಿಕರ ವಿಶ್ರಾಂತಿ ಧಾಮದ (ಕುಟೀರ ಮಾದರಿ ಕಟ್ಟಡ) ಕಾಮಗಾರಿ ಕೈಬಿಟ್ಟು, ಇದೀಗ ಅದರ ಸಂಪೂರ್ಣ ನೆಲಸಮಕ್ಕೆ ಮೈಸೂರು ಮಹಾನಗರ ಪಾಲಿಕೆ ಚಾಲನೆ ನೀಡಿದೆ. ಆದರೆ ಹೀಗೆ ಕಟ್ಟಿ ಕೆಡುವುದರಿಂದ ಸಾರ್ವಜನಿಕರ ತೆರಿಗೆ ಹಣ ಪೋಲು ಮಾಡಿದಂತಲ್ಲವೇ? ಎಂಬ ಆಕ್ಷೇಪ ವ್ಯಕ್ತವಾಗಿದೆ.

ಅಲ್ಲದೆ, ಯೋಜನೆ ಅನುಷ್ಠಾನಕ್ಕೂ ಮುನ್ನ ಸಂಬಂಧಿಸಿದ ಕಾನೂನು, ನಿಯಮಾವಳಿ ಹಾಗೂ ಸಾರ್ವಜನಿಕರ ಅಭಿಪ್ರಾಯ ಸಂಗ್ರಹಕ್ಕೆ ಮನ್ನಣೆ ನೀಡದೇ ಈ ರೀತಿ ಮಾಡಿ ಸಾರ್ವಜನಿಕರ ತೆರಿಗೆ ಹಣವನ್ನು ವ್ಯರ್ಥ ಮಾಡಲಾಗಿದೆ ಎಂಬ ಆರೋಪ ಸಹ ಕೇಳಿ ಬಂದಿದೆ.

ಶೇ.50ರಷ್ಟಕ್ಕಿಂತಲೂ ಹೆಚ್ಚಿನ ಪ್ರಮಾಣದಲ್ಲಿ ಕಾಮಗಾರಿ ನಡೆದಿದ್ದ ಸದರಿ ಕಟ್ಟಡ ನೆಲಸಮಕ್ಕೆ ಮುಂದಾಗಲಾಗಿದ್ದು, ಈಗಾಗಲೇ ಅದರ ಹಲವು ಭಾಗಗಳನ್ನು ತೆರವು ಮಾಡಲಾಗಿದೆ. ಮೈಸೂರು ಗ್ರಾಹಕರ ಪರಿಷತ್ (ಎಂಜಿಪಿ) ನೇತೃತ್ವದಲ್ಲಿ ಕೆಲ ಪರಿಸರವಾದಿಗಳು ಈ ನಿರ್ಮಾಣ ಕಾನೂನು ಬಾಹಿರ ಎಂದು ಆಕ್ಷೇಪ ವ್ಯಕ್ತಪಡಿಸಿದ್ದರು. ಪಾಲಿಕೆ ಆಯುಕ್ತರು ಸೇರಿದಂತೆ ವಿವಿಧ ಹಂತದ ಅಧಿಕಾರಿಗಳಿಗೆ ಲಿಖಿತ ದೂರು ಸಹ ನೀಡಿದ್ದರು. ಇದೀಗ ಇದಕ್ಕೆ ಮಣಿದಿರುವ ಪಾಲಿಕೆ, ಸದರಿ ಕಟ್ಟಡದ ತೆರವು ಕಾರ್ಯಾಚರಣೆ ಕೈಗೆತ್ತಿಕೊಂಡಿದೆ.

ಕಬ್ಬಿಣದ ತೊಲೆಗಳು ಹಾಗೂ ಹಂಚುಗಳನ್ನು ತೆರವು ಮಾಡಿದ್ದು, ಹತ್ತಾರು ಕಾಂಕ್ರಿಟ್ ಪಿಲ್ಲರ್‌ಗಳನ್ನು ತೆರವು ಮಾಡಲು ಅವುಗಳ ಬುಡದಲ್ಲಿ ಕಾಂಕ್ರೀಟ್ ಪುಡಿಗೊಳಿಸಲಾಗಿದೆ. ಸುಮಾರು 21 ಲಕ್ಷ ವೆಚ್ಚದಲ್ಲಿ ಇದರ ನಿರ್ಮಾಣ ಕಾಮಗಾರಿ ನಡೆದಿತ್ತು ಎಂದು ಪಾಲಿಕೆಯ ವಲಯ ಕಚೇರಿ 2ರ ಮೂಲಗಳು ತಿಳಿಸಿದ್ದು, ನೆಲಸಮಕ್ಕೆ ಕೈಗೆತ್ತಿಕೊಂಡಿರುವುದನ್ನೂ ಸಹ ಖಚಿತಪಡಿಸಿದೆ. ಈ ಸಂಬಂಧ 'ಮೈಸೂರು ಮಿತ್ರ'ನೊಂದಿಗೆ ಮಾತನಾಡಿದ ಎಂಜಿಪಿ ಸಂಸ್ಥಾಪಕ ಅಧ್ಯಕ್ಷ ಭಾಮೀ ವಿ.ಶೆಣೈ, ಎಂಜಿಪಿ ಮತ್ತು ರಾಕೇಶ್ ನೇತೃತ್ವದಲ್ಲಿ ಕೆಲವು ಸ್ಥಳೀಯ ಕಾರ್ಯಕರ್ತರು ಈ ಹಿಂದೆ ಪ್ರತಿಭಟನೆ ನಡೆಸಿದ ನಂತರ ಮೈಸೂರು ಮಹಾನಗರ ಪಾಲಿಕೆ ಸದರಿ ನಿರ್ಮಾಣ ಕಾಮಗಾರಿ ಸ್ಥಗಿತಗೊಳಿಸಿತ್ತು. ಕೆಲ ದಿನಗಳ ನಂತರ ಮತ್ತೆ ಕಾಮಗಾರಿ ಆರಂಭಿಸಿತ್ತು. ಬಹುಶಃ ನೆಲಸಮಕ್ಕೆ ಕ್ರಮ ವಹಿಸಿದ್ದರೆ ನಮ್ಮ ಹೋರಾಟಕ್ಕೆ ಫಲ ಸಿಕ್ಕಿದೆ. ಆದರೆ ಈ ಲಕ್ಷಾಂತರ ರೂಪಾಯಿ ನಷ್ಟವನ್ನು ಭರಿಸುವವರು ಯಾರು? ಎಂದು ಪ್ರಶ್ನಿಸಿದರು.

ಯೋಜನೆ ಕಾರಣಕರ್ತರೇ ನಷ್ಟ ಭರಿಸಲಿ: ಅದರ ನಿರ್ಮಾಣಕ್ಕೆ ಯೋಜನೆ ರೂಪಿಸಲು ಕಾರಣರಾದವರಿಂದ ಈ ನಷ್ಟದ ಹಣ ಭರಿಸಬೇಕು. ಇಲ್ಲವಾದರೆ ಸಾರ್ವಜನಿಕರ ತೆರಿಗೆ ಹಣದ ಮಹತ್ವ ಅವರ ಅರಿವಿಗೆ ಬರುವುದಿಲ್ಲ. ಪಾರ್ಕ್ ಎರಡು ಎಕರೆ ಇದ್ದರೆ ಶೇ.5ರಷ್ಟು ನಿರ್ಮಾಣ ಮಾಡಬಹುದು. ಸಾಮಗ್ರಿ ಶೇಖರಣೆ ಹಾಗೂ ಕಾವಲುಗಾರರ ವಿಶ್ರಾಂತಿಗಾಗಿ ಇಷ್ಟು ಅವಕಾಶ ನೀಡಲಾಗಿದೆ. ಎರಡು ಎಕರೆಗಿಂತ ಪಾರ್ಕ್ ವಿಸ್ತೀರ್ಣ ಕಡಿಮೆ ಇದ್ದರೆ ಯಾವುದೇ ನಿರ್ಮಾಣ ಮಾಡಲು ಅವಕಾಶವಿಲ್ಲ ಎಂದು ಅವರು ತಿಳಿಸಿದರು.

ಬೇಕಿದೆ ಕಾಯಕಲ್ಪ: ಈ ಉದ್ಯಾನವನದಲ್ಲಿ ಅವ್ಯವಸ್ಥೆ ಸಾಕಷ್ಟಿದ್ದು, ಅಲ್ಲಲ್ಲಿ ಮದ್ಯದ ಬಾಟಲಿಗಳು ಬಿದ್ದಿವೆ. ಪಾರ್ಕಿನ ಮಧ್ಯೆಯಲ್ಲಿ ಅರೆಬರೆ ನಿರ್ಮಿಸಿರುವ ಕಾರಂಜಿಯಲ್ಲಿ (ಫೌಂಟನ್) ಪ್ಲಾಸ್ಟಿಕ್



ಪಾರ್ಕಿನಲ್ಲಿ ಬಿದ್ದಿದ್ದ ಮದ್ಯದ ಬಾಟಲಿಗಳನ್ನು ಕಾಣಬಹುದು.

ಬಾಟಲಿಗಳು, ಪ್ಲಾಸ್ಟಿಕ್ ಕವರ್‌ಗಳು ಸೇರಿದಂತೆ ನಾನಾ ರೀತಿಯ ತ್ಯಾಜ್ಯ ಬಿದ್ದಿದ್ದು, ನೋಡಿದರೆ ಇದೇನು ಕಸದ ತೊಟ್ಟಿಯೇ ಎಂಬ ಉದ್ಗಾರ ಬಾರದೇ ಇರದು. ಇಲ್ಲಿ ಇಂಟರ್ ಲಾಕ್ ವಾಕಿಂಗ್ ಪಾತ್‌ನಲ್ಲಿ ಬಹುತೇಕ ಭಾಗದಲ್ಲಿ ಬಿಡಾಡಿ ದನಕರುಗಳ ಸಗಣಿ ಕಾಣಸಿಗಲಿದ್ದು, ಅದರ ದುರ್ವಾಸನೆ ಸೂಸುವ ಸನ್ನಿವೇಶ ನಿರ್ಮಾಣವಾಗಿದೆ. ಕತ್ತಲಾದರೆ ವಿದ್ಯುತ್ ದೀಪಗಳ ಸಮರ್ಪಕ ವ್ಯವಸ್ಥೆ ಸಹ ಇಲ್ಲಿಲ್ಲ. ಅಲ್ಲಲ್ಲಿ ಪಾರ್ಥೇನಿಯಂ ಗಿಡಗಳೊಂದಿಗೆ ಇನ್ನಿತರ ಗಿಡಗಂಟಿಗಳು ಬೆಳೆದು ನಿಂತಿವೆ. ಇಂತಹ ವಾತಾವರಣದಲ್ಲಿ ಹಿರಿಯ ನಾಗರಿಕರು ಇಲ್ಲಿ ನಿತ್ಯ ವಾಯು ವಿಹಾರ ಮಾಡುತ್ತಿದ್ದು, ಇಲ್ಲಿರುವ ಆಟಿಕೆಗಳಲ್ಲಿ ಆಡಲು ಮಕ್ಕಳು ನಿತ್ಯ ಬರುತ್ತಾರೆ. ಈ ಉದ್ಯಾನವನದ ಪಕ್ಕದಲ್ಲೇ ಸಮುದಾಯ ಆರೋಗ್ಯ ಕೇಂದ್ರ ಇದ್ದು, ಇಲ್ಲಿಗೆ ಭೇಟಿ ನೀಡುವ ರೋಗಿಗಳ ಸಂಬಂಧಿಕರು ವಿಶ್ರಾಂತಿಗಾಗಿ ಇದೇ ಉದ್ಯಾನವನ್ನು ಆಶ್ರಯಿಸಿದ್ದಾರೆ. ಅದಾಗ್ಯೂ ಈ ಉದ್ಯಾನವನಕ್ಕೆ ಕಾಯಕಲ್ಪ ನೀಡದೇ ನಿರ್ಲಕ್ಷ್ಯ ತಾಳಲಾಗಿದೆ.

ಈ ಪಾರ್ಕಿನಲ್ಲಿ ಮಂಗಳವಾರ ಸಂಜೆ ವಾಯು ವಿಹಾರಕ್ಕೆ ಬಂದಿದ್ದ ಹಿರಿಯ ನಾಗರಿಕರು (ಮಹಿಳೆಯರು) 'ಮೈಸೂರು ಮಿತ್ರ'ನೊಂದಿಗೆ ಮಾತನಾಡಿ, ನಾವು ಸ್ಥಳೀಯರಾಗಿದ್ದು, ಇಲ್ಲಿ ನಿತ್ಯ ವಾಯು ವಿಹಾರಕ್ಕೆ ಬರುತ್ತೇವೆ. ಈ ಪಾರ್ಕಿನ ಅಭಿವೃದ್ಧಿಗೆ ಯಾರೂ ಗಮನ ನೀಡಿಲ್ಲ. ಸೂಕ್ತ ನಿರ್ವಹಣೆ ಇಲ್ಲ. ಕುಡುಕರು ನಿತ್ಯ ಇಲ್ಲಿ ಮದ್ಯ ಸೇವನೆ ಮಾಡುತ್ತಾರೆ. ಇಲ್ಲಿ ಹುಡುಗ-ಹುಡುಗಿಯರು ಪಾರ್ಟಿಗಳನ್ನು ಮಾಡುತ್ತಾರೆ. ಪೋಲಿ ಪುಂಡರ ಹಾವಳಿ ನಿತ್ಯ ಇದೆ. ಪಾರ್ಕಿನಲ್ಲಿ ಸಾಮಾನ್ಯವಾಗಿ ಅಲಂಕಾರಿಕ ಮತ್ತು ಹೂವಿನ ಗಿಡಗಳು ಇರ ಬೇಕು. ಆದರೆ ಅಂತಹ ವಾತಾವರಣ ಇಲ್ಲಿಲ್ಲ. ವಾಯುವಿಹಾರಕ್ಕೆ ಸಮಯ ನಿಗದಿಗೊಳಿಸಿ ಕಾವಲುಗಾರರನ್ನು ನಿಯೋಜಿಸಬೇಕು. ಇವತ್ತು ಒಂದಿಷ್ಟು ಸ್ವಚ್ಛಗೊಳಿಸಿದ್ದಾರೆ ಇಲ್ಲವಾಗಿದ್ದರೆ ಇಲ್ಲಿ ಇನ್ನು ಅಧ್ವಾನದ ದರ್ಶನ ಆಗುತ್ತಿತ್ತು ಎಂದು ತಿಳಿಸಿದರು.

ವಿಶ್ರಾಂತಿಗೆ ಕಟ್ಟಡ ಅಗತ್ಯವಿತ್ತು: ವಿಶ್ರಾಂತಿಗಾಗಿ ನಿರ್ಮಿಸುತ್ತಿದ್ದ ಕಟ್ಟಡ ಅಗತ್ಯವಿತ್ತು. ತುಂಬ ಚೆನ್ನಾಗಿಯೇ ನಿರ್ಮಾಣವಾಗುತ್ತಿತ್ತು. ನಾವು ವಿರಮಿಸಲು ಒಂದು ಮಂಟಪ ಮಾದರಿ ಕಟ್ಟಡ ಆಗುತ್ತಿದೆ. ಮಳೆ ಬಂದರೆ ರಕ್ಷಣೆ ದೊರೆಯುತ್ತದೆ ಎಂದುಕೊಂಡಿದ್ದೆವು. ಆದರೆ ಈಗ ಕಟ್ಟಡವನ್ನು ನೆಲಸಮ ಮಾಡುತ್ತಿದ್ದಾರೆ ಎಂದು ಅವರು ಬೇಸರ ವ್ಯಕ್ತಪಡಿಸಿದರು.

ಬಿಜೆಪಿ ಸಭಾತ್ಯಾಗದ ನಡುವೆ ಆರ್‌ಡಿಪಿಆರ್ ವಿಶ್ವವಿದ್ಯಾಲಯ ತಿದ್ದುಪಡಿ ವಿಧೇಯಕ ಅಂಗೀಕಾರ

ರಾಜ್ಯಪಾಲರ ಅಧಿಕಾರಕ್ಕೆ ಕತ್ತರಿ!



ಬೆಳಗಾವಿ, ಡಿ.17– ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ(ತಿದ್ದುಪಡಿ)ವಿಧೇಯಕ ವಿರೋಧಿಸಿ ಪ್ರತಿಪಕ್ಷ ಬಿಜೆಪಿ ವಿಧಾನ ಸಭೆಯಲ್ಲಿಂದು ಸಭಾತ್ಯಾಗ ಮಾಡಿತು. ಉತ್ತಮ ಆಡಳಿತ ಮತ್ತು ಕಾರ್ಯನಿರ್ವಹಣೆಗಾಗಿ ಅದರ ಕುಲಪತಿ ಸ್ಥಾನದಿಂದ ರಾಜ್ಯಪಾಲರನ್ನು ಬದಲಾಯಿಸಿ ಮುಖ್ಯಮಂತ್ರಿಗೆ ಅಧಿಕಾರ ನೀಡುವುದು ಈ ವಿಧೇಯಕದ ಉದ್ದೇಶವಾಗಿದೆ. ಬಿಜೆಪಿ ಸಭಾತ್ಯಾಗದ ನಡುವೆಯೂ ವಿಧೇಯಕ ಅಂಗೀಕಾರವಾಯಿತು.

ವಿಧೇಯಕ ವಿಚಾರವಾಗಿ ಮಾತನಾಡಿದ ಬಿಜೆಪಿ ಶಾಸಕ ಸಿ.ಎನ್.ಅಶ್ವತ್ಥನಾರಾಯಣ, ಇದು ಪ್ರಗತಿಪರ ಮಸೂದೆಯಲ್ಲ. ರಾಜಭವನದೊಂದಿಗೆ ಸಂಘರ್ಷವನ್ನು ಕಾಂಗ್ರೆಸ್ ಸರ್ಕಾರ ಕಡಿಮೆ ಮಾಡಬೇಕು ಎಂದು ಹೇಳಿದರು. ಸರ್ಕಾರದ ನಿರ್ಧಾರವನ್ನು ಮರು ಪರಿಶೀಲಿಸುವಂತೆ ಮತ್ತೋರ್ವ ಬಿಜೆಪಿ ಶಾಸಕ ಅರಗ ಜ್ಞಾನೇಂದ್ರ ಮನವಿ ಮಾಡಿದರು.

ಇದು ಆಡಳಿತಾರೂಢ ಪಕ್ಷದ ದ್ವೇಷದ ರಾಜಕೀಯದ ಮನಸ್ಥಿತಿಯನ್ನು ಪ್ರತಿಬಿಂಬಿಸುತ್ತದೆ ಎಂದು ಶಿವಮೊಗ್ಗ ಶಾಸಕ ಎಸ್.ಎನ್.ಚನ್ನಬಸಪ್ಪ ಆರೋಪಿಸಿದರು. ಈ ಆರೋಪಗಳನ್ನು ತಳ್ಳಿಹಾಕಿದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ, ಈ ಮಸೂದೆ ರಾಜಕೀಯ ಉದ್ದೇಶದಿಂದ ಕೂಡಿಲ್ಲ ಎಂದು ಹೇಳಿದರು.

ವಿಶ್ವವಿದ್ಯಾಲಯದ ಉತ್ತಮ ಆಡಳಿತ, ಸಹಕಾರ ಮತ್ತು ಸುಗಮ ಕಾರ್ಯನಿರ್ವಹಣೆಗಾಗಿ ಈ ಮಸೂದೆ ಅಗತ್ಯವಾಗಿದೆ. ವಿಶ್ವವಿದ್ಯಾಲಯಕ್ಕೆ ರಾಜ್ಯಪಾಲರು ಮಾತ್ರ ಕುಲಪತಿಯಾಗಬೇಕು ಎಂದು ದೇಶದ ಯಾವುದೇ ಕಾನೂನು ಹೇಳಿಲ್ಲ. ದೇಶದಲ್ಲಿರುವ ಅನೇಕ ವಿಶ್ವವಿದ್ಯಾಲಗಳಲ್ಲಿ ಮುಖ್ಯಮಂತ್ರಿಗಳು ಕುಲಪತಿಯಾಗಿದ್ದಾರೆ ಎಂದರು. ಸಚಿವರ ವಿವರಣೆಯಿಂದ ಸಮಾಧಾನಗೊಳ್ಳದ ಬಿಜೆಪಿ ಸದಸ್ಯರು ಪ್ರತಿಭಟನೆಯ ಭಾಗವಾಗಿ ಸದನದಿಂದ ಸಭಾತ್ಯಾಗ ಮಾಡಿದರು. ಬಳಿಕ ಬಿಜೆಪಿ ಸಭಾತ್ಯಾಗದ ನಡುವೆಯೂ ವಿಧೇಯಕ ಅಂಗೀಕಾರವಾಯಿತು.

ಒಳ ಮೀಸಲಾತಿ, ಮುಡಾ ಹಗರಣ ಚರ್ಚೆ ವೇಳೆ ಕಾಂಗ್ರೆಸ್-ಬಿಜೆಪಿ ವಾಕ್ಸಮರ

ಬೆಳಗಾವಿ, ಡಿ.17– ವಿಧಾನಪರಿಷತ್ತಿನಲ್ಲಿಂದು ಒಳ ಮೀಸಲಾತಿ ಹಾಗೂ ಮುಡಾ ಪ್ರಕರಣ ಪ್ರತಿಧ್ವನಿಸಿ ಕಾಂಗ್ರೆಸ್ ಹಾಗೂ ಬಿಜೆಪಿ ನಾಯಕರ ನಡುವೆ ಮಾತಿನ ಚಕಮಕಿಗೆ ಕಾರಣವಾಯಿತು. ಮುಡಾ ಹಗರಣ ಕುರಿತು ಸಿಬಿಐ ತನಿಖೆ ನಡೆಯಬೇಕು ಎಂಬ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರ ಬೇಡಿಕೆಗೆ ಕಾಂಗ್ರೆಸ್ ನಾಯಕ ಬಿ.ಕೆ ಹರಿಪ್ರಸಾದ್ ತೀಕ್ಷ್ಣವಾಗಿ ಉತ್ತರ ನೀಡುವ ಮೂಲಕ ಅವರ ನಿಲುವನ್ನು ಪ್ರಶ್ನಿಸಿದರು.

ಆರ್‌ಎಸ್‌ಎಸ್ ಮತ್ತು ಸಂಘ ಪರಿವಾರಕ್ಕೆ ಮಂಜೂರಾದ ಜಮೀನು ಮತ್ತು ಈ ಭೂಮಿಗೆ ಎಷ್ಟು ಹಣ ನೀಡಿದ್ದಾರೆ ಎಂಬುದರ ತನಿಖೆಗೆ ವಿಜಯೇಂದ್ರ ಒತ್ತಾಯಿಸಬೇಕು ಎಂದು ಬಿ.ಕೆ.ಹರಿಪ್ರಸಾದ್ ಹೇಳಿದರು. ಬಲಪಂಥೀಯ ಸಂಘಟನೆಗಳೊಂದಿಗೆ ಬಿಜೆಪಿ ಮೈತ್ರಿ ಕಡೆಗೆ ಗಮನ ಕೇಂದ್ರೀಕರಿಸಿ ಮಾತನಾಡಿದ ಹರಿಪ್ರಸಾದ್, ಅವರ ಭೂ ವ್ಯವಹಾರಗಳ ಕುರಿತು ಹೆಚ್ಚಿನ ಪರಿಶೀಲನೆಗೆ ಕರೆ ನೀಡಿದರು.

ಹರಿಪ್ರಸಾದ್ ಸುಪ್ರೀಂಕೋರ್ಟ್‌ನ ತೀರ್ಪನ್ನು ಉಲ್ಲೇಖಿಸಿದಾಗ ಒಳಮೀಸಲಾತಿ ವಿಷಯದತ್ತ ಚರ್ಚೆ ಹೊರಳಿತು. ಸುಪ್ರೀಂಕೋರ್ಟ್ ಒಳ ಮೀಸಲಾತಿಗೆ ನಿರ್ದೇಶನ ನೀಡಿದೆ. ಯಾರೂ ತಪ್ಪಿಸಿಕೊಳ್ಳಲು ಸಾಧ್ಯವಿಲ್ಲ. ಅದನ್ನು ಜಾರಿಗೊಳಿಸಬೇಕು ಎಂದು ಅವರು ಪ್ರತಿಪಾದಿಸಿದರು.

ಇದಕ್ಕೂ ಮುನ್ನಾ ಮಾತನಾಡಿದ ಬಿಜೆಪಿ ನಾಯಕ ಸಿ.ಟಿ. ರವಿ. ಒಳ ಮೀಸಲಾತಿ ವಿಚಾರದಲ್ಲಿ ರಾಜ್ಯ ಸರ್ಕಾರವೇ ನಿರ್ಧಾರ ತೆಗೆದುಕೊಳ್ಳಬೇಕು ಎಂದು ಸುಪ್ರೀಂಕೋರ್ಟ್ ಹೇಳಿದೆ. ನಾವು ಮಾಧುಸ್ವಾಮಿ ವರದಿಯನ್ನು ಜಾರಿಗೊಳಿಸಿದ್ದೇವೆ. ಅದರಡಿ ಎಲ್ಲಾ ಸಮುದಾಯಗಳಿಗೆ ನ್ಯಾಯವನ್ನು ನೀಡಿದ್ದೇವೆ ಎಂದರು. ಜನರು ನ್ಯಾಯಮೂರ್ತಿ ಸದಾಶಿವ ಆಯೋಗದ ವರದಿಯನ್ನು ಒಪ್ಪುತ್ತಿಲ್ಲ. ಸರ್ಕಾರ ಮಾಧುಸ್ವಾಮಿ ವರದಿಯನ್ನು ಬೆಂಬಲಸಬೇಕು ಎಂಬುದು ನಮ್ಮ ಬೇಡಿಕೆಯಾಗಿದೆ ಎಂದು ಹೇಳಿದರು.

ಸೋಮವಾರ ಲಿಂಗಾಯಿತ ಪಂಚಮಸಾಲಿ ಸಮುದಾಯದ ಹೋರಾಟಗಾರರ ಮೇಲೆ ನಡೆದ ಪೊಲೀಸ್ ಲಾಠಿ ಚಾರ್ಜನ್ನು ಟೀಕಿಸಿದ್ದ ವಿಜಯೇಂದ್ರ, ಇದು ಸಿಎಂ ಸಿದ್ದರಾಮಯ್ಯ ನೇತೃತ್ವದ ಸರ್ಕಾರದ ದುರಹಂಕಾರಕ್ಕೆ ಸ್ಪಷ್ಟ ಉದಾಹರಣೆ ಎಂದು ಹೇಳಿದ್ದರು.

ಹಣ್ಣು-ಹಂಪಲು ವಿತರಣೆ



ಮಾಜಿ ಮುಖ್ಯಮಂತ್ರಿ, ಹಾಲಿ ಕೇಂದ್ರ ಸಚಿವರಾದ ಹೆಚ್.ಡಿ.ಕುಮಾರಸ್ವಾಮಿ ಅವರ ಹುಟ್ಟುಹಬ್ಬದ ಅಂಗವಾಗಿ ಅವರ ಅಭಿಮಾನಿಗಳ ವತಿಯಿಂದ ಮಿಷನರಿ ಆಫ್ ಚಾರಿಟಿ ಆಫ್ ಮದರ್ ತೆರೇಸಾ ಬುದ್ಧಿಮಾಂದ್ಯ ವೃದ್ಧಾಶ್ರಮದಲ್ಲಿ ಕೇಕ್ ಕತ್ತರಿಸಿ, ಹಣ್ಣು-ಹಂಪಲು ವಿತರಿಸಲಾಯಿತು. ಈ ವೇಳೆ ಮಾಜಿ ಕಾರ್ಪೊರೇಟರ್ ಎಸ್‌ಬಿಎಂ ಮಂಜು, ವೃದ್ಧಾಶ್ರಮದ ಸಿಬ್ಬಂದಿ ಜಾನ್ಸೇನಾ, ಹೆಚ್.ಡಿ.ಕುಮಾರಸ್ವಾಮಿ ಅಭಿಮಾನಿ ಬಳಗದ ಅಧ್ಯಕ್ಷ ರಾಮಕೃಷ್ಣ, ತಾಲೂಕು ಪಂಚಾಯಿತಿ ಮಾಜಿ ಅಧ್ಯಕ್ಷ ಜಿ.ಕುಮಾರ್, ಜೆಡಿಎಸ್ ಮುಖಂಡರಾದ ಹನುಮಂತು, ಆನಂದ್ ಗೌಡ, ರವಿಚಂದ್ರೇಗೌಡರು, ಪ್ರಿಯಾಕೃಷ್ಣ, ಪ್ರವೀಣ್ ಕಿತ್ತೂರು, ಡಾಬಾ ಸೋಮಣ್ಣ ಉಪಸ್ಥಿತರಿದ್ದರು.

ಡಿಸೆಂಬರ್ 31ರಿಂದ ಅನಿರ್ದಿಷ್ಟಾವಧಿ ಮುಷ್ಕರಕ್ಕೆ ಸಾರಿಗೆ ನೌಕರರ ನಿರ್ಧಾರ

ಬೆಂಗಳೂರು, ಡಿ.17– ರಾಜ್ಯ ಸರ್ಕಾರ ತಮ್ಮ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನೌಕರರ ಜಂಟಿ ಕ್ರಿಯಾ ಸಮಿತಿ ಡಿ.31ರಿಂದ ಅನಿರ್ದಿಷ್ಟಾವಧಿ ಮುಷ್ಕರಕ್ಕೆ ಕರೆ ನೀಡಿದೆ.

ಮುಷ್ಕರಕ್ಕೆ ಕರೆ ನೀಡಿರುವ ಹಿನ್ನೆಲೆಯಲ್ಲಿ ಹೊಸ ವರ್ಷದ ಮುನ್ನಾದಿನದಂದು ಲಕ್ಷಾಂತರ ಜನರಿಗೆ ತೊಂದರೆಯಾಗುವ ಸಾಧ್ಯತೆಯಿದೆ.


ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆ, ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ, ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಮತ್ತು ವಾಯುವ್ಯ ರಸ್ತೆ ಸಾರಿಗೆ ಸಂಸ್ಥೆ ನೌಕರರು ಮುಷ್ಕರ ನಡೆಸಲಿದ್ದಾರೆ.

36 ತಿಂಗಳಿಂದ ಬಾಕಿ ಉಳಿದಿರುವ 1,750 ಕೋಟಿ ರೂ.ಗಳ ಬಾಕಿ ಪಾವತಿ ಬಿಡುಗಡೆ ಮಾಡಬೇಕು. ಮೂಲವೇತನಕ್ಕೆ ಶೇಕಡ 25ರಷ್ಟು ವೇತನ ಹೆಚ್ಚಿಸಿ, ಶೇಕಡ 31ರಷ್ಟು ತುಟ್ಟಿಭತ್ಯೆ ವಿಲೀನಗೊಳಿಸಿ ವೇತನ ಶ್ರೇಣಿ ಸಿದ್ಧಪಡಿಸಬೇಕು. ನೌಕರರ ಭತ್ಯೆಗಳನ್ನು ಶೇ.5 ಪಟ್ಟು ಹೆಚ್ಚಳ ಮಾಡಬೇಕು. ಪ್ರತಿ ತಿಂಗಳು 2000 ರೂ. ವೈದ್ಯಕೀಯ ಚಿಕಿತ್ಸಾ ವೆಚ್ಚ ನೀಡಬೇಕು. ಬಸ್ ನಿಲ್ದಾಣ ಮತ್ತು ಬಸ್ ಘಟಕಗಳಲ್ಲಿ ಸೂಕ್ತ ಶೌಚಾಲಯ, ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಬೇಕು. ಶಕ್ತಿ ಯೋಜನೆಯಿಂದ ಆಗುತ್ತಿರುವ ಶಿಕ್ಷೆ, ಕಿರುಕುಳ ಸಮಸ್ಯೆ ಪರಿಹರಿಸಬೇಕು. ನೌಕರರ ಮುಂಬಡ್ತಿಗೆ ಕ್ರಮ ಕೈಗೊಳ್ಳಬೇಕು. ಹೆಚ್ಚುವರಿ ಕೆಲಸದ ಅವಧಿಗೆ ಓಟಿ ನೀಡುವುದು ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಲಾಗಿದೆ.

ಡಿ.14ರಂದು ಸರ್ಕಾರದ ಪರವಾಗಿ ಸಚಿವ ದಿನೇಶ್ ಗುಂಡೂರಾವ್ ಅವರು ನಮ್ಮ ಮನವಿ ಸ್ವೀಕರಿಸಿ ಬೇಡಿಕೆಗಳ ಕುರಿತು ಸರ್ಕಾರದೊಂದಿಗೆ ಚರ್ಚಿಸುವುದಾಗಿ ಭರವಸೆ ನೀಡಿದ್ದಾರೆಂದು ಸಮಿತಿ ಪದಾಧಿಕಾರಿಗಳು ತಿಳಿಸಿದ್ದಾರೆ.

ಬಿಳಿಗಿರಿರಂಗನ ಬೆಟ್ಟದಲ್ಲಿ ಹೊಸ ಪ್ರಭೇದದ ಬಣ್ಣದ ಕಡಜ ಪತ್ತೆ!

ಮೈಸೂರು, ಡಿ.17– ವಿಶಿಷ್ಟ ಅರಣ್ಯವನ್ನು ಹೊಂದಿರುವ ಬಿಳಿಗಿರಿರಂಗನಾಥಸ್ವಾಮಿ ದೇವಾಲಯ ವನ್ಯಧಾಮದಲ್ಲಿ ಹೊಸ ಪ್ರಭೇದದ ವರ್ಣರಂಜಿತ ಕಡಜವೊಂದು ಪತ್ತೆಯಾಗಿದೆ. ಅಶೋಕ ಟ್ರಸ್ಟ್ ಫಾರ್ ರಿಸರ್ಚ್ ಇನ್ ಎಕಾಲಜಿ ಅಂಡ್ ಎನ್ವಿರಾನ್‌ಮೆಂಟ್ ಸಂಶೋಧಕರಾದ ರಂಜಿತ್ ಎ.ಪಿ. ಮತ್ತು ಪ್ರಿಯದರ್ಶನನ್ ಧರ್ಮ ರಾಜನ್ ಅವರು ಚಾಮರಾಜನಗರ ಜಿಲ್ಲೆಯ ಯಳಂದೂರು ತಾಲೂಕಿನ ಬಿಳಿಗಿರಿ ರಂಗಸ್ವಾಮಿ ದೇವಸ್ಥಾನ (ಬಿಆರ್‌ಟಿ) ಹುಲಿ ಸಂರಕ್ಷಿತ ಪ್ರದೇಶದಲ್ಲಿ ಹೊಸ ಪ್ರಭೇದದ ಕಡಜವನ್ನು ಪತ್ತೆ ಮಾಡಿದ್ದಾರೆ. ಬಿಆರ್‌ಟಿ ಹುಲಿ ಸಂರಕ್ಷಿತ ಪ್ರದೇಶ ಸೇರಿದಂತೆ ದೇಶದ 4 ವಿವಿಧ ಭಾಗಗಳಲ್ಲಿ ಈ ಹೊಸ ಪ್ರಭೇದದ




ಕಡಜವನ್ನು ಸಂಶೋಧಕರು ಪತ್ತೆ ಮಾಡಿದ್ದಾರೆ.

ತಮಿಳುನಾಡಿನ ಮುಂಡಂತುರೈ ಹುಲಿ ಸಂರಕ್ಷಿತ ಪ್ರದೇಶದ ಕಾಲಕ್ಕಾಡ್, ಅರುಣಾಚಲ ಪ್ರದೇಶದ ಸಿಯಾಂಗ್ ಕಣಿವೆ ಮತ್ತು ಉತ್ತರಾಖಂಡದ ತೆಹ್ರಿಗಳಲ್ಲಿ ಹೊಸ ಜಾತಿಯ ಕಡಜಗಳನ್ನು ಪತ್ತೆ ಮಾಡಲಾಗಿದೆ. ಬಿಆರ್‌ಟಿ ಹುಲಿ ಸಂರಕ್ಷಿತ ಪ್ರದೇಶದಲ್ಲಿ ಕಂಡುಬಂದಿರುವ ಈ ಕಡಜಕ್ಕೆ ಕಿಂಗ್ ಕೋಬ್ರಾದ ಸಂಶೋಧನೆ ಮತ್ತು ಸಂರಕ್ಷಣೆಯಲ್ಲಿ ಕೆಲಸ ಮಾಡಿದ ಡಾ. ಪಿ.ಗೌರಿಶಂಕರ್ ಅವರ ಹೆಸರನ್ನು ಇಡಲಾಗಿದೆ. ಕೆಲವು ತಿಂಗಳ ಹಿಂದೆ ಇದೇ ಸಂಶೋಧಕರ ತಂಡವು ಹೊಸ ಜಾತಿಯ ಹಲ್ಲಿ ಮತ್ತು ಕಡಜವನ್ನು ಪತ್ತೆ ಮಾಡಿತ್ತು.

ಸಂಶೋಧಕ ಪ್ರಿಯದರ್ಶನನ್ ಧರ್ಮರಾಜನ್ ಅವರು ಮಾತನಾಡಿ, ಈ ಸಂಶೋಧನೆಗಳು ಭಾರತದಲ್ಲಿನ ಶ್ರೀಮಂತ ಜೀವವೈವಿಧ್ಯತೆ ಮತ್ತು ಪರಿಸರ ವ್ಯವಸ್ಥೆಗಳ ಪಾತ್ರಗಳನ್ನು ಅರ್ಥಮಾಡಿಕೊಳ್ಳಲು ಮತ್ತು ಜೀವವೈವಿಧ್ಯತೆಯನ್ನು ಸಂರಕ್ಷಿಸಲು ಸಹಾಯ ಮಾಡುತ್ತದೆ ಎಂದು ಹೇಳಿದ್ದಾರೆ.

ಔತಣಕೂಟ ಮಾಡಿ ಬೆನ್ನಿಗೆ ಚಾಕು ಹಾಕೋದಲ್ಲ; ಇಲ್ಲಿ ಬಿಎಸ್‌ವೈ ಕುತಂತ್ರ ಇದ್ದೇ ಇರುತ್ತೆ: ಯತ್ನಾಳ್ ಕಿಡಿ



ಬೆಳಗಾವಿ, ಡಿ.17– ಔತಣಕೂಟ ಮಾಡಿ ಬೆನ್ನಿಗೆ ಚಾಕು ಹಾಕುವುದು ಅಲ್ಲ. ಇದರ ಹಿಂದೆ ಬಿ.ಎಸ್. ಯಡಿಯೂರಪ್ಪ ಅವರ ಕುತಂತ್ರ ಇದ್ದೇ ಇರುತ್ತದೆ ಎಂದು ವಿಜಯಪುರ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ವಾಗ್ದಾಳಿ ನಡೆಸಿದರು.

ಬೆಳಗಾವಿಯಲ್ಲಿಂದು ಉಭಯ ನಾಯಕರ ಚರ್ಚೆ ವಿಚಾರವಾಗಿ ಮಾತನಾಡಿದ ಯತ್ನಾಳ್, ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ ವಿಜಯೇಂದ್ರ ಮತ್ತು ಮಾಜಿ ಸಿಎಂ ಬಿ.ಎಸ್.ಯಡಿಯೂರಪ್ಪ ವಿರುದ್ಧ ಮತ್ತೆ ಹರಿಹಾಯ್ದರು. ವಿಜಯೇಂದ್ರ ಔತಣಕೂಟಕ್ಕೆ ಆಹ್ವಾನಿಸಿದ್ದರು, ನಾನು ಹೋಗಿಲ್ಲ, ರಮೇಶ್ ಜಾರಕಿಹೊಳಿ ಸಹ ಹೋಗಲ್ಲ. ಇಲ್ಲಿ ಕರೆಯುತ್ತಾರೆ, ಆದರೆ ದಾವಣಗೆರೆಯಲ್ಲಿ ಅವರ ಚೇಲಾಗಳನ್ನು ಬಿಟ್ಟು ಯಡಿಯೂರಪ್ಪ, ವಿಜಯೇಂದ್ರ ನಿರಂತರವಾಗಿ ಸಭೆಗಳನ್ನು ಮಾನಿಟರ್ ಮಾಡುತ್ತಿದ್ದಾರೆ. ಅವರ ಗನ್‌ಮ್ಯಾನ್‌ಗಳಿಂದ ಮಾಹಿತಿ ಪಡೆದುಕೊಳ್ಳುತ್ತಿದ್ದಾರೆ. ಔತಣಕೂಟಕ್ಕೆ ಕರೆದು, ಬೆನ್ನಿಗೆ ಚಾಕು ಹಾಕುವುದು ಅಲ್ಲ. ನಾವು ಉತ್ತರ ಕರ್ನಾಟಕದವರು ಆ ರೀತಿ ಮಾಡಲ್ಲ. ಏನಿದ್ದರೂ ಏಕ್ ಮಾರ್ ದೋ ತುಕ್ಡಾ, ಎದುರಿಗೇ ಮಾತನಾಡ್ತೀವಿ ಎಂದು ಹೇಳಿದರು.

ಯತ್ನಾಳ್ ಉಚ್ಚಾಟನೆ ಮಾಡಿ ಎಂದು ಯಡಿಯೂರಪ್ಪ ಸೇರಿ ಕೆಲ ಶಾಸಕರು ಮಾತಾಡಿದ್ದನ್ನು ಸ್ವತಃ ಮಾಜಿ ಶಾಸಕರೇ ನಮಗೆ ಮಾಹಿತಿ ನೀಡಿದ್ದಾರೆ. ಇವರು ವಯೋವೃದ್ಧ, ಯತ್ನಾಳ್ ನಮ್ಮವರೇ ಕೂತು ಬಗೆಹರಿಸಿಕೊಳ್ಳುತ್ತೀವಿ ಎನ್ನುತ್ತಾರೆ. ಇದರ ಹಿಂದೆ ಯಡಿಯೂರಪ್ಪ ಕುತಂತ್ರ ಯಾವಾಗಲೂ ಇದ್ದೇ ಇರುತ್ತದೆ. ಹಿಂದೆಯೂ ವಿಜಯೇಂದ್ರ ಇದೇ ರೀತಿ ಹೇಳಿಕೆ ಕೊಟ್ಟಿದ್ದ. ಯತ್ನಾಳ್ ವಿಪಕ್ಷ ನಾಯಕ, ಶೋಭಾ ಕರಂದ್ಲಾಜೆ ರಾಜ್ಯಾಧ್ಯಕ್ಷರಾಗೋಕೆ ನಮ್ಮದೇನು ತಕರಾರು ಇಲ್ಲ ಅಂದಿದ್ದರು. ಆದರೆ ಎರಡೇ ದಿನಕ್ಕೆ ರಾಜ್ಯಾಧ್ಯಕ್ಷರ ಘೋಷಣೆ ಆಯ್ತು. ಇವರು ಮ್ಯಾನೇಜ್ ಮಾಡುತ್ತಾರೆ, ಯಡಿಯೂರಪ್ಪರ ಈ ಹೇಳಿಕೆ ಹಿಂದೆ ದೊಡ್ಡ ಮ್ಯಾನೇಜ್ಮೆಂಟ್ ಇದೆ. ಆಮೇಲೆ ನಾವು ಮಾಡಿಲ್ಲ, ಹೈಕಮಾಂಡ್ ಮಾಡಿದೆ. ನಾನು ನಮ್ಮ ಮಗ ಇಬ್ಬರೂ ಪ್ರಾಮಾಣಿಕರು ಎಂದು ಹೇಳುತ್ತಾರೆ ಎಂದು ಕಿಡಿಕಾರಿದರು. ಸಭೆ ಮಾಡಿದ್ದಕ್ಕೆ ನನ್ನ ಮೇಲೆ ಬಹಳ ವಿರೋಧ ಇದೆ ಎಂದು ವಿಜಯೇಂದ್ರ ಹೇಳುತ್ತಾನೆ. ಇವರದ್ದು ನಾಟಕದ ಕಂಪನಿ ಎಂದು ಗೊತ್ತಾಗುವುದಿಲ್ವಾ, ನಾವು 35-40 ವರ್ಷದಿಂದ ಯಡಿಯೂರಪ್ಪ ಜೊತೆಗೆ ಜೀವನ ಮಾಡಿದ್ದಲ್ವಾ ಯಡಿಯೂರಪ್ಪ ಒಬ್ಬರೇ ಬಿಜೆಪಿ ಕಟ್ಟಿದ್ದಾರಾ. ನಾವೇ ಪೆಟ್ರೋಲ್ ಹಾಕಿ ಬಸ್‌ಗೆ ಟಿಕೆಟ್ ಕೊಡಿಸಿ ಕಳುಹಿಸಿ ಕೊಟ್ಟಿದ್ದಿವಿ. ಈಗ ಅವರ ಶಿಷ್ಯಂದಿರು ನಮಗೆ ಸೈಕಲ್ ಹೊಡೆದದ್ದು ಹೇಳುತ್ತಾರೆ. ಪಕ್ಷದಲ್ಲಿ ಸಂಘಟನೆ ಮಾಡಬೇಕಿದ್ದರೆ ದಾವಣಗೆರೆ ಸಭೆ ಮಾಡುತ್ತಿರಲಿಲ್ಲ. ಸ್ವತಃ ಯಡಿಯೂರಪ್ಪ ಮನೆಯಲ್ಲೇ ಭಿನ್ನಮತಿಯರ ಸಭೆ ಆಗುತ್ತದೆ. ರಾಜ್ಯಾಧ್ಯಕ್ಷ ಆ ಸಭೆಯಲ್ಲಿ ಪಾಲ್ಗೊಳ್ಳುತ್ತಾನೆ, ಇದು ಗುಂಪಿನ ನಾಯಕ ಎಂದು ಆಗ್ರಹಿಸಿದರು.

ನಾವು ಯಾವುದೇ ಹುಟ್ಟುಹಬ್ಬ, ಪುಣ್ಯತಿಥಿ ಆಚರಣೆ ಮಾಡುವ ಕಾರ್ಯಕರ್ತರಲ್ಲ. ಹುಟ್ಟುಹಬ್ಬವನ್ನು ಅವರ ವರ ಮನೆಯಲ್ಲಿ ಮಾಡಿಕೊಳ್ಳಲಿ. ನಾನು ನನ್ನ ಸ್ವಂತ ಹುಟ್ಟುಹಬ್ಬವನ್ನೇ ಆಚರಿಸಿ ಕೊಳ್ಳಲ್ಲ. ಮೊನ್ನೆ ನನ್ನ ಹುಟ್ಟುಹಬ್ಬದಂದು ಬೆಳಗ್ಗೆ 10ಕ್ಕೆ ಸದನದ ಒಳಗೆ ಹೋದರೆ ರಾತ್ರಿ 10ಕ್ಕೆ ಮನೆಗೆ ಹೋಗಿದ್ದೀನಿ. ಯಾರೋ ಒಬ್ಬ ಬಂದು ಹಾರ ಹಾಕಿದ. ಹುಟ್ಟುಹಬ್ಬ ಮಾಡಿಕೊಳ್ಳುವುದು ಜಿಲ್ಲಾ ಪಂಚಾಯತ್ ಚುನಾವಣೆಗೆ ಅನುಕೂಲ ಆಗುತ್ತದೆ ಎನ್ನುವುದೇನು ಇಲ್ಲ. ನಾವು ವಕ್ಫ್ ವಿಚಾರವಾಗಿ ಹೋರಾಟ ಮಾಡುತ್ತೇನೆ. ವಕ್ಫ್‌ನ್ನು ದೇಶದ್ಯಾಂತ ಕಿತ್ತು ಹಾಕಬೇಕು. ನಾವೂ ದಾವಣಗೆರೆಯಲ್ಲಿ ಸಮಾವೇಶ ಮಾಡ್ತೀವಿ. ಅವರ ಸಮಾವೇಶ ಮುಗಿದು ಒಂದು ವಾರದೊಳಗೆ ನಾವೂ ಸಮಾವೇಶ ಮಾಡ್ತೀವಿ. ನಮ್ಮ ಶಕ್ತಿ ಏನೂ ಅನ್ನೋದು ಅವರಿಗೆ ತೋರಿಸುತ್ತೇವೆ. ನಮ್ಮದು ಜನಶಕ್ತಿ, ಜನಪರ ಹೋರಾಟ ಎಂದರು.

ಮಾಣಿಪ್ಪಾಡಿ ಆರೋಪದ ಬಗ್ಗೆ ಮಾತನಾಡಿ, ಅನ್ವರ್ ಮಾಣಿಪ್ಪಾಡಿ ಪ್ರಕರಣವನ್ನು ಸಿಬಿಐಗೆ ಕೊಡಲಿ ಎನ್ನುವುದೇ ನಮ್ಮ ವಾದ. ಒಬ್ಬ ಸಿಎಂ ಆಗಿ ತಮ್ಮ ಎಕ್ಸ್ ಖಾತೆಯಲ್ಲಿ ಬರೆದುಕೊಳ್ಳುತ್ತಾರೆ. ಸಾಕ್ಷಿ ಇದ್ದರೆ ಬಿಡುಗಡೆ ಮಾಡಲಿ. ಸಿಎಂ ಹತಾಶರಾಗಿದ್ದಾರೆ, ಬಿಜೆಪಿಯವರನ್ನ ಸಿಲುಕಿಸಬೇಕು ಎಂದುಕೊಂಡಿದ್ದಾರೆ. ತಾವೇ ಕೆಲವು ಜನಾಂಗದವರನ್ನ ಪ್ರಚೋದನೆ ಮಾಡುತ್ತಿದ್ದಾರೆ. ಆದರೆ ಈಗ ಬಿಜೆಪಿ ಮೇಲೆ ಸಿಎಂ ಸಿದ್ದರಾಮಯ್ಯಗೆ ಭಯ ಬಂದಿದೆ. ಸಿಬಿಐಗೆ ಪತ್ರ ಬರೆಯಲಿ, ಅವರೇ ತನಿಖೆ ಮಾಡುತ್ತಾರೆ. ನಿನ್ನೆ ಸದನದಲ್ಲಿ ಸಚಿವ ಪ್ರಿಯಾಂಕ್ ಖರ್ಗೆ ಮುಖ ನೋಡಬಾರದಿತ್ತು. ವೀಡಿಯೋ ಅಂದಿದ್ದರೂ, ಆದರೆ ಆಡಿಯೋ ಮಾತ್ರ ಬಿಡುಗಡೆ ಮಾಡಿದ್ದಾರೆ ಎಂದು ವ್ಯಂಗ್ಯವಾಡಿದರು.

ನಕ್ಕರೆ ಅದೇ ಸ್ವರ್ಗ

ಮಗು : ಅಮ್ಮಾ, ನಿನ್ನ ಹೊಟ್ಟೆಯೊಳಗೇನಿದೆ?
ಅಮ್ಮ : ಇನ್ನೊಂದು ಪುಟ್ಟ ಪಾಪು ಇದೆ ಪುಟ್ಟಾ
ಮಗು : ಅದು ತುಂಬಾ ಒಳ್ಳೇ ಮಗೂನ?
ಅಮ್ಮ : ಹೌದು ಪುಟ್ಟಾ
ಮಗು : ಮತ್ತೆ ನೀನ್ಯಾಕೆ ಅದನ್ನು ತಿಂದೆ?

ಮೈಸೂರು ಮಿತ್ರ

ಬುಧವಾರ, 18 ಡಿಸೆಂಬರ್ 2024

ಸತ್ಯೇನೋತ್ತಭಿತಾ ಭೂಮಿಃ!! ನಹಿ ಸತ್ಯಾತ್ಪರೋ ಧರ್ಮಃ!
(ಭೂಮಿಯು ಸತ್ಯದ ಮೇಲೆ ನಿಂತಿದೆ, ಸತ್ಯಕ್ಕಿಂತ ಮಿಗಿಲಾದ ಧರ್ಮವಿಲ್ಲ)

ಸಂಪಾದಕ: ಎಂ.ಗೋವಿಂದೇಗೌಡ *M.A.*

ಅಮೃತ ವಾಹಿನಿ.........

ಪ್ರೇಮ ಬೆಂಕಿಯು ಎಲ್ಲವನ್ನೂ ಪವಿತ್ರವಾಗಿಸುತ್ತದೆ.
–ಡಾ. ರಾಧಾಕೃಷ್ಣನ್

ವೇದ ಸುಳ್ಳಾದರೂ ಗಾದೆ ಸುಳ್ಳಾಗದು { ಇಲಿ ಸಿಕ್ಕರೆ ಬೆಕ್ಕು ಆಗುವುದು ಹುಲಿ

ನಿಮ್ಮ ಪತ್ರಗಳು

■ ಸಂಸತ್‌ನಲ್ಲಿ ಜ್ವಲಂತ ಸಮಸ್ಯೆಗಳ ಬಗ್ಗೆ ಚರ್ಚಿಸಲಿ

ಮಾನ್ಯರೆ,

ದೇಶದ ಜ್ವಲಂತ ಸಮಸ್ಯೆಗಳ ಬಗ್ಗೆ ಗಂಭೀರ ಚರ್ಚೆ ನಡೆಸಬೇಕಾದ ವಿಪಕ್ಷ ಕಾಂಗ್ರೆಸ್ ಸಂಸತ್ ಕಲಾಪಗಳಲ್ಲಿ ತನ್ನ ಮಿತಿ ಮೀರಿದ ವರ್ತನೆಗಳ ಮೂಲಕ ಸಾರ್ವತ್ರಿಕ ಟೀಕೆಗೆ ಗುರಿಯಾಗುತ್ತಿದ್ದು ಇದು ಆರೋಗ್ಯಕರ ಬೆಳವಣಿಗೆ ಅಲ್ಲ. ಕಳೆದ ಅಧಿವೇಶನದಲ್ಲೂ ಇದೇ ಮಾದರಿಯ ಹಾದಿ ಹಿಡಿದ ಕಾಂಗ್ರೆಸ್ ಕಲಾಪದ ಮೌಲ್ಯವನ್ನೇ ಅಪಮೌಲ್ಯಗೊಳಿಸುತ್ತಿದೆ. ಕೇವಲ ವ್ಯಕ್ತಿಗತ ವಿಚಾರಗಳನ್ನೇ ಪ್ರಮುಖವಾಗಿಟ್ಟುಕೊಂಡು ಗದ್ದಲ, ಸಭಾತ್ಯಾಗಗಳ ಮೂಲಕ ವ್ಯಾಪಕ ಟೀಕೆಗೆ ಗುರಿಯಾಗುತ್ತಿರುವುದು ದುರದೃಷ್ಟಕರ ಸಂಗತಿ.

ಸಂವಿಧಾನ ಎಂಬುದು ಭಾರತದ ಪವಿತ್ರ ಗ್ರಂಥ. ಆದರೆ, ಕಾಂಗ್ರೆಸ್ ಪಕ್ಷ ಇದನ್ನು ದುರ್ಬಳಕೆ ಮಾಡಿಕೊಳ್ಳುತ್ತಿದ್ದು, ಕಲಾಪದ ಒಳಗೆ, ಹೊರಗೆ ಹಾಗೂ ಹಾದಿ ಬೀದಿಯಲ್ಲಿ ಸಂವಿಧಾನದ ಪ್ರತಿಗಳನ್ನು ಕೈಯಲ್ಲಿ ಹಿಡಿದು ಪ್ರತಿಭಟಿಸುವ ಮೂಲಕ ಅದರ ಪಾವಿತ್ರ್ಯತೆಗೆ ಧಕ್ಕೆ ತರುತ್ತಿದೆ. ರಾಹುಲ್‌ಗಾಂಧಿಯವರು ವಿಪಕ್ಷ ನಾಯಕರಾದ ನಂತರ ಸಂಸತ್ ಕಲಾಪಗಳಿಗೆ ಒಂದು ಘನತೆ ತಂದುಕೊಡುತ್ತಾರೆಂಬ ನಂಬಿಕೆ ಹುಸಿಯಾಗಿದೆ. ಕೇವಲ ಪ್ರಧಾನಿ ಟೀಕೆಗಷ್ಟೇ ಅವರ ಭಾಷಣ ಸೀಮಿತವಾಗುತ್ತಿದ್ದು, ಅದಾನಿ–ಅಂಬಾನಿ ವಿಚಾರವೇ ಕಾಂಗ್ರೆಸ್‌ನ ಪ್ರಮುಖ ಅಜೆಂಡವಾಗಿದ್ದು, ಏಕ ನಾಗರಿಕ ಸಂಹಿತೆ, ಒಂದು ದೇಶ ಒಂದು ಚುನಾವಣೆ ಸೇರಿದಂತೆ ಮತ್ತಿತರ ಮಹತ್ವಪೂರ್ಣ ಮಸೂದೆಗಳ ಬಗ್ಗೆ ಆರೋಗ್ಯಕರ ಚರ್ಚೆ ನಡೆಸಬೇಕಾದ ವಿಪಕ್ಷ ಸಭಾಪತಿಗಳ ವಿರುದ್ಧವೇ ಅವಿಶ್ವಾಸ ನಿರ್ಣಯಕ್ಕೆ ಮುಂದಾಗಿದ್ದು ಕಳವಳಕಾರಿ ಸಂಗತಿ.

ಸಂವಿಧಾನ ಪಂಡಿತರಂತೆ ಮಾತನಾಡುವ ಕಾಂಗ್ರೆಸ್ ನಾಯಕರು ತಮ್ಮ ದೀರ್ಘ ಕಾಲದ ಅಧಿಕಾರಾವಧಿಯಲ್ಲಿ ಎಷ್ಟು ಎಷ್ಟು ಬಾರಿ ಸಂವಿಧಾನ ತಿದ್ದುಪಡಿ ಮಾಡಿದ್ದಾರೆ ಹಾಗೂ ಯಾವ ರೀತಿ ಅದನ್ನು ದುರುಪಯೋಗಪಡಿಸಿಕೊಂಡಿದ್ದಾರೆಂಬುದನ್ನು ಪ್ರಧಾನಿಯವರು ಎಳೆ ಎಳೆಯಾಗಿ ವಿವರಿಸಿದ್ದಾರೆ. ಇನ್ನಾದರೂ ಕಾಂಗ್ರೆಸ್ ನಾಯಕರು ತಮ್ಮ ಪ್ರತಿಭಟನಾ ಸಂದರ್ಭಗಳಲ್ಲಿ ಕೈಯಲ್ಲಿ ಸಂವಿಧಾನ ಪ್ರತಿಗಳನ್ನು ಪ್ರದರ್ಶಿಸುವುದನ್ನು ನಿಲ್ಲಿಸಲಿ. ಇದೇ ಅವರು ಸಂವಿಧಾನಕ್ಕೆ ನೀಡುವ ಗೌರವವಾಗಲಿದೆ.

– ಹೆಚ್.ಆರ್.ಪ್ರಸಾದ್, ವಿವೇಕಾನಂದನಗರ, ಮೈಸೂರು.

■ ಸೆಲೆಬ್ರಿಟಿ, ವಿಐಪಿಗಳ ವಿಷಯದಲ್ಲಿ ನಮ್ಮ ಕೋರ್ಟ್‌ಗಳ ಕಾಳಜಿ

ಮಾನ್ಯರೆ,

ಹಲವು ವರ್ಷಗಳ ಹಿಂದಿನ ಘಟನೆ. ಸಲ್ಮಾನ್‌ಖಾನ್‌ಗೆ ಅಭಯಾರಣ್ಯದಲ್ಲಿ ಜಿಂಕೆಯನ್ನು ಬೇಟೆಯಾಡಿದ ಪ್ರಕರಣದಲ್ಲಿ ಮುಂಬೈನ ಕೋರ್ಟ್ ಒಂದು ಮಧ್ಯಾಹ್ನ 3 ಗಂಟೆಯಲ್ಲಿ ಕೋರ್ಟ್‌ನಲ್ಲಿ ಹಾಜರಿದ್ದ ಆತನಿಗೆ ಬಂಧನದ ಆದೇಶ ನೀಡಿತು. ಆಶ್ಚರ್ಯವೆಂದರೆ ಏನಾಗುತ್ತಿದೆ ಎಂದು ಯೋಚಿಸುವಷ್ಟರಲ್ಲಿ ಅದೇ ಮುಂಬೈನ ಉನ್ನತ ಕೋರ್ಟ್ ಆತನಿಗೆ ಜಾಮೀನು ಆದೇಶ ನೀಡಿತು. ಪೊಲೀಸರು ಆತನನ್ನು ಬಂಧಿಸುವ ಮೊದಲೇ ಅರ್ಧ ಗಂಟೆಯಲ್ಲೇ ಜಾಮೀನು ಸಿಕ್ಕಿತ್ತು.

ಇದೀಗ ತಮ್ಮ ಸಿನಿಮಾ ಟ್ರೇಲರ್ ಪ್ರದರ್ಶನವೊಂದರಲ್ಲಿ ಯಾವುದೇ ಸೂಚನೆ ನೀಡದೆ ಚಿತ್ರಮಂದಿರಕ್ಕೆ ಹೋದ ತೆಲುಗು ನಟ ಅಲ್ಲು ಅರ್ಜುನ್ ಕಾರಣದಿಂದ ನೂಕು ನುಗ್ಗಲು ಉಂಟಾಗಿ ಕಾಲ್ತುಳಿತದಿಂದಾಗಿ ಮಹಿಳೆಯೊಬ್ಬರು ಸಾವನ್ನಪ್ಪಿದ್ದು, ಆಕೆಯ 9 ವರ್ಷದ ಪುತ್ರ ಪ್ರಜ್ಞಾಹೀನ ಸ್ಥಿತಿಯಲ್ಲಿದ್ದಾನೆ ಎಂದು ವರದಿಯಾಗಿದೆ. ಪ್ರಕರಣಕ್ಕೆ ಸಂಬಂಧಿಸಿದಂತೆ ಆತನ ವಿರುದ್ಧ ಪೊಲೀಸರು ಪ್ರಕರಣ ದಾಖಲಿಸಿದ್ದು, ಆತನನ್ನು ಡಿ.13 ರಂದು ಬಂಧಿಸಿದ್ದರು. ಆದರೆ ಸಂಜೆಯ ಹೊತ್ತಿಗೆ ಹೈಕೋರ್ಟ್ ಆತನಿಗೆ ಜಾಮೀನು ನೀಡಿತು. ಇದು ಕೋರ್ಟ್‌ಗಳ ಶೀಘ್ರ ನ್ಯಾಯ ವಿತರಣೆಯ ಕ್ರಮ. ಆದರೆ ಜನಸಾಮಾನ್ಯರ ಲಕ್ಷಾಂತರ ಪ್ರಕರಣಗಳು ಕೋರ್ಟ್‌ನಲ್ಲಿ ಇನ್ನೂ ವಿಚಾರಣೆಗೆ ಬಾರದೆ ದಶಕಗಳಿಂದಲೂ ಮುಂದೂಡುತ್ತಾ ಬಂದಿದ್ದು 20–30 ವರ್ಷಗಳಿಂದ ಜಾಮೀನು ಸಿಗದೆ ಪರಿತಪಿಸುತ್ತಿರುವುದನ್ನು ಮತ್ತೊಂದೆಡೆ ಕಾಣಬಹುದು. ನ್ಯಾಯ ವಿಐಪಿ, ದುಡ್ಡಿದ್ದವರಿಗೆ ಒಂದು ಎಂದು ಆಗಾಗ ಮತ್ತೆ ಮತ್ತೆ ಸಾಬೀತಾಗುತ್ತಲೇ ಇದೆ. ಅಲ್ಲು ಅರ್ಜುನ್ ವಿಐಪಿಯಾದ ಕಾರಣಕ್ಕೆ ಆತನ ಬಂಧನ ಖಂಡಿಸಿ ರಾಜಕಾರಣಿಗಳು ಅಭಿಮಾನದ ಹೊಳೆ ಹರಿಸುತ್ತಿದ್ದರೆ. ಇತ್ತ ಸತ್ತ ಮಹಿಳೆಯ ಪತಿ, ನಟನದು ತಪ್ಪಿಲ್ಲ, ಘಟನೆಗೆ ಅವರನ್ನು ಹೊಣೆ ಮಾಡಲು ಬಯಸುವುದಿಲ್ಲ. ದೂರು ಹಿಂಪಡೆಯಲು ಸಿದ್ಧ ಎಂದು ಹೇಳಿದ್ದಾರೆ. ಇಂತಹ ಅಭಿಮಾನ ಬಹುಶಃ ಮಾನವೀಯತೆಯ ಮೇರೆ ಮೀರಿದ್ದು ಇರಬೇಕು. ಇದು ಮೂಢನಂಬಿಕೆಯಿಂದ ಮಂತ್ರವಾದಿಯ ಆಣತಿಯಂತೆ ತಮ್ಮ ಮಕ್ಕಳನ್ನೇ ಬಲಿ ಕೊಡುವ ತಂದೆಯ ತ್ಯಾಗದಂತೆ!

ಇಂತಹ ಹುಚ್ಚು ಅಭಿಮಾನಿಗಳ ಪಡೆ ಪಡೆದ ನಟರು ನಿಜಕ್ಕೂ ಅಭಿನಂದನಾರ್ಹರು. ಕೇಂದ್ರ ಸಚಿವ ಬಂಡಿ ಸಂಜಯ್‌ಕುಮಾರ್ ಕೂಡ, ರಾಷ್ಟ್ರ ಪ್ರಶಸ್ತಿ ಪಡೆದ ನಟನನ್ನು ಬಂಧಿಸಿರುವುದು ಪೊಲೀಸರ ಅಮಾನವೀಯ ನಡೆ ಎಂದು ಖಂಡಿಸಿದ್ದಾರೆ. ನಿಜಕ್ಕೂ ಇಂತಹವರ ಸೆಲೆಬ್ರಿಟಿಗಳ ಮೇಲಿನ ಕಾಳಜಿ ಮೆಚ್ಚುವಂತಹುದು. ಇದನ್ನು ಇಂದು ನಾವು ದೇಶಾದ್ಯಂತ ಕಾಣಬಹುದು. ಕರ್ನಾಟಕದಲ್ಲಿ ಕೂಡ ಇದು ಹಿಂದೆ ನಡೆದಿದೆ, ಈಗ ನಡೆಯುತ್ತಿದೆ, ಮುಂದೆ ಕೂಡ ನಡೆಯಬಹುದು. ಇಂತಹ ನಟರು, ಅಭಿಮಾನಿಗಳು ಇನ್ನಷ್ಟು ಹೆಚ್ಚಲಿ ಎಂದು ಶುಭ ಕೋರೋಣವೆ!

–ಮುಳ್ಳೂರು ಪ್ರಕಾಶ್, ಕನಕದಾಸನಗರ, ಮೈಸೂರು.

■ ಕಾನೂನಿನ ಮುಂದೆ ಎಲ್ಲರೂ ಸಮಾನರಲ್ಲ!

ಮಾನ್ಯರೆ,

'ಕಾನೂನು ನನಗೂ ಒಂದೇ, ಸ್ವಾಮೀಜಿಗೂ ಒಂದೇ' ಎಂದು ಹೇಳುವ ಮೂಲಕ ಮುಖ್ಯಮಂತ್ರಿ ಸಿದ್ದರಾಮಯ್ಯ, ಬೆಳಗಾವಿಯಲ್ಲಿ ಕಳೆದ ಮಂಗಳವಾರ 2ಎ ಮೀಸಲಾತಿಗೆ ಬಸವ ಜಯಮೃತ್ಯುಂಜಯ ಸ್ವಾಮೀಜಿ ನೇತೃತ್ವದಲ್ಲಿ ನಡೆದ ಪಂಚಮಸಾಲಿ ಲಿಂಗಾಯಿತ ಹೋರಾಟದ ವೇಳೆ ನಡೆದ ಲಾಠಿಚಾರ್ಜನ್ನು ಸಮರ್ಥಿಸಿದ್ದಾರೆ. ಮುಖ್ಯಮಂತ್ರಿಗಳ ಮಾತು ನಿಜವೇ? ಖಂಡಿತಾ ಅಲ್ಲ! ಮುಖ್ಯಮಂತ್ರಿಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲು ರಾಜ್ಯಪಾಲರ ಅನುಮತಿ ಅಗತ್ಯ. ಆದರೆ ಸ್ವಾಮೀಜಿಯ ವಿರುದ್ಧ ಕಾನೂನು ಕ್ರಮ ಜರುಗಿಸಲು ಯಾರ ಅನುಮತಿಯೂ ಬೇಕಾಗಿಲ್ಲ. ಮುಖ್ಯಮಂತ್ರಿಗಳನ್ನು ಕಾನೂನಿನ ಕುಣಿಕೆಯಿಂದ ಪಾರುಮಾಡಲು ಸಚಿವ ಸಂಪುಟದ ಶ್ರೀರಕ್ಷೆಯಿದೆ. ಆದರೆ ಶ್ರೀಗಳಿಗೆ ಯಾರ ಶ್ರೀರಕ್ಷೆಯೂ ಇಲ್ಲ! ಹಾಗಾಗಿ 'ಕಾನೂನು ನನಗೂ ಒಂದೇ, ಸ್ವಾಮೀಜಿಗೂ ಒಂದೇ' ಎಂಬ ಮುಖ್ಯಮಂತ್ರಿಗಳ ಹೇಳಿಕೆಯಲ್ಲಿ ಅರ್ಥವಿಲ್ಲ!

–ಪಿ.ಜೆ.ರಾಘವೇಂದ್ರ, ನ್ಯಾಯವಾದಿ, ಮೈಸೂರು

■ ಸಂತಾನ

ಮಾನ್ಯರೆ,

ಮೂರು ಮಕ್ಕಳಿರಲಿ ಎಂದು ಮೋಹನ ಭಾಗವತ್ ಹೇಳಿಕೆ. (ಒಂದರ್ಥದಲ್ಲಿ ಪ್ರಹೇಳಿಕೆ = ಒಗಟು). ಸದ್ಯ ನೂರು ಎನ್ನಲಿಲ್ಲವಲ್ಲ! ಆದರೂ ಇದೆಯಲ್ಲ 'ಕೌರವ' ಸಂತಾನ; 'ಪಾಂಡವ'ರಿಗೆಲ್ಲಿ ಸ್ಥಾನ?

–ಸಿಪಿಕೆ, ಹಿರಿಯ ಸಾಹಿತಿಗಳು, ಮೈಸೂರು.



ಡಾ. ಹೆಚ್.ವಿ. ನಾಗರಾಜ ರಾವ್
ಮೈಸೂರು.

ಸಂಸ್ಕೃತಿ ಚಿಂತನಾ

ಪಂಪನ ದೃಷ್ಟಿಯಲ್ಲಿ ಕಾವ್ಯ

ನಮ್ಮ ಆದಿಕವಿ ಪಂಪನ ಕಾಲಕ್ಕೆ ಭಾರತ ದೇಶದಲ್ಲಿ ಕಾವ್ಯ ಮೀಮಾಂಸೆ ಸಾಕಷ್ಟು ಬೆಳೆದಿತ್ತು. ಭರತ, ಭಾಮಹ, ದಂಡಿ, ರುದ್ರಟ, ವಾಮನ, ಉದ್ಭಟ, ಆನಂದವರ್ಧನ ಮುಂತಾದ ಅಲಂಕಾರಿಕರ ಶಾಸ್ತ್ರ ಗ್ರಂಥಗಳು ಉಪಲಬ್ಧವಾಗಿದ್ದುವು. ಅಲಂಕಾರ, ಗುಣ, ರಸ, ಧ್ವನಿ, ವಕ್ರೋಕ್ತಿ ಮುಂತಾದ ಸಂಪ್ರದಾಯಗಳು ಪ್ರಚಲಿತವಾಗಿ ವ್ಯಾಪಿಸಿದ್ದುವು. ಇವೆಲ್ಲವುಗಳ ಹಿನ್ನೆಲೆಯಲ್ಲಿ ಪಂಪನು ತನ್ನ ಕಾವ್ಯದ ಆರಂಭದಲ್ಲಿ 'ಕಾವ್ಯ ಎಂದರೆ ಹೇಗಿರಬೇಕು, ಉತ್ತಮ ಕವಿ ಯಾರು?' ಇತ್ಯಾದಿ ವಿಮರ್ಶೆಯನ್ನು ಮಾಡಿದ್ದಾನೆ. ಬಾಣನೇ ಮುಂತಾದ ಕವಿಗಳು ಇದಕ್ಕೆ ಮೇಲ್ಪಂಕ್ತಿಯನ್ನು ಹಾಕಿಕೊಟ್ಟಿದ್ದರು. ಕಾವ್ಯದ ಬಗೆಗೆ ಪಂಪನ ಮುನ್ನೋಟ ಹೇಗಿತ್ತೆಂಬುದನ್ನು ನೋಡೋಣ.

**ಮೃದುಪದಗತಿಯಿಂ ರಸಭಾ
ವದ ಪೆರ್ಚಿಂ ಪುಣ್ಯವನಿತೆವೋಲ್ ಕೃತಿ ಸೌಂದ
ರ್ಯದ ಚಾತುರ್ಯದ ಕಣಿಯೆನೆ
ವಿದಗ್ಧ ಬುಧಜನದ ಮನಮನಲೆಯಲೆವೇಡಾ॥**
(ಆದಿಪುರಾಣ I–17)


ಇಲ್ಲಿ ಪಂಪನು ಕಾವ್ಯಕ್ಕೂ ವನಿತೆಗೂ ಹೋಲಿಕೆಯನ್ನು ಮಾಡಿದ್ದಾನೆ. ಪದ ಎಂಬ ಪದಕ್ಕೆ 'ಹೆಜ್ಜೆ ಮತ್ತು ನುಡಿ' ಎಂಬ ಎರಡು ಅರ್ಥಗಳಿವೆ. ವನಿತೆ ಮೃದುವಾದ ಹೆಜ್ಜೆಯ ನಡಿಗೆಯಿಂದ, ಕಾವ್ಯವು ಕಿವಿಗೆ ಇಂಪಾದ ಶಬ್ದಗಳ ಜೋಡಣೆಯಿಂದ ಆಕರ್ಷಕವಾಗುತ್ತದೆ. ರಸಭಾವಗಳ ಉತ್ಕರ್ಷದಿಂದ ವನಿತೆಯೂ ಕಾವ್ಯ ಕೃತಿಯೂ ವಿದಗ್ಧಬುಧಜನರ, ಎಂದರೆ ವಿಮರ್ಶಾತ್ಮಕ ಬುದ್ಧಿಯುಳ್ಳ ರಸಿಕರ ಮನಸ್ಸನ್ನು ಸೆಳೆದುಕೊಳ್ಳುವುದರಲ್ಲಿ ವನಿತೆಯೂ ಕಾವ್ಯ ಕೃತಿಯೂ ಸೌಂದರ್ಯದ ಮತ್ತು ಚಾತುರ್ಯದ ಗಣಿಗಳಾಗಿರಬೇಕು. ಇದರಿಂದ ಕಾವ್ಯ ಸ್ವರೂಪದ ವಿಶದ ವ್ಯಾಖ್ಯಾನ ಲಭ್ಯವಾಗುತ್ತದೆ. ಮತ್ತೆ ಪಂಪನು ಹೇಳುತ್ತಾನೆ –

**ಕಿವಿಯಿಂ ಬಗೆವುಗುವೊಡೆ ಕೊಂ
ಕುವೆತ್ತ ಪೊಸನುಡಿಯೆ ಪುಗುಗು ಮುಳಿದುದು ಸರುಸೈ
ತವಚರನೆ ಮಾಡಿ ಸರುಸೈ
ತುವೋಕುಮೇಂ ಬಗೆಯ ಬಟ್ಟೆಯಂ ಮುಟ್ಟುಗುಮೇ॥**

ಕಾವ್ಯದ ಮಾತು ಕಿವಿಯ ಮೂಲಕ ಮನಸ್ಸನ್ನು ಪ್ರವೇಶಿಸುತ್ತದೆ. ಹಾಗೆ ಮನಸ್ಸಿಗೆ ಹೋಗಿ ಹೃದಯಾನಂದವನ್ನು ಕೊಡಬೇಕಾದರೆ ಅದು ನೇರವಾಗಿ ಸಪ್ಪೆಯಾಗಿ ಹೇಳಿದ ಮಾತಾಗಿರಬಾರದು. ಕೊಂಕುವೆತ್ತ ಪೊಸ ನುಡಿಯಾಗಿರಬೇಕು. ಲೋಕೋತ್ತರ ಚಮತ್ಕಾರಜನಕವಾದ, ಕೊಂಕನ್ನು ಹೊಂದಿರುವ ಹೊಸತನದಿಂದ ಶೋಭಿಸುವ ನುಡಿಯಾಗಿರಬೇಕು. ಹಿಂದಿನ ಕವಿಗಳು ಹೇಳಿದ್ದನ್ನೇ ಮತ್ತೆ ಹೇಳಿದರೆ ಕವಿಗೆ ಪ್ರತಿಭೆ ಇಲ್ಲ ಎನ್ನಬೇಕಾಗುತ್ತದೆ. ಇದನ್ನೇ ಭಾಹಮನು–

**ಸೈಷಾ ಸರ್ವೈವ ವಕ್ರೋಕ್ತಿ: ಅನಯಾರ್ಥೋ ವಿಭಾವ್ಯತೇ।
ಯತ್ನೋಽಸ್ಯಾಂ ಕವಿನಾ ಕಾರ್ಯಃ
ಕೋಽಲಂಕಾರೋಽನಯಾವಿನಾ॥**

(ಇದೇ ಸಮಸ್ತ ವಕ್ರೋಕ್ತಿ. ಇದರಿಂದಲೇ ಸಾಮಾನ್ಯಾರ್ಥವೂ ವಿಭಾಗವಾಗಿ ರಸಾನುಭವಕ್ಕೆ ಕಾರಣವಾಗುತ್ತದೆ. ಈ ವಕ್ರೋಕ್ತಿಯನ್ನು ಸಾಧಿಸಲು ಕವಿಯು ಪ್ರಯತ್ನ ಪಡಬೇಕು. ಇದಿಲ್ಲದೆ ಕಾವ್ಯದಲ್ಲಿ ಯಾವ ಅಲಂಕಾರವೂ ಇಲ್ಲ, ಯಾವ ಚೆಲುವೂ ಇಲ್ಲ) ಎಂದಿದ್ದಾನೆ. ಶ್ರೇಷ್ಠ ವಿಮರ್ಶಕನಾಗಿದ್ದ ಕುಂತಕನು ವಕ್ರೋಕ್ತಿ ಸಿದ್ಧಾಂತವನ್ನೇ ಬೆಳೆಸಿ ವಕ್ರೋಕ್ತಿ ಜೀವಿತ ಎಂಬ ಗ್ರಂಥವನ್ನೇ ರಚಿಸಿದ್ದಾನೆ. ವಕ್ರತ್ವವಿಲ್ಲದ, ಎಂತರೆ ಕವಿ ಪ್ರತಿಭಾಜನ್ಯವಾದ ಅತಿಶಯವಿಲ್ಲದ ಕಾವ್ಯ ಬೇಸರವನ್ನು ಉಂಟುಮಾಡುತ್ತದೆ. 'ಏಂ ಬಗೆಯ ಬಟ್ಟೆಯಂ ಮುಟ್ಟುಗುಮೇ' ನೀರಸವಾದ ಮಾತು ಹೃದಯದ ಹಾದಿಯನ್ನು ಸ್ಪರ್ಶಿಸುವುದೆ? ಸರ್ವಥಾ ಸ್ಪರ್ಶಿಸಲಾರದು ಎಂಬುದು ಪಂಪನ ಹಾರ್ದಾಭಿಪ್ರಾಯ.



**ಮೃದುಮಧುರವಚನರಚನೆಯೊಳ್
ಉದಾತ್ತಮರ್ಥಪ್ರತೀತಿಯಂ ಕೇಳ್ವಜನ
ಕ್ಕಿದಿರೊಳ್ ಕುಡದಂದುದು ಕಬ್ಬದೊಳ್
ಇರ್ದುಂ ಕವಿಯ ಮನದೊಳಿರ್ದಂತೆ ವಲಂ॥**
(ಆದಿಪುರಾಣ I–19)

ಕವಿಯು ಮಾಡಿದ ರಚನೆಯಲ್ಲಿ ಮೃದುವಾದ, ಇಂಪಾದ ನುಡಿಗಳಿರಬಹುದು. ಆದರೆ ಆ ರಚನೆ ಉದಾತ್ತವಾದ ಅರ್ಥಜ್ಞಾನವನ್ನು ಶ್ರೋತೃಗಳಿಗೆ ಕೊಡದಿದ್ದರೆ ಫಲವೇನು? ಕಾವ್ಯದಲ್ಲಿದ್ದರೂ ಜನರಿಗೆ ಅದರ ಅರ್ಥವೇ ತಿಳಿಯದಿದ್ದರೆ ಪ್ರಯೋಜನವಿಲ್ಲ. ಅದು ಕೇವಲ ಮನಸ್ಸಿನೊಳಗೆ ಇದ್ದಂತೆ ಆಗುತ್ತದೆ. ಅನೇಕ ಕವಿಗಳು ಗೂಢವಾಗಿ ಏನನ್ನೋ ಹೇಳಿಬಿಟ್ಟಿರುತ್ತಾರೆ. ಅವರು ಏನನ್ನು ಹೇಳಲು ಹೊರಟಿದ್ದಾರೆ ಎಂಬುದೇ ತಿಳಿಯುವುದಿಲ್ಲ. ಕಾವ್ಯ ನಿಷ್ಪ್ರಯೋಜನವಾಗುತ್ತದೆ. ಆದ್ದರಿಂದ ಕವಿ ವಿವಕ್ಷಿತಾರ್ಥವು ಕೇಳುಗರಿಗೆ ಅಥವಾ ಓದುಗರಿಗೆ ತಿಳಿಯುವಂತೆ ಕಾವ್ಯ ರಚನೆಯನ್ನು ಮಾಡಬೇಕು.

**ಭಾಷಾವಿದರ್ ಕವಿತ್ವ ವಿ
ಶೇಷಜ್ಞರ್ ನಿಕಷರಪ್ಪೊಡಪ್ಪುದು ಸಭೆಯೊಳ್
ಮಾಷಮುಖರುಂತೆ ದೋಷಗ
ವೇಷಣಪರರಪ್ಪರೆಂದೊಡದು ತೆಗಳಲ್ತೆ॥** (ಆದಿಪುರಾಣ I–21)

ಸಭೆಯಲ್ಲಿ ಕಾವ್ಯವೆಂಬ ಚಿನ್ನಕ್ಕೆ ಯಾರು ಒರೆಗಲ್ಲು? ಭಾಷೆಯನ್ನು ತಿಳಿದವರು, ಕವಿತಾ ಗುಣವನ್ನು ತಿಳಿಯಬಲ್ಲವರು ನಿಕಷ (ಒರೆಗಲ್ಲು) ರಾದರೆ ಸರಿಹೋಗುವುದು. ದಡ್ಡರು ಬಂದು ಕುಳಿತು ಕವಿತೆಯಲ್ಲಿ ದೋಷಗಳನ್ನು ಹುಡುಕುವುದರಲ್ಲಿ ತೊಡಗಿದರೆ ಅದು ಕೇವಲ ನಿಂದನೆ.

ಅನೇಕ ವಿಮರ್ಶಕರು ಕಾವ್ಯ ಹಾಗಿದ್ದರೆ ಚೆನ್ನ, ಹೀಗಿದ್ದರೆ ತಪ್ಪು ಎಂದು ಹೇಳುವುದರಲ್ಲಿ ನಿಪುಣರು. ಆದರೆ ತಾವು ಮಾತ್ರ ಅಂತಹ ಗುಣಗಳಿಂದ ತುಂಬಿದ, ನಿರ್ದೋಷವಾದ ಕಾವ್ಯವನ್ನು ರಚಿಸಿ ತೋರಿಸುವುದಿಲ್ಲ. ಅಂತಹ ವಿಮರ್ಶಕರಿಂದ ಪ್ರಯೋಜನವೇನು? ಇಲ್ಲಿ ಮಾಷಮುಖ ಎಂಬ ಪದವನ್ನು ಪಂಪನು ಬಳಸಿದ್ದಾನೆ. ಉದ್ದನ್ನು ಬಾಯಿಯಲ್ಲಿ ತುಂಬಿಕೊಂಡವನು ಎಂದು ವಾಚ್ಯಾರ್ಥ. ಸೂಚ್ಯಾರ್ಥ ಯಾವುದೋ ತಿಳಿಯದು. ಮಂದಬುದ್ಧಿಯವನು ಎಂಬ ತಾತ್ಪರ್ಯವಿರಬಹುದು.

**ಧಿಷಣರ ಕೃತಿಗಳೊಳೆಸೆವಭಿ
ಲಕ್ಷಿತಗುಣಂಗಳನೆ ಬಿಸುಟು ಮಾತ್ಸರ್ಯ ಮಹಾ
ವಿಷಮಮತಿಯಿಂದ ದೋಷಾ
ಮಿಷಮನೆ ಪೊರ್ದಿಪ್ಪುವಲ್ತೆ ಕುಕುವಿಬಕಂಗಳ್ ॥** (I–22)

ಧಿಷಣರು ಎಂದರೆ ಧೀಮಂತರು, ದೇವಗುರು ಬೃಹಸ್ಪತಿಗೆ ಸಮಾನರಾದ ಕವಿಗಳು. ಅವರ ಕೃತಿಗಳಲ್ಲಿ ಹೊಳೆಯುವ, ಎಲ್ಲರಿಗೆ ಇಷ್ಟವಾಗುವ ಗುಣಗಳನ್ನು ಲೆಕ್ಕಿಸದೆ ತಳ್ಳಿ ಹಾಕಿ, ಮಾತ್ಸರ್ಯ ತುಂಬಿದ ತಮ್ಮ ಕೆಟ್ಟ ಬುದ್ಧಿಯಿಂದ ಕುಕವಿಗಳೆಂಬ ಬಕಪಕ್ಷಿಗಳು ದೋಷವೆಂಬ ಮಾಂಸದ ಚೂರನ್ನೇ ಹುಡುಕುತ್ತಿರುತ್ತವೆ.

ಪಂಪನ ಕಾಲದಲ್ಲೂ ಕೇವಲ ದೋಷಾನ್ವೇಷಿಗಳಿದ್ದರು. ಅವರನ್ನು ಅವನು ಬಕಪಕ್ಷಿಗಳಿಗೆ ಹೋಲಿಸಿದ್ದಾನೆ.

ಕವಿಯು ಎಷ್ಟು ಶ್ರೇಷ್ಠನಾದರೂ ಸಹೃದಯರಿಲ್ಲದ ನಾಡಿನಲ್ಲಿ ಅವನ ಕವಿತೆ ಅರಣ್ಯರೋದನವಾಗುತ್ತದೆ ಎಂದಿದ್ದಾನೆ ಪಂಪ.

**ಕೋಗಿಲೆಯ ಸರವರಣ್ಯದೊಳ್
ಏಗೆಯ್ದುದೋ ಮೂರ್ಖಜಡಜನಾರಣ್ಯದೊಳಿಂ
ಪೋಗೊಡಿಸದ ಕವಿಶಬ್ದಮ
ದೇಗೆಯ್ದುದರಣ್ಯರುದಿತಮದು ಬಗೆವಾಗಳ್ ॥** (I–23)

ಕೋಗಿಲೆಯ ಪಂಚಮ ಸ್ವರ ಅರಣ್ಯದಲ್ಲಿ ಏನು ಮಾಡೀತು? ಅದರ ಮಧುರ ಸ್ವರವನ್ನು ಕೇಳುವವರಿಲ್ಲವಲ್ಲ? ಹಾಗೆ ಮೂರ್ಖರು, ದಡ್ಡರು ತುಂಬಿದ ಸಭೆಯೆಂಬ ಅರಣ್ಯದಲ್ಲಿ ಇಂಪಾದ ಕವಿನಾದವು ಏನನ್ನು ಮಾಡಲು ಶಕ್ತವಾದೀತು? ಯೋಚಿಸಿ ನೋಡಿದರೆ ಅಲ್ಲಿ ಅದು ಅರಣ್ಯರೋದನವೇ. ಆದ್ದರಿಂದ ಕವಿಗೆ ಬೆಲೆ ಬರಬೇಕಾದರೆ ಕೇಳುವ ಅರಿತುಕೊಳ್ಳುವ ಸಹೃದಯ ಶ್ರೋತೃಗಳಿರಬೇಕು.

ಅನೇಕರು ವ್ಯಾಕರಣ, ತರ್ಕ ಮುಂತಾದ ಶಾಸ್ತ್ರಗಳಲ್ಲಿ ಪಂಡಿತರಾಗಿರುತ್ತಾರೆ. ಆದರೆ ಕಾವ್ಯರಸಾಸ್ವಾದನೆಗೆ ಆವಶ್ಯಕವಾದ ಸಂಸ್ಕಾರವೇ ಅವರಿಗಿರುವುದಿಲ್ಲ. ಅಂತಹವರನ್ನು ಕುರಿತು ಪಂಪ ಇಂತೆಂದಿದ್ದಾನೆ–

**ಇದು ಮರುಳೆ ಶುಷ್ಕ ವೈಯಾ–
ಕರಣಂಗಂ ಶುಷ್ಕತಾರ್ಕಿಕಂಗಂ ಬೆಳ್ಳ–
ಕ್ಕರಿಗಂಗಂ ವಿಷಯಮೆ ಕಾ–
ವ್ಯರತ್ನ ಮತಿಚತುರಕವಿ ಕದಂಬಕವಿಷಯಂ ॥** (I–24)

ಮರುಳ ಬುದ್ಧಿಯವನೆ ಸುಮ್ಮನಿರು. ವೈಯಾಕರಣರು, ತಾರ್ಕಿಕರು ಶುಷ್ಕರು ಎಂದರೆ ಒಣಮನಸ್ಸಿನವರು. ಹಾಗೆಯೇ ಕೆಲವರು ಅಕ್ಷರಗಳನ್ನು ಕಲಿತಿದ್ದರೂ ಬೆಪ್ಪರು. ಅವರಿಗೆ ಕಾವ್ಯರತ್ನವು ವಿಷಯವೆ? ಖಂಡಿತವಾಗಿ ಅಲ್ಲ. ಅದೇನಿದ್ದರೂ ಚತುರಕವಿಕದಂಬಕ್ಕೆ ಗೋಚರ.

ವೈಯಾಕರಣರಿಗೆ ಶಬ್ದ ಸಾಧುತ್ವದ ಚಿಂತೆ. ಪಾಣಿನಿಯ ನಿಯಮಗಳಿಗೆ ಅನುಗುಣವಾಗಿ ಶಬ್ದಗಳಿದ್ದರೆ ಅವರಿಗೆ ಸಾಕು. ಅರ್ಥದ ಬಗೆಗೆ ಅವರಿಗೆ ಚಿಂತೆಯಿಲ್ಲ. ಇನ್ನು ಅರ್ಥ ಸೌಂದರ್ಯದ ಬಗೆಗೆ ರಸಾಸ್ವಾದನೆಯ ಬಗೆಗೆ ಅವರಿಗೆ ಗಂಧವೇ ಇಲ್ಲ. ತಾರ್ಕಿಕರು ಕಾರ್ಯ, ಕಾರಣ, ಪ್ರಮಾಣ, ಪ್ರಮೇಯ ಎಂದು ತಲೆಕೆಡಿಸಿಕೊಳ್ಳುತ್ತಾರೆ. ಚಮತ್ಕಾರವೆಂಬುದು ಅವರಿಗೆ ದೂರ. ಬೆಳ್ಳಕ್ಕರಿಗರು ಹೇಳಿದ ಮಾತನ್ನು ಯಥಾರ್ಥವಾಗಿ ಬರೆಯುವುದರಲ್ಲಷ್ಟೇ ವಿಚಕ್ಷಣರು. ಸಾಹಿತ್ಯದ ಸಾರವೇನು ಎಂದರಿಯಲು ಈ ಬೆಪ್ಪುಗಳು ಅನರ್ಹ. ಪಂಪನಂತಹ ಮಹಾಕವಿಯ ಕಾವ್ಯವನ್ನು ಓದಲು ಪರಿಪಕ್ವಬುದ್ಧಿಯ ರಸಜ್ಞರು ಬೇಕು. ಅದಕ್ಕೆ ಸಹೃದಯತೆ ಆವಶ್ಯಕ.

ಹೀಗೆ ಪಂಪನು ತಾನು ರಚಿಸಿದ ಕಾವ್ಯಗಳನ್ನು ಓದಲು ಯಾರು ಅರ್ಹರೆಂಬುದನ್ನು ಧ್ವನಿಸಿದ್ದಾನೆ. ಕನ್ನಡಿಗರು ಕುರಿತೋದದೆಯುಂ ಕಾವ್ಯಪ್ರಯೋಗ ಪರಿಣತಮತಿಗಳಾದುದರಿಂದ ಅವರಿಗೆ ಹೊಸದಾಗಿ ಹೇಳಬೇಕಾದುದೇನಿಲ್ಲ. ಅವರು ಸಹೃದಯತೆಯಿಂದ ಪ್ರಾಚೀನ ಮತ್ತು ಆಧುನಿಕ ಕವಿಗಳ ಕಾವ್ಯಗಳನ್ನು ಓದಿ ಆಸ್ವಾದಿಸಬೇಕು. ಪಂಪನ ಕಾವ್ಯಗಳಂತೆ ಆಚಂದ್ರಾರ್ಕವಾಗಿ ಶೋಭಿಸುವ ಕಾವ್ಯಗಳು ಕನ್ನಡದಲ್ಲಿ ಹುಟ್ಟಲಿ.

ರಾಷ್ಟ್ರೀಯ ಈಜು ಸ್ಪರ್ಧೆ: ರಾಜ್ಯದಿಂದ ಜೀವಾಂಶ್, ರುತ್ವಾ, ಕೃಥಿಕ್ ಆಯ್ಕೆ



ಬೆಂಗಳೂರಿನಲ್ಲಿ ನಡೆದ ರಾಜ್ಯ ಶಾರ್ಟ್ ಕೋರ್ಸ್ ಈಜು ಚಾಂಪಿಯನ್‌ಶಿಪ್‌ನಲ್ಲಿ ಜೀವಾಂಶ್, ರುತ್ವಾ, ಕೃಥಿಕ್ ಸ್ಪರ್ಧಿಸಿ, ರಾಷ್ಟ್ರಮಟ್ಟದ ಈಜು ಸ್ಪರ್ಧೆಗೆ ಆಯ್ಕೆಯಾಗಿದ್ದಾರೆ.

ಮೈಸೂರು, ಡಿ.17–ಬೆಂಗಳೂರಿನಲ್ಲಿ ನಡೆದ ರಾಜ್ಯ ಶಾರ್ಟ್ ಕೋರ್ಸ್ ಈಜು ಚಾಂಪಿ ಯನ್ ಶಿಪ್‌ನಲ್ಲಿ ಮೈಸೂರಿನ ಜಿಎಸ್‌ಎಯ ಜೀವಾಂಶ್, ರುತ್ವಾ ಮತ್ತು ಕೃಥಿಕ್ ಸ್ಪರ್ಧಿಸಿ, ದಕ್ಷಿಣ ವಲಯದ ರಾಷ್ಟ್ರ ಮಟ್ಟದ ಈಜು ಸ್ಪರ್ಧೆಗೆ ಆಯ್ಕೆಯಾಗಿದ್ದು, ಕರ್ನಾಟಕ ರಾಜ್ಯ ವನ್ನು ಪ್ರತಿನಿಧಿಸಲಿದ್ದಾರೆ. ಕರ್ನಾಟಕ ರಾಜ್ಯ ಈಜು ಸಂಘದ ವತಿಯಿಂದ ಬೆಂಗಳೂರಿನ ಬಸವನಗುಡಿಯ ಈಜುಕೊಳದಲ್ಲಿ ಡಿ.5 ರಿಂದ 8ರವರೆಗೆ ನಡೆದ ರಾಜ್ಯ ಶಾರ್ಟ್ ಕೋರ್ಸ್ ಚಾಂಪಿಯನ್‌ಶಿಪ್ 2024ರಲ್ಲಿ ಮೈಸೂರಿನ ಸುಬ್ರಹ್ಮಣ್ಯ ಜೀವಾಂಶ್, ರುತ್ವಾ, ಕೃಥಿಕ್, ಸಾನ್ವಿ, ಹಾರಿಕಾ 5 ಸ್ಪರ್ಧಿಗಳು ಭಾಗವಹಿಸಿ 4 ಚಿನ್ನ, 2 ಬೆಳ್ಳಿ ಹಾಗೂ 4 ಕಂಚಿನ ಪದಕ ಪಡೆದಿದ್ದಾರೆ.

ಇದರಲ್ಲಿ ಸುಬ್ರಹ್ಮಣ್ಯ ಜೀವಾಂಶ್ 3 ಚಿನ್ನ, ರುತ್ವಾ 1 ಚಿನ್ನ, 2 ಬೆಳ್ಳಿ, 1 ಕಂಚು ಮತ್ತು ಕೃಥಿಕ್ 1 ಬೆಳ್ಳಿ ಪದಕವನ್ನು ಪಡೆದು, ಈ ಮೂವರು ಡಿ.27ರಿಂದ 29ರವರೆಗೆ ಆಂಧ್ರಪ್ರದೇಶದ ವಿಜಯವಾಡದಲ್ಲಿ ನಡೆಯಲಿರುವ ದಕ್ಷಿಣ ವಲಯದ ರಾಷ್ಟ್ರ ಮಟ್ಟದ ಈಜು ಸ್ಪರ್ಧೆಯಲ್ಲಿ ಕರ್ನಾಟಕವನ್ನು ಪ್ರತಿನಿಧಿಸಲಿದ್ದಾರೆ.

ಇವರು ಜೆ.ಪಿ.ನಗರದ ಶ್ರೀ ನಾಲ್ವಡಿ ಕೃಷ್ಣರಾಜ ಒಡೆಯರ್ ಈಜುಕೊಳದ ಗ್ಲೋಬಲ್ ಸ್ಪೋರ್ಟ್ಸ್ ಅಸೋಸಿಯೇಷನ್ ನಲ್ಲಿ ಮುಖ್ಯ ತರಬೇತುದಾರ ಪವನ್‌ಕುಮಾರ್ ಬಳಿ ತರಬೇತಿ ಪಡೆಯುತ್ತಿದ್ದಾರೆ. **ಸ್ಪರ್ಧೆ ವಿವರ:** ಜೀವಾಂಶ್–1500ಮೀ. ಫ್ರೀಸ್ಟೈಲ್ ನಲ್ಲಿ 1 ಚಿನ್ನ, 200ಮೀ. ಹಾಗೂ 100ಮೀ. ಬಟರ್ ಫ್ಲೈ ನಲ್ಲಿ 2 ಚಿನ್ನದ ಪದಕ.

ರುತ್ವಾ: 50ಮೀ. ಬಟರ್ ಫ್ಲೈನಲ್ಲಿ 1 ಚಿನ್ನ, 50 ಮೀ., 100ಮೀ. ಫ್ರೀ ಸ್ಟೈಲ್‌ನಲ್ಲಿ 2 ಬೆಳ್ಳಿ, 200 ಮೀ. ವೈಯಕ್ತಿಕ ಮೆಡ್ಲಿಯಲ್ಲಿ 1 ಕಂಚಿನ ಪದಕ. ಕೃಥಿಕ್– 100 ಮೀ. ಬಟರ್ ಫ್ಲೈಯಲ್ಲಿ 1 ಬೆಳ್ಳಿ ಪದಕ, ಸಾನ್ವಿ, ಹಾರಿಕಾ 25 x4 ರಿಲೇಯಲ್ಲಿ ತಲಾ ಒಂದೊಂದು ಕಂಚಿನ ಪದಕ ಪಡೆದಿದ್ದಾರೆ.

ಬಿಜೆಪಿ ರಾಜ್ಯಾಧ್ಯಕ್ಷ ವಿಜಯೇಂದ್ರ ವಿರುದ್ಧದ ಎಫ್‌ಐಆರ್ ರದ್ದುಗೊಳಿಸಿದ ಹೈಕೋರ್ಟ್



ಬೆಂಗಳೂರು, ಡಿ.17–ಚುನಾವಣಾ ಬಾಂಡ್‌ಗಳ ನೆಪದಲ್ಲಿ ಹಣ ಸುಲಿಗೆ ಆರೋಪಕ್ಕೆ ಸಂಬಂಧಿಸಿದಂತೆ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ವಿರುದ್ಧ ದಾಖಲಾಗಿದ್ದ ಎಫ್‌ಐಆರ್ ಅನ್ನು ಹೈಕೋರ್ಟ್ ಮಂಗಳವಾರ ರದ್ದುಗೊಳಿಸಿದೆ.

ನಗರದ ಸಾಮಾಜಿಕ ಹೋರಾಟಗಾರ ಆದರ್ಶ ಆರ್.ಅಯ್ಯರ್ ಎಂಬುವರು ದಾಖಲಿಸಿದ್ದ ದೂರಿನ ಆಧಾರದ ಮೇಲೆ ಬೆಂಗಳೂರು ಪೊಲೀಸರು ಸೆಪ್ಟೆಂಬರ್ ನಲ್ಲಿ ಎಫ್‌ಐಆರ್ ದಾಖಲಿಸಿದ್ದರು. ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್, ಇಡಿ ಅಧಿಕಾರಿಗಳು ಹಾಗೂ ಬಿಜೆಪಿ ರಾಷ್ಟ್ರ, ರಾಜ್ಯಮಟ್ಟದ ಪದಾಧಿಕಾರಿಗಳ ವಿರುದ್ಧವೂ ಎಫ್‌ಐಆರ್ ದಾಖಲಾಗಿತ್ತು. ಆ ಸಂದರ್ಭದಲ್ಲಿ ವಿಜಯೇಂದ್ರ ಬಿಜೆಪಿ ಉಪಾಧ್ಯಕ್ಷರಾಗಿದ್ದರೆ ಮತ್ತೋರ್ವ ಆರೋಪಿ ನಳಿನ್ ಕುಮಾರ್ ಕಟೀಲ್ ರಾಜ್ಯಾಧ್ಯಕ್ಷರಾಗಿದ್ದರು.



ಕಟೀಲ್ ವಿರುದ್ಧದ ಪ್ರಕರಣವನ್ನು ಕೋರ್ಟ್ ಡಿ.3ರಂದು ರದ್ದುಗೊಳಿಸಿತ್ತು. ಚುನಾವಣಾ ಬಾಂಡ್‌ಗಳ ನೆಪದಲ್ಲಿ ಸಂಪೂರ್ಣ ಸುಲಿಗೆ ದಂಧೆಯಲ್ಲಿ ವಿವಿಧ ಹಂತದ ಬಿಜೆಪಿ ನಾಯಕರು ಕೈಜೋಡಿಸಿದ್ದಾರೆ ಎಂದು ದೂರುದಾರರು ಆರೋಪಿಸಿದ್ದರು. ಭಾರತೀಯ ನ್ಯಾಯ ಸಂಹಿತಾ ಸೆಕ್ಷನ್ 384 (ಸುಲಿಗೆ), 120 ಬಿ (ಅಪರಾಧ ಪಿತೂರಿ) ಮತ್ತು 34 ಸಾಮಾನ್ಯ ಉದ್ದೇಶದಡಿ ಪ್ರಕರಣ ದಾಖಲಿಸಲಾಗಿತ್ತು.

ಕ್ಯಾನ್ಸರ್ ಉಚಿತ ತಪಾಸಣಾ ಶಿಬಿರ

ಮೈಸೂರು,ಡಿ.17–ಮೈಸೂರಿನ ಲಕ್ಷ್ಮೀಪುರಂನ ಪ್ರೀತಿ ಕ್ಯಾನ್ಸರ್ ಸೆಂಟರ್‌ನಲ್ಲಿ ಡಿ.19ರಂದು ಬೆಳಗ್ಗೆ 10ರಿಂದ ರಾತ್ರಿ 8ರವರೆಗೆ ಕ್ಯಾನ್ಸರ್ ಉಚಿತ ತಪಾಸಣಾ ಶಿಬಿರ ಏರ್ಪಡಿಸಲಾಗಿದೆ. ಮಾಹಿತಿಗೆ ಮೊ.0821–4259259 ಸಂಪರ್ಕಿಸಬಹುದು.

ಮೈಸೂರಲ್ಲಿ ಅಪರಾಧ ತಡೆ ಮಾಸಾಚರಣೆ ಜಾಗೃತಿ ಜಾಥಾ

ಮೈಸೂರು, ಡಿ. 17(ಆರ್‌ಕೆ)– ನಗರ ಪೊಲೀಸ್ ಘಟಕದ ವತಿಯಿಂದ ಮಂಗಳವಾರ ಮೈಸೂರಿನ ಅರಮನೆ ಉತ್ತರ ದ್ವಾರದ ಶ್ರೀ ಕೋಟೆ ಆಂಜನೇಯಸ್ವಾಮಿ ದೇವಸ್ಥಾನದ ಬಳಿ ಆಯೋಜಿಸಿದ್ದ 2024ರ ಅಪರಾಧ ತಡೆ ಮಾಸಾಚರಣೆ ಜಾಗೃತಿ ಜಾಥಾಗೆ ನಗರ ಪೊಲೀಸ್ ಆಯುಕ್ತೆ ಸೀಮಾ ಲಾಟ್ಕರ್ ಚಾಲನೆ ನೀಡಿದರು.

ಈ ಸಂದರ್ಭ ಮಾತನಾಡಿದ ಪೊಲೀಸ್ ಆಯುಕ್ತರು, ಮಹಿಳೆಯರು, ಮಕ್ಕಳು, ಹಿರಿಯ ನಾಗರಿಕರ ರಕ್ಷಣೆ ಪೊಲೀಸರ ಜವಾಬ್ದಾರಿಯಾಗಿದ್ದು, ಲೈಂಗಿಕ ದೌರ್ಜನ್ಯ ವಿರುದ್ಧ ಕಾನೂನು ರೀತಿಯ ಕ್ರಮ ಜರುಗಿಸಬೇಕಾಗುತ್ತದೆ. ವಿಶೇಷವಾಗಿ ಪರಿಶಿಷ್ಟ ಜಾತಿ ಮತ್ತು ಪಂಗಡದವರ ಮೇಲೆ ಜಾತಿ ನಿಂದನೆ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಬೇಕಾಗುತ್ತದೆ ಎಂದರು.



ಮೈಸೂರಿನ ಅರಮನೆ ಉತ್ತರ ದ್ವಾರದ ಶ್ರೀ ಕೋಟೆ ಆಂಜನೇಯಸ್ವಾಮಿ ದೇವಸ್ಥಾನದ ಬಳಿ ಅಪರಾಧ ತಡೆ ಮಾಸಾಚರಣೆ ಜಾಗೃತಿ ಜಾಥಾಗೆ ನಗರ ಪೊಲೀಸ್ ಆಯುಕ್ತೆ ಸೀಮಾ ಲಾಟ್ಕರ್ ಹಸಿರು ನಿಶಾನೆ ತೋರುವ ಮೂಲಕ ಚಾಲನೆ ನೀಡಿದರು.

ಆನ್‌ಲೈನ್ ಅಪರಾಧ ಪ್ರಕರಣ ಕುರಿತಂತೆ ಮಾತನಾಡಿದ ಅವರು, ಇತ್ತೀಚಿನ ದಿನಗಳಲ್ಲಿ ಹಣದ ಆಸೆಗಾಗಿ ವಿದ್ಯಾವಂತರೇ ಮೋಸಕ್ಕೊಳಗಾಗುತ್ತಿರುವುದು ವಿಪರ್ಯಾಸ. ಬೇಗಾಗುವುದರಲ್ಲಿ ಶ್ರೀಮಂತರಾಗಬೇಕೆಂಬ ಆಸೆಯಿಂದ ಆನ್‌ಲೈನ್ ಸ್ವರೂಪದ ವ್ಯವಸ್ಥೆಗೆ ಬಿದ್ದು ಹಣ ಕಳೆದುಕೊಳ್ಳುತ್ತಿರುವ ಸೈಬರ್ ಪ್ರಕರಣಗಳು ದಾಖಲಾಗುತ್ತಿವೆ ಎಂದು ತಿಳಿಸಿದರು.

ತಿಳಿದಿರುವವರೇ ಇಂತಹ ಮೋಸಕ್ಕೊಳಗಾಗುತ್ತಿದ್ದಾರೆ. ಮೈಸೂರು ಸೆನ್ ಪೊಲೀಸ್ ಠಾಣೆಯಲ್ಲಿ ಹೆಚ್ಚು ಆನ್‌ಲೈನ್ ವಂಚನೆ ಪ್ರಕರಣಗಳು ದಾಖಲಾಗುತ್ತಿದ್ದು, ಪೊಲೀಸರು ತಂತ್ರಜ್ಞಾನ ಬಳಸಿ ತನಿಖೆ ಮಾಡುತ್ತಿದ್ದಾರೆ ಎಂದ ಪೊಲೀಸ್ ಆಯುಕ್ತೆ, ಸುಲಭವಾಗಿ ಹಣ ಬರುತ್ತದೆ ಎಂಬ ಮೋಸದ ಜಾಲಕ್ಕೆ ಮಣಿದು ಹಣ ತೊಡಗಿಸಬಾರದೆಂದು ಇದೇ ಸಂದರ್ಭ ಸಲಹೆ ನೀಡಿದರು.

ಮಕ್ಕಳ ಹಕ್ಕುಗಳ ಕಾಯ್ದೆ, ಮಹಿಳೆಯರು, ಎಸ್ಸಿ, ಎಸ್ಟಿ ಕಾಯ್ದೆಯನ್ವಯ ಪೊಲೀಸರು ಕಾರ್ಯ ನಿರ್ವಹಿಸಬೇಕಾಗಿದ್ದು, ಸಾರ್ವಜನಿಕರು, ಅಪರಾಧ ತಡೆ ಮತ್ತು ಪತ್ತೆ ಕಾರ್ಯದಲ್ಲಿ ಪೊಲೀಸರೊಂದಿಗೆ ಸಹಕರಿಸಬೇಕೆಂದು ತಿಳಿಸಿದರು.

ಅರಮನೆ ಉತ್ತರ ದ್ವಾರದ ಶ್ರೀ ಕೋಟೆ ಆಂಜನೇಯಸ್ವಾಮಿ ದೇವಸ್ಥಾನದಿಂದ ಆರಂಭವಾದ ಜಾಗೃತಿ ಜಾಥಾವು, ದೊಡ್ಡ ಗಡಿಯಾರ, ಗಾಂಧಿ ವೃತ್ತ, ಹಳೇ ಬ್ಯಾಂಕ್ ರಸ್ತೆ, ಸಯ್ಯಾಜಿರಾವ್ ರಸ್ತೆ ಮೂಲಕ ಚಿಕ್ಕ ಗಡಿಯಾರ, ಡಿ. ದೇವರಾಜ ಅರಸು ರಸ್ತೆ ಮಾರ್ಗವಾಗಿ ಸಾಗಿ ಮಹಾರಾಜ ಸರ್ಕಾರಿ ಪಿಯು ಕಾಲೇಜಿನಲ್ಲಿ ಅಂತ್ಯಗೊಂಡಿತು.

ಪೊಲೀಸ್ ಆಯುಕ್ತೆ ಸೀಮಾ ಲಾಟ್ಕರ್ ಸಹ ಅರಸು ರಸ್ತೆವರೆಗೆ ಜಾಥಾದಲ್ಲಿ ಸಾಗಿದ್ದು, ಜಾಥಾ ವಿಶೇಷವಾಗಿತ್ತು. ಡಿಸಿಪಿಗಳಾದ ಎಂ.ಮುತ್ತುರಾಜು, ಎಸ್.ಜಾಹ್ನವಿ, ಎಸಿಪಿಗಳಾದ ಶಾಂತ ಮಲ್ಲಪ್ಪ, ಎಸ್.ಜಿ.ಗಜೇಂದ್ರಪ್ರಸಾದ್, ಅಶ್ವಥನಾರಾಯಣ, ಸಂದೇಶ್‌ಕುಮಾರ್, ಪರಶುರಾಮಪ್ಪ, ಎಲ್ಲಾ ಸಿವಿಲ್ ಸಂಚಾರ ಠಾಣೆ ಇನ್‌ಸ್ಪೆಕ್ಟರ್‌ಗಳು, ನಗರದ ಶಾಲಾ–ಕಾಲೇಜು ವಿದ್ಯಾರ್ಥಿಗಳು ಜಾಗೃತಿ ಜಾಥಾದಲ್ಲಿ ಪಾಲ್ಗೊಂಡಿದ್ದರು.

Printed by T.S. Gopinath, Published by M. Govinde Gowda on behalf of Academy Newspapers Private Limited, 15-C Industrial 'A' Layout, Bannimantap, Mysore-570 015 and Printed at Academy Newspapers Private Limited, 15-C Industrial 'A' Layout, Bannimantap, Mysore-570 015 and Published at 15-C Industrial 'A' Layout, Bannimantap, Mysore-570 015, Editor: M. Govinde Gowda Ph: 2496520 / 2496521 / 2496526 / 2496527 / 2496528. Fax: 0821-2496525. CITY OFFICES: Visveswaraya Building, III Floor, K.R. CIRCLE, MYSORE-570 001, Ph: 2431774 and No. 114, D. DEVARAJ URS ROAD (Opposite Big Bus), MYSORE-570 001. Ph: 2428695. RNI Reg. No. 36581 / 1980 E-mail address: mysoorumithra@gmail.com For advertisements: mysoorumithra@gmail.com

ಮೈಸೂರು ಮಿತ್ರ

ಎನ್.ಆರ್.ಮೊಹಲ್ಲಾದಲ್ಲಿ ಇಂದು ಕನ್ನಡ ರಾಜ್ಯೋತ್ಸವ

ಮೈಸೂರು,ಡಿ.17(ಬಿಎಲ್‌ಯು)–ಮೈಸೂರಿನ ಜೈ ಭುವನೇಶ್ವರಿ ಕನ್ನಡ ಕಲಾ



ಸಮಿತಿಯ 35ನೇ ವಾರ್ಷಿಕೋತ್ಸವ ಹಾಗೂ 69ನೇ ಕನ್ನಡ ರಾಜ್ಯೋತ್ಸವ ಸಮಾರಂಭ ಡಿ.18ರಂದು ನಗರದ ಎನ್.ಆರ್. ಮೊಹಲ್ಲಾದ ಶಿವಾಜಿ ಮುಖ್ಯರಸ್ತೆಯಲ್ಲಿ ನಡೆಯಲಿದೆ. ಜಡ್ ಮಾರ್ಕ್ ಮ್ಯಾನೇಜಿಂಗ್ ಡೈರೆಕ್ಟರ್ ಮಹಮ್ಮದ್ ಜುಬೇರ್ ಕಾರ್ಯಕ್ರಮ ಉದ್ಘಾಟಿಸಲಿದ್ದು, ವೈದ್ಯ ಡಾ.ಶ್ರೀಕಾಂತ್ ಸುಂದರೇಶ್ ಅಧ್ಯಕ್ಷತೆ ವಹಿಸಲಿದ್ದಾರೆ. ಸಮಾಜ ಸೇವಕರೂ ಆದ ವೈದ್ಯ ಡಾ.ಗಿರೀಶ್, ಭುವನೇಶ್ವರಿ ದೇವಿಗೆ ಮಾಲಾರ್ಪಣೆ ಮಾಡಲಿದ್ದು, ವಾಣಿಜ್ಯೋದ್ಯಮಿ ನಾಗೇಶ್ ಮುಖ್ಯ ಭಾಷಣ ಮಾಡಲಿದ್ದಾರೆ. ಮಾಜಿ ಕಾರ್ಪೋರೇಟರ್ ಆರೀಫ್ ಹುಸೇನ್, ಎನ್.ಆರ್. ಪೊಲೀಸ್ ಠಾಣೆಯ ಇನ್ಸ್‌ಪೆಕ್ಟರ್ ಲಕ್ಷ್ಮಿಕಾಂತ್ ಎಂ.ತಳವಾರ್, ಕೆ.ಆರ್.ಆಸ್ಪತ್ರೆ ಸೂಪರಿಂಟೆಂಡೆಂಟ್ ಶೋಭಾ, ಕರ್ನಾಟಕ ಕಾವಲು ಪಡೆ ಅಧ್ಯಕ್ಷ ಮೋಹನ್ ಕುಮಾರ್‌ಗೌಡ, ರಾಜ್‌ಕುಮಾರ್ ಅಭಿಮಾನಿಗಳ ಸಂಘದ ಮಾಜಿ ಅಧ್ಯಕ್ಷ ಎಂ.ರಾಮೇಗೌಡ, ಸಮಾಜ ಸೇವಕರಾದ ಕುಮಾರ್, ಮೋಹನ್‌ಕುಮಾರ್, ವಕೀಲ ಶಶಿಕಿರಣ್, ಸಮಿತಿ ಮಾರ್ಗದರ್ಶಕರಾದ ರಂಗಪ್ಪಗೌಡ, ಮೊಹಮ್ಮದ್ ಪುತ್ತು ಮುಖ್ಯ ಅತಿಥಿಗಳಾಗಿ ಆಗಮಿಸಲಿದ್ದಾರೆ. ಇದೇ ಸಂದರ್ಭದಲ್ಲಿ ಡಾ.ವಿಷ್ಣುವರ್ಧನ್ ಮ್ಯೂಸಿಕಲ್ ಗ್ರೂಪ್‌ನಿಂದ ಸಂಗೀತ ಸಂಜೆ ಕಾರ್ಯಕ್ರಮ ಆಯೋಜಿಸಲಾಗಿದೆ.

ಕ್ಷೇತ್ರ ಅಭಿವೃದ್ಧಿಗೆ 4000 ಕೋಟಿ ಬಿಡುಗಡೆಗೆ ಸಿಎಂ ಸಮ್ಮತಿ

● ಆಡಳಿತ ಪಕ್ಷದ ಸದಸ್ಯರಿಗೆ 20 ಕೋಟಿ; ವಿಪಕ್ಷ ಸದಸ್ಯರಿಗೆ 10 ಕೋಟಿ ಬಿಡುಗಡೆ ● 2025ರ ಮಾರ್ಚ್ 31ರೊಳಗೆ ವೆಚ್ಚ ಮಾಡುವಂತೆ ಸೂಚನೆ

ಬೆಂಗಳೂರು, ಡಿ.17(ಕೆಎಂಶಿ)–



ಕ್ಷೇತ್ರ ಅಭಿವೃದ್ಧಿಗೆ 4,000 ಕೋಟಿ ರೂ. ಬಿಡುಗಡೆ ಮಾಡಲು ಮುಖ್ಯಮಂತ್ರಿ ಸಿದ್ದರಾಮಯ್ಯ ಕೊನೆಗೂ ಸಮ್ಮತಿಸಿದ್ದಾರೆ.

ಆಡಳಿತ ಪಕ್ಷದ ಸದಸ್ಯರ ಪ್ರತಿ ಕ್ಷೇತ್ರಕ್ಕೆ ತಲಾ 20 ಕೋಟಿ ರೂ., ಪ್ರತಿಪಕ್ಷದ ಸದಸ್ಯರ ಕ್ಷೇತ್ರಗಳಿಗೆ ತಲಾ 10 ಕೋಟಿ ರೂ. ಬಿಡುಗಡೆ ಮಾಡ ಲಿದ್ದಾರೆ. ಈ ಹಣದಲ್ಲಿ ಶಾಸಕರು ತಮ್ಮ ಅಧಿಕಾರ ಬಳಸಿ ಕ್ಷೇತ್ರಕ್ಕೆ ಅಗತ್ಯವಿರುವ ರಸ್ತೆ ಸೇರಿದಂತೆ ಇತರ ಮೂಲಸೌಕರ್ಯ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಬಹುದು.

2025ರ ಮಾರ್ಚ್ 31ರೊಳಗಾಗಿ ಬಿಡುಗಡೆ ಹಣವನ್ನು ವೆಚ್ಚ ಮಾಡುವಂತೆ ಸೂಚಿಸಿದ್ದಾರೆ. ಪ್ರಸಕ್ತ ಬಿಡುಗಡೆಗೊಳ್ಳುತ್ತಿರುವುದು ಮೊದಲ ಕಂತಿನ ಹಣವಾಗಿದ್ದು, ಮುಂದಿನ ದಿನಗಳಲ್ಲಿ ಸರಿಸಮಾನ ಪ್ರಮಾಣದ ಹಣ ನೀಡುವ ಬಗ್ಗೆಯೂ ಮುಖ್ಯಮಂತ್ರಿ ಅವರು ಆರ್ಥಿಕ ಇಲಾಖೆ ಅಧಿಕಾರಿಗಳೊಂದಿಗೆ ಚರ್ಚಿಸಿದ್ದಾರೆ.

ಕ್ಷೇತ್ರಗಳ ಅಭಿವೃದ್ಧಿಗೆ ತಲಾ 100 ಕೋಟಿ ರೂ. ನೀಡುವುದಾಗಿ ಮುಖ್ಯಮಂತ್ರಿ ಘೋಷಣೆ ಮಾಡಿದ್ದರು, ಆದರೆ, ಕಳೆದ ಒಂದೂವರೆ ವರ್ಷಗಳಿಂದ ಯಾವುದೇ ಹಣ ಬಿಡುಗಡೆ ಆಗದೆ ಜನಪ್ರತಿನಿಧಿಗಳು ಸಾರ್ವಜನಿಕರಿಂದ ಟೀಕೆಗೆ ಒಳಗಾಗಿದ್ದರು. ಬೆಳಗಾವಿಯಲ್ಲಿ ನಡೆಯುತ್ತಿರುವ ವಿಧಾನಮಂಡಲದ ಚಳಿಗಾಲದ ಅಧಿವೇಶನದಲ್ಲೂ ವಿರೋಧ ಪಕ್ಷದ ಸದಸ್ಯರು ಈ ವಿಷಯದಲ್ಲಿ ಸರ್ಕಾರವನ್ನು ತೀವ್ರ ತರಾಟೆಗೆ ತೆಗೆದುಕೊಂಡಿದ್ದರು.

ಪಂಚ ಯೋಜನೆಗಳನ್ನು ಮುಂದುವರೆಸುವುದರ ಜೊತೆಗೆ ನಮಗೆ ರಸ್ತೆ ಅಭಿವೃದ್ಧಿಗೆ ತಕ್ಷಣ ಹಣ ನೀಡಿ ಎಂದು ಆಡಳಿತ ಪಕ್ಷದ ಸದಸ್ಯರೂ ಧ್ವನಿಗೂಡಿಸಿದ್ದರು. ಉತ್ತರ ಕರ್ನಾಟಕ ಅಭಿವೃದ್ಧಿಗೆ ಸಂಬಂಧಿಸಿದಂತೆ ವಿಧಾನಸಭೆಯಲ್ಲಿಂದು ಪಕ್ಷಾತೀತವಾಗಿ ಚರ್ಚೆ ನಡೆಸಿದ ಸದಸ್ಯರು, ಅಭಿವೃದ್ಧಿಗೆ ಹಣ ಬಿಡುಗಡೆ ಮಾಡುವಂತೆ ಒಕ್ಕೊರಲಿನಿಂದ ಒತ್ತಾಯಿಸಿದ್ದಾರೆ. ಸದಸ್ಯರ ಒತ್ತಡಕ್ಕೆ ಮಣಿದ ಮುಖ್ಯಮಂತ್ರಿ ಅವರು, ಆರ್ಥಿಕ ಇಲಾಖೆ ಅಧಿಕಾರಿಗಳೊಂದಿಗೆ ಸಮಾಲೋಚನೆ ನಡೆಸಿ ಮೊದಲ ಕಂತಿನ ಹಣ ಬಿಡುಗಡೆಗೆ ನಿರ್ಧರಿಸಿದ್ದಾರೆ.

ಉತ್ತರ ಕರ್ನಾಟಕದ ಅಭಿವೃದ್ಧಿಗೆ ಸಂಬಂಧಿಸಿದಂತೆ ನಡೆದ ಚರ್ಚೆಗೆ ಗುರುವಾರ ಮುಖ್ಯಮಂತ್ರಿ ಉತ್ತರ ನೀಡಲಿದ್ದು, ಅಂದೇ ಅಧಿವೇಶನದಲ್ಲಿ ಹಣ ಬಿಡುಗಡೆ ಬಗ್ಗೆ ಪ್ರಕಟಿಸಲಿದ್ದಾರೆ.

ರೈತರಿಗಾಗಿ ಕಾಂಗ್ರೆಸ್ ಏನೂ ಮಾಡಿಲ್ಲ

ಜೈಪುರ(ರಾಜಸ್ಥಾನ), ಡಿ.17– ರೈತರ



ಹೆಸರಿನಲ್ಲಿ ದೊಡ್ಡದಾಗಿ ಮಾತನಾಡುವ ಕಾಂಗ್ರೆಸ್, ಅವರಿಗಾಗಿ ಏನು ಮಾಡಿಲ್ಲ. ಇತರರಿಗೆ ಮಾಡಲೂ ಬಿಡುವುದಿಲ್ಲ ಎಂದು ಪ್ರಧಾನಿ ನರೇಂದ್ರ ಮೋದಿ ಮಂಗಳವಾರ ಹೇಳಿದರು.

ರಾಜಸ್ಥಾನದಲ್ಲಿ ಬಿಜೆಪಿ ಸರ್ಕಾರ ರಚನೆಯಾಗಿ ಒಂದು ವರ್ಷ ಪೂರೈಸಿದ್ದು, ಒಂದು ವರ್ಷ, ಪರಿಣಾಮ ಉತ್ಕರ್ಷ ಕಾರ್ಯಕ್ರಮವನ್ನು ಉದ್ಘಾಟಿಸಿ ಪ್ರಧಾನಿ ಮೋದಿ ಅವರು ಮಾತನಾಡಿದರು. ಇದೇ ವೇಳೆ 46,330 ಕೋಟಿ ಮೌಲ್ಯದ ಇಂಧನ, ರಸ್ತೆ, ರೈಲು ಮತ್ತು ನೀರು ಯೋಜನೆಗಳಿಗೆ ಶಂಕುಸ್ಥಾಪನೆ ಮಾಡಿದರು. ಪೂರ್ವ ರಾಜಸ್ಥಾನ ಕಾಲುವೆ ಯೋಜನೆ ಬಹಳ ಕಾಲ ವಿಳಂಬವಾಗಲು ಕಾರಣ ಕಾಂಗ್ರೆಸ್. ಇದು ಕಾಂಗ್ರೆಸ್‌ನ ಉದ್ದೇಶವೇನು ಎಂಬುವುದಕ್ಕೆ ನೇರ ಸಾಕ್ಷಿಯಾಗಿದೆ. ರೈತರ ಹೆಸರಿನಲ್ಲಿ ದೊಡ್ಡದಾಗಿ ಮಾತನಾಡುವ ಅವರು ಅವರಿಗಾಗಿ ಏನು ಮಾಡಿಲ್ಲ ಎಂದು ಕಿಡಿಕಾರಿದರು.

ಬಿಜೆಪಿಯ ನೀತಿ ಸಂವಾದವೇ ಹೊರತು ಸಂಘರ್ಷವಲ್ಲ. ಬಿಜೆಪಿಯು ಸಹಕಾರದಲ್ಲಿ ನಂಬಿಕೆ ಇಟ್ಟಿದೆ, ವಿರೋಧದಲ್ಲಿ ಅಲ್ಲ. ನಾವು ಪರಿಹಾರವನ್ನು ಬಯಸುತ್ತೇವೆ ವಿನಃ ಸಮಸ್ಯೆಯನ್ನಲ್ಲ. ಆದ್ದರಿಂದ ನಮ್ಮ ಸರ್ಕಾರವು ಪೂರ್ವ ರಾಜಸ್ಥಾನ ಕಾಲುವೆ ಯೋಜನೆಗೆ ಅನುಮೋದನೆ ನೀಡುವ ಮೂಲಕ ಯೋಜನೆಯನ್ನು ವಿಸ್ತರಿಸಿದ್ದೇವೆ. ಮಧ್ಯಪ್ರದೇಶ ಮತ್ತು ರಾಜಸ್ಥಾನದಲ್ಲಿ ಬಿಜೆಪಿ ಸರ್ಕಾರ ರಚನೆಯಾದ ತಕ್ಷಣ ಪಾರ್ವತಿ ಕಲಿಸಿಂಧ್ ಚಂಬಲ್ ಯೋಜನೆ ಒಪ್ಪಂದಕ್ಕೆ ತರಲಾಯಿತು ಎಂದು ಹೇಳಿದರು.

ನಾನು ಮುಖ್ಯಮಂತ್ರಿಯಾಗಿದ್ದಾಗ ಗುಜರಾತಿನ ವಿವಿಧ ಭಾಗಗಳಿಗೆ ನರ್ಮದಾ ನದಿ ನೀರನ್ನು ಹರಿಸಲು ಬೃಹತ್ ಅಭಿಯಾನವನ್ನು ಹಮ್ಮಿಕೊಂಡಿದೆ. ಇದನ್ನು ತಡೆಯಲು ಕಾಂಗ್ರೆಸ್ ಮತ್ತು ಕೆಲ ಎನ್‌ಜಿಒಗಳು ಹಲವು ತಂತ್ರಗಳನ್ನು ಮಾಡಿದ್ದವು ಎಂದು ನೆನಪಿಸಿಕೊಂಡರು.

ನೀರಿನ ಸಮಸ್ಯೆಗೆ ಪರಿಹಾರ ನೀಡಲು ಕಾಂಗ್ರೆಸ್ ಎಂದಿಗೂ ಬಯಸುವುದಿಲ್ಲ. ನಮ್ಮ ನದಿಗಳ ನೀರು ಗಡಿ ದಾಟಿ ಹರಿಯುತ್ತಿದ್ದರು, ಅದರ ಲಾಭ ನಮ್ಮ ರೈತರಿಗೆ ಸಿಕ್ಕಿಲ್ಲ. ನೀರಾವರಿ ಸಮಸ್ಯೆಗೆ ಪರಿಹಾರ ಕಂಡುಕೊಳ್ಳದ ಕಾಂಗ್ರೆಸ್, ಎರಡು ರಾಜ್ಯಗಳ ನಡುವೆ ನೀರಿನ ಸಮಸ್ಯೆಯನ್ನು ಮತ್ತಷ್ಟು ಬಿಗಡಾಯಿಸುವಂತೆ ಮಾಡಿದೆ ಎಂದು ಹೇಳಿದರು.

ದರ್ಶನ್, ಇತರರಿಗೆ ಜಾಮೀನು ಪ್ರಶ್ನಿಸಿ ಸುಪ್ರೀಂಗೆ ಮೇಲ್ಮನವಿ

ಬೆಂಗಳೂರು ಪೊಲೀಸ್ ಕಮಿಷನರ್ ಬಿ.ದಯಾನಂದ ಮಾಹಿತಿ

ಬೆಂಗಳೂರು, ಡಿ.17– ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ನಟ ದರ್ಶನ್ ತೂಗುದೀಪ, ಅವರ ಗೆಳತಿ ಪವಿತ್ರಾ ಗೌಡ ಮತ್ತು ಇತರ ಆರೋಪಿಗಳಿಗೆ ಹೈಕೋರ್ಟ್ ನೀಡಿರುವ ಜಾಮೀನು ಪ್ರಶ್ನಿಸಿ ಸುಪ್ರೀಂಕೋರ್ಟ್‌ನಲ್ಲಿ ಮೇಲ್ಮನವಿ ಸಲ್ಲಿಸಲು ಪ್ರಯತ್ನಿಸಲಾಗುತ್ತಿದೆ ಎಂದು ಬೆಂಗಳೂರು ಪೊಲೀಸ್ ಕಮಿಷನರ್ ಬಿ.ದಯಾನಂದ ಮಂಗಳವಾರ ತಿಳಿಸಿದ್ದಾರೆ.

ರೇಣುಕಾಸ್ವಾಮಿ ಕೊಲೆ ಪ್ರಕರಣದ ಆರೋಪಿಗಳಿಗೆ ಹೈಕೋರ್ಟ್ ಜಾಮೀನು ನೀಡಿರುವುದನ್ನು ಪ್ರಶ್ನಿಸಿ ಸುಪ್ರೀಂ ಕೋರ್ಟ್‌ಗೆ ಮೇಲ್ಮನವಿ ಸಲ್ಲಿಸುವ ಬಗ್ಗೆ ರಾಜ್ಯ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗುವುದು ಎಂದು ದಯಾನಂದ ಇಲ್ಲಿ ಸುದ್ದಿಗಾರರಿಗೆ ತಿಳಿಸಿದ್ದಾರೆ.

ಹೈಕೋರ್ಟ್ ನ್ಯಾಯಮೂರ್ತಿ ಎಸ್.ವಿಶ್ವಜಿತ್ ಶೆಟ್ಟಿ ನೇತೃತ್ವದ ಏಕ ಸದಸ್ಯ ಪೀಠ ಆರೋಪಿ ನಂಬರ್ 1 ದರ್ಶನ್ ಅವರ ಸ್ನೇಹಿತೆ ಪವಿತ್ರಾ ಗೌಡ, 2ನೇ ಆರೋಪಿಯಾಗಿರುವ ದರ್ಶನ್, ಇತರ ಆರೋಪಿಗಳಾದ ಆರ್.ನಾಗರಾಜು, ಅನುಕುಮಾರ್ ಅಲಿಯಾಸ್ ಅನು, ಲಕ್ಷ್ಮಣ್ ಎಂ, ಜಗದೀಶ್ ಅಲಿಯಾಸ್ ಜಗ್ಗ ಮತ್ತು ಪ್ರದೂಷ್ ಎಸ್ ರಾವ್ ಅವರಿಗೆ ಕಳೆದ ಶುಕ್ರವಾರ ಷರತ್ತುಬದ್ಧ ಜಾಮೀನು ಮಂಜೂರು ಮಾಡಿದೆ.



ಬಿ.ದಯಾನಂದ

ಜೂನ್ 11ರಂದು ದರ್ಶನ್ ಅವರನ್ನು ಬಂಧಿಸಲಾಗಿತ್ತು. ಇದೇ ಅವಧಿಯಲ್ಲಿ ಪವಿತ್ರಾಗೌಡ ಸೇರಿ 15 ಸಹ ಆರೋಪಿಗಳನ್ನು ಬಂಧಿಸಲಾಗಿತ್ತು. 47 ವರ್ಷದ ನಟ ದರ್ಶನ್ ಈಗಾಗಲೇ ವೈದ್ಯಕೀಯ ಕಾರಣಗಳಿಗಾಗಿ ಮಧ್ಯಂತರ ಜಾಮೀನಿನ ಮೇಲೆ ಹೊರಗಿದ್ದರು. ಬೆನ್ನುಮೂಳೆಯ ಶಸ್ತ್ರಚಿಕಿತ್ಸೆಗೆ ಒಳಗಾಗಲು ಹೈಕೋರ್ಟ್ ಅವರಿಗೆ ಆರು ವಾರಗಳ ಕಾಲ ಮಧ್ಯಂತರ ಜಾಮೀನು ನೀಡಿತ್ತು. ನಾಲ್ಕು ತಿಂಗಳಿಗೂ ಹೆಚ್ಚು ಕಾಲ ಜೈಲಿನಲ್ಲಿದ್ದ ನಂತರ ಅವರು ಅಕ್ಟೋಬರ್ 30ರಂದು ಬಳ್ಳಾರಿ ಜೈಲಿನಿಂದ ಬಿಡುಗಡೆಯಾಗಿದ್ದರು.

ಮೊದಲ ಆರೋಪಿ ಪವಿತ್ರಾ ಗೌಡ ಅವರು ಇಂದು ಜಾಮೀನಿನ ಮೇಲೆ ಪರಪ್ಪನ ಅಗ್ರಹಾರ ಕೇಂದ್ರ ಕಾರಾಗೃಹದಿಂದ ಬಿಡುಗಡೆಯಾಗಿದ್ದಾರೆ.

ಅಜೀಜ್ ಸೇಠ್ ಜೋಡಿ ರಸ್ತೆಯಲ್ಲಿನ ಬೀದಿದೀಪ ದುರಸ್ತಿಗೆ ಆಗ್ರಹಿಸಿ ಪ್ರತಿಭಟನೆ



ಮೈಸೂರಿನ ಉದಯಗಿರಿ ಅಜೀಜ್‌ಸೇಠ್ ಜೋಡಿ ರಸ್ತೆಯ ಬೀದಿದೀಪ ದುರಸ್ತಿಗೊಳಿಸುವಂತೆ ಆಗ್ರಹಿಸಿ ಎಸ್‌ಡಿಪಿಐ ವತಿಯಿಂದ ವಲಯ ಕಚೇರಿ–8ರ ಮುಂಭಾಗ ಮಂಗಳವಾರ ಪ್ರತಿಭಟನೆ ನಡೆಸಲಾಯಿತು.

ಮೈಸೂರು, ಡಿ.17(ಜಿಎ)–ಮೈಸೂರಿನ ಉದಯಗಿರಿ ಅಜೀಜ್ ಸೇಠ್ ಜೋಡಿ ರಸ್ತೆಯ ಬೀದಿದೀಪ ದುರಸ್ತಿಗೊಳಿಸುವಂತೆ ಆಗ್ರಹಿಸಿ ಸೋಶಿಯಲ್ ಡೆಮಾಕ್ರಟಿಕ್ ಪಾರ್ಟಿ ಆಫ್ ಇಂಡಿಯಾ ವತಿಯಿಂದ ವಲಯ ಕಚೇರಿ–8ರ ಮುಂಭಾಗ ಮಂಗಳವಾರ ಪ್ರತಿಭಟನೆ ನಡೆಸಲಾಯಿತು.

ಕಳೆದ ಒಂದು ವರ್ಷದಿಂದ ಈ ರಸ್ತೆಯ ದೀಪಗಳು ಬೆಳಗುತ್ತಿಲ್ಲ. ಇದರಿಂದ ವಾಹನ ಸವಾರರು ನಿತ್ಯವೂ ಪರದಾಡುವ ಸ್ಥಿತಿ ನಿರ್ಮಾಣವಾಗಿ ಅಪಘಾತಗಳು ಸಂಭವಿಸುತ್ತಿವೆ. ಜನದಟ್ಟಣೆ ಹೆಚ್ಚಿರುವ ರಸ್ತೆಯಲ್ಲಿ ಈ ರೀತಿ ಬೀದಿದೀಪ ಇಲ್ಲದಿರುವುದರಿಂದ ಸಾರ್ವಜನಿಕರು ತೊಂದರೆ ಅನುಭವಿಸುತ್ತಿದ್ದಾರೆ. ಇತ್ತೀಚೆಗೆ ಕತ್ತಲಿನಲ್ಲಿ ವಾಹನಕ್ಕೆ ಬೀದಿನಾಯಿ ಅಡ್ಡ ಬಂದ ಹಿನ್ನೆಲೆಯಲ್ಲಿ ಕುಟುಂಬವೊಂದು ಗಂಭೀರವಾಗಿ ಗಾಯಗೊಂಡಿದೆ. ಮತ್ತೊಂದೆಡೆ ರಸ್ತೆ ದುರಸ್ತಿ ಮಾಡುತ್ತೇವೆ ಎಂದು ಪದೇ ಪದೆ ಗುಂಡಿ ತೆಗೆಯುತ್ತಾರೆ ಎಂದು ದೂರಿದರು.

ಹಾಗೇ ಇಲ್ಲಿನ ನಿವಾಸಿಗಳು ಮೂಲ ಸೌಕರ್ಯಗಳು ಇಲ್ಲದೇ ಸಾಕಷ್ಟು ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ. ಒಳಚರಂಡಿ ವ್ಯವಸ್ಥೆ, ಕಸ ಸೇರಿದಂತೆ ಸಾಕಷ್ಟು ಸಮಸ್ಯೆಗಳು ದಶಕಗಳಿಂದ ಇದ್ದು, ಉದ್ಯಾನವನಗಳ ಸೂಕ್ತ ನಿರ್ವಹಣೆ ಇಲ್ಲದೇ ಕಳೆ ಬೆಳೆದು ಪೊದೆಗಳು ಬೆಳೆದು ನಿಂತು ಹಾವು ಸೇರಿದಂತೆ ಇತರೆ ವಿಷಜಂತುಗಳ ಆವಾಸಸ್ಥಾನವಾಗಿದೆ. ಅಧಿಕಾರಿಗಳು ಕೂಡಲೇ ಇತ್ತ ಗಮನಹರಿಸಿ ಸಮಸ್ಯೆಗಳನ್ನು ನಿವಾರಿಸಿ ಎಂದು ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ಜಿಲ್ಲಾಧ್ಯಕ್ಷ ರಫತ್ ಖಾನ್, ಉಪಾಧ್ಯಕ್ಷ ಎಸ್.ಸ್ವಾಮಿ, ಮಹಮ್ಮದ್ ಶಫಿ, ಅಮಿನ್ ಸೇಠ್, ಫರ್ದಿನ್, ಜ್ಞಾನಪ್ರಕಾಶ್ ಮತ್ತಿತರರು ಉಪಸ್ಥಿತರಿದ್ದರು.

ಬಸವ ಜಯಮೃತ್ಯುಂಜಯ ಸ್ವಾಮೀಜಿ ವಿರುದ್ಧದ ಹೇಳಿಕೆಗೆ ಖಂಡನೆ



ಮೈಸೂರು, ಡಿ.17(ಜಿಎ)–2ಎ ಮೀಸಲಾತಿಗಾಗಿ ಹೋರಾಡುತ್ತಿರುವ ಲಿಂಗಾಯತ ಸಮುದಾಯದ ಬಸವ ಜಯ ಮೃತ್ಯುಂಜಯ ಸ್ವಾಮೀಜಿ ವಿರುದ್ಧದ ಹಿಂದುಳಿದ ವರ್ಗಗಳ ಒಕ್ಕೂಟದ ರಾಜ್ಯಾಧ್ಯಕ್ಷ ಕೆ.ಎಸ್.ಶಿವರಾಮು ಹೇಳಿಕೆಯನ್ನು ಗೌಡ ಲಿಂಗಾಯತ–ಪಂಚಮಸಾಲಿ ಸಮನ್ವಯ ಸಮಿತಿ ಖಂಡಿಸಿದೆ.

ಮೈಸೂರು ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಸಮಿತಿಯ ಪ್ರಧಾನ ಕಾರ್ಯದರ್ಶಿ ಶಂಭು ಪಟೇಲ್ ಮಾತನಾಡಿ, ಮಾನಸಿಕ ಸ್ಥಿಮಿತ ಕಳೆದುಕೊಂಡಂತೆ ಪ್ರಚೋದನಾಕಾರಿ ಹೇಳಿಕೆ ನೀಡಿರುವ ಸ್ವಯಂಘೋಷಿತ ಹಿಂದುಳಿದ ವರ್ಗಗಳ ಮುಖಂಡ ಕೆ.ಎಸ್.ಶಿವರಾಮು, ತನ್ನ ಬೇಜವಾಬ್ದಾರಿ ಹೇಳಿಕೆಗಳನ್ನು ನಿಲ್ಲಿಸದಿದ್ದಲ್ಲಿ ಆಸ್ಪತ್ರೆಗೆ ಸೇರಿಸಬೇಕಾಗುತ್ತದೆ ಎಂದು ಎಚ್ಚರಿಸಿದರು.

ನಮ್ಮ ಅನ್ನದ ತಟ್ಟೆಗೆ ಕೈ ಹಾಕಿದರೆ ಕೈ ಕಡಿಯುತ್ತೇವೆ ಎಂದು ಕೆ.ಎಸ್.ಶಿವರಾಮು ಪ್ರಚೋದನೆ ಮಾಡಿದ್ದಾರೆ. ಇವರ ವಿರುದ್ಧ ಬೆಂಗಳೂರಿನ ಹೈಗ್ರೌಂಡ್ಸ್ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಿಸಿದ್ದರೂ ಈವರೆಗೆ ಪೊಲೀಸರು ಕ್ರಮ ಜರುಗಿಸದೆ ಇರುವುದು ಖಂಡನೀಯ. ಕೂಡಲೇ ಪೊಲೀಸರು ಶಿವರಾಮು ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

3–4 ವರ್ಷಗಳ ಹಿಂದೆ ಕುರುಬರನ್ನು ಎಸ್‌ಟಿಗೆ ಸೇರಿಸುವಂತೆ ಕಾಗಿನೆಲೆ ಸ್ವಾಮೀಜಿ ನೇತೃತ್ವದಲ್ಲಿ ಪಾದಯಾತ್ರೆ ನಡೆಸಿ, ಬೆಂಗಳೂರಿನಲ್ಲಿ ಬೃಹತ್ ಸಮಾವೇಶ ನಡೆಸಿ ಒತ್ತಾಯ ಮಾಡಿದಾಗ, ಪರಿಶಿಷ್ಟ ಸಮುದಾಯದವರು ಕುರುಬರ ಕೈ ಕಡಿಯುತ್ತೇವೆ ಎಂದು ಹೇಳಿದ್ದರೇ ಎಂದು ಪ್ರಶ್ನಿಸಿದರು. ಗೌಡ ಲಿಂಗಾಯತ–ಪಂಚಮ ಸಾಲಿ ಸಮುದಾಯವನ್ನು ಕೇಂದ್ರದ ಒಬಿಸಿ ಪಟ್ಟಿಗೆ ಸೇರಿಸುವಂತೆ ಬಸವ ಜಯಮೃತ್ಯುಂಜಯ ಸ್ವಾಮೀಜಿ ನೇತೃತ್ವದಲ್ಲಿ ಇನ್ನೊಂದು ಸಮುದಾಯಕ್ಕೆ ನೋವುಂಟು ಮಾಡದಂತೆ ದಶಕಗಳಿಂದ ಶಾಂತಿಯುತ ಹೋರಾಟ ನಡೆಸುತ್ತಿದ್ದೇವೆ. ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಶಾಂತಿಯುತ ಹೋರಾಟಕ್ಕೆ ಅವಕಾಶ ಕೊಡದೆ ಪೊಲೀಸರಿಂದ ಲಾಠಿ ಪ್ರಹಾರ ನಡೆಸಿದ್ದಾರೆ ಎಂದು ದೂರಿದರು.

ಡಾ.ಬಿ.ಆರ್.ಅಂಬೇಡ್ಕರ್ ಕೊಟ್ಟಿರುವ ಮೀಸಲಾತಿ ಎಂಬ ತಟ್ಟೆಯಲ್ಲಿ ನಾವೂ ಒಂದು ತುತ್ತು ಕೇಳುತ್ತಿದ್ದೇವೆ ಅಷ್ಟೇ. ನಾವು ಉಳುಮೆ, ವ್ಯವಸಾಯ ಮಾಡಿ ದುಡಿಮೆ ಮಾಡಿಕೊಂಡು ಬದುಕುವ ಸಮುದಾಯ. ನಮ್ಮ ಸಮುದಾಯದಲ್ಲೂ ಬಡವರು ಇದ್ದಾರೆ. 2ಎ ಮೀಸಲಾತಿ ಕೇಳುವುದರಲ್ಲಿ ಏನು ತಪ್ಪಿದೆ. ಅಷ್ಟಕ್ಕೂ ನಾವು ನಿಮಗೆ ಕೊಟ್ಟಿರುವ ಮೀಸಲಾತಿಯನ್ನ ನಾವು ಕಿತ್ತುಕೊಳ್ಳುತ್ತಿಲ್ಲ. ನಮಗೆ ಮೀಸಲಾತಿ ಬೇಕು ಎಂದು ಹೋರಾಟ ಮಾಡುತ್ತಿದ್ದೇವೆ. ಶಿವರಾಮು ನಮ್ಮ ಸಮುದಾಯ ಬಗ್ಗೆ, ನಮ್ಮ ಸ್ವಾಮೀಜಿಗಳ ಬಗ್ಗೆ ಬಹಳ ಹಗುರವಾಗಿ ಮಾತನಾಡಿರುವುದು ಖಂಡನೀಯ ಎಂದರು.

ಸುದ್ದಿಗೋಷ್ಠಿಯಲ್ಲಿ ಬೆಂಗಳೂರು ವಿಭಾಗ ಕಾರ್ಯದರ್ಶಿ ಆರ್.ಬಿ.ಪಾಟೀಲ್, ಮೈಸೂರು ವಿಭಾಗ ಕಾರ್ಯದರ್ಶಿ ದಯಾನಂದ ಪಾಟೀಲ್, ಮುಖಂಡರಾದ ರಾಜೇಶ್, ಮಧು ಹೆಡಿಯಾಲ ಉಪಸ್ಥಿತರಿದ್ದರು.

24 ಕೋಟಿ ರೂ. ಮೌಲ್ಯದ ಮಾದಕ ವಸ್ತು ಜಪ್ತಿ


ವಿದೇಶಿ ಮಹಿಳೆ ಬಂಧನ

ಬೆಂಗಳೂರು, ಡಿ.17– ಬೆಂಗಳೂರಿನಲ್ಲಿ ವಿದೇಶಿ ಮಹಿಳೆಯೊಬ್ಬರಿಂದ 24 ಕೋಟಿ ಮೌಲ್ಯದ 12 ಕೆಜಿ ನಿಷೇಧಿತ ಎಂಡಿಎಂಎ ಕ್ರಿಸ್ಟಲ್ ಅನ್ನು ಕೇಂದ್ರ ಅಪರಾಧ ವಿಭಾಗದ (ಸಿಸಿಬಿ) ಮಾದಕ ದ್ರವ್ಯ ನಿಗ್ರಹ ದಳ ಮಂಗಳವಾರ ಜಪ್ತಿ ಮಾಡಿದೆ.

ಸಿಸಿಬಿ ಮಾದಕ ದ್ರವ್ಯ ನಿಗ್ರಹ ದಳ ಹಾಗೂ ಕೆ.ಆರ್.ಪುರಂ ಪೊಲೀಸರು ಜಂಟಿ ಕಾರ್ಯಾಚರಣೆ ನಡೆಸಿ, ಡ್ರಗ್ಸ್ ಮಾರಾಟ ಮಾಡುತ್ತಿದ್ದ ನೈಜೀರಿಯಾ ಮೂಲದ 40 ವರ್ಷದ ಮಹಿಳೆಯನ್ನು ಬಂಧಿಸಿ, 24 ಕೋಟಿ ಮೌಲ್ಯದ ಮಾದಕವಸ್ತುಗಳನ್ನು ಜಪ್ತಿ ಮಾಡಿದ್ದಾರೆ. ಬಂಧಿತ ವಿದೇಶಿ ಮಹಿಳೆಯಿಂದ 12 ಕೆಜಿ ನಿಷೇಧಿತ ಎಂಡಿಎಂಎ, ಒಂದು ಮೊಬೈಲ್, 70 ಏರ್ಟೆಲ್ ಸಿಮ್ ಕಾರ್ಡ್‌ಗಳನ್ನು ಜಪ್ತಿ ಮಾಡಲಾಗಿದೆ. ಇವುಗಳ ಮೌಲ್ಯ ಒಟ್ಟು 24 ಕೋಟಿ ರೂ. ಎಂದು ಬೆಂಗಳೂರು ನಗರ ಪೊಲೀಸ್ ಆಯುಕ್ತ ಬಿ.ದಯಾನಂದ ತಿಳಿಸಿದ್ದಾರೆ.

ಬೆಂಗಳೂರಿನ ಟಿಸಿ ಪಾಳ್ಯದಲ್ಲಿ ತಂಗಿದ್ದ ವಿದೇಶಿ ಮಹಿಳೆಯ ಬಗ್ಗೆ ಖಚಿತ ಮಾಹಿತಿಯ ಮೇರೆಗೆ ಸಿಸಿಬಿ ಪೊಲೀಸರು ದಾಳಿ ನಡೆಸಿದ್ದಾರೆ ಎಂದು ಆಯುಕ್ತರು ಹೇಳಿದ್ದಾರೆ.

ಹಿರಿಯ ವಕೀಲ ಹೆಚ್.ಎನ್.ವೆಂಕಟೇಶ್‌ಗೆ ಸನ್ಮಾನ...



2024ನೇ ಸಾಲಿನ ಮೈಸೂರು ಜಿಲ್ಲಾ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತರಾದ 'ಲಾ ಗೈಡ್' ಕನ್ನಡ ಕಾನೂನು ಮಾಸ ಪತ್ರಿಕೆ ಸಂಪಾದಕರು ಹಾಗೂ ಹಿರಿಯ ವಕೀಲರಾದ ಹೆಚ್.ಎನ್.ವೆಂಕಟೇಶ್ ಅವರನ್ನು ಸಮಗ್ರ ಒಕ್ಕಲಿಗರ ಪರಿಷತ್ ಟ್ರಸ್ಟ್ ವತಿಯಿಂದ ಮೈಸೂರಿನ ಜಲದರ್ಶಿನಿ ಅತಿಥಿಗೃಹದಲ್ಲಿ ಸನ್ಮಾನಿಸಲಾಯಿತು. ಈ ವೇಳೆ ವಕೀಲರ ಸಂಘದ ಅಧ್ಯಕ್ಷ ಎಸ್.ಲೋಕೇಶ್, ಕಾರ್ಯದರ್ಶಿ ಸುಧೀರ್, ಟ್ರಸ್ಟ್‌ನ ಅಧ್ಯಕ್ಷ ಸುರೇಶ್ ಮುದ್ದೇಗೌಡ, ಉಪಾಧ್ಯಕ್ಷ ದೀಪಕ್, ಕಾರ್ಯದರ್ಶಿ ಜಿ.ಕುಮಾರ್, ಖಜಾಂಚಿ ಡಿ.ಆರ್.ಕರೀಗೌಡ, ಕರ್ನಾಟಕ ಪ್ರಜಾ ಪಾರ್ಟಿ ರಾಜ್ಯಾಧ್ಯಕ್ಷರಾದ ಬಿ.ಶಿವಣ್ಣ, ವಕೀಲರಾದ ವಿಷಕಂಠ, ಗೋಪಾಲಗೌಡ, ಗಿರೀಶ್, ಪ್ರಮೀಳಾ, ನಾಗರಾಜ್, ಅಪ್ಪಾಜಿ ಇನ್ನೂ ಹಲವರು ಉಪಸ್ಥಿತರಿದ್ದರು.

ಕಾನೂನು ವಿಷಯದಲ್ಲಿ ಪಿಹೆಚ್.ಡಿ ಪದವಿ



ಎ.ಟಿ.ಜಗದೀಶ್

ಮೈಸೂರು: ಕಾನೂನು ಅಧ್ಯಯನ ವಿಷಯದಲ್ಲಿ 'ಅಕ್ರಿಟಿಕಲ್ ಸ್ಟಡಿ ಆನ್ ಲಾ ಆ್ಯಂಡ್ ಪ್ರಾಕ್ಟೀಸ್ ರಿಲೇಟಿಂಗ್ ಟು ರಿಜಿಸ್ಟ್ರೇಷನ್ ಆಫ್ ಡೋಮಿನ್ ನೇಮ್ಸ್ ಅಂಡ್ ಪ್ರೊಹ್ಯಾಬಿಷನ್ ಆಫ್ ಸೈಬರ್ ಸ್ಕ್ವಾಟಿಂಗ್' ಮಹಾ ಪ್ರಬಂಧಕ್ಕೆ ಎ.ಟಿ.ಜಗದೀಶ್ ಅವರಿಗೆ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾನಿಲಯ ಪಿಹೆಚ್.ಡಿ ಪದವಿ ನೀಡಿದೆ. ಇವರು ಕಾನೂನು ವಿಶ್ವವಿದ್ಯಾನಿಲಯ ವ್ಯಾಪ್ತಿಯ ಕಾನೂನು ಶಾಲೆ ವ್ಯಾಪ್ತಿಯ ಹುಬ್ಬಳ್ಳಿ ಸಹಾಯಕ ಪ್ರಾಧ್ಯಾಪಕ ಡಾ.ರಾಜೇಂದ್ರಕುಮಾರ್ ಹಿಟ್ಟಣಗಿ ಅವರ ಮಾರ್ಗದರ್ಶನದಲ್ಲಿ ಸಂಶೋಧನೆ ನಡೆಸಿ ಪ್ರಬಂಧ ಮಂಡಿಸಿದ್ದರು.

ಡಂಪರ್ ಟ್ರಕ್‌ಗೆ ಬಸ್ ಡಿಕ್ಕಿ; 6 ಸಾವು

ಭಾವನಗರ,ಡಿ.17–ಗುಜರಾತ್‌ನ ಭಾವನಗರ ಜಿಲ್ಲೆಯ ಹೆದ್ದಾರಿಯಲ್ಲಿ ಮಂಗಳವಾರ ಬೆಳಗ್ಗೆ ಖಾಸಗಿ ಬಸ್‌ವೊಂದು ಡಂಪರ್ ಟ್ರಕ್‌ಗೆ ಡಿಕ್ಕಿ ಹೊಡೆದಿದ್ದು, ಭೀಕರ ಅಪಘಾತದಲ್ಲಿ 6 ಮಂದಿ ಸಾವನ್ನಪ್ಪಿದ್ದಾರೆ ಮತ್ತು ಸುಮಾರು 10 ಜನ ಗಾಯಗೊಂಡಿದ್ದಾರೆ. ಇಂದು ಬೆಳಗ್ಗೆ 6 ಗಂಟೆ ಸುಮಾರಿಗೆ ತ್ರಪಾಜ್ ಗ್ರಾಮದ ಬಳಿ ಈ ಅಪಘಾತ ಸಂಭವಿಸಿದೆ ಎಂದು ಪೊಲೀಸ್ ವರಿಷ್ಠಾಧಿಕಾರಿ ಹರ್ಷದ್ ಪಟೇಲ್ ತಿಳಿಸಿದ್ದಾರೆ. ಭಾವನಗರದಿಂದ ಮಹುವಾ ಕಡೆಗೆ ತೆರಳುತ್ತಿದ್ದ ಬಸ್ ಹಿಂದಿನಿಂದ ಡಂಪರ್ ಲಾರಿಗೆ ಡಿಕ್ಕಿ ಹೊಡೆದ ಪರಿಣಾಮ 6 ಮಂದಿ ಸಾವನ್ನಪ್ಪಿದ್ದು, 8ರಿಂದ 10 ಮಂದಿ ಗಾಯಗೊಂಡಿದ್ದಾರೆ. ಗಾಯಾಳುಗಳು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದು, ಅವರು ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಡಿಕ್ಕಿಯ ರಭಸಕ್ಕೆ ಬಸ್ಸಿನ ಬಲಭಾಗದ ಮುಂಭಾಗ ಸಂಪೂರ್ಣ ಜಖಂಗೊಂಡಿದೆ ಎಂದು ತಿಳಿಸಿದ್ದಾರೆ.

ಅಗಸ್ತ್ಯ ಕ್ರೆಡಿಟ್ ಕೋ ಆಪರೇಟಿವ್ ಸೊಸೈಟಿ ವಾರ್ಷಿಕೋತ್ಸವ: ವಿವಿಧ ಸ್ಪರ್ಧೆಗಳಿಗೆ ಚಾಲನೆ



ವಿವಿಧ ಆಟೋಟ ಸ್ಪರ್ಧೆ ಕಾರ್ಯಕ್ರಮವನ್ನು ಅಗಸ್ತ್ಯ ಕ್ರೆಡಿಟ್ ಕೋ ಆಪರೇಟಿವ್ ಸೊಸೈಟಿ ಅಧ್ಯಕ್ಷ ಎಂ.ಡಿ.ಗೋಪಿನಾಥ್ ಉದ್ಘಾಟಿಸಿದರು.

ಮೈಸೂರು,ಡಿ.17–ನಾರಾಯಣ ಶಾಸ್ತ್ರಿ ರಸ್ತೆಯಲ್ಲಿರುವ ಸದ್ವಿದ್ಯಾ ಶಿಕ್ಷಣ ಸಂಸ್ಥೆಯಲ್ಲಿ ಅಗಸ್ತ್ಯ ಕ್ರೆಡಿಟ್ ಕೋ–ಆಪರೇಟಿವ್ ಸೊಸೈಟಿಯ 30ನೇ ವರ್ಷದ ವಾರ್ಷಿಕೋತ್ಸವದ ಅಂಗವಾಗಿ ವಿವಿಧ ಆಟೋಟ ಸ್ಪರ್ಧೆಗಳನ್ನು ಆಯೋಜಿಸಲಾಗಿತ್ತು. ಕಾರ್ಯಕ್ರಮವನ್ನು ಸೊಸೈಟಿ ಅಧ್ಯಕ್ಷ ಎಂ.ಡಿ.ಗೋಪಿನಾಥ್ ಉದ್ಘಾಟಿಸಿದರು.

ಸೊಸೈಟಿ ಸದಸ್ಯರಿಗೆ ಹಾಗೂ ಮಕ್ಕಳಿಗೆ ಭಗವದ್ಗೀತಾ ಶ್ಲೋಕ ಪಠಣ, ಮಹಿಳೆಯರಿಗೆ ರಂಗೋಲಿ ಸ್ಪರ್ಧೆ, ಮಹಿಳೆ ಮತ್ತು ಪುರುಷ ಸದಸ್ಯರಿಗೆ ಜನಪದ, ಭಾವಗೀತೆ, ದೇವರ ನಾಮ ಗೀತೆ ಸ್ಪರ್ಧೆ ಹಾಗೂ ವಿವಿಧ ಕ್ರೀಡೆ ಸ್ಪರ್ಧೆ ನಡೆಯಿತು.

ಡಿ.25ರಂದು ಕೃಷ್ಣಮೂರ್ತಿಪುರಂನಲ್ಲಿರುವ ಶ್ರೀ ರಾಮಮಂದಿರದಲ್ಲಿ ಸ್ಪರ್ಧಾ ವಿಜೇತರಿಗೆ ಬಹುಮಾನ ಹಾಗೂ ಪ್ರಮಾಣ ಪತ್ರ ನೀಡಲಾಗುವುದು. 2024ರ ಸಾಲಿನ ಜಿಲ್ಲಾ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಸದಸ್ಯರಿಗೆ ಸನ್ಮಾನ ಹಾಗೂ ಸೊಸೈಟಿ ಗ್ರಾಹಕರ ಸಂವಾದ ಕಾರ್ಯಕ್ರಮ ಆಯೋಜಿಸಲಾಗಿದೆ. ಅಗಸ್ತ್ಯ ಕ್ರೆಡಿಟ್ ಕೋ–ಆಪರೇಟಿವ್ ಸೊಸೈಟಿ ಉಪಾಧ್ಯಕ್ಷೆ ಎಂ.ಎಸ್.ಸೌಮ್ಯ, ಖಜಾಂಚಿ ಕೆ.ನಾಗರಾಜ, ನಿರ್ದೇಶಕ ಮಂಡಲಿ ಸದಸ್ಯರಾದ ಸಿ.ವಿ.ಪಾರ್ಥಸಾರಥಿ, ಎಂ.ಆರ್.ಬಾಲಕೃಷ್ಣ, ಹೆಚ್.ಪಿ.ಚೇತನ್, ಪಣಿರಾಜ್, ವಿಕ್ರಂ ಅಯ್ಯಂಗಾರ್, ಮಹಿಮ, ನಾಗಶ್ರೀ, ಶಿವರುದ್ರಪ್ಪ, ಸೊಸೈಟಿ ಸದಸ್ಯರು ಮತ್ತು ಸಿಬ್ಬಂದಿ ಹಾಜರಿದ್ದರು.

ನಿಧನ



ಮಹಾದೇವಸ್ವಾಮಿ

ಮೈಸೂರು, ಡಿ.17–ಚಿತ್ರ ಕಲಾವಿದರೂ ಆದ ಚಾಮರಾಜನಗರದ ನಿವಾಸಿ (ಮೂಲತಃ ಮೈಸೂರು) ಮಹಾದೇವಸ್ವಾಮಿ (63) ಅವರು ಇಂದು ನಿಧನರಾದರು. ಮೃತರು ಪತ್ನಿ ಶ್ರೀಮತಿ ಯಶೋದಮ್ಮ, ಪುತ್ರ ವಿನ್ಯಾಸ್ ಸೇರಿದಂತೆ ಅಪಾರ ಬಂಧು–ಬಳಗವನ್ನು ಅಗಲಿದ್ದಾರೆ. ಮೃತರ ಅಂತ್ಯಕ್ರಿಯೆಯು ನಾಳೆ (ಬುಧವಾರ) ಮೈಸೂರಿನ ಗಾಂಧಿನಗರದ ಆದಿ ಕರ್ನಾಟಕ ರುದ್ರಭೂಮಿಯಲ್ಲಿ ಮಧ್ಯಾಹ್ನ 12.30ಕ್ಕೆ ನೆರವೇರಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಮೈಸೂರಿನ ಜಯದೇವ ಆಸ್ಪತ್ರೆ ಆವರಣದಲ್ಲಿ ಡಾರ್ಮಿಟರಿ ನಿರ್ಮಾಣಕ್ಕೆ ಗುದ್ದಲಿಪೂಜೆ

ಮೈಸೂರು,ಡಿ.17(ಆರ್‌ಕೆ)– ಮೈಸೂರಿನ ಕೆಆರ್‌ಎಸ್ ರಸ್ತೆಯಲ್ಲಿರುವ ಶ್ರೀ ಜಯದೇವ ಹೃದ್ರೋಗ ಮತ್ತು ಸಂಶೋಧನಾ ಸಂಸ್ಥೆ ಆವರಣದಲ್ಲಿ ಒಳರೋಗಿಗಳ ಬಗ್ಗೆ ನಿಗಾ ವಹಿಸುವವರಿಗಾಗಿ 4 ಅಂತಸ್ತಿನ ಡಾರ್ಮಿಟರಿ ಕಟ್ಟಡ ನಿರ್ಮಾಣ ಕಾಮಗಾರಿ ಆರಂಭವಾಗಿದೆ.



ಶ್ರೀ ಜಯದೇವ ಹೃದ್ರೋಗ ಮತ್ತು ಸಂಶೋಧನಾ ಸಂಸ್ಥೆ ಪ್ರಭಾರ ನಿರ್ದೇಶಕ ಡಾ.ಕೆ.ಎಸ್.ರವೀಂದ್ರನಾಥ, 4.5 ಕೋಟಿ ರೂ. ಅಂದಾಜು ವೆಚ್ಚದಲ್ಲಿ ನಿರ್ಮಿಸಲುದ್ದೇಶಿಸಿರುವ ಡಾರ್ಮಿಟರಿ ಕಟ್ಟಡ ನಿರ್ಮಾಣ ಕಾಮಗಾರಿಗೆ ಗುದ್ದಲಿಪೂಜೆ ನೆರವೇರಿಸಿದರು.

ಶ್ರೀ ಜಯದೇವ ಹೃದ್ರೋಗ ಮತ್ತು ಸಂಶೋಧನಾ ಸಂಸ್ಥೆ ಪ್ರಭಾರ ನಿರ್ದೇಶಕ ಡಾ.ಕೆ.ಎಸ್.ರವೀಂದ್ರನಾಥ, 4.5 ಕೋಟಿ ರೂ. ಅಂದಾಜು ವೆಚ್ಚದಲ್ಲಿ ನಿರ್ಮಿಸಲುದ್ದೇಶಿಸಿರುವ ಡಾರ್ಮಿಟರಿ ಕಟ್ಟಡ ನಿರ್ಮಾಣ ಕಾಮಗಾರಿಗೆ ಗುದ್ದಲಿಪೂಜೆ ನೆರವೇರಿಸಿದರು.

ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಆಸ್ಪತ್ರೆಗೆ ದಾಖಲಾಗುವ ಹೃದ್ರೋಗಿಗಳ ಸಂಖ್ಯೆ ಹೆಚ್ಚುತ್ತಿದ್ದು, ಅವರ ಬಗ್ಗೆ ನಿಗಾ ವಹಿಸುವವರು ರಾತ್ರಿ ಉಳಿದುಕೊಳ್ಳಲು ಅನುವಾಗುವಂತೆ ಡಾರ್ಮಿಟರಿ ನಿರ್ಮಿಸಲಾಗುತ್ತಿದ್ದು, ಅದಕ್ಕಾಗಿ ಸಮಾಜ ಕಲ್ಯಾಣ ಇಲಾಖೆಯಿಂದ 2 ಕೋಟಿ ರೂ. ಅನುದಾನ ನೀಡುತ್ತಿದ್ದು, ಜಯದೇವ ಹೃದ್ರೋಗ ಆಸ್ಪತ್ರೆ ಆಂತರಿಕ ಸಂಪನ್ಮೂಲದಿಂದ ಇದರ ಖರ್ಚು ಮಾಡಲಾಗುತ್ತಿದೆ ಎಂದರು.

ನಾಲ್ಕು ಅಂತಸ್ತಿನ 80 ಹಾಸಿಗೆಯುಳ್ಳ ಕಟ್ಟಡದ ಕಾಮಗಾರಿಯನ್ನು ಒಂದು ವರ್ಷದಲ್ಲಿ ಪೂರ್ಣಗೊಳಿಸಲು ಗುತ್ತಿಗೆದಾರರಿಗೆ ತಿಳಿಸಲಾಗಿದೆ. ಆಸ್ಪತ್ರೆಯ ಇಂಜಿನಿಯರ್‌ಗಳು ಕಾಮಗಾರಿ ಉಸ್ತುವಾರಿ ನೋಡಿಕೊಳ್ಳಬೇಕು. ಅಲ್ಲಿ ಕುಡಿಯುವ ನೀರು, ವಿದ್ಯುತ್ ವ್ಯವಸ್ಥೆ, ಫ್ಯಾನ್, ಶೌಚಾಲಯ ಸೇರಿದಂತೆ ಮೂಲಸೌಕರ್ಯ ಒದಗಿಸಲಾಗುವುದು. ಪ್ರತೀದಿನ ಸರಾಸರಿ 500ರಿಂದ 600 ಮಂದಿ ರೋಗಿಗಳು ಆಸ್ಪತ್ರೆಯಲ್ಲಿ ಒಳರೋಗಿಗಳಾಗಿ ದಾಖಲಾಗಿ, ಚಿಕಿತ್ಸೆ ಪಡೆಯುತ್ತಿದ್ದಾರೆ.

ಗುದ್ದಲಿಪೂಜೆ ವೇಳೆ ಆಸ್ಪತ್ರೆ ವೈದ್ಯಕೀಯ ಅಧೀಕ್ಷಕ ಡಾ.ಕೆ.ಎಸ್.ಸದಾನಂದ, ಡಾ.ಹರ್ಷ ಬಸಪ್ಪ, ಡಾ.ಶ್ರೀಮಂತ, ಡಾ.ಶಿವಸ್ವಾಮಿ ಸೋಸಲೆ, ಡಾ.ದೇವರಾಜ್, ಡಾ.ಶ್ರೀನಿಧಿ ಹೆಗ್ಗಡೆ, ಡಾ.ಎಂ.ಎಂ.ಹರ್ಷ, ಡಾ.ಭಾರತಿ, ಡಾ.ರಜಿತ್, ಡಾ.ರಶ್ಮಿ, ನರ್ಸಿಂಗ್ ಸೂಪರಿಂಟೆಂಡೆಂಟ್ ಯೋಗಲಕ್ಷ್ಮಿ, ಹರೀಶ್‌ಕುಮಾರ್, ಸಾರ್ವಜನಿಕ ಸಂಪರ್ಕಾಧಿಕಾರಿ ವಾಣಿ ಮೋಹನ್, ಲೋಬೋ, ಸಾದಿಕ, ಚಂಪಕ, ಇಂಜಿನಿಯರ್‌ಗಳಾದ ಪ್ರಸಾದ್, ಸ್ವರೂಪ್, ವಿಜಯ್, ಗುರುಮೂರ್ತಿ, ನಾಗರಾಜು, ರಮೇಶ, ಸಯ್ಯದ್, ಮರಿಲಿಂಗಯ್ಯ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ರಾಯಚೂರು ಬಳಿ ಲಾರಿ ಪಲ್ಟಿಯಾಗಿ ಮೂವರು ಅಧಿಕಾರಿಗಳ ಸಾವು



ರಾಯಚೂರು, ಡಿ.17–ಲಾರಿ ಪಲ್ಟಿಯಾಗಿ ರಸ್ತೆ ಬದಿಯಲ್ಲಿ ನಿಂತವರ ಮೇಲೆ ಚೀಲಗಳು ಬಿದ್ದು, ಮೂವರು ಸ್ಥಳದಲ್ಲೇ ಮೃತಪಟ್ಟ ದಾರುಣ ಘಟನೆ ರಾಯಚೂರಿನ ಸಿಂಧನೂರು ಪಟ್ಟಣದಲ್ಲಿ ಸೋಮವಾರ ರಾತ್ರಿ ಸಂಭವಿಸಿದೆ.

ಸಿಂಧನೂರಿನ ಪಿಡಬ್ಲ್ಯೂಡಿ ಸಮೀಪ ಡಾಲರ್ಸ್ ಕಾಲೋನಿ ಕ್ರಾಸ್ ಬಳಿ ದುರ್ಘಟನೆ ಜರುಗಿದೆ. ಜವಳಗೇರಾ ಉಪವಿಭಾಗದ ಕಿರಿಯ ಎಂಜಿನಿಯರ್‌ಗಳಾದ ಮಲ್ಲಿಕಾರ್ಜುನ (29), ಶಿವರಾಜು (28), ಮೆಹಬೂಬ (30) ಮೃತಪಟ್ಟಿದ್ದಾರೆ. ಘಟನೆ ನಡೆದ ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ, ಪರಿಶೀಲನೆ ನಡೆಸಿದ್ದಾರೆ. ಲಾರಿ ಚಾಲಕನನ್ನು ಪೊಲೀಸರು ಬಂಧಿಸಿದ್ದಾರೆ. ಶಿವರಾಜ್ ಹಾಗೂ ಮಲ್ಲಿಕಾರ್ಜುನ ಲಿಂಗಸುಗೂರು ತಾಲೂಕು ಮಹೆಬೂಬ್ ಸಿಂಧನೂರು ಪಟ್ಟಣದವರು ಎಂದು ತಿಳಿದುಬಂದಿದೆ.





ಕನ್ನಡ ಸಾಹಿತ್ಯ ಸಮ್ಮೇಳನದ ಅಂಗವಾಗಿ ಮಂಗಳವಾರ ಮಂಡ್ಯದಲ್ಲಿ ನಡೆದ ಕನ್ನಡಕ್ಕಾಗಿ ಓಟ ಮ್ಯಾರಥಾನ್‌ಗೆ ಸಚಿವ ಚಲುವರಾಯಸ್ವಾಮಿ ಚಾಲನೆ ನೀಡಿದರು. ಈ ವೇಳೆ ಭಾರೀ ಸಂಖ್ಯೆಯಲ್ಲಿ ಪಾಲ್ಗೊಂಡಿದ್ದ ಕನ್ನಡದ ಅಭಿಮಾನಿಗಳು ಕುಣಿದು ಕುಪ್ಪಳಿಸಿದರಲ್ಲದೆ ಮೆರವಣಿಗೆಗೆ ಮೆರುಗು ತಂದರು.

ಮಂಡ್ಯದಲ್ಲಿ ಕನ್ನಡ ಸಾಹಿತ್ಯ ಸಮ್ಮೇಳನದ 'ಕನ್ನಡಕ್ಕಾಗಿ ಓಟ ಮ್ಯಾರಥಾನ್' ಸ್ಪರ್ಧೆಯಲ್ಲಿ ಸಾವಿರಾರೂ ಕನ್ನಡಾಭಿಮಾನಿಗಳು

87ನೇ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಸಕ್ಕರೆ ನಗರ ಸಜ್ಜು

ಮಂಡ್ಯ,ಡಿ.17– 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ನುಡಿ ಜಾತ್ರೆಗೆ ಸಕ್ಕರೆ ನಗರಿ ಮಂಡ್ಯ ಸಜ್ಜಾಗುತ್ತಿದ್ದು, ಸಮ್ಮೇಳನದ ಪ್ರಚಾರಕ್ಕಾಗಿ ಇಂದು ಕನ್ನಡಕ್ಕಾಗಿ ಓಟ ಎಂಬ ಘೋಷವಾಕ್ಯದೊಂದಿಗೆ ನಡೆದ ಮ್ಯಾರಥಾನ್ ಸ್ಪರ್ಧೆಯಲ್ಲಿ ಸಾವಿರಾರು ಮಂದಿ ಕನ್ನಡಿಗರು ಭಾಗವಹಿಸಿ ಗಮನ ಸೆಳೆದಿದ್ದಾರೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಎನ್.ಚಲುವರಾಯಸ್ವಾಮಿ ತಿಳಿಸಿದರು.

ಮಂಗಳವಾರ 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಅಂಗವಾಗಿ ಜಿಲ್ಲಾ ಕ್ರೀಡಾಂಗಣದಲ್ಲಿ ಹಮ್ಮಿಕೊಳ್ಳಲಾಗಿದ್ದ ಕನ್ನಡಕ್ಕಾಗಿ ಓಟ ಮ್ಯಾರಥಾನ್‌ಗೆ ಚಾಲನೆ ನೀಡಿ ಮಾತನಾಡಿದ ಅವರು, ಮ್ಯಾರಥಾನ್ ಸ್ಪರ್ಧೆಯಲ್ಲಿ ಭಾಗವಹಿಸಲು ಇಲ್ಲಿ ನೆರೆದಿರುವ ಜನತೆಯನ್ನು ನೋಡಿದರೆ ಖುಷಿ ಆಗುತ್ತಿದೆ. ಇಡೀ ರಾಜ್ಯದ ಜನ ಮಂಡ್ಯದ ಕಡೆ ತಿರುಗಿ ನೋಡುವಂತೆ ಪ್ರತಿಯೊಬ್ಬರೂ ಕನ್ನಡ ಸಾಹಿತ್ಯ ಸಮ್ಮೇಳನದಲ್ಲಿ ಭಾಗಿಯಾಗಿ, ಸಮ್ಮೇಳನವನ್ನು ಯಶಸ್ವಿಗೊಳಿಸಲು ಕೈಜೋಡಿಸಿ ಎಂದರು.

ಆದಿಚುಂಚನಗಿರಿ ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷ ಶ್ರೀ ನಿರ್ಮಲಾನಂದನಾಥ ಸ್ವಾಮೀಜಿ ಮಾತನಾಡಿ, ಇಂದು ಜಿಲ್ಲೆಯಲ್ಲಿ ನಡೆಯುತ್ತಿರುವ ಕನ್ನಡಕ್ಕಾಗಿ ಓಟ ಮ್ಯಾರಥಾನ್ ಸ್ಪರ್ಧೆಯು ಕನ್ನಡ ಸಾಹಿತ್ಯ ಸಮ್ಮೇಳನದ ವಿಶೇಷವಾದ ಕಾರ್ಯಕ್ರಮವಾಗಿದ್ದು, ಈ ಮೂಲಕ ಎಲ್ಲಾ ಕನ್ನಡಿಗರು ಒಂದಾಗಬೇಕು. ಕನ್ನಡಕ್ಕಾಗಿ ಕೈ ಎತ್ತು ನಿನ್ನ ಕೈ ಕಲ್ಪವೃಕ್ಷವಾಗುತ್ತೆ ಎಂದು ಕನ್ನಡಕ್ಕಾಗಿ ನಡೆಯುತ್ತಿರುವ ಈ ಓಟ ಯಶಸ್ವಿಯಾಗಲಿ ಎಂದು ಆಶೀರ್ವಚನ ನೀಡಿದರು.

ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ನಾಡೋಜ ಡಾ.ಮಹೇಶ್ ಜೋಶಿ ಮಾತನಾಡಿ, ಡಿಸೆಂಬರ್ 20, 21, 22 ರಂದು 3 ದಿನಗಳ ಕಾಲ ಕನ್ನಡ ಸಮ್ಮೇಳನವನ್ನು ಆಚರಿಸುತ್ತಿದ್ದು, ಇವತ್ತಿನ ಕನ್ನಡದ ಓಟ 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಯಶಸ್ವಿ ಓಟವಾಗಿದೆ. ಎಲ್ಲರೂ ಮಂಡ್ಯದ ಕನ್ನಡ ಹಿರಿಮೆಯನ್ನು ಹಾಗೂ ಕನ್ನಡದ ಅಭಿಮಾನವನ್ನು ತೋರ್ಪಡಿಸಬೇಕು ಎಂದರು.

ಚಿಕ್ಕಮಗಳೂರಿನ ಗೌರಿಗದ್ದೆ ಆಶ್ರಮದ ಶ್ರೀ ವಿನಯ್ ಗುರೂಜಿ ಮಾತನಾಡಿ, ಕನ್ನಡಕ್ಕಾಗಿ ಓಟ ಮ್ಯಾರಥಾನ್ ಸ್ಪರ್ಧೆ ಹಾಗೂ ಕನ್ನಡ ಸಾಹಿತ್ಯ ಸಮ್ಮೇಳನದ ಮೂಲಕ ಮಂಡ್ಯ ಜಿಲ್ಲೆಯು ಕನ್ನಡದ ಉಳಿವಿಗೆ ಸಾಕ್ಷಿಯಾಗಲಿ. ಕನ್ನಡ ನೆಲ, ಜಲ, ಭಾಷೆಯನ್ನು ಕಾಪಾಡುವ ಜವಾಬ್ದಾರಿ ಎಲ್ಲರ ಮೇಲಿದೆ ಕಲೆಯೊಂದಿಗೆ ಕನ್ನಡವನ್ನು ಬೆಳೆಸಿ ಎಂದು ಹೇಳಿದರು.

ಜಿಲ್ಲಾಧಿಕಾರಿ ಡಾ.ಕುಮಾರ ಸ್ವಾಗತಿಸಿದರು. ನಟರಾದ ಡಾಲಿ ಧನಂಜಯ್, ನೀನಾಸಂ ಸತೀಶ್, ಸಪ್ತಮಿಗೌಡ ಅವರುಗಳು ಮ್ಯಾರಥಾನ್ ಸ್ಪರ್ಧೆ ಹಾಗೂ ಕನ್ನಡ ಸಾಹಿತ್ಯ ಸಮ್ಮೇಳನಕ್ಕೆ ಒಳ್ಳೆಯದಾಗಲಿ ಎಂದು ಶುಭ ಹಾರೈಸಿದರು.

ಬಿಜಿಎಸ್ ಮಠದ ಪುರುಷೋತ್ತಮಾನಂದಶ್ರೀ, ಶಾಸಕರಾದ ಪಿ.ರವಿಕುಮಾರ್, ದಿನೇಶ್ ಗೂಳಿಗೌಡ, ಮಧು ಜಿ.ಮಾದೇಗೌಡ, ಎಡಿಜಿಪಿ ಅಲೋಕ್ ಕುಮಾರ್, ಐಜಿಪಿ ರವಿಕಾಂತೇಗೌಡ, ಎಸ್ಪಿ ಮಲ್ಲಿಕಾರ್ಜುನ ಬಾಲದಂಡಿ, ಜಿ.ಪಂ. ಸಿಇಓ ಶೇಖ್ ತನ್ವೀರ್ ಆಸಿಫ್, ಅಪರ ಜಿಲ್ಲಾಧಿಕಾರಿ ಡಾ.ಶಿವಾನಂದಮೂರ್ತಿ, ನಗರಸಭೆ ಅಧ್ಯಕ್ಷ ಎಂ.ವಿ.ಪ್ರಕಾಶ್, ಮೈಷುಗರ್ ಅಧ್ಯಕ್ಷ ಸಿ.ಡಿ. ಗಂಗಾಧರ್, ಮುಡಾ ಅಧ್ಯಕ್ಷ ನಯೀಮ್, ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಉಪಾಧ್ಯಕ್ಷ ವೆಂಕಟರಮಣೇಗೌಡ (ಸ್ಟಾರ್ ಚಂದ್ರು) ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

ತೆಂಗಿನ ಕೀಟ ಬಾಧೆಗೆ ಪರೋಪ ಜೀವಿಗಳ ಪ್ರಯೋಗ

ವಿಧಾನಪರಿಷತ್‌ನಲ್ಲಿ ದಿನೇಶ್ ಗೂಳಿಗೌಡ ಪ್ರಶ್ನೆಗೆ ಸಚಿವ ಎಸ್.ಎಸ್.ಮಲ್ಲಿಕಾರ್ಜುನ ಉತ್ತರ


ಮಲ್ಲಿಕಾರ್ಜುನ

ಮಂಡ್ಯ/ ಬೆಳಗಾವಿ: ತೆಂಗಿನ ಬೆಳೆಗೆ ಬಾಧಿಸುವ ಕಪ್ಪು ತಲೆ ಹುಳುಗಳ ನಿಯಂತ್ರಣಕ್ಕೆ ಗೋನಿಯೋಜಸ್ ಪರೋಪ ಜೀವಿಗಳನ್ನು ಉತ್ಪಾದನೆ ಮಾಡಿ ರೈತರಿಗೆ ಉಚಿತವಾಗಿ ವಿತರಣೆ ಮಾಡಲಾಗುತ್ತಿದೆ ಎಂದು ತೋಟಗಾರಿಕೆ ಸಚಿವ ಎಸ್.ಎಸ್. ಮಲ್ಲಿಕಾರ್ಜುನ ತಿಳಿಸಿದ್ದಾರೆ.

ವಿಧಾನಪರಿಷತ್ ಕಲಾಪದಲ್ಲಿ ಶಾಸಕ ದಿನೇಶ ಗೂಳಿಗೌಡರ ಚುಕ್ಕಿ ಗುರುತಿನ ಪ್ರಶ್ನೆಗೆ ಉತ್ತರಿಸಿದರು. ಸುಮಾರು 20 ವರ್ಷಗಳಿಂದ ತೆಂಗಿನ ಮರಗಳನ್ನು ಬಾಧಿಸುತ್ತಿರುವ ಕಪ್ಪು ತಲೆ ಹುಳು ಬಾಧೆ ಮತ್ತು ಎಳನೀರಿಗೆ ಬಾಧಿಸುತ್ತಿರುವ ನುಸಿ ಬಾಧೆಯನ್ನು ನಿಯಂತ್ರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ಎಂದು ಶಾಸಕ ದಿನೇಶ್ ಗೂಳಿಗೌಡ ಅವರು ಪ್ರಶ್ನೆ ಮಾಡಿದ್ದರು.

ಇದಕ್ಕೆ ಉತ್ತರಿಸಿದ ಸಚಿವರು ತೋಟಗಾರಿಕೆ ಬೆಳೆಗಳ ಕೀಟ ಮತ್ತು ರೋಗಗಳ ಸಮಗ್ರ ನಿಯಂತ್ರಣ ಯೋಜನೆಯಲ್ಲಿ ಇಲಾಖೆಯ 23 ಪ್ರಯೋಗಾಲಯಗಳಲ್ಲಿ ಗೋನಿಯೋಜಸ್ ಪರೋಪ ಜೀವಿಗಳನ್ನು ಉತ್ಪಾದನೆ ಮಾಡಲಾಗುತ್ತಿದೆ 2023–24ನೇ ಸಾಲಿನಲ್ಲಿ 1.30 ಕೋಟಿ ರೂ. ವಿನಿಯೋಗಿಸಿ 314.77ಲಕ್ಷ ಪರೋಪಜೀವಿಗಳನ್ನು ಉತ್ಪಾದಿಸಿ 10,473 ಫಲಾನುಭವಿಗಳಿಗೆ ವಿತರಿಸಿದ್ದು, ಅವರು ತಮ್ಮ 4,663.26 ಹೆಕ್ಟೇರ್ ಪ್ರದೇಶದಲ್ಲಿ ಇದನ್ನು ಪ್ರಯೋಗಿಸಿದ್ದಾರೆ. ಈ ಸಾಲಿಗೆ 140 ಕೋಟಿ ರೂ. ಅನುದಾನ ಬಿಡುಗಡೆಯಾಗಿದ್ದು, ಈವರೆಗೂ 85ಲಕ್ಷ ರೂ.ಗಳನ್ನು ವಿನಿಯೋಗಿಸಲಾಗಿದೆ. 205.81 ಲಕ್ಷ ಪರೋಪಜೀವಿಗಳನ್ನು ಉತ್ಪಾದಿಸಿ 1,260 ಹೆಕ್ಟೇರ್ ಪ್ರದೇಶದಲ್ಲಿ ಬಳಕೆ ಮಾಡಲಾಗುತ್ತಿದೆ. ಅಲ್ಲದೇ ಗೋನಿಯೋಜಸ್ ಪರೋಪ ಜೀವಿಗಳನ್ನು ಉತ್ಪಾದಿಸಿ, ಉಚಿತವಾಗಿ ವಿತರಿಸಲು 50 ಲಕ್ಷ ರೂ. ಅನುದಾನ ನೀಡುವಂತೆ ಕೋರಿ ತೆಂಗು ಅಭಿವೃದ್ಧಿ ಮಂಡಳಿಗೆ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದು ಸಚಿವರು ತಿಳಿಸಿದರು.

ಸಹಾಯಧನ ವಿತರಣೆ: ತೋಟಗಾರಿಕೆ ಬೆಳೆಗಳ ಕೀಟ ಮತ್ತು ರೋಗಗಳ ಸಮಗ್ರ ನಿಯಂತ್ರಣ ಯೋಜನೆಯಡಿ, ಸಸ್ಯ ಸಂರಕ್ಷಣಾ ಔಷಧಿಗಳ ಖರೀದಿಗಾಗಿ ಪ್ರತಿ ಹೆಕ್ಟೇರ್‌ಗೆ ತಗಲುವ ಘಟಕ ವೆಚ್ಚದ ಶೇ. 75 ರಂತೆ ಸಾಮಾನ್ಯ ವರ್ಗದ ರೈತರಿಗೆ ತಲಾ 7,500 ರೂ.ಗಳನ್ನು, ಪರಿಶಿಷ್ಟ ಜಾತಿ ಮತ್ತು ಪಂಗಡದ ರೈತರಿಗೆ ಶೇ.90ರಷ್ಟು ಎಂದರೆ ತಲಾ 9000ರೂ. ಗಳ ಸಹಾಯಧನ ನೀಡಲಾಗುತ್ತಿದೆ. ಈ ವರ್ಷ ಈ ಕಾರ್ಯಕ್ರಮಕ್ಕೆ 3.60 ಕೋಟಿ ರೂ. ಅನುದಾನ ಒದಗಿಸಲಾಗಿದೆ. ಮಾತ್ರವಲ್ಲದೇ, ರಾಷ್ಟ್ರೀಯ ತೋಟಗಾರಿಕೆ ಮಿಷನ್‌ನಲ್ಲಿ ಇದೇ ಕಾರ್ಯಕ್ಕೆ ಶೇ.30 ಸಹಾಯಧನ ನೀಡಲಾಗುತ್ತದೆ ಪ್ರತಿ ಹೆಕ್ಟೇರ್‌ಗೆ 1200 ರೂ.ಗಳಂತೆ ಗರಿಷ್ಠ 4 ಹೆಕ್ಟೇರ್‌ಗೆ 4,800 ರೂ. ಸಹಾಯಧನ ಪಡೆಯಬಹುದಾಗಿದೆ. ಈ ವರ್ಷ, 4.02 ಕೋಟಿ ರೂ.ಗಳ ಅನುದಾನ ಒದಗಿಸಲಾಗಿದೆ ಇದುವರೆಗೆ 2.89 ಕೋಟಿ ರೂ. ಅನುದಾನ ವಿನಿಯೋಗಿಸಿ, 25,406 ಹೆಕ್ಟೇರ್ ಪ್ರದೇಶದಲ್ಲಿ ಔಷಧಿಗಳನ್ನು ಸಿಂಪಡಣೆ ಮಾಡಲು 7,814 ಫಲಾನುಭವಿಗಳಿಗೆ ಸಹಾಯಧನ ವಿತರಿಸಲಾಗಿದೆ ಎಂದು ತೋಟಗಾರಿಕೆ ಸಚಿವರು ವಿವರಿಸಿದರು.


ದಿನೇಶ್ ಗೂಳಿಗೌಡ

ಕ್ಯಾತಘಟ್ಟ ಗ್ರಾಪಂ ಅಧ್ಯಕ್ಷರಾಗಿ ಪ್ರಕಾಶ್, ಉಪಾಧ್ಯಕ್ಷೆಯಾಗಿ ಶೈಲಜ ಆಯ್ಕೆ



ಭಾರತೀನಗರ.ಡಿ.17– ಇಲ್ಲಿಗೆ ಸಮೀಪದ ಕ್ಯಾತಘಟ್ಟ ಗ್ರಾಮಪಂಚಾಯಿತಿ ನೂತನ ಅಧ್ಯಕ್ಷರಾಗಿ ತೊರೆಚಾಕನಹಳ್ಳಿ ಪ್ರಕಾಶ್, ಉಪಾಧ್ಯಕ್ಷೆಯಾಗಿ ಮಠದದೊಡ್ಡಿ ಶೈಲಜ ಅವಿರೋಧವಾಗಿ ಆಯ್ಕೆಗೊಂಡಿದ್ದಾರೆ.

ಈ ಹಿಂದೆ ಇದ್ದ ಅಧ್ಯಕ್ಷ, ಉಪಾಧ್ಯಕ್ಷರು ರಾಜೀನಾಮೆ ನೀಡಿದ ಹಿನ್ನೆಲೆಯಲ್ಲಿ ಮಂಗಳವಾರ ನಡೆದ ಚುನಾವಣೆಯಲ್ಲಿ ಅಧ್ಯಕ್ಷ ಸ್ಥಾನಕ್ಕೆ ಪ್ರಕಾಶ್, ಉಪಾಧ್ಯಕ್ಷ ಸ್ಥಾನಕ್ಕೆ ಶೈಲಜ ಅವರನ್ನು ಹೊರತುಪಡಿಸಿ ಬೇರೆ ಯಾರು ನಾಮಪತ್ರ ಸಲ್ಲಿಸದ ಕಾರಣ ಪ್ರಕಾಶ್ ಮತ್ತು ಶೈಲಜ ಅವರನ್ನು ಅವಿರೋಧವಾಗಿ ಆಯ್ಕೆ ಮಾಡಲಾಯಿತು.

ಈ ಸಂದರ್ಭದಲ್ಲಿ ನೂತನ ಅಧ್ಯಕ್ಷ ಪ್ರಕಾಶ್ ಮಾತನಾಡಿ, ನನ್ನನ್ನು ಅಧ್ಯಕ್ಷ ಸ್ಥಾನಕ್ಕೆ ಗ್ರಾಮದ ಮುಖಂಡರು ಮತ್ತು ಸದಸ್ಯರು ಆಯ್ಕೆಮಾಡಿದ್ದಾರೆ. ಯಾವುದೇ ಚ್ಯುತಿ ಬಾರದ ರೀತಿಯಲ್ಲಿ ಕೆಲಸ ನಿರ್ವಹಿಸುತ್ತೇನೆ ಗ್ರಾಮದ ಅಭಿವೃದ್ಧಿಗೆ ಶ್ರಮಿಸುತ್ತೇನೆ ಎಂದರು.

ಇದೇ ವೇಳೆ ಗ್ರಾ.ಪಂ ಮಾಜಿ ಅಧ್ಯಕ್ಷ ಕ್ಯಾತಘಟ್ಟದ ಗಿರೀಶ್, ಮುಖಂಡರಾದ ರವಿಕುಮಾರ್, ತಿಮ್ಮರಾಜು, ಗಿರೀಶ್, ತೊರೆಚಾಕನಹಳ್ಳಿ ಚನ್ನೇಗೌಡ, ಮರಿಸ್ವಾಮಿ, ಪಿಣ್ಣಯ್ಯ, ಗ್ರಾಪಂ ಸದಸ್ಯರಾದ ಶಿವನಂಜಪ್ಪ ರಾಜೇಶ್, ಸಿದ್ದಲಕ್ಷ್ಮಮ್ಮ, ಮಹಾಲಕ್ಷ್ಮಿ, ವೆಂಕಟೇಶ್, ಚನ್ನಾಜಮ್ಮ, ಲಕ್ಷ್ಮಿ, ಜ್ಯೋತಿ, ನಿರೂಷ ಸೇರಿದಂತೆ ಹಲವರಿದ್ದರು.

ಲಲಿತಾನಾಯಕ್ ಬಡಾವಣೆಗೆ ಮಸಿ ಬಳಿಯುವ ಯತ್ನ: ಮಾಜಿ ಸಚಿವೆ ಕಿಡಿ

ಮಂಡ್ಯ, ಡಿ.17– ಬಿ.ಟಿ.ಲಲಿತಾನಾಯಕ್ ಬಡಾವಣೆಯಲ್ಲಿ ಅಪಾರ ಪ್ರಮಾಣದ ಅಕ್ರಮ ಮದ್ಯ ಸಂಗ್ರಹಣೆ ಮಾಡಲಾಗಿದ್ದು, ಪೊಲೀಸ್ ವಶಕ್ಕೆ ಪಡೆದಿದ್ದಾರೆ ಎಂಬ ಸುಳ್ಳು ಸುದ್ದಿ ಹರಡಿದವರು ಯಾರು ಎಂಬುದನ್ನು ತಿಳಿಸಬೇಕು ಎಂದು ಮಾಜಿ ಸಚಿವೆ ಬಿ.ಟಿ.ಲಲಿತಾನಾಯಕ್ ಆಗ್ರಹಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಅಕ್ರಮ ಮದ್ಯ ವಶಪಡಿಸಿಕೊಂಡ ವಿಷಯವಾಗಿ ಸುಳ್ಳು ಸುದ್ದಿ ಹರಡಲಾಗಿದೆ. ಚಿಕ್ಕೌಡನದೊಡ್ಡಿ ಗ್ರಾಮದಲ್ಲಿ ವಶಪಡಿಸಿಕೊಂಡ ಮದ್ಯದ ಸುದ್ದಿಯನ್ನು ಬಿ.ಟಿ.ಲಲಿತಾನಾಯಕ್ ಬಡಾವಣೆಯಲ್ಲಿ ವಶಪಡಿಸಿಕೊಂಡಿದ್ದಾರೆ ಎಂದು ಹೇಳುವ ಮೂಲಕ ಬಡಾವಣೆಯ ಹೆಸರಿಗೆ ಮಸಿ ಬಳಿದಿದ್ದಾರೆ ಎಂದು ಕಿಡಿಕಾರಿದರು.

ಸುಳ್ಳು ಸುದ್ದಿ ಹರಡಿದವರು ಪತ್ರಕರ್ತರಲ್ಲ ಎಂಬುದು ಸ್ಪಷ್ಟತೆ ಪಡೆದ ಮಾಜಿ ಸಚಿವೆ ಬಿ.ಟಿ.ಲಲಿತಾನಾಯಕ್ ಅವರು ವಿನಾ ಕಾರಣ ಸುಳ್ಳು ಸುದ್ದಿ ಹರಡಿದವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು.

ಗೋಷ್ಠಿಯಲ್ಲಿ ಮೇಲುಕೋಟೆ ಬ್ಲಾಕ್ ಕಾಂಗ್ರೆಸ್‌ನ ಬೀದಿಬದಿ ವ್ಯಾಪಾರಿಗಳ ಅಧ್ಯಕ್ಷ ಪುಟ್ಟಸ್ವಾಮಿ, ಎಸ್‌ಪಿಐ ಜಿಲ್ಲಾಧ್ಯಕ್ಷ ಶೀನಾನಾಯಕ್, ವಕೀಲ ಎ.ರಾಮು ಇದ್ದರು.

3 ಹಸುಗಳ ನಿಗೂಢ ಸಾವು: ಪರಿಹಾರಕ್ಕೆ ಮನವಿ



ಕೆಆರ್.ಪೇಟೆ,ಡಿ.17– ತಾಲೂಕಿನ ಕಸಬಾ ಹೋಬಳಿಯ ಹರಿಹರಪುರ ಗ್ರಾಮದ ಬಡ ರೈತ ಮಹಿಳೆ ದೇವಮ್ಮ ಜೀವನೋಪಾಯಕ್ಕಾಗಿ ಸಾಕಿದ್ದ ಮೂರು ಹಸುಗಳು ನಿಗೂಢವಾಗಿ ಸಾವನ್ನಪ್ಪಿದ್ದು, ಪರಿಹಾರಕ್ಕಾಗಿ ಆಗ್ರಹಿಸಲಾಗಿದೆ

ದೇವಮ್ಮ ಪತಿಯನ್ನು ಕಳೆದುಕೊಂಡು ಸ್ವಾಭಿಮಾನಿಯಾಗಿ ಕಷ್ಟಪಟ್ಟು ಹಸುಗಳನ್ನು ಸಾಕಿಕೊಂಡು ಜೀವನ ಸಾಗಿಸುತ್ತಿದ್ದಾರೆ. ಶನಿವಾರ ಜಮೀನಿನ ಬಳಿ ಹಸುಗಳನ್ನು ಮೇಯಿಸಿಕೊಂಡು ಬಂದು ಸಂಜೆ ಹಾಲು ಕರೆದು ನಂತರ ಮೇವು ಹಾಕಿ ಮಲಗಿದ್ದಾರೆ. ಬೆಳಿಗ್ಗೆ ಎದ್ದು ನೋಡಲಾಗಿ ಮೂರು ಹಸುಗಳು ಸಾವನ್ನಪ್ಪಿವೆ. ಇದನ್ನು ಕಂಡ ದೇವಮ್ಮನಿಗೆ ದಿಕ್ಕೇ ತೋಚದಂತಾಗಿದ್ದು, ಆಕಾಶವೇ ಕಳಚಿ ಬಿದ್ದಂತಾಗಿ ರೋದನೆ ವ್ಯಕ್ತಪಡಿಸುತ್ತಿದ್ದಾರೆ.

ಈ ಕುರಿತು ಪ್ರತಿಕ್ರಿಯೆ ನೀಡಿರುವ ತಾಲೂಕು ಪಶುವೈದ್ಯ ಇಲಾಖೆಯ ಸಹಾಯಕ ನಿರ್ದೇಶಕ ಡಾ.ಹೆಚ್.ಎಸ್.ದೇವರಾಜು ಅವರು ಮೂರೂ ಹಸುಗಳು ಒಂದೇ ಸಮಯದಲ್ಲಿ ಸಾವನ್ನಪ್ಪಲು ನಿಖರವಾದ ಕಾರಣ ತಿಳಿದು ಬಂದಿಲ್ಲ. ವೈದ್ಯಕೀಯ ಪರೀಕ್ಷೆ ವರದಿ ಬಂದ ನಂತರ ನಿಖರ ಕಾರಣ ಗೊತ್ತಾಗಲಿದೆ ನಂತರ ಸೂಕ್ತ ಪರಿಹಾರ ದೊರಕಿಸಿಕೊಡಲು ಕ್ರಮ ವಹಿಸಲಾಗುವುದು ಎಂದು ತಿಳಿಸಿದರು.

ಸಾಹಿತ್ಯ ಸಮ್ಮೇಳನ: ಸಂಚಾರ ಮಾರ್ಗದಲ್ಲಿ ಮಾರ್ಪಾಡು



ಮಂಡ್ಯ: ಮಂಡ್ಯ ನಗರದಲ್ಲಿ 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನ ನಡೆಯುತ್ತಿರುವುದರಿಂದ ಡಿ.20ರಿಂದ ಡಿ.23ರವರೆಗೆ ಸಮ್ಮೇಳನ ನಡೆಯುವ ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಾಹನ ಸಂಚಾರಕ್ಕೆ ಪರ್ಯಾಯ ಮಾರ್ಗವನ್ನು ಸೂಚಿಸಿ ಜಿಲ್ಲಾಧಿಕಾರಿ ಡಾ.ಕುಮಾರ್ ಆದೇಶ ಹೊರಡಿಸಿದ್ದಾರೆ.

ಈ ಬದಲಿ ಮಾರ್ಗವು ಡಿ.20ರ ಬೆಳಗ್ಗೆ 5ಗಂಟೆಯಿಂದ ಡಿ.23ರ ಬೆಳಗ್ಗೆ 6 ಗಂಟೆವರೆಗೆ ಚಾಲನೆಯಲ್ಲಿರುತ್ತದೆ. ಸಾಹಿತ್ಯ ಸಮ್ಮೇಳನಕ್ಕೆ ಆಗಮಿಸುವವರಿಗೆ ಮತ್ತು ನಿರ್ಗಮಿಸುವವರಿಗೆ ಪ್ರತ್ಯೇಕ ವಾಹನ ಸಂಚಾರ ಮಾರ್ಗವನ್ನು ನಿಗದಿಪಡಿಸಲಾಗಿದೆ. ಇದೇ ರೀತಿ ಸಮ್ಮೇಳನದಲ್ಲಿ ಭಾಗವಹಿಸುವ ಗಣ್ಯ ವ್ಯಕ್ತಿಗಳಿಗೂ ಪರ್ಯಾಯ ಮಾರ್ಗಗಳನ್ನು ನಿಗದಿಗೊಳಿಸಲಾಗಿದ್ದು, ಆಯಾ ಮಾರ್ಗದಲ್ಲೇ ಸಂಚರಿಸಬೇಕೆಂದು ಅವರು ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿದ್ದಾರೆ.

ಬೆಂಗಳೂರು ಮಾರ್ಗದಿಂದ ಮಂಡ್ಯ ನಗರಕ್ಕೆ ಬರುವ ಎಲ್ಲಾ ವಾಹನಗಳು ಸ್ಯಾಂಜೋ ಆಸ್ಪತ್ರೆಯ ಮುಂಭಾಗದಲ್ಲಿ ಎಡಕ್ಕೆ ತೆಗೆದುಕೊಳ್ಳದೆ ಕಡ್ಡಾಯವಾಗಿ ಎಕ್ಸ್‌ಪ್ರೆಸ್‌ವೇ ಮುಖಾಂತರವೇ ಸಂಚರಿಸಿ ಚಿಕ್ಕಮಂಡ್ಯ ಹತ್ತಿರದ ನಿರ್ಗಮನದ ಮೂಲಕ ಅಥವಾ ಇಂಡುವಾಳು ನಿರ್ಗಮನದ ಮೂಲಕ ಮಂಡ್ಯ ನಗರವನ್ನು ಪ್ರವೇಶಿಸಬೇಕು. ಆಂಬ್ಯುಲೆನ್ಸ್ ಸೇರಿದಂತೆ ಇತರೇ ತುರ್ತು ಸೇವೆಗಳ ವಾಹನಗಳಿಗೆ ಮಾರ್ಗ ಬದಲಾವಣೆ ಅನ್ವಯಿಸುವುದಿಲ್ಲ.

ಚಿಕ್ಕಮಂಡ್ಯದಿಂದ ಹನಕೆರೆವರೆಗಿನ ಎರಡೂ ಬದಿಯ ರಸ್ತೆಯಲ್ಲಿ ದ್ವಿಮುಖ ಸಂಚಾರವನ್ನು ನಿರ್ಬಂಧಿಸಲಾಗಿದೆ. ಎಕ್ಸ್‌ಪ್ರೆಸ್‌ವೇ ದಿಕ್ಕಿನ ಮಾರ್ಗದಂತೆಯೇ ಇಲ್ಲಿ ಸಂಚರಿಸಬೇಕು. ಮದ್ದೂರು ಮತ್ತು ಶ್ರೀರಂಗಪಟ್ಟಣ ಕಡೆಯಿಂದ ಸರ್ವೀಸ್ ರಸ್ತೆಯಲ್ಲಿ ಬರುವ ವಾಹನಗಳು(ನಿರ್ಬಂಧಿತ ವಾಹನಗಳನ್ನು ಹೊರತುಪಡಿಸಿ) ಎಕ್ಸ್‌ಪ್ರೆಸ್‌ವೇನಲ್ಲೇ ಸಂಚರಿಸಬೇಕು.

ಡಿ.20ರಂದು ಸಮ್ಮೇಳನದ ಮೆರವಣಿಗೆ ನಡೆಯುವುದರಿಂದ ಅಂದು ಬೆಳಗ್ಗೆ 6 ಗಂಟೆಯಿಂದ 11 ಗಂಟೆವರೆಗೆ ಮಂಡ್ಯ ನಗರದ ಎಂಸಿ ರಸ್ತೆಯ ಮಂಡ್ಯ ವಿವಿಯಿಂದ ಉಮ್ಮಡಹಳ್ಳಿ ಗೇಟ್‌ವರೆಗೆ ಎಲ್ಲಾ ರೀತಿಯ ವಾಹನಗಳ ಏಕಮುಖ ಮತ್ತು ದ್ವಿಮುಖ ವಾಹನ ಸಂಚಾರವನ್ನು ನಿರ್ಬಂಧಿಸಲಾಗಿದೆ. ಈ ವಾಹನಗಳು ಬೆಂಗಳೂರು ಮೈಸೂರು ಎಕ್ಸ್‌ಪ್ರೆಸ್‌ವೇಯ ಸರ್ವೀಸ್ ರಸ್ತೆ ಹಳೆ ಎಂಸಿ ರಸ್ತೆ ಹಾಗೂ ಮರಿಹಾಡದೊಡ್ಡಿ, ಅರಕೇಶ್ವರ ದೇವಸ್ಥಾನದ ಮುಂಭಾಗದ ರಸ್ತೆ ಮುಖಾಂತರ ಮಂಡ್ಯ ಮಳವಳ್ಳಿ ರಸ್ತೆ ಇನ್ನಿತರ ರಸ್ತೆ ಮೂಲಕ ಸಂಚರಿಸುವಂತೆ ಜಿಲ್ಲಾಧಿಕಾರಿಗಳು ಸೂಚಿಸಿದ್ದಾರೆ.

ಮಳವಳ್ಳಿಯಲ್ಲಿ ಕೇಂದ್ರ ಸಚಿವ ಕುಮಾರಸ್ವಾಮಿ ಹುಟ್ಟುಹಬ್ಬ ಆಚರಣೆ



ಮಳವಳ್ಳಿಯಲ್ಲಿ ಕೇಂದ್ರ ಸಚಿವ ಹೆಚ್‌ಡಿಕೆ ಹುಟ್ಟುಹಬ್ಬವನ್ನು ಆಚರಿಸಲಾಯಿತು.

ಮಳವಳ್ಳಿ: ಕೇಂದ್ರ ಸಚಿವ ಹಾಗೂ ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಅವರ ಜನ್ಮದಿನವನ್ನು ಜೆಡಿಎಸ್ ಮುಖಂಡರು ಮತ್ತು ಕಾರ್ಯಕರ್ತರು ಆಚರಿಸಿದರು.

ಮಾಜಿ ಶಾಸಕ ಡಾ.ಕೆ.ಅನ್ನದಾನಿ ಅವರ ನೇತೃತ್ವದಲ್ಲಿ ಗಂಗಾಧರೇಶ್ವರ ಸ್ವಾಮಿ ದೇವಾಲಯದಲ್ಲಿ ಕುಮಾರಸ್ವಾಮಿ ಅವರಿಗೆ ಶುಭ ಕೋರಿ ವಿಶೇಷ ಪೂಜೆ ಸಲ್ಲಿಸಲಾಯಿತು. ನಂತರ ಇಲ್ಲಿನ ಸರ್ಕಾರಿ ಆಸ್ಪತ್ರೆಯ ರೋಗಿಗಳಿಗೆ ಹಾಲು ಹಣ್ಣುಗಳನ್ನು ವಿತರಿಸಲಾಯಿತು. ನಂತರ ವೃತ್ತದ ಬಳಿ 25 ಕೆ.ಜಿ ತೂಕದ ಕೇಕ್ ಕತ್ತರಿಸಿ ಪರಸ್ಪರ ಸಿಹಿ ಹಂಚುವ ಮೂಲಕ ಕುಮಾರಸ್ವಾಮಿ ಅವರ ಹುಟ್ಟುಹಬ್ಬದ ಸಂಭ್ರಮ ಆಚರಿಸಲಾಯಿತು.

ಈ ವೇಳೆ ಮಾತನಾಡಿದ ಮಾಜಿ ಶಾಸಕ ಅನ್ನದಾನಿ ಅವರು, ಎರಡು ಬಾರಿ ರಾಜ್ಯದ ಮುಖ್ಯಮಂತ್ರಿಯಾಗಿ ಬಡವರು ದೀನದಲಿತರು ರೈತರ ಪರವಾದ ಆಡಳಿತ ನಡೆಸಿದ ಹೆಚ್.ಡಿ.ಕುಮಾರಸ್ವಾಮಿ ಅವರು ರೈತರ 25 ಸಾವಿರ ಕೋಟಿ ಸಾಲ ಮನ್ನಾ ಮಾಡಿದ ಹೆಗ್ಗಳಿಕೆ ಅವರದಾಗಿದೆ ಎಂದರು.

ಪ್ರಸ್ತುತ ಕೇಂದ್ರದ ಕೈಗಾರಿಕಾ ಸಚಿವರಾಗಿರುವ ಕುಮಾರಸ್ವಾಮಿ ಅವರ ಹುಟ್ಟುಹಬ್ಬದ ಸಂದರ್ಭದಲ್ಲಿ ಅವರಿಗೆ ಶುಭ ಕೋರಿ ಮಳವಳ್ಳಿ ಜೆಡಿಎಸ್ ಕಾರ್ಯಕರ್ತರು ಅಭಿಮಾನಿಗಳ ಪರವಾಗಿ ವಿಶೇಷ ಪೂಜೆ ಸಲ್ಲಿಸಿದ್ದು ದೇವರು ಕುಮಾರಸ್ವಾಮಿ ಅವರಿಗೆ ಆಯುಷ್ಯ ಆರೋಗ್ಯ ನೀಡಿ ಇನ್ನೂ ಹೆಚ್ಚಿನ ಅಧಿಕಾರ ದೊರಕಿಸಲಿ ಎಂದು ಶುಭ ಹಾರೈಸಿದರು.

ಪುರಸಭಾಧ್ಯಕ್ಷ ಪುಟ್ಟಸ್ವಾಮಿ, ಉಪಾಧ್ಯಕ್ಷ ಬಸವರಾಜು, ಸದಸ್ಯರಾದ ಸಿದ್ದರಾಜು, ಪ್ರಶಾಂತ್, ಕುಮಾರ್, ನಾಗೇಶ್, ತಾಲೂಕು ಜೆಡಿಎಸ್ ಅಧ್ಯಕ್ಷ ವಿಶ್ವನಾಥ್, ಜೆಡಿಎಸ್ ಯುವ ಘಟಕ ಜಿಲ್ಲಾ ಅಧ್ಯಕ್ಷ ರವಿ, ತಾಲೂಕು ಅಧ್ಯಕ್ಷ ಶ್ರೀಧರ್, ಎಸ್ಸಿ–ಎಸ್ಟಿ ಘಟಕದ ಅಧ್ಯಕ್ಷ ಕಾಂತರಾಜು, ಮಹಿಳಾ ಘಟಕದ ಅಧ್ಯಕ್ಷೆ ಪದ್ಮಮ್ಮ, ಟಿಎಪಿಸಿಎಂಎಸ್ ನಿರ್ದೇಶಕ ರಾಜೇಶ್, ಮುಖಂಡರಾದ ನಾಗರಾಜು, ಸದಾನಂದ, ಶಂಕರೇಗೌಡ, ಪುಟ್ಟ ಬುದ್ದಿ, ಅಂಕನಾಥ್, ಕಂಬರಾಜು ಮತ್ತಿತರರು ಹಾಜರಿದ್ದರು.

ಕೃಷಿಕ ಸಮಾಜದ ಚುನಾವಣೆ ರದ್ದಿಗೆ ಆಗ್ರಹ

ಶ್ರೀರಂಗಪಟ್ಟಣ: ಸರ್ಕಾರದ ಮಾರ್ಗಸೂಚಿಗಳಂತೆ ಕೃಷಿಕ ಸಮಾಜದ ಚುನಾವಣೆ ನಡೆಸದೆ ಏಕಪಕ್ಷೀಯವಾಗಿ ಆಯ್ಕೆ ಪ್ರಕ್ರಿಯೆ ನಡೆಸಿದ್ದು, ಕೂಡಲೇ ನೂತನ ಸಮಿತಿಯನ್ನು ರದ್ದು ಮಾಡಬೇಕೆಂದು ರೈತಸಂಘದ ಕಾರ್ಯಕರ್ತರು ಕೃಷಿ ಇಲಾಖೆ ಅಧಿಕಾರಿಗಳನ್ನು ಆಗ್ರಹಿಸಿದರು.

ಪಟ್ಟಣದ ಕೃಷಿ ಇಲಾಖೆ ಅಧಿಕಾರಿಗಳ ಕಚೇರಿಯಲ್ಲಿ ಸಹಾಯಕ ನಿರ್ದೇಶಕರನ್ನು ತರಾಟೆಗೆ ತೆಗೆದುಕೊಂಡ ರೈತ ಮುಖಂಡರು, ಯಾವುದೇ ಪ್ರಚಾರವಿಲ್ಲದೆ, ಷೇರುದಾರರಿಗೆ ಮಾಹಿತಿ ನೀಡದೆ, ಚುನಾವಣಾ ದಿನಾಂಕವನ್ನೂ ತಿಳಿಸದೆ ಚುನಾವಣೆ ಪ್ರಕ್ರಿಯೆ ನಡೆಸಿ, ಕೃಷಿಕ ಸಮಾಜದ ಷೇರುದಾರರನ್ನು ವಂಚಿಸಿದ್ದೀರಿ ಎಂದು ವಾಗ್ದಾಳಿ ನಡೆಸಿದರು.

ಚುನಾವಣೆ ಪ್ರಕ್ರಿಯೆ ಬಗ್ಗೆ ಯಾವುದೇ ಮಾಹಿತಿ ನೀಡಿಲ್ಲ, ಎಲ್ಲಿ ಷೇರು ಕಟ್ಟಬೇಕು ಎಂಬ ಮಾಹಿತಿಯೂ ಇಲಾಖೆಯಲ್ಲಿ ಇಲ್ಲ, ಸೂಚನಾ ಫಲಕದಲ್ಲಿಯೂ ಹಾಕಿಲ್ಲ. ಮಾಧ್ಯಮಗಳಲ್ಲಿ ಪ್ರಚಾರವನ್ನೂ ನೀಡಿಲ್ಲ. ಎಲ್ಲವನ್ನೂ ಮರೆಮಾಚಿ ಗೌಪ್ಯವಾಗಿ ಚುನಾವಣೆ ಪ್ರಕ್ರಿಯೆ ಮಾಡಿರುವುದು ಕೃಷಿಕ ಸಮಾಜದ ಷೇರುದಾರರಿಗೆ ಮಾಡಿರುವ ವಂಚನೆ. ಆದ್ದರಿಂದ ನೀವು ಅವಿರೋಧವಾಗಿ ಆಯ್ಕೆ ಮಾಡಿ ನಾಮಫಲಕದಲ್ಲಿ ಹಾಕಿರುವ ಕೃಷಿಕ ಸಮಾಜದ ಸದಸ್ಯರ ಸಮಿತಿಯನ್ನು ರದ್ದು ಮಾಡಬೇಕು. ನಾವು ಚುನಾವಣೆ ಪ್ರಕ್ರಿಯೆ ಬಗ್ಗೆ ಕೇಳುವ ಎಲ್ಲಾ ಮಾಹಿತಿ ಮತ್ತು ನಕಲನ್ನು ದೃಢೀಕರಿಸಿ ನೀಡಬೇಕೆಂದು ರೈತ ಮುಖಂಡ ಕಿರಂಗೂರು ಪಾಪು ಆಗ್ರಹಿಸಿದರು.

ಅರ್ಥಶಾಸ್ತ್ರ ತನ್ನ ಅಸ್ತಿತ್ವ ಕಳೆದುಕೊಳ್ಳುತ್ತಿದೆ: ಪ್ರೊ.ಶಿವಚಿತ್ತಪ್ಪ ಆತಂಕ

ಮಂಡ್ಯ,ಡಿ.17– ಇತ್ತೀಚಿನ ದಿನಗಳಲ್ಲಿ ಅರ್ಥಶಾಸ್ತ್ರ ಯಾಕೋ ತನ್ನ ಅಸ್ತಿತ್ವವನ್ನು ಕಳೆದುಕೊಳ್ಳುತ್ತಿದೆ ಎಂದು ಮಂಡ್ಯ ವಿಶ್ವವಿದ್ಯಾಲಯ ಕುಲಪತಿ ಪ್ರೊ.ಕೆ.ಶಿವಚಿತ್ತಪ್ಪ ಆತಂಕ ವ್ಯಕ್ತಪಡಿಸಿದರು.

ನಗರದಲ್ಲಿರುವ ಕರ್ನಾಟಕ ಸಂಘದ ಕೆವಿಎಸ್‌ಎಸ್ ಭವನದಲ್ಲಿ ಜಿಲ್ಲಾ ಪದವಿ ಪೂರ್ವ ಕಾಲೇಜುಗಳ ಅರ್ಥಶಾಸ್ತ್ರ ಉಪನ್ಯಾಸಕರ ಮತ್ತು ಪ್ರಾಂಶುಪಾಲರ ವೇದಿಕೆ ಆಯೋಜಿಸಿದ್ದ ಶೈಕ್ಷಣಿಕ ಕಾರ್ಯಾಗಾರ–ವಿಚಾರಸಂಕಿರಣ–ಪ್ರತಿಭಾ ಪುರಸ್ಕಾರ ಮತ್ತು ಸನ್ಮಾನ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

1999ರಿಂದ ನಾನು ಮೈಸೂರು ವಿವಿಯ ಸರ್ ಎಂ.ವಿ.ಸ್ನಾತಕೋತ್ತರ ಕೇಂದ್ರ ತೂಬಿನಕೆರೆಯಲ್ಲಿ ಪ್ರಾಧ್ಯಾಪಕವಾಗಿ ಸೇವೆ ಸಲ್ಲಿಸುತ್ತಿದ್ದೀನಿ, ಮೊದಲಿದ್ದಾಗ 60–60 ಜನ ಒಟ್ಟು 120 ವಿದ್ಯಾರ್ಥಿಗಳು ಇರುತ್ತಿದ್ದರು, ಈಗ ಯಾರೂ ಇಲ್ಲ. ನೋವಿನ ಸಂಗತಿಯಾಗಿದೆ. ಎಂ.ಎ.ಅರ್ಥಶಾಸ್ತ್ರ ವಿಭಾಗದಲ್ಲಿ ಯಾರೂ ಇಲ್ಲ ಎಂದು ನುಡಿದರು.

ಸಾಕಷ್ಟು ಡಿಮ್ಯಾಂಡ್ ಇದ್ದ ಅರ್ಥಶಾಸ್ತ್ರ ಇತ್ತೀಚೆಗೆ ತನ್ನ ಅಸ್ತಿತ್ವವನ್ನು ಕಳೆದುಕೊಳ್ಳುತ್ತಿದೆ, 120 ವಿದ್ಯಾರ್ಥಿಗಳಿದ್ದರು, ಕಳೆದ 2 ವರ್ಷಗಳಿಂದ ವಿದ್ಯಾರ್ಥಿಗಳಿಲ್ಲ, ಇದಕ್ಕೆ ಏನು ಕಾರಣ. ಕೇವಲ ಮಂಡ್ಯ ಸರ್ ಎಂ.ವಿ. ಸ್ನಾತಕೋತ್ತರ ಕೇಂದ್ರದ ವಿದ್ಯಾರ್ಥಿಗಳಿಗೆನೋ ಸಮಸ್ಯೆಯೇ ಅಥವಾ ಇಡೀ ಕರ್ನಾಟಕದ ಅರ್ಥಶಾಸ್ತ್ರದ ಸಮಸ್ಯೆಯೇನೋ, ಇಡೀ ಭಾರತದೇಶದ ಸಮಸ್ಯೆನೋ ಎಂಬ ಪ್ರಶ್ನೆ ನಮ್ಮ ಮುಂದೆ ಬರುತ್ತೆ ಎಂದು ಹೇಳಿದರು.

ನಾನೀಗ ಭಾರತ ಸರ್ಕಾರದ ನ್ಯಾಕ್ ತಂಡ ಚೇರ್ಮನ್ ಆಗಿದ್ದೇನೆ, ಕಾಲೇಜುಗಳಿಗೆ ಎ,ಬಿ ಗ್ರೇಡ್ ನೀಡಲು ಭೇಟಿ ನೀಡುವ ಜವಾಬ್ದಾರಿ ಹುದ್ದೆಯಾಗಿದೆ. ಉತ್ತರ ದಕ್ಷಿಣ ತಂಡಗಳಾಗಿ ವಿಭಾಗಿಸಿದ್ದಾರೆ, ನಾವು ನಾರ್ತ್‌ನಲ್ಲಿ 15 ವಿಜಿಟ್ ಆಗಿದೆ, ಎಲ್ಲಾ ಕಾಲೇಜುಗಳಲ್ಲಿ ಕೂಡ 10–12ಜನ ಕೆಲವು ಕಾಲೇಜುಗಳಲ್ಲಿ 5 ಜನ ಅರ್ಥಶಾಸ್ತ್ರ ಅಧ್ಯಯನ ಮಾಡುವ ವಿದ್ಯಾರ್ಥಿಗಳಿದ್ದರು ಎಂದು ತಿಳಿಸಿದರು.

ಏನು ಸಮಸ್ಯೆ ಎಂದು ವಿದ್ಯಾರ್ಥಿಗಳನ್ನು ಕೇಳಿದಾಗ ಅಸ್ಸಾಂ, ಅರುಣಾಚಲಪ್ರದೇಶ, ಆಂಧ್ರಪ್ರದೇಶ, ಮೇಘಾಲಯದಲ್ಲಿ ಅರ್ಥಶಾಸ್ತ್ರ ವಿಭಾಗಕ್ಕೆ ವಿದ್ಯಾರ್ಥಿಗಳ ಸಮಸ್ಯೆಗಳು ಇವೆ, ಪಶ್ಚಿಮ ಬಂಗಾಳದಲ್ಲಿ ಸಮಸ್ಯೆ ಇಲ್ಲ, ವಿದ್ಯಾರ್ಥಿಗಳನ್ನು ಕೇಳಿದ್ದು, ಅರ್ಥಶಾಸ್ತ್ರ ಕಷ್ಟ ಎಂದು ಉತ್ತರಿಸಿದ್ದನ್ನು ವಿವರಿಸಿದರು.



ಕಾರ್ಯಕ್ರಮದಲ್ಲಿ ಸಾಧಕರಿಗೆ ಪ್ರತಿಭಾ ಪುರಸ್ಕಾರ ನೀಡಿ ಮತ್ತು ಸನ್ಮಾನಿಸಿ ಗೌರವಿಸಲಾಯಿತು.

ಅರ್ಥಶಾಸ್ತ್ರ ವಿಷಯ ಅಧ್ಯಯನಕ್ಕೆ ಪಿಯುಸಿಯಿಂದಲೇ ಅಭ್ಯಾಸವಾಗಲಿ, ಪದವಿ ತರಗತಿಗಳಲ್ಲಿ ಅರ್ಥಶಾಸ್ತ್ರ ಓದುವಂತೆ ಆಸಕ್ತಿ ಹೆಚ್ಚಿಸಿ, ಅಂತರರಾಷ್ಟ್ರೀಯ ವಿಷಯದ ವಿಜ್ಞಾನವಿದು, ಉಪನ್ಯಾಸಕರು ವಿದ್ಯಾರ್ಥಿಗಳಿಗೆ ಪದವಿ, ಸ್ನಾತಕೋತ್ತರ ವಿಷಯಗಳಲ್ಲಿ ಅರ್ಥಶಾಸ್ತ್ರ ಓದುವಂತೆ ಪ್ರೇರಣೆ ನೀಡಿ ಎಂದು ಸಲಹೆ ನೀಡಿದರು.

ಬಳಿಕ ಮಾತನಾಡಿದ ಜಿಲ್ಲಾ ಪದವಿ ಪೂರ್ವ ಕಾಲೇಜುಗಳ ಅರ್ಥಶಾಸ್ತ್ರ ಉಪನ್ಯಾಸಕರ ಮತ್ತು ಪ್ರಾಂಶುಪಾಲರ ವೇದಿಕೆ ಅಧ್ಯಕ್ಷ ಹನುಮಂತಯ್ಯ, ಅರ್ಥಶಾಸ್ತ್ರ ಉಪನ್ಯಾಸಕರ ವೇದಿಕೆ ವಿಶಿಷ್ಟವಾಗಿ, ವಿಭಿನ್ನವಾಗಿ, ಕ್ರಿಯಾತ್ಮಕವಾಗಿ ರಚನಾತ್ಮಕವಾಗಿ ಪ್ರತಿವರ್ಷ ಕಾರ್ಯಕ್ರಮವನ್ನು ಆಯೋಜಿಸಿ, ಫಲಿತಾಂಶವನ್ನು ಮತ್ತಷ್ಟು ಉನ್ನತೀಕರಿಸುವಂತಹ ಕಾರ್ಯ ಮಾಡಿಕೊಂಡು ಬರಲಾಗುತ್ತಿದೆ ಎಂದರು.

ಸರಿಯಾದಂತಹ ಮಾರ್ಗದರ್ಶಕ ಗುರುಗಳು ಸಿಕ್ಕರೆ ಏನು ಬೇಕಾದರೂ ಮಾಡಬಹುದು. 128 ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಲಭಿಸುತ್ತಿದೆ, 5 ಮಂದಿ 100 ಅಂಕ ಪಡೆದವರಿದ್ದಾರೆ, 99 ಅಂಕ ಪಡೆದವರು 4 ಮಂದಿ ಇದ್ದಾರೆ, 90ಕ್ಕಿಂತ ಹೆಚ್ಚು ಅಂಕ ಪಡೆದವರು ಸಾಕಷ್ಟು ಮಂದಿ ಇದ್ದಾರೆ ಎಂದರು.

ಇದೇ ಸಂದರ್ಭದಲ್ಲಿ ನೂತನ ಪ್ರಶ್ನೆಕೋಶ ಮತ್ತು ಮಾದರಿ ಪ್ರಶ್ನೆಪತ್ರಿಕೆಯ ನೀಲನಕ್ಷೆ ಅನ್ವಯಿಕತೆ ಕುರಿತು ಅರ್ಥಶಾಸ್ತ್ರ ಉಪನ್ಯಾಸಕ ಡಾ.ಎನ್.ಹರೀಶ್ ದಿಕ್ಸೂಚಿ ಕೌಶಲಜ್ಞಾನ ಭಾಷಣ ಮಾಡಿದರು. ಬಳಿಕ ಪ್ರತಿಭಾ ಪುರಸ್ಕಾರ ಮತ್ತು ಸನ್ಮಾನ ಕಾರ್ಯಕ್ರಮ ನಡೆಯಿತು.

ಕಾರ್ಯಕ್ರಮದಲ್ಲಿ ಶಾಲಾ ಶಿಕ್ಷಣ ಇಲಾಖೆಯ ಪದವಿಪೂರ್ವ ಉಪನಿರ್ದೇಶಕ ಸಿ.ಚಲುವಯ್ಯ, ವಿಶ್ರಾಂತ ಪ್ರಾಧ್ಯಾಪಕ ಪ್ರೊ ಬಿ.ಎಸ್.ಬೋರೇಗೌಡ, ಪ್ರಾಂಶುಪಾಲರಾದ ಭೈರೇಶ್, ನಾರಾಯಣ, ಬಿ.ಹನುಮಂತು, ಎಂ.ಶಿವರಾಜು, ವಿ.ಕೆ.ಆನಂದ, ವೇದಿಕೆ ಕಾರ್ಯದರ್ಶಿ ಚಂದ್ರಲಿಂಗು, ಖಜಾಂಚಿ ಕೆ.ಶ್ರೀನಿವಾಸ್ ಮತ್ತಿತರರಿದ್ದರು.

ಆರೋಗ್ಯ ಇಲಾಖೆಯಲ್ಲಿನ 32870 ವಿವಿಧ ಹುದ್ದೆಗಳ ಭರ್ತಿ

ಬೆಳಗಾವಿ,ವಿಧಾನಮಂಡಲ, ಡಿ.17 (ಕೆಎಂಶಿ)– ಆರೋಗ್ಯ ಇಲಾಖೆಯಲ್ಲಿ ಖಾಲಿ ಇರುವ 32,870 ವಿವಿಧ ಹುದ್ದೆಗಳನ್ನು ಭರ್ತಿ ಮಾಡಲಾಗುವುದೆಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ದಿನೇಶ್ ಗುಂಡೂರಾವ್ ವಿಧಾನ ಪರಿಷತ್‌ನಲ್ಲಿ ಇಂದು ತಿಳಿಸಿದ್ದಾರೆ.

ಪ್ರಶ್ನೋತ್ತರ ವೇಳೆಯಲ್ಲಿ ಡಾ.ಎಂ.ಜಿ. ಮುಳೆ ಅವರ ಪ್ರಸ್ತಾವಕ್ಕೆ ಉತ್ತರಿಸಿದ ಸಚಿವರು, ಖಾಲಿ ಇರುವ ಹುದ್ದೆಗಳಲ್ಲಿ ಶೇ.30ರಷ್ಟು ಗ್ರೂಪ್ 'ಡಿ', ಶೇ.45ರಷ್ಟು ವೈದ್ಯಕೀಯೇತರ ವರ್ಗದ ಹುದ್ದೆಗಳನ್ನು ಒಟ್ಟಾರೆ ಶೇ.75ಕ್ಕೆ ಮೀರದಂತೆ ಭರ್ತಿ ಮಾಡಲಾಗುವುದು ಎಂದರು. ಜಿಲ್ಲಾ ಮತ್ತು ತಾಲೂಕು ಆಸ್ಪತ್ರೆಗಳಿಗೆ ಜಿಲ್ಲಾಧಿಕಾರಿಗಳ ಅನುಮೋದನೆ ಪಡೆದು ಮೊದಲು ಹೊರಗುತ್ತಿಗೆ ಆಧಾರದ ಮೇಲೆ ನೇಮಿಸಲಾಗುವುದು. ಆಸ್ಪತ್ರೆಗಳಲ್ಲಿ ಖಾಲಿ ಇರುವ ತಜ್ಞ ಮತ್ತು ಸಾಮಾನ್ಯ ಕರ್ತವ್ಯ ವೈದ್ಯ ಅಧಿಕಾರಿಗಳನ್ನು ಕೆಲವು ಷರತ್ತಿಗೆ ಒಳಪಟ್ಟು ಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಲು ಜಿಲ್ಲಾಡಳಿತಕ್ಕೆ ಅನುಮತಿ ನೀಡಲಾಗಿದೆ.

ಇಲಾಖೆ ಮುಖಾಂತರ ಸೇವಾ ನಿರತ ಸ್ನಾತಕೋತ್ತರ ವ್ಯಾಸಂಗ ಪೂರೈಸಿ ಬರುವ



ದಿನೇಶ್ ಗುಂಡೂರಾವ್

ತಜ್ಞ ವೈದ್ಯರನ್ನು ಸರಿಸಮಾನ ಹುದ್ದೆಗೆ ನೇಮಿಸಲಾಗುತ್ತಿದೆ.

ಅಲ್ಲದೆ, ಇಲಾಖೆಯಲ್ಲಿ ಖಾಲಿ ಇರುವ 120 ತಜ್ಞ ವೈದ್ಯರು ಹಾಗೂ 100 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಹುದ್ದೆಗಳನ್ನು ನೇರ ನೇಮಕಾತಿ ಮುಖಾಂತರ ಭರ್ತಿ ಮಾಡಲಾಗುವುದು, ಇದರಿಂದ ರೋಗಿಗಳಿಗೆ ಅಡಚಣೆ ಆಗದಂತೆ ಚಿಕಿತ್ಸೆ ನೀಡಲಾಗುತ್ತಿದೆ. ಫಾರ್ಮಸಿ ಅಧಿಕಾರಿಯ 400 ಹುದ್ದೆ, ಕಿರಿಯ ವೈದ್ಯಾಧಿಕಾರಿ, ಪ್ರಯೋಗಶಾಲಾ ತಾಂತ್ರಿಕ ಅಧಿಕಾರಿಯ 150 ಹುದ್ದೆ, ವಿಕಿರಣಶಾಸ್ತ್ರದ 8 ಹುದ್ದೆಗಳನ್ನು ನೇರ ನೇಮಕಾತಿಯಡಿ ಭರ್ತಿ ಮಾಡಲಾಗುವುದು. ಅಲ್ಲದೆ, ಇಲಾಖೆಯಲ್ಲಿ ಖಾಲಿ ಇರುವ 9,871 ಅರೆ ವೈದ್ಯಕೀಯ ಹುದ್ದೆಗಳ ಭರ್ತಿಗೆ ಅನುಮತಿ ನೀಡುವಂತೆ ಆರ್ಥಿಕ ಇಲಾಖೆಯನ್ನು ಕೋರಲಾಗಿದೆ ಎಂದರು.

ಕೈಗಾರಿಕಾ ಪ್ರದೇಶಗಳ ಸಿಎ ನಿವೇಶನಗಳ ಪಾರದರ್ಶಕ ವಿತರಣೆ

● ಬೃಹತ್ ಹಾಗೂ ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ಸ್ಪಷ್ಟನೆ ● ಮೀಸಲಾತಿ ಹೊರತು ಸ್ವಜನ ಪಕ್ಷಪಾತಕ್ಕೆ ಅವಕಾಶವಿಲ್ಲ

ಬೆಳಗಾವಿ,ವಿಧಾನಮಂಡಲ, ಡಿ.17 (ಕೆಎಂಶಿ)–ಕೈಗಾರಿಕಾ ಪ್ರದೇಶಗಳಲ್ಲಿ ಸಾರ್ವಜನಿಕ ಹಿತಾಸಕ್ತಿ ಉದ್ದೇಶಕ್ಕೆ ಮೀಸಲಿಟ್ಟ ಸಿ.ಎ. ನಿವೇಶನಗಳನ್ನು ಪಾರದರ್ಶಕ ಮತ್ತು ನಿಯಮಗಳಿಗೆ ಅನುಸಾರ ಹಂಚಿಕೆ ಮಾಡಲಾಗುತ್ತಿದೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ ವಿಧಾನಪರಿಷತ್‌ನಲ್ಲಿ ಇಂದು ಸ್ಪಷ್ಟಪಡಿಸಿದ್ದಾರೆ.

ನಿವೇಶನಗಳ ಹಂಚಿಕೆಯಲ್ಲಿ ಎಸ್ಸಿ–ಎಸ್‌ಟಿ ಸಮುದಾಯಗಳ ಅರ್ಹರಿಗೂ ಅವಕಾಶ ಸಿಗಬೇಕೆಂಬ ಮೀಸಲಾತಿ ಕಡ್ಡಾಯಗೊಳಿಸಲಾಗಿದ್ದು, ಸ್ವಜನ ಪಕ್ಷಪಾತವಾಗಲಿ, ಅಕ್ರಮವಾಗಲಿ ನಡೆದಿಲ್ಲ ಎಂದು ಹೇಳಿದ್ದಾರೆ.

ಸಿ.ಟಿ.ರವಿ ಪ್ರಸ್ತಾವಕ್ಕೆ ಉತ್ತರಿಸಿದ ಅವರು, ಕೈಗಾರಿಕಾ ಪ್ರದೇಶಗಳಲ್ಲಿ ಶಾಲೆ, ಆಸ್ಪತ್ರೆ, ವಸತಿ ಸಮುಚ್ಚಯಗಳು, ಬ್ಯಾಂಕ್, ಪೆಟ್ರೋಲ್ ಬಂಕ್, ಕ್ಯಾಂಟೀನ್, ಸಮುದಾಯ ಭವನ, ಆರ್ ಅಂಡ್ ಡಿ ಮತ್ತು ನಾವೀನ್ಯತಾ ಕೇಂದ್ರಗಳ ಉದ್ದೇಶಗಳಿಗೆ ಸಿ.ಎ. ನಿವೇಶನಗಳನ್ನು ಮೀಸಲಿಡಲಾಗಿದೆ. ಹೋಟೆಲ್ ಸಹಾ ಇದೇ ನಿಯಮದಡಿ ಬರಲಿದ್ದು, ಒಬ್ಬರಿಗೆ



ಎಂ.ಬಿ.ಪಾಟೀಲ

ಒಂದು ಸಿ.ಎ. ನಿವೇಶನ ಮಾತ್ರ ಹಂಚಿಕೆ ಮಾಡಬೇಕೆಂಬ ನಿರ್ಬಂಧ ಇಲ್ಲ, ಅರ್ಹ ಸಂಸ್ಥೆಗಳನ್ನು ಪಾರದರ್ಶಕವಾಗಿ ಆಯ್ಕೆ ಮಾಡಲಾಗುತ್ತದೆ ಎಂದರು.

ಸಿ.ಎ. ನಿವೇಶನಗಳ ಹಂಚಿಕೆಗೆ ಸಂಬಂಧಿಸಿದಂತೆ ಪ್ರಮುಖ ರಾಜ್ಯ ಪತ್ರಿಕೆಗಳು ಹಾಗೂ ಆನ್‌ಲೈನ್ ಮೂಲಕವೂ ಜಾಹೀರಾತು ವ್ಯವಸ್ಥೆ ಜಾರಿಗೆ ತಂದಿದ್ದು, ಒಟ್ಟು 93 ಕಡೆಗೆ ಜಾಹೀರಾತು ನೀಡಲಾಗಿತ್ತು.

ಇನ್ನು 39 ಸಿಎ ನಿವೇಶನಗಳು ಖಾಲಿ ಇವೆ: 42 ಸಿ.ಎ. ನಿವೇಶನಗಳಿಗೆ ಒಂದೊಂದೇ ಅರ್ಜಿ ಬಂದಿದ್ದವು, ಇವುಗಳನ್ನು ತಿರಸ್ಕರಿಸಲಾಗಿದೆ, ಎರಡು ಸಿ.ಎ. ನಿವೇಶನಗಳನ್ನು ಉದ್ಯಮಿಗಳು ಸರ್ಕಾರಕ್ಕೆ ಹಿಂದಿರುಗಿಸಿದ್ದಾರೆ, ಇನ್ನೂ 39 ನಿವೇಶನಗಳು ಉಳಿದಿವೆ. ಈ ಹಿಂದೆ ಕೈಗಾರಿಕಾ ಸಚಿವರೇ ಸಿ.ಎ. ನಿವೇಶನಗಳ ಹಂಚಿಕೆಯ ಅಂತಿಮ ನಿರ್ಧಾರ ತೆಗೆದುಕೊಳ್ಳುತ್ತಿದ್ದರು, ಪ್ರಸ್ತುತ ಕೆಐಎಡಿಬಿ ಸಿಇಒ ನೇತೃತ್ವದ ಉನ್ನತ ಸಮಿತಿ ರಚಿಸಿದ್ದು, 95 ಎಕರೆ ಜಾಗದಲ್ಲಿ ಇನ್ನೂ 152 ನಿವೇಶನಗಳಿವೆ. ಬಿಜೆಪಿ ಸರ್ಕಾರವು ಏರೋಸ್ಪೇಸ್ ಮತ್ತು ಡಿಫೆನ್ಸ್ ಪಾರ್ಕ್‌ಗೆ ಸೇರಿದ ಜಾಗದಲ್ಲಿ ಒಂದು ಶಿಕ್ಷಣ ಸಂಸ್ಥೆಗೆ ಜಮೀನು ಕೊಟ್ಟಿದ್ದರಿಂದ ಬೊಕ್ಕಸಕ್ಕೆ 135 ಕೋಟಿ ರೂ. ನಷ್ಟವಾಗಿದೆ, ಇಂತಹ ಹಂಚಿಕೆಗಳಲ್ಲಿ ಪ್ರತಿಪಕ್ಷ ರಾಜಕೀಯ ಮಾಡಿದರೆ, ನಮಗೂ ರಾಜಕೀಯ ಮಾಡಲು ಬರುತ್ತದೆ ಎಂದು ತಿರುಗೇಟು ನೀಡಿದರು.

ಭಾರತಿ ಶೆಟ್ಟಿ ಅವರ ಮತ್ತೊಂದು ಪ್ರಸ್ತಾವಕ್ಕೆ ಉತ್ತರಿಸಿದ ಸಚಿವರು, ಕೈಗಾರಿಕಾ ಉದ್ದೇಶಕ್ಕೆ ಜಮೀನನ್ನು ಸ್ವಾಧೀನ ನಂತರ ಆಯಾ ಪ್ರದೇಶದ ಮಾರ್ಗಸೂಚಿ ಬೆಲೆ ಆಧರಿಸಿ ರೈತರಿಗೆ ಆರ್‌ಟಿಜಿಎಸ್ ಮೂಲಕ ನೇರ ಪರಿಹಾರ ಪಾವತಿಸಲಾಗುತ್ತಿದೆ. ಮಧ್ಯವರ್ತಿಗಳು ಹಾಗೂ ಜಮೀನಿನ ಜಿಪಿಎ ಹೊಂದಿದವರಿಗೆ ಹಣ ವರ್ಗಾವಣೆ ವ್ಯವಸ್ಥೆ ಇಲ್ಲ, ನಿಯಮಗಳ ಪ್ರಕಾರ ರೈತರು ಮತ್ತು ಉದ್ಯಮಿಗಳ ಜಂಟಿ ಸಹಭಾಗಿತ್ವಕ್ಕೆ ಅವಕಾಶವಿಲ್ಲ, ಪರಿಹಾರ ಬೇಡ ಎನ್ನುವವರಿಗೆ ಅಭಿವೃದ್ಧಿಪಡಿಸಿದ ಪ್ರದೇಶದಲ್ಲಿ ನಿವೇಶನ ನೀಡಲು ನಿಯಮಗಳಲ್ಲಿ ಅವಕಾಶವಿದೆ ಎಂದರು.

ವಾರದಲ್ಲಿ ಬೆಂಗಳೂರು ಎರಡನೇ ವಿಮಾನ ನಿಲ್ದಾಣದ ಚಿತ್ರಣ ಲಭ್ಯ



ಟಿ.ಎನ್.ಜವರಾಯಿಗೌಡರ ಪ್ರಸ್ತಾವಕ್ಕೆ ಉತ್ತರಿಸಿದ ಸಚಿವರು, ಬೆಂಗಳೂರು ನಾಗರಿಕರು ಮತ್ತು ಉದ್ಯಮಿಗಳ ಉಪಯೋಗಕ್ಕೆ 2ನೇ ವಿಮಾನ ನಿಲ್ದಾಣ ಅಭಿವೃದ್ಧಿಪಡಿಸಲಾಗುವುದು, ಇದಕ್ಕಾಗಿ ಮೂರ್‍ನಾಲ್ಕು ಸ್ಥಳಗಳನ್ನು ಗುರುತಿಸಿದ್ದು, ಐಡೆಕ್ ಸಂಸ್ಥೆ ಅಧ್ಯಯನ ನಡೆಸುತ್ತಿದೆ, ಇನ್ನೊಂದು ವಾರದಲ್ಲಿ ಸ್ಪಷ್ಟ ಚಿತ್ರಣ ಸಿಗಲಿದೆ, ನಂತರ, ಭಾರತೀಯ ವಿಮಾನ ನಿಲ್ದಾಣಗಳ ಪ್ರಾಧಿಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗುವುದು, ಸಂಸ್ಥೆ ಸ್ಥಳವನ್ನು ಆಖೈರುಗೊಳಿಸುತ್ತದೆ, ಇದರಲ್ಲಿ ತಮ್ಮ ಹಸ್ತಕ್ಷೇಪ ಇರುವುದಿಲ್ಲ ಎಂದು ಎಂ.ಬಿ.ಪಾಟೀಲ್ ತಿಳಿಸಿದರು. ಪ್ರಯಾಣಿಕರ ದಟ್ಟಣೆ, ಕೈಗಾರಿಕಾ ಸಾಗಾಣಿಕೆ, ಸ್ಥಳದ ಭೌಗೋಳಿಕ ಲಕ್ಷಣ ಇತ್ಯಾದಿಗಳನ್ನು ಪರಿಗಣಿಸಿ, ವಿಮಾನ ನಿಲ್ದಾಣ ಪ್ರಾಧಿಕಾರ ಸ್ಥಳವನ್ನು ಪರಿಶೀಲಿಸಿ, ಅಂತಿಮ ನಿರ್ಧಾರ ಕೈಗೊಳ್ಳಲಿದೆ ಎಂದು ಪಾಟೀಲ್ ಹೇಳಿದರು.

ಸ್ಥಳ ಆಖೈರಾದ ನಂತರವಷ್ಟೇ ಭೂಸ್ವಾಧೀನ ಪ್ರಕ್ರಿಯೆ ಶುರುವಾಗಲಿದೆ, ಆ ಪ್ರದೇಶದ ಮಾರ್ಗಸೂಚಿ ದರದ ಅನ್ವಯ ಜಮೀನು ಕಳೆದುಕೊಳ್ಳುವ ರೈತರಿಗೆ ಸೂಕ್ತ ಪರಿಹಾರ ನೀಡಲಾಗುವುದು ಎಂದು ಹೇಳಿದರು.

ಆನ್‌ಲೈನ್ ಮೂಲಕ ನೀಟ್ ಪರೀಕ್ಷೆ ಸಂಬಂಧ ಶೀಘ್ರ ನಿರ್ಧಾರ

ನವದೆಹಲಿ, ಡಿ.17– ವೈದ್ಯಕೀಯ ಪ್ರವೇಶ ಪರೀಕ್ಷೆ ನೀಟ್–ಯುಜಿ ಅನ್ನು ಆನ್‌ಲೈನ್ ಮೂಲಕ ಮಾಡಬೇಕೆ ಅಥವಾ ಭೌತಿಕ ರೂಪದಲ್ಲೇ ಇರಬೇಕೆ ಎನ್ನುವುದು ಶೀಘ್ರದಲ್ಲೇ ನಿರ್ಧಾರವಾಗಲಿದೆ ಎಂದು ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಮಂಗಳವಾರ ಹೇಳಿದ್ದಾರೆ. ಯಾವ ಮಾದರಿಯ ಪರೀಕ್ಷೆ ಉತ್ತಮ ಎನ್ನುವುದರ ಬಗ್ಗೆ ಜೆ.ಪಿ. ನಡ್ಡಾ ನೇತೃತ್ವದ ಕೇಂದ್ರ ಆರೋಗ್ಯ ಸಚಿವಾಲಯದೊಂದಿಗೆ ಎರಡು ಸುತ್ತಿನ ಮಾತುಕತೆ ನಡೆದಿದೆ. ಎನ್‌ಟಿಎ ಕೂಡ ಈ ಪ್ರಯೋಗಕ್ಕೆ ಸಿದ್ಧವಿದೆ. ಸದ್ಯ ನೀಟ್–ಯುಜಿ ಪರೀಕ್ಷೆಯನ್ನು ಒಎಮ್‌ಆರ್ ಶೀಟ್ ಭರ್ತಿ ಮಾಡುವ ಮೂಲಕ ಆಫ್‌ಲೈನ್ ಅಂದರೆ ಭೌತಿಕ ರೂಪದಲ್ಲಿ ನಡೆಸಲಾಗುತ್ತಿದೆ ಎಂದು ಅವರು ತಿಳಿಸಿದ್ದಾರೆ.

ಭವಿಷ್ಯದಲ್ಲಿ ಈ ಪರೀಕ್ಷೆ ಹೇಗೆ ನಡೆಸಬೇಕು ಎಂಬುದರ ಕುರಿತು ಶೀಘ್ರದಲ್ಲೇ ನಿರ್ಧಾರ ಕೈಗೊಳ್ಳಲಾಗುವುದು. ಪರಿಷ್ಕೃತ ಪರೀಕ್ಷಾ ಮಾದರಿ 2025ರಲ್ಲಿ ಜಾರಿಗೆ ಬರಲಿದೆ. ಈ ಬಗ್ಗೆ ಆದಷ್ಟು ಬೇಗ ತಿಳಿಸಲಾಗುವುದು ಎಂದು ಪ್ರಧಾನ್ ಹೇಳಿದ್ದಾರೆ.

ನೀಟ್ ಪರೀಕ್ಷೆಯನ್ನು ಆನ್‌ಲೈನ್ ಮೂಲಕ ನಡೆಸುವ ಕುರಿತಾದ ಚರ್ಚೆ ಹೊಸದೇನಲ್ಲ. ಆದರೆ ಇತ್ತೀಚಿನ ದಿನಗಳಲ್ಲಿ ಪ್ರಶ್ನೆ ಪತ್ರಿಕೆ ಸೋರಿಕೆ ಪ್ರಕರಣಗಳು ಹೆಚ್ಚಾಗಿರುವ ಕಾರಣ ಮತ್ತೆ ಮುನ್ನೆಲೆಗೆ ಬಂದಿದೆ.

ಡಿ.21, ಬಿವಿಬಿಯಲ್ಲಿ 141ನೇ ಸಾಂಸ್ಕೃತಿಕ ಕಾರ್ಯಕ್ರಮ

ಮೈಸೂರು, ಡಿ. 17– ಬೆಂಗಳೂರು ಇನ್ಫೋಸಿಸ್ ಪ್ರತಿಷ್ಠಾನ ಮತ್ತು ಭಾರತೀಯ ವಿದ್ಯಾಭವನ, ಬೆಂಗಳೂರು–ಮೈಸೂರು ವತಿಯಿಂದ ಡಿ.21 ರಂದು ಸಂಜೆ 6 ಗಂಟೆಗೆ 141ನೇ ಸಾಂಸ್ಕೃತಿಕ ಕಾರ್ಯಕ್ರಮದ ಅಂಗವಾಗಿ ದಾಸ ವೈಭವವನ್ನು ವಿಜಯನಗರ 1ನೇ ಹಂತದ ಭಾರತೀಯ ವಿದ್ಯಾಭವನದ ಸಭಾಂಗಣದಲ್ಲಿ ಏರ್ಪಡಿಸಲಾಗಿದೆ. ವಿದ್ವಾನ್ ಪವನ್ ರಂಗಾಚಾರ್ ಅವರಿಂದ ಗಾಯನವಿದೆ. ಪಕ್ಕವಾದ್ಯದಲ್ಲಿ ವಿದ್ವಾನ್ ಅನಂತಪದ್ಮನಾಭ–ಪಿಟೀಲು, ವಿದ್ವಾನ್ ಎ.ರಾಧೇಶ್–ಮೃದಂಗ, ವಿದ್ವಾನ್ ಶರತ್ ಕೌಶಿಕ್–ಘಟಂನಲ್ಲಿ ಸಹಕಾರ ನೀಡಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.



ಪವನ್ ರಂಗಾಚಾರ್

ಡಿ.29, ಮೈಸೂರಲ್ಲಿ ಕುವೆಂಪು ಜನ್ಮ ದಿನಾಚರಣೆ



ಮೈಸೂರು, ಡಿ. 17–ಮೈಸೂರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು, ಮೈಸೂರು ಮಹಾನಗರಪಾಲಿಕೆ ವತಿಯಿಂದ ಡಿ.29ರಂದು ವಿಶ್ವ ಮಾನವ ಉದ್ಯಾನವನದ (ಗನ್‌ಹೌಸ್ ಮುಂಭಾಗ), ಕುವೆಂಪು ಪುತ್ಥಳಿ ಆವರಣದಲ್ಲಿ ಕುವೆಂಪು ಜನ್ಮ ದಿನಾಚರಣೆ ಹಮ್ಮಿಕೊಳ್ಳಲಾಗಿದೆ. ಇದರ ಅಂಗವಾಗಿ ವಿದ್ಯಾರ್ಥಿ, ವಿದ್ಯಾರ್ಥಿನಿಯರು, ಸಾರ್ವಜನಿಕರಿಗೆ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಕುವೆಂಪು ಅವರ ಕುರಿತ ಕವನ, ಪ್ರಬಂಧ, ಕುವೆಂಪು ಕಂಡಂತೆ ಪ್ರಕೃತಿ ಚಿತ್ರ ಹಾಗೂ ಅವರ ಭಾವಚಿತ್ರವನ್ನು ಬಿಡಿಸುವ ಸ್ಪರ್ಧೆ ಏರ್ಪಡಿಸಲಾಗಿದೆ. ಮಾಹಿತಿಗೆ ಜಿಲ್ಲಾ ಕಸಾಪ ಮಾಜಿ ಅಧ್ಯಕ್ಷ ಎಂ.ಚಂದ್ರಶೇಖರ್, ಮೊ. 99003 77378, 97437 69403 ಸಂಪರ್ಕಿಸಬಹುದು.

ಕರ್ನಾಟಕ ಚೇತನ ಪ್ರಶಸ್ತಿ ಪ್ರದಾನ...



ಮೈಸೂರಿನ ಕಲಾಮಂದಿರದಲ್ಲಿ ಮಾನವ ಹಕ್ಕುಗಳ ಸೇವಾ ಸಮಿತಿ ವತಿಯಿಂದ ನಡೆದ 8ನೇ ವಾರ್ಷಿಕೋತ್ಸವ ಕಾರ್ಯಕ್ರಮದಲ್ಲಿ ಸಮಾಜ ಸೇವಕ ಎಸ್.ಶ್ರೀಕಾಂತ್ ಅವರಿಗೆ 'ಕರ್ನಾಟಕ ಚೇತನ' ರಾಜ್ಯ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಈ ವೇಳೆ ರಾಜ್ಯಾಧ್ಯಕ್ಷ ಡಾ.ಸೀತಾರಾಮೇಗೌಡ, ಸಂಸ್ಥಾಪಕ ಅಧ್ಯಕ್ಷರಾದ ಕಸ್ತೂರಿ ಚಂದ್ರು, ಕಾರ್ಯಾಧ್ಯಕ್ಷ ತೇಜಸ್ ಪೃಥ್ವಿರಾಜ್, ರಾಜ್ಯ ಉಪಾಧ್ಯಕ್ಷ ನಟರಾಜ್, ಪ್ರಧಾನ ಕಾರ್ಯದರ್ಶಿ ಟಿ.ಶಿವರಾಜು, ಮೈಸೂರು ಜಿಲ್ಲಾಧ್ಯಕ್ಷರಾದ ಎಂ.ಕಿರಣ್, ಜಿಲ್ಲಾ ಕಾರ್ಯದರ್ಶಿ ಚೆಲುವರಾಜ್, ಮೈಸೂರು ನಗರಾಧ್ಯಕ್ಷ ಸತ್ಯನಾರಾಯಣ ಇದ್ದರು.

ಸುವರ್ಣ ಸಂಭ್ರಮ–25 ಮಹಾಸಮ್ಮೇಳನದ ಪೋಸ್ಟರ್ ಬಿಡುಗಡೆ



ರಾಜಪುರೋಹಿತ ವಿಪ್ರ ಸಮಾಜ ಟ್ರಸ್ಟ್ ಮೈಸೂರು ವತಿಯಿಂದ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಮೈಸೂರಿಗೆ ಆಗಮಿಸಿದ ವಿಪ್ರ ಫೌಂಡೇಶನ್ ಸಂಸ್ಥಾಪಕ ಸಂಚಾಲಕ ಸುಶೀಲ್ ಜಿ ಓಜಾ ಅವರು ಜನವರಿ 18 ಮತ್ತು 19ರಂದು ನಡೆಯುವ ಸುವರ್ಣ ಸಂಭ್ರಮ–2025 ಮಹಾ ಸಮ್ಮೇಳನದ ಪೋಸ್ಟರ್ ಅನ್ನು ಬಿಡುಗಡೆ ಮಾಡಿದರು. ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾ ಉಪಾಧ್ಯಕ್ಷ ಡಿ.ಟಿ.ಪ್ರಕಾಶ್‌ಹೊಯ್ಸಳ ಕರ್ನಾಟಕ ಸಂಘದ ನಿರ್ದೇಶಕ ಎಸ್.ರಂಗನಾಥ, ರಾಜಪುರೋಹಿತ್ ವಿಪ್ರ ಸಮಾಜ ಟ್ರಸ್ಟ್ ಪದಾಧಿಕಾರಿಗಳಾದ ಪ್ರೊ.ಯೋಗೇಂದ್ರಜೀ ಮಿಶ್ರಾ, ಮೋದರಾಮ್ ಪುರೋಹಿತ್, ಮಂಗಲ್ ಸಿಂಗ್ ಪುರೋಹಿತ್, ನಾಥರಾಮ್ ಪುರೋಹಿತ್, ಮಹೇಂದ್ರ ಸಿಂಗ್ ಪುರೋಹಿತ್, ಜೋಯಿತರಾಮ್ ಪುರೋಹಿತ್, ಸುರೇಶ್ ಮತ್ತಿತರರಿದ್ದರು.



ಸ್ಕೇಟಿಂಗ್‌ನಲ್ಲಿ ಪದಕ ವಿಜೇತರು

ಮೈಸೂರಿನಲ್ಲಿ ಡಿ.5ರಿಂದ 15ರವರೆಗೂ ನಡೆಯುತ್ತಿರುವ 62ನೇ ರಾಷ್ಟ್ರೀಯ ರೋಲರ್ಸ್ ಸ್ಕೇಟಿಂಗ್ ಚಾಂಪಿಯನ್‌ಶಿಪ್‌ನಲ್ಲಿ 14ರಿಂದ 17 ವರ್ಷದ ವಯೋಮಿತಿಯೊಳಗೆ ಕರ್ನಾಟಕವನ್ನು ಪ್ರತಿನಿಧಿಸಿದ ಮೈಸೂರಿನ ವರ್ಷಿಣಿ ಅಪರ್ಣ 2 ಚಿನ್ನದ ಪದಕ, ಎರಡು ಬೆಳ್ಳಿಯ ಪದಕ ಪಡೆದುಕೊಂಡಿದ್ದಾರೆ. ಈಕೆ ನಿರ್ಮಲ ರಾಣಿ ಶಾಲೆಯಲ್ಲಿ 10ನೇ ತರಗತಿಯನ್ನು ವ್ಯಾಸಂಗ ಮಾಡುತ್ತಿದ್ದು, ರಾಜರಾಜೇಶ್ವರಿನಗರದಲ್ಲಿರುವ ಬೆಸ್ಟ್ ಕ್ಲಬ್ ಸ್ಕೇಟಿಂಗ್ ಸಂಸ್ಥೆಯ ತರಬೇತುದಾರ ರಾಘವೇಂದ್ರ ಅವರ ಬಳಿ ತರಬೇತಿ ಪಡೆಯುತ್ತಿದ್ದಾರೆ.

ಪ್ರಧಾನಮಂತ್ರಿ ವಯ ವಂದನ ನೋಂದಣಿ ಕಾರ್ಯಕ್ರಮ



ಪ್ರಧಾನಮಂತ್ರಿ ವಯ ವಂದನ ಕಾರ್ಯಕ್ರಮಕ್ಕೆ ಬಿಜೆಪಿ ಹಿರಿಯ ಮುಖಂಡ ಗೋಪಾಲರಾವ್ ಚಾಲನೆ ನೀಡಿದರು.

ಮೈಸೂರು,ಡಿ.17–ಬಿಜೆಪಿ ಚಾಮುಂಡೇಶ್ವರಿ ನಗರ ಮಂಡಲದ ಯುವ ಮೋರ್ಚಾ ವತಿಯಿಂದ ಪ್ರಧಾನ ಮಂತ್ರಿ ಜನ ಆರೋಗ್ಯ ವಯ ವಂದನ ಯೋಜನೆಯಡಿಯಲ್ಲಿ 70 ವರ್ಷ ಹಾಗೂ ಮೇಲ್ಪಟ್ಟ ಹಿರಿಯರನ್ನು ನೋಂದಣಿ ಮಾಡಿಸುವ 'ಯುವಕರಿಂದ ಹಿರಿಯರಿಗೆ ನಮನ' ಕಾರ್ಯಕ್ರಮವನ್ನು ಬೋಗಾದಿ ಟೆಲಿಕಾಮ್ ಬಡಾವಣೆಯ ಉದ್ಯಾನವನದಲ್ಲಿ ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮಕ್ಕೆ ಬಿಜೆಪಿ ಹಿರಿಯ ಮುಖಂಡ ಗೋಪಾಲ ರಾವ್ ಚಾಲನೆ ನೀಡಿದರು. ಆಧಾರ್ ಸಂಪರ್ಕ ಹೊಂದಿರುವ ದೂರವಾಣಿ ಮೂಲಕ 120 ಜನರಿಗೆ ಸ್ಥಳದಲ್ಲಿಯೇ ಯೋಜನೆಯಡಿ ನೋಂದಾಯಿಸಲಾಯಿತು. ಈ ವೇಳೆ ಮಂಡಲದ ಯುವ ಮೋರ್ಚಾ ಅಧ್ಯಕ್ಷ ಮಧು ಸೋಮಶೇಖರ್ ಮಾತನಾಡಿ, ಕೇಂದ್ರ ಸರ್ಕಾರದ ಉತ್ತಮ ಯೋಜನೆಯನ್ನು ಜನರಿಗೆ ತಲುಪಿಸುವ ಉದ್ದೇಶದಿಂದ ಚಾಮುಂಡೇಶ್ವರಿ ಕ್ಷೇತ್ರದ ನಗರ ಪಾಲಿಕೆ ವ್ಯಾಪ್ತಿಯ ಬಡಾವಣೆಗಳಲ್ಲಿ ಜನವರಿ 12ರ ಯುವ ದಿನದವರೆಗೆ ಈ ಸೇವಾ ಕಾರ್ಯಕ್ರಮ ಮುಂದುವರೆಯಲಿದೆ. ಉಚಿತವಾಗಿ ಲಭಿಸುತ್ತಿರುವ ಈ ಯೋಜನೆಯನ್ನು ಸಾರ್ವಜನಿಕರಿಗೆ ತಲುಪಿಸುವ ಉದ್ದೇಶದಿಂದ ಈ ಸೇವಾ ಕಾರ್ಯವನ್ನು ಮಾಡಲಾಗುತ್ತಿದೆ ಎಂದರು.

ನಗರ ಪ್ರಧಾನ ಕಾರ್ಯದರ್ಶಿ ಬಿ.ಎಂ. ರಘು, ಚಾಮುಂಡೇಶ್ವರಿ ಕ್ಷೇತ್ರದ ಅಧ್ಯಕ್ಷ ರಾಕೇಶ್‌ಭಟ್, ಯುವ ಮೋರ್ಚಾ ನಗರ ಅಧ್ಯಕ್ಷ ರಾಕೇಶ್‌ಗೌಡ, ಮಂಡಲದ ಪ್ರಧಾನ ಕಾರ್ಯದರ್ಶಿ ಸೋಮಶೇಖರ್, ಎಸ್‌ಟಿ ಮೋರ್ಚಾ ನಗರ ಉಪಾಧ್ಯಕ್ಷ ತ್ಯಾಗರಾಜ್, ಯುವ ಮೋರ್ಚಾ ನಗರ ಪ್ರಧಾನ ಕಾರ್ಯದರ್ಶಿಗಳಾದ ಲೋಹಿತ್, ಸಚ್ಚಿನ್‌ಗೌಡ, ಮಂಡಲದ ಯುವ ಮೋರ್ಚಾ ಪ್ರಧಾನ ಕಾರ್ಯದರ್ಶಿಗಳಾದ ಚಂದನ್‌ಗೌಡ, ಸಾಗರ್ ಸಿಂಗ್, ಉಪಾಧ್ಯಕ್ಷರಾದ ರಾಘವೇಂದ್ರ, ಸಂಜಯ್ ಪ್ರಸನ್ನ, ಸೂರ್ಯಪ್ರಕಾಶ್, ಮುಖಂಡರಾದ ಮಧು, ಶಿವು, ಅವಿನಾಶ್, ಕ್ಷೇತ್ರದ ಪದಾಧಿಕಾರಿಗಳಾದ ರಾಘವೇಂದ್ರ, ಸೋಮಣ್ಣ, ರಂಗೇಶ್, ಪ್ರತಾಪ್, ಶುಭಶ್ರೀ, ಶಶಿಕಾಂತ್, ಲೋಕೇಶ್, ರಾಜನಾಯಕ್, ಕಾಂತರಾಜ ಅರಸು, ಭಾರ್ಗವಗೌಡ, ಭರತ್, ರಕ್ಷಿತ್ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

ಡಿ.21ಕ್ಕೆ 'ದಶ ಸಖಿ ದಶ ಮುಖಿ' ಪುಸ್ತಕ ಲೋಕಾರ್ಪಣೆ, ಕಾವ್ಯ ಸಿಂಚನ

ಮೈಸೂರು, ಡಿ. 17–ಮೈಸೂರಿನ ಸಖಿ ಫೌಂಡೇಶನ್ ಮತ್ತು ಸೂರ್ಯ ಚಾರಿಟಬಲ್ ಟ್ರಸ್ಟ್ ತನ್ನ ಎರಡನೇ ವರ್ಷದ ವಾರ್ಷಿಕೋತ್ಸವದ ಅಂಗವಾಗಿ ಡಿ.21ರ ಮಧ್ಯಾಹ್ನ 3 ಗಂಟೆಗೆ ಸೂರ್ಯ ಸಖಿ ಸಾಹಿತ್ಯ ವೇದಿಕೆ ವತಿಯಿಂದ ಪಟಕ್ಕೊಂದು ಪದ್ಯ, ಕಾವ್ಯ ಸಿಂಚನದ ಕವಿಗೋಷ್ಠಿ ಹಾಗೂ ದಶ ಸಖಿ ದಶ ಮುಖಿ ಕಥಾ ಸಂಕಲನ ಬಿಡುಗಡೆ ಸಮಾರಂಭವನ್ನು ರಾಮಕೃಷ್ಣನಗರದ ಜಯಲಕ್ಷ್ಮೀದೇವಿ ಪದವಿಪೂರ್ವ ಕಾಲೇಜಿನ ಋತ್ವಿಕ್ ವೇದಿಕೆಯಲ್ಲಿ ಏರ್ಪಡಿಸಲಾಗಿದೆ.

ಸಮಾಜ ಸೇವಕ ರಘುರಾಂ ವಾಜಪೇಯಿ ಕೃತಿ ಲೋಕಾರ್ಪಣೆಗೊಳಿಸಲಿದ್ದಾರೆ. ಅಖಿಲ ಭಾರತೀಯ ಸಾಹಿತ್ಯ ಪರಿಷದ್ ಮೈಸೂರು ಜಿಲ್ಲಾ ಸಮಿತಿ ಉಪಾಧ್ಯಕ್ಷ ಬಿ.ಕೆ.ಜಗದೀಶ್ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದು, ಸಾಹಿತಿ ಬಿ.ಆರ್. ನಾಗರತ್ನ ಕೃತಿ ಕುರಿತು ಮಾತನಾಡಲಿದ್ದಾರೆ. ಟ್ರಸ್ಟ್‌ನ ಸಂಸ್ಥಾಪನಾ ಕಾರ್ಯದರ್ಶಿ ಗಾಯತ್ರಿ ಸುಂದರೇಶ್ ಸಂಪಾದಕತ್ವದ, ಸಂಸ್ಕೃತಿ ಪ್ರಕಾಶನ ಹೊರತಂದಿರುವ ಈ ಕೃತಿಯಲ್ಲಿ ಕಥೆಗಾರ್ತಿಯರಾದ ಸಿ.ಎನ್.ಮುಕ್ತ, ವಸುಮತಿ ಉಡುಪ, ಉಷಾನರಸಿಂಹನ್, ಬಿ.ಆರ್.ನಾಗರತ್ನ, ಬಿ.ಕೆ.ಮೀನಾಕ್ಷಿ, ಹೇಮಮಾಲ, ಸವಿತಾ ಪ್ರಭಾಕರ್, ಸವಿತಾ ವೆಂಕಟೇಶ್, ಗಾಯತ್ರಿ ಸುಂದರೇಶ್ ಪದ್ಮಾ ಆನಂದ್ ರವರ ಒಟ್ಟು ಹತ್ತು ಕತೆಗಳಿವೆ. ದಾವಣಗೆರೆಯ ಸಾಹಿತಿ ಪ್ರೊ.ಛಾಯಾ ಶ್ರೀಧರ್ ಕೃತಿಗೆ ಮುನ್ನುಡಿ ಬರೆದಿದ್ದಾರೆ. ಇದೇ ಕಾರ್ಯಕ್ರಮದಲ್ಲಿ ಅಖಿಲ ಭಾರತೀಯ ಸಾಹಿತ್ಯ ಪರಿಷದ್ ಮೈಸೂರು ಜಿಲ್ಲೆಯ ಕುವೆಂಪು ನಗರ ಕೂಟ ಮತ್ತು ಸೂರ್ಯಸಖಿ ಸಾಹಿತ್ಯ ವೇದಿಕೆಯ ಒಟ್ಟು 22 ಸದಸ್ಯರಿಂದ ಸ್ವರಚಿತ ಕವನವಾಚನ ನಡೆಯಲಿದೆ. ನಿಗದಿಪಡಿಸಿರುವ ಕವಿಗಳು ತಮ್ಮ ಕಲ್ಪನೆಯ ಭಾವನೆಗಳ ಲಹರಿಯನ್ನು ವಾಚಿಸಲಿದ್ದಾರೆ.

ಡಿ.22ರಂದು ಚದುರಂಗ ಆಟ ಸ್ಪರ್ಧೆ

ಮೈಸೂರು,ಡಿ.17–2024ರ ದಸರಾ ವಸ್ತುಪ್ರದರ್ಶನದ ಅಂಗವಾಗಿ ಮಹಿಳಾ ಮತ್ತು ಮಕ್ಕಳ ಉಪ ಸಮಿತಿ ವತಿಯಿಂದ ಡಿ.22ರಂದು ಬೆಳಗ್ಗೆ 11 ಗಂಟೆಗೆ ಪ್ರಾಧಿಕಾರದ ಪಿ.ಕಾಳಿಂಗರಾವ್ ಗಾನಮಂಟಪದಲ್ಲಿ (6ರಿಂದ 12 ವರ್ಷದವರೆಗೆ ಹಾಗೂ 13ರಿಂದ 18 ವರ್ಷದ) ಮಕ್ಕಳಿಗಾಗಿ ಚದುರಂಗ ಆಟ ಸ್ಪರ್ಧೆಯನ್ನು ಏರ್ಪಡಿಸಲಾಗಿದ್ದು, ಸ್ಪರ್ಧೆಯಲ್ಲಿ ಭಾಗವಹಿಸುವ ಸ್ಪರ್ಧಿಗಳು ಚೆಸ್ ಬೋರ್ಡ್ ಮತ್ತು ಪಾನ್‌ಗಳನ್ನು ತಾವೇ ತರತಕ್ಕದ್ದು. ಆಸಕ್ತರು ತಮ್ಮ ಹೆಸರನ್ನು ನೋಂದಾಯಿಸಲು ಹಾಗೂ ಮಾಹಿತಿಗೆ ದೂ.ಸಂ: 9611600103 ಅನ್ನು ಸಂಪರ್ಕಿಸಬಹುದು.

ಡಿ.22ರಂದು ಜಾನಪದ, ಭರತನಾಟ್ಯ ಸ್ಪರ್ಧೆ

ಮೈಸೂರು, ಡಿ. 17– ಶ್ರೀನಾಟ್ಯಂ ಕಲಾ ಕೇಂದ್ರದ 15ನೇ ವಾರ್ಷಿಕೋತ್ಸವದ ಅಂಗವಾಗಿ ರಾಜ್ಯ ಮಟ್ಟದ ಭರತನಾಟ್ಯ, ಜಾನಪದ ನೃತ್ಯ ಸ್ಪರ್ಧೆ ಹಮ್ಮಿಕೊಳ್ಳಲಾಗಿದೆ. ಬೆಂಗಳೂರಿನ ಶ್ರೀನಿಧಿ ಬಡಾವಣೆಯ ಎಂಟನೇ ಮುಖ್ಯ ರಸ್ತೆಯಲ್ಲಿರುವ ಶ್ರೀನಿಧಿ ಸಭಾಂಗಣದಲ್ಲಿ ಡಿ.22ರ ಬೆಳಗ್ಗೆ 10ಕ್ಕೆ ಸ್ಪರ್ಧೆಗಳು ನಡೆಯಲಿವೆ. ಎಂಟು ವರ್ಷದ ಒಳಗಿನವರು, 8ರಿಂದ 12 ಮತ್ತು 16 ವರ್ಷ ಮೇಲ್ಪಟ್ಟವರ ಮೂರು ವಿಭಾಗಗಳಲ್ಲಿ ಪ್ರತ್ಯೇಕ ಸ್ಪರ್ಧೆ ನಡೆಯಲಿದೆ. ವಿಜೇತರಿಗೆ ಆಕರ್ಷಕ ಬಹುಮಾನ ನೀಡಲಾಗುವುದು. ವಿವರಗಳಿಗೆ ಮೊ. 99000 88983, 9513 816649 ಸಂಪರ್ಕಿಸಬಹುದು.

ರಾಷ್ಟ್ರೀಯ ಸೇವಾ ಯೋಜನೆ ಕಾರ್ಯಕ್ರಮ ಉದ್ಘಾಟನೆ...



ಮೈಸೂರು ಮಹಾರಾಜ ಸರ್ಕಾರಿ ಪದವಿ ಪೂರ್ವ ಕಾಲೇಜು ವತಿಯಿಂದ ತಾಲೂಕಿನ ಹಲಗಯ್ಯನಹುಂಡಿ ಗ್ರಾಮದಲ್ಲಿ ಏರ್ಪಡಿಸಿದ್ದ ರಾಷ್ಟ್ರೀಯ ಸೇವಾ ಯೋಜನೆ ಕಾರ್ಯಕ್ರಮವನ್ನು ವಾಜಮಂಗಲ ಗ್ರಾಪಂ ಅಧ್ಯಕ್ಷೆ ಶ್ರೀಮತಿ ಸುಂದ್ರಮ್ಮ ಉದ್ಘಾಟಿಸಿದರು. ಈ ವೇಳೆ ಕಾಲೇಜು ಪ್ರಾಂಶುಪಾಲ ಉದಯಶಂಕರ್ ಅಧ್ಯಕ್ಷತೆ ವಹಿಸಿದ್ದರು. ಗ್ರಾಪಂ ಉಪಾಧ್ಯಕ್ಷೆ ಶ್ರೀಮತಿ ಲಲಿತಾ, ದಲಿತ ಸಂಘರ್ಷ ಸಮಿತಿ ಜಿಲ್ಲಾಧ್ಯಕ್ಷ ಶಂಕರ್, ಮಾಜಿ ಅಧ್ಯಕ್ಷ ರಮೇಶ್, ಗ್ರಾಪಂ ಸದಸ್ಯೆ ಶಾರದಾ ಗೋವಿಂದ್, ಮಾಜಿ ಅಧ್ಯಕ್ಷ ಶಂಕರ್, ಗ್ರಾಮದ ಮುಖಂಡ ಪಟೇಲ್ ಮಹೇಶ್, ಶಿಬಿರಾಧಿಕಾರಿ ಷಣ್ಮುಗ, ಉಪಶಿಬಿರಾಧಿಕಾರಿಗಳಾದ ಸಿದ್ದರಾಮು, ಉಮೇಶ್ ಇನ್ನಿತರರು ಉಪಸ್ಥಿತರಿದ್ದರು.

ದೇಶ - ವಿದೇಶ

ವ್ಯಾನುವಾಟು ಸಮುದ್ರ ತೀರದಲ್ಲಿ ಪ್ರಬಲ ಭೂಕಂಪ: ಸುನಾಮಿ ಎಚ್ಚರಿಕೆ


ವೆಲ್ಲಿಂಗ್ಟನ್: ದ್ವೀಪ ರಾಷ್ಟ್ರ ವ್ಯಾನುವಾಟುವಿನ ರಾಜಧಾನಿ ಪೋರ್ಟ್‌ವಿಲ್ಲಾದ ದಕ್ಷಿಣ ಪೆಸಿಫಿಕ್ ಮಹಾಸಾಗರದ ತೀರದಲ್ಲಿ ಮಂಗಳವಾರ 7.4 ತೀವ್ರತೆಯ ಭೂಕಂಪ ಸಂಭವಿಸಿದೆ ಎಂದು ಅಮೆರಿಕದ ಭೂವೈಜ್ಞಾನಿಕ ಸಮೀಕ್ಷೆ ಕೇಂದ್ರ (ಯುಎಸ್‌ಜಿಎಸ್) ತಿಳಿಸಿದೆ. ಸಾಗರದ 10 ಕಿ.ಮೀ(6.21 ಮೈಲಿ) ಆಳದಲ್ಲಿ ಕಂಪನದ ಕೇಂದ್ರಬಿಂದು ದಾಖಲಾಗಿದೆ ಎಂದು ಯುಎಸ್‌ಜಿಎಸ್ ತಿಳಿಸಿದೆ. ರಾಜಧಾನಿ ಪೋರ್ಟ್‌ವಿಲ್ಲಾದಲ್ಲಿ ವಿದೇಶಿ ರಾಯಭಾರ ಸಿಬ್ಬಂದಿಗೆ ಆತಿಥ್ಯ ವಹಿಸುವ ಕಟ್ಟಡದ ಕಿಟಕಿಗಳು ಮುರಿದಿರುವುದು ಮತ್ತು ಕಾಂಕ್ರೀಟ್ ಕಂಬಗಳು ಕುಸಿದಿರುವುದನ್ನು ಸಾಮಾಜಿಕ ಮಾಧ್ಯಮದಲ್ಲಿ ಪೋಸ್ಟ್ ಮಾಡಿರುವ ದೃಶ್ಯಾವಳಿಗಳಲ್ಲಿ ಕಾಣಬಹುದಾಗಿದೆ.



ಭೂಕಂಪದ ನಂತರ ಸುಮಾರು 3,30,000 ಜನರಿಗೆ ನೆಲೆಯಾಗಿರುವ 80 ದ್ವೀಪಗಳ ಸಮೂಹವಾದ ವ್ಯಾನುವಾಟುವಿನ ಕೆಲವು ಕರಾವಳಿಗಳಿಗೆ ಸುನಾಮಿ ಅಲೆಗಳ ಎಚ್ಚರಿಕೆ ನೀಡಲಾಗಿದೆ ಎಂದು ವರದಿ ತಿಳಿಸಿದೆ.

ಕಾಶ್ಮೀರದಲ್ಲಿ ಶೀತಗಾಳಿ: ಶ್ರೀನಗರದಲ್ಲಿ ಮೈನಸ್ 5.3 ಡಿಗ್ರಿ ತಾಪಮಾನ ದಾಖಲು

ಶ್ರೀನಗರ: ಕಾಶ್ಮೀರದಲ್ಲಿ ಶೀತಗಾಳಿ ತೀವ್ರಗೊಂಡಿದ್ದು, ತಾಪಮಾನ ಕುಸಿದಿದೆ. ಇಲ್ಲಿನ ದಾಲ್ ಸರೋವರ ಸೇರಿದಂತೆ ಹಲವಾರು ಜಲ ಮೂಲಗಳು ಹೆಪ್ಪುಗಟ್ಟುತ್ತಿವೆ ಎಂದು ಅಧಿಕಾರಿಗಳು ಮಂಗಳವಾರ ತಿಳಿಸಿದ್ದಾರೆ.



ಶ್ರೀನಗರದಲ್ಲಿ ತಾಪಮಾನ ಮೈನಸ್ 5.3 ಡಿಗ್ರಿ ಸೆಲ್ಸಿಯಸ್ ದಾಖಲಾಗಿದ್ದು, ಕಳೆದ ರಾತ್ರಿ ಮೈನಸ್ 3.4 ಡಿಗ್ರಿ ಸೆಲ್ಸಿಯಸ್‌ಗೆ ಇಳಿದಿತ್ತು. ಚಳಿಯಿಂದಾಗಿ ನಗರದ ಹಲವು ಪ್ರದೇಶಗಳು ಮತ್ತು ಕಣಿವೆಗಳಲ್ಲಿ ನೀರು ಸರಬರಾಜು ಮಾರ್ಗಗಳು ಸ್ಥಗಿತಗೊಂಡಿವೆ. ಜನಪ್ರಿಯ ಪ್ರವಾಸಿ ತಾಣ ಗುಲ್ಮಾರ್ಗ್‌ನಲ್ಲಿ ಮೈನಸ್ 4 ಡಿಗ್ರಿ ಸೆಲ್ಸಿಯಸ್, ಅಮರನಾಥ ಯಾತ್ರೆಯ ಬೇಸ್ ಕ್ಯಾಂಪ್‌ಗಳಲ್ಲಿ ಒಂದಾದ ಪಹಲ್‌ಗಾಮ್‌ನಲ್ಲಿ ಮೈನಸ್ 6.8 ಡಿಗ್ರಿ ಸೆಲ್ಸಿಯಸ್ ದಾಖಲಾಗಿದೆ. ಪಂಪೋರ್ ಪಟ್ಟಣದಲ್ಲಿರುವ ಕೊನಿಬಾಲ್ ಕಣಿವೆಯಲ್ಲಿ ಅತ್ಯಂತ ಕಡಿಮೆ ತಾಪಮಾನ (8.5 ಡಿಗ್ರಿ) ದಾಖಲಾಗಿದೆ. ಕಾಶ್ಮೀರದ ಹೆಬ್ಬಾಗಿಲು ಕಾಜಿಗುಂಡ್‌ನಲ್ಲಿ ಮೈನಸ್ 6 ಡಿಗ್ರಿ ಸೆಲ್ಸಿಯಸ್, ಉತ್ತರ ಕಾಶ್ಮೀರದ ಕುಪ್ವಾರದಲ್ಲಿ ಮೈನಸ್ 5.6 ಡಿಗ್ರಿ ಸೆಲ್ಸಿಯಸ್, ಕೋಕರ್‌ನಾಗ್‌ನಲ್ಲಿ ಮೈನಸ್ 5.7 ಡಿಗ್ರಿ ಸೆಲ್ಸಿಯಸ್ ದಾಖಲಾಗಿದೆ.

ಮಾಸ್ಕೋದಲ್ಲಿ ಸ್ಫೋಟ: ರಷ್ಯಾದ ನ್ಯೂಕ್ಲಿಯರ್ ಡಿಫೆನ್ಸ್ ಫೋರ್ಸ್‌ನ ಮುಖ್ಯಸ್ಥ ಸಾವು

ಮಾಸ್ಕೋ: ರಷ್ಯಾದ ನ್ಯೂಕ್ಲಿಯರ್ ಡಿಫೆನ್ಸ್ ಫೋರ್ಸ್‌ನ ಮುಖ್ಯಸ್ಥ ಲೆಫ್ಟಿನೆಂಟ್ ಜನರಲ್ ಇಗೋರ್ ಕಿರಿಗೋವ್ (65) ಅವರು ಮಾಸ್ಕೋದಲ್ಲಿ ನಡೆದ ಸ್ಫೋಟದಲ್ಲಿ ಮೃತಪಟ್ಟಿದ್ದಾರೆ ಎಂದು ಆ ದೇಶದ ತನಿಖಾ ಸಮಿತಿ ತಿಳಿಸಿದೆ




ಇಗೋರ್ ಕಿರಿಗೋವ್ ಅವರು ಉಕ್ರೇನ್‌ನ ಮೋಸ್ಟ್ ವಾಂಟೆಡ್ ಪಟ್ಟಿಯಲ್ಲಿದ್ದರು. ಕಿರಿಗೋವ್ ಅವರು ಮಂಗಳವಾರ ಬೆಳಿಗ್ಗೆ ಮಾಸ್ಕೋದ ತಮ್ಮ ಅಪಾರ್ಟ್‌ಮೆಂಟ್‌ನಿಂದ ಹೊರಗೆ ಬಂದು ಸ್ಕೂಟರ್ ಒಂದನ್ನು ಪರಿಶೀಲಿಸುತ್ತಿದ್ದಾಗ ಸ್ಕೂಟರ್‌ನಿಂದ ಭಾರಿ ಪ್ರಮಾಣದ ಸ್ಫೋಟ ಸಂಭವಿಸಿದೆ. ಪರಿಣಾಮವಾಗಿ ಕಿರಿಗೋವ್ ಮತ್ತು ಸ್ಥಳದಲ್ಲಿದ್ದ ಇನ್ನೊಬ್ಬ ವ್ಯಕ್ತಿ ಮೃತಪಟ್ಟಿದ್ದಾರೆ. ಸ್ಫೋಟದ ಬಗ್ಗೆ ನಮ್ಮ ತನಿಖಾಧಿಕಾರಿಗಳು ತನಿಖೆಯನ್ನು ಕೈಗೆತ್ತಿಕೊಂಡಿದ್ದಾರೆ. ಇದರ ಹಿಂದೆ ಉಕ್ರೇನ್ ಕೈವಾಡವಿದೆ ಎಂದು ರಷ್ಯಾದ ತನಿಖಾ ಸಮಿತಿ ಮುಖ್ಯಸ್ಥ ಸ್ವೆಟ್‌ಲಾನ್ ಪಿಟ್ರೆಂಕೋ ತಿಳಿಸಿದ್ದಾರೆ.

2022 ಫೆಬ್ರವರಿಯಲ್ಲಿ ಉಕ್ರೇನ್ ಮೇಲೆ ರಷ್ಯಾ ಆಕ್ರಮಣ ಆರಂಭಿಸಿದ ನಂತರ ಈ ವರ್ಷದ ನವೆಂಬರ್ ಅಂತ್ಯದ ವೇಳೆಗೆ ಉಕ್ರೇನ್ ಮೇಲೆ 4,800 ರಾಸಾಯನಿಕ ಅಸ್ತ್ರಗಳನ್ನು ಪ್ರಯೋಗಿಸಲು ಇಗೋರ್ ಕಿರಿಗೋವ್ ಕಾರಣರಾಗಿದ್ದಾರೆ ಎಂದು ಉಕ್ರೇನ್ ಆರೋಪಿಸಿದೆ.

ಕೊಯಮತ್ತೂರಿನ ಸರಣಿ ಬಾಂಬ್ ಸ್ಫೋಟದ ಮಾಸ್ಟರ್ ಮೈಂಡ್ ಎಸ್.ಎ.ಬಾಷಾ ಸಾವು

ಕೊಯಮತ್ತೂರು: ಕೊಯಮತ್ತೂರಿನಲ್ಲಿ ನಡೆದ 1998ರ ಸರಣಿ ಬಾಂಬ್ ಸ್ಫೋಟದ ಮಾಸ್ಟರ್ ಮೈಂಡ್, ಅಲ್–ಉಮ್ಮಾದ ಅಧ್ಯಕ್ಷ ಎಸ್.ಎ.ಬಾಷಾ ವಯೋಸಹಜ ಖಾಯಿಲೆಯಿಂದ ಇಲ್ಲಿನ ಖಾಸಗಿ ಆಸ್ಪತ್ರೆಯಲ್ಲಿ ಮೃತಪಟ್ಟಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಡಿಸೆಂಬರ್ 16ರ ಸಂಜೆ ಬಾಷಾ ಮೃತಪಟ್ಟಿದ್ದಾರೆ. ಅವರಿಗೆ 84 ವರ್ಷ ವಯಸ್ಸಾಗಿತ್ತು.



ಮಂಗಳವಾರ ಅಂತ್ಯಕ್ರಿಯೆ ನಡೆಯಿತು. ಭದ್ರತೆಗಾಗಿ ನಗರದಲ್ಲಿ ಪೊಲೀಸ್ ಪಡೆಯನ್ನು ನಿಯೋಜಿಸಲಾಗಿದೆ ಎಂದು ಅಧಿಕಾರಿಯೊಬ್ಬರು ಹೇಳಿದ್ದಾರೆ. 'ಬಾಷಾ ಅವರು ಪೆರೋಲ್ ಮೇಲೆ ಹೊರಗಡೆ ಇದ್ದರು. ಅವರ ಆರೋಗ್ಯ ಹದಗೆಟ್ಟಿದ್ದರಿಂದ ಅವರನ್ನು ಖಾಸಗಿ ಆಸ್ಪತ್ರೆಗೆ ದಾಖಲಿಸಲಾಯಿತು. ಚಿಕಿತ್ಸೆಗೆ ಸ್ಪಂದಿಸದೆ ಸೋಮವಾರ ಸಂಜೆ ಮೃತಪಟ್ಟಿದ್ದಾರೆ' ಎಂದು ಇಂಡಿಯನ್ ನ್ಯಾಷನಲ್ ಲೀಗ್ ಪಕ್ಷದ ನಾಯಕ ಜೆ.ರಹೀಮ್ ತಿಳಿಸಿದ್ದಾರೆ.

1998ರಲ್ಲಿ ಕೊಯಮತ್ತೂರಿನಲ್ಲಿ ನಡೆದ ಸರಣಿ ಸ್ಫೋಟಗಳಿಗೆ ಸಂಬಂಧಿಸಿದಂತೆ ಬಾಷಾ ಮತ್ತು ಇತರ 16 ಜನರಿಗೆ ನ್ಯಾಯಾಲಯ ಜೀವಾವಧಿ ಶಿಕ್ಷೆ ವಿಧಿಸಿತ್ತು. ಇತ್ತೀಚೆಗಷ್ಟೇ ಬಾಷಾ ಅವರಿಗೆ ಮದ್ರಾಸ್ ಹೈಕೋರ್ಟ್ ಪೆರೋಲ್ ಮಂಜೂರು ಮಾಡಿತ್ತು.

ಅಮೆರಿಕದ ಶಾಲೆಯಲ್ಲಿ ಗುಂಡಿನ ದಾಳಿ ನಡೆಸಿದ ವಿದ್ಯಾರ್ಥಿನಿ; 5 ಸಾವು

ವಾಷಿಂಗ್ಟನ್: ಅಮೆರಿಕದಲ್ಲಿ ಮತ್ತೊಂದು ಶಾಲೆಯಲ್ಲಿ ಗುಂಡಿನ ದಾಳಿ ನಡೆದಿದ್ದು, ವಿದ್ಯಾರ್ಥಿಗಳು, ಶಿಕ್ಷಕರು ಸೇರಿ 5 ಮಂದಿ ಬಲಿಯಾಗಿದ್ದು, ಹಲವರು ಗಾಯಗೊಂಡಿದ್ದಾರೆ. ದಾಳಿ ನಡೆಸಿದ 17 ವರ್ಷದ ವಿದ್ಯಾರ್ಥಿನಿಯೂ ಆತ್ಮಹತ್ಯೆ ಮಾಡಿಕೊಂಡಿದ್ದಾಳೆ. ಮ್ಯಾಡಿಸನ್‌ನ ಅಬುಂಡಂಟ್ ಲೈಫ್ ಕ್ರಿಶ್ಚಿಯನ್ ಶಾಲೆಯಲ್ಲಿ ಈ ಘಟನೆ ನಡೆದಿದೆ ಎಂದು ಪೊಲೀಸರು ತಿಳಿಸಿದ್ದಾರೆ ವಿಸ್ಕಾನ್ಸಿನ್ ರಾಜಧಾನಿ ಮ್ಯಾಡಿಸನ್‌ನ ಅಬಂಡಂಟ್ ಲೈಫ್ ಕ್ರಿಶ್ಚಿಯನ್ ಶಾಲೆಯಲ್ಲಿ 17 ವರ್ಷದ ವಿದ್ಯಾರ್ಥಿನಿಯೊಬ್ಬಳು ಮನಬಂದಂತೆ ಗುಂಡಿನ ದಾಳಿ ನಡೆಸಿದ್ದಾಳೆ. ಈ ಘಟನೆಯಲ್ಲಿ ಅವಳೂ ಸೇರಿ ಕನಿಷ್ಠ 5 ಮಂದಿ ಮೃತಪಟ್ಟಿದ್ದಾರೆ. ಇಬ್ಬರ ಸ್ಥಿತಿ ಗಂಭೀರವಾಗಿದೆ. ಈ ಘಟನೆ ಬಗ್ಗೆ ತನಿಖೆ ಕೈಗೆತ್ತಿಕೊಳ್ಳಲಾಗಿದೆ. ಚಾನೆಲ್ 3000 ಪ್ರಕಾರ ಡಿ.16ರ ಬೆಳಗ್ಗೆ 11 ಗಂಟೆಗೆ ಈ ದಾಳಿ ನಡೆದಿದೆ. ಶಿಶುವಿಹಾರದಿಂದ ಪ್ರೌಢಶಾಲೆವರೆಗಿನ ತರಗತಿ ಇರುವ ಈ ಶಾಲೆಯಲ್ಲಿ ಸುಮಾರು 390 ವಿದ್ಯಾರ್ಥಿಗಳಿದ್ದಾರೆ. ಸಾಮೂಹಿಕ ಗುಂಡಿನ ದಾಳಿ ಬಗ್ಗೆ ಆಘಾತ ವ್ಯಕ್ತಪಡಿಸಿ ವಿಸ್ಕಾನ್ಸಿನ್ ಸೆನೆಟರ್ ರಾನ್ ಜಾನ್ಸನ್ ಸೋಶಿಯಲ್ ಮೀಡಿಯಾದಲ್ಲಿ ಈ ಬಗ್ಗೆ ಬರೆದುಕೊಂಡಿದ್ದಾರೆ. "ಅಬುಂಡಂಟ್ ಲೈಫ್ ಕ್ರಿಶ್ಚಿಯನ್ ಶಾಲೆಯಲ್ಲಿ ಸಂಭವಿಸಿದ ದುರಂತದ ಸುದ್ದಿ ಕೇಳಿ ದುಃಖವಾಗಿದೆ. ಪರಿಸ್ಥಿತಿಯನ್ನು ಸೂಕ್ಷ್ಮವಾಗಿ ಅವಲೋಕಿಸುತ್ತಿದ್ದೇವೆ. ಈ ಬಗ್ಗೆ ತನಿಖೆ ಆರಂಭಿಸಲಾಗಿದೆ ಎಂದಿದ್ದಾರೆ.

ಗ್ಯಾಸ್ ಸೋರಿಕೆಯಾಗಿ ತಂದೆ-ತಾಯಿ ಕಳೆದುಕೊಂಡ ಮಗಳಿಗೆ

28 ಲಕ್ಷ ಪರಿಹಾರ ನೀಡುವಂತೆ ಗ್ರಾಹಕರ ಆಯೋಗ ಆದೇಶ

ಮಡಿಕೇರಿ, ಡಿ.17-ಗ್ಯಾಸ್ ಸೋರಿಕೆಯಾಗಿ ತಂದೆ-ತಾಯಿ ಕಳೆದುಕೊಂಡ ಮಗಳಿಗೆ ಮಂಗಳೂರಿನ ಹೆಚ್‌ಪಿ ಗ್ಯಾಸ್ ಸಂಸ್ಥೆ ಮತ್ತು ಮುಂಬೈನ ಎಸ್‌ಬಿಐ ಜನರಲ್ ಇನ್ಶೂರೆನ್ಸ್ ಕಂಪನಿಗೆ ಒಟ್ಟು 28 ಲಕ್ಷ ರೂ. ಪರಿಹಾರ ನೀಡುವಂತೆ ಕೊಡಗು ಜಿಲ್ಲಾ ಗ್ರಾಹಕರ ಆಯೋಗ ಆದೇಶಿಸಿದೆ.

ಪ್ರಕರಣ ಹಿನ್ನೆಲೆ: ಸುಂಟಿಕೊಪ್ಪ ನಿವಾಸಿ ಹೆಚ್.ಕೆ.ರಮೇಶ್ ಮತ್ತು ಎನ್.ರೂಪಾ ದಂಪತಿ ಹೆಚ್‌ಪಿ ಗ್ಯಾಸ್ ಸಂಪರ್ಕ ಪಡೆದುಕೊಂಡಿದ್ದರು. 2023ರ ಅ.4ರಂದು ರಾತ್ರಿ 8.30ರಲ್ಲಿ ಮನೆಯಲ್ಲಿ ಅಡುಗೆ ಮಾಡುತ್ತಿದ್ದ ಸಂದರ್ಭ ಗ್ಯಾಸ್ ಸೋರಿಕೆಯಾಗಿ ಸಂಭವಿಸಿದ ಬೆಂಕಿ ಅವಘಡದಲ್ಲಿ ಹೆಚ್.ಕೆ.ರಮೇಶ್ ಮತ್ತು ಎನ್.ರೂಪಾ ತೀವ್ರ ಗಾಯಗೊಂಡು ಅ.8ರಂದು ರಮೇಶ್ ಮತ್ತು ಅ.9ರಂದು ಎನ್.ರೂಪಾ ಮೃತಪಟ್ಟಿದ್ದರು.

ದೂರು ಪುರಸ್ಕರಿಸಿ ಆದೇಶ: ಅಗ್ನಿ ದುರಂತದಲ್ಲಿ ಆದ ನಷ್ಟಕ್ಕೆ ಸಂಬಂಧಪಟ್ಟ ಸಂಸ್ಥೆಗಳಿಂದ ಯಾವುದೇ ಪರಿಹಾರ ದೊರಕಿರಲಿಲ್ಲ. ಈ ಹಿನ್ನೆಲೆಯಲ್ಲಿ ಮೃತರ ಪುತ್ರಿ ಕು.ಲಿಪಿಕಾ ಅಲಿಯಾಸ್ ಐಶ್ವರ್ಯ ಸೂಕ್ತ ಪರಿಹಾರ ನೀಡಬೇಕು ಎಂದು ಹೆಚ್‌ಪಿ ಗ್ಯಾಸ್ ಸಂಸ್ಥೆ ಮತ್ತು ಎಸ್‌ಬಿಐ ಇನ್ಶೂರೆನ್ಸ್ ಕಂಪನಿ ವಿರುದ್ಧ ಕೊಡಗು ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದಲ್ಲಿ ದೂರು ಸಲ್ಲಿಸಿದ್ದರು.

ಪ್ರಕರಣ ದಾಖಲಿಸಿಕೊಂಡ ಆಯೋಗದ ಅಧ್ಯಕ್ಷೆ ಸಿ.ರೇಣುಕಾಂಬ ಮತ್ತು ಸದಸ್ಯೆ ಗೌರಮ್ಮಣ್ಣಿ ಅವರು ವಾದ-ಪ್ರತಿವಾದ ಆಲಿಸಿದರು. ನಂತರ ಹೆಚ್‌ಪಿ ಗ್ಯಾಸ್ ಸಂಸ್ಥೆ ಹಾಗೂ ಎಸ್‌ಬಿಐ ಜನರಲ್ ಇನ್ಶೂರೆನ್ಸ್ ಕಂಪನಿ ದೂರುದಾರರಿಗೆ ಪಾಲಿಸಿಯ ಮೊತ್ತ ಮತ್ತು ಮಾನಸಿಕ ವೇದನೆ ಸೇರಿ ಒಟ್ಟು 28 ಲಕ್ಷ ರೂ. ಪರಿಹಾರ ಪಾವತಿಸುವಂತೆ ಆದೇಶ ನೀಡಿದ್ದಾರೆ.

ಸಾಂಸ್ಕೃತಿಕ ಮೇಳದಲ್ಲಿ ಕಾವೇರಿ ಶಾಲೆಗೆ ಸಮಗ್ರ ಪ್ರಶಸ್ತಿ



ವಿರಾಜಪೇಟೆ ಸಂತ ಅನ್ನಮ್ಮ ವಿದ್ಯಾಸಂಸ್ಥೆಯಲ್ಲಿ ನಡೆದ ಜಿಲ್ಲಾ ಮಟ್ಟದ ಸಾಂಸ್ಕೃತಿಕ ಮೇಳದ ಸಮಗ್ರ ಪ್ರಶಸ್ತಿ ಪಡೆದ ಕಾವೇರಿ ಶಾಲಾ ಮಕ್ಕಳು.

ವಿರಾಜಪೇಟೆ, ಡಿ.17-ಪಟ್ಟಣದ ಸಂತ ಅನ್ನಮ್ಮ ವಿದ್ಯಾಸಂಸ್ಥೆಯಲ್ಲಿ ನಡೆದ ಜಿಲ್ಲಾ ಮಟ್ಟದ ಸಾಂಸ್ಕೃತಿಕ ಮೇಳದ ವಿವಿಧ ಸ್ಪರ್ಧೆಗಳಲ್ಲಿ ಉತ್ತಮ ಸಾಧನೆಗೈದ ವಿರಾಜಪೇಟೆ ಕಾವೇರಿ ಶಾಲೆ ಸಮಗ್ರ ಪ್ರಶಸ್ತಿ ಗಳಿಸಿತು.

ಮೊದಲ ಬಹುಮಾನವಾಗಿ 25,555 ರೂ. ನಗದು ಹಾಗೂ ಆಕರ್ಷಕ ಟ್ರೋಫಿ ನೀಡಲಾಯಿತು. ಮಿಶ್ರ ಕ್ರಿಕೆಟ್‌ನಲ್ಲಿ ಲೂರ್ಡ್ಸ್ ಶಾಲೆ ಪ್ರಥಮ ಹಾಗೂ ಸಂತ ಅನ್ನಮ್ಮ ಶಾಲೆ ದ್ವಿತೀಯ ಬಹುಮಾನ ಪಡೆದುಕೊಂಡವು. ಟ್ರೆಷರ್ ಹಂಟ್ ಸ್ಪರ್ಧೆಯಲ್ಲಿ ಕೂರ್ಗ್ ವ್ಯಾಲಿ ಶಾಲೆ ಪ್ರಥಮ, ಮರ್ಕರ‍್ಥ್ ಶಾಲೆ ದ್ವಿತೀಯ ಬಹುಮಾನ ಗಳಿಸಿದವು. ವಿಜ್ಞಾನ ಮಾದರಿ ತಯಾರಿಕೆಯಲ್ಲಿ ಕಾವೇರಿ ಶಾಲೆ ಪ್ರಥಮ ಹಾಗೂ ಮರ್ಕರ‍್ಥ್ ಶಾಲೆ ದ್ವಿತೀಯ ಹಾಗೂ ಆಹಾರ ಮೇಳದಲ್ಲಿ ಕಾವೇರಿ ಶಾಲೆ ಪ್ರಥಮ ಹಾಗೂ ಸಂತ ಅನ್ನಮ್ಮ ಶಾಲೆ ದ್ವಿತೀಯ, ನೃತ್ಯ ಸ್ಪರ್ಧೆಯಲ್ಲಿ ಕಾವೇರಿ ಶಾಲೆ ಪ್ರಥಮ, ಎಸ್‌ಎಂಎಸ್ ಶಾಲೆ ದ್ವಿತೀಯ, ಲಗೋರಿ ಸ್ಪರ್ಧೆಯಲ್ಲಿ ಎಸ್‌ಎಂಎಸ್ ಪ್ರಥಮ, ಲೂರ್ಡ್ ಶಾಲೆ ದ್ವಿತೀಯ, ರಸಪ್ರಶ್ನೆಯಲ್ಲಿ ಕಾವೇರಿ ಶಾಲೆ ಪ್ರಥಮ, ಜ್ಞಾನಜ್ಯೋತಿ ಶಾಲೆ ದ್ವಿತೀಯ ಬಹುಮಾನ ಗಳಿಸಿದವು. ಸಾಂಸ್ಕೃತಿಕ ಮೇಳದಲ್ಲಿ ಜಿಲ್ಲೆಯ ವಿವಿಧ 17ಕ್ಕೂ ಹೆಚ್ಚು ಶಾಲೆಗಳು ಭಾಗವಹಿಸಿದ್ದವು.

ಸಾಂಸ್ಕೃತಿಕ ಮೇಳದ ಸಮಾರೋಪದಲ್ಲಿ ಸಂತ ಅನ್ನಮ್ಮ ವಿದ್ಯಾಸಂಸ್ಥೆ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲ ರೆ.ಫಾ.ಮದಲೈ ಮುತ್ತು, ಈ ಬಾರಿ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಉತ್ತಮ ಸಾಧನೆ ಮಾಡುವ ವಿದ್ಯಾರ್ಥಿಗಳಿಗೆ ಪದವಿಪೂರ್ವ ಶಿಕ್ಷಣಕ್ಕೆ ವಿದ್ಯಾಸಂಸ್ಥೆ ವತಿಯಿಂದ ಸಹಕಾರ ನೀಡಲಾಗುವುದು ಎಂದು ತಿಳಿಸಿದರು.

ವಿದ್ಯಾರ್ಥಿಗಳು ಹೆಚ್ಚಾಗಿ ಮೊಬೈಲ್ ಲೋಕದಲ್ಲಿ ಕಾಲ ಕಳೆಯುವ ಮೂಲಕ ಕಲೆ ಹಾಗೂ ದೈಹಿಕ ಶಿಕ್ಷಣ ಚಟುವಟಿಕೆಗಳಿಂದ ದೂರವಾಗುತ್ತಿದ್ದಾರೆ ಎಂದು ಬೇಸರ ವ್ಯಕ್ತಪಡಿಸಿದರು.

ಸಂತ ಅನ್ನಮ್ಮ ಪ್ರೌಢಶಾಲೆ ಮುಖ್ಯ ಶಿಕ್ಷಕ ಬೆನ್ನಿ ಜೋಸೆಫ್ ಮಾತನಾಡಿ, ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಶೇ.95ರಷ್ಟು ಅಂಕ ಗಳಿಸುವ ವಿದ್ಯಾರ್ಥಿಗಳಿಗೆ ಸಂತ ಅನ್ನಮ್ಮ ಪದವಿಪೂರ್ವ ಕಾಲೇಜಿನಲ್ಲಿ ಉಚಿತ ಶಿಕ್ಷಣ ನೀಡಲಾಗುವುದು ಎಂದರು.

ಪದವಿ ಕಾಲೇಜಿನ ಪ್ರಾಂಶುಪಾಲೆ ತೃಪ್ತಿ ಬೋಪಣ್ಣ ಮಾತನಾಡಿದರು. ವಿರಾಜಪೇಟೆ ಸರ್ಕಾರಿ ಪಪೂ ಕಾಲೇಜಿನ ಪ್ರಾಂಶುಪಾಲೆ ಜ್ಯೋತಿ ಪ್ರಕಾಶ್, ಸಂತ ಅನ್ನಮ್ಮ ಕಾಲೇಜಿನ ಉಪನ್ಯಾಸಕ ಡಾ.ಹೇಮಂತ್, ಪ್ರಾಥಮಿಕ ಶಾಲಾ ಮುಖ್ಯ ಶಿಕ್ಷಕರು ವಿವಿಧ ಸ್ಪರ್ಧಾ ವಿಜೇತರಿಗೆ ಬಹುಮಾನ ವಿತರಿಸಿದರು.

ಶ್ರೀಶಾ ರಾಜ್ಯ ಮಟ್ಟಕ್ಕೆ ಆಯ್ಕೆ



ಸುಂಟಿಕೊಪ್ಪ: ಜಿಲ್ಲಾ ಮಟ್ಟದ ಪ್ರತಿಭಾ ಕಾರಂಜಿ ಭಾಷಣ ಸ್ಪರ್ಧೆಯಲ್ಲಿ ಸುಂಟಿಕೊಪ್ಪ ನಾಡು ಪ್ರೌಢಶಾಲೆ ವಿದ್ಯಾರ್ಥಿನಿ ಎ.ಎಸ್.ಶ್ರೀಶಾ ರಾಜ್ಯ ಮಟ್ಟಕ್ಕೆ ಆಯ್ಕೆಯಾಗಿದ್ದಾಳೆ.

ಈಕೆ ಇತ್ತೀಚೆಗೆ ಕಲಬುರ್ಗಿಯಲ್ಲಿ ನಡೆದ ರಾಜ್ಯ ಮಟ್ಟದ ವಿಜ್ಞಾನ ಸಮಾವೇಶದಲ್ಲಿ ಯುವ ವಿಜ್ಞಾನಿಯಾಗಿ ಆಯ್ಕೆಯಾಗಿ ಜನವರಿಯಲ್ಲಿ ಮಧ್ಯಪ್ರದೇಶದ ಭೂಪಾಲ್‌ನಲ್ಲಿ ನಡೆಯುವ ರಾಷ್ಟ್ರೀಯ ವಿಜ್ಞಾನ ಸಮಾವೇಶಕ್ಕೂ ಆಯ್ಕೆಯಾಗಿದ್ದಾಳೆ.

'ಸಿ', 'ಡಿ' ಭೂಮಿ ಕೃಷಿರಿಗೆ ಹಕ್ಕು ನೀಡಿ

ಬೆಳಗಾವಿ ಅಧಿವೇಶನದಲ್ಲಿ ಶಾಸಕರಾದ ಡಾ.ಮಂತರ್‌ಗೌಡ, ಎ.ಎಸ್.ಪೊನ್ನಣ್ಣ ಆಗ್ರಹ





ಬೆಳಗಾವಿ ಅಧಿವೇಶನದಲ್ಲಿ ಶಾಸಕರಾದ ಡಾ.ಮಂತರ್‌ಗೌಡ ಮತ್ತು ಎ.ಎಸ್.ಪೊನ್ನಣ್ಣ ಮಾತನಾಡಿದರು.

ಮಡಿಕೇರಿ, ಡಿ.17-ಕೊಡಗಿನಲ್ಲಿರುವ 'ಸಿ' ಮತ್ತು 'ಡಿ' ಭೂಮಿಯಲ್ಲಿ ಕೃಷಿ ಮಾಡುತ್ತಿರುವ ರೈತರಿಗೆ ಆ ಭೂಮಿ ಮೇಲೆ ಹಕ್ಕು ನೀಡಬೇಕು ಎಂದು ಜಿಲ್ಲೆಯ ಶಾಸಕದ್ವಯರಾದ ಡಾ.ಮಂತರ್‌ಗೌಡ ಮತ್ತು ಅಜ್ಜಿಕುಟ್ಟಿರ ಎಸ್.ಪೊನ್ನಣ್ಣ ಸರ್ಕಾರವನ್ನು ಆಗ್ರಹಿಸಿದರು.

ಬೆಳಗಾವಿ ಸುವರ್ಣಸೌಧದಲ್ಲಿ ಮಂಗಳವಾರ ನಡೆದ ಅಧಿವೇಶನದಲ್ಲಿ ವಿಷಯ ಪ್ರಸ್ತಾಪಿಸಿದ ಮಡಿಕೇರಿ ಶಾಸಕ ಡಾ.ಮಂತರ್‌ಗೌಡ, 'ಸಿ' ಮತ್ತು 'ಡಿ' ಭೂಮಿಗೆ ಸಂಬಂಧಿಸಿದಂತೆ ಅರಣ್ಯ ಇಲಾಖೆ ಮತ್ತು ಕಂದಾಯ ಇಲಾಖೆ ಆತಂಕ ಪರಿಸ್ಥಿತಿ ಸೃಷ್ಟಿಸಿದೆ. 'ಸಿ' ಮತ್ತು 'ಡಿ' ಭೂಮಿಯಲ್ಲಿ ಹಿಂದಿನಿಂದಲೂ ರೈತರು ಕೃಷಿ ಮಾಡಿಕೊಂಡು ಬಂದಿದ್ದಾರೆ. 1978 ರಿಂದ 2017ರವರೆಗೆ ಈ ಭೂಮಿಯನ್ನು ಸರ್ಕಾರ ಅರಣ್ಯ ಹಾಗೂ ಕಂದಾಯ ಇಲಾಖೆಗೆ ವರ್ಗಾವಣೆ ಮಾಡಿವೆ. 2017ರಲ್ಲಿ ಸರ್ಕಾರ ಫಾರಂ ನಂ-50, 53, 57ರ ಅಡಿಯಲ್ಲಿ ಸಾಗುವಳಿಗೂ ಅವಕಾಶ ನೀಡಿದೆ ಎಂದು ಸದನಕ್ಕೆ ವಿವರಿಸಿದರು.

ಸೋಮವಾರಪೇಟೆ ತಾಲೂಕಿನ ಶಾಂತಳ್ಳಿ, ಹರಗ, ಕೂತಿ ಗ್ರಾಮಗಳಲ್ಲಿ ಒಂದೇ ಸರ್ವೇ ನಂಬರ್ ಅನ್ನು ಸೆಕ್ಷನ್ 4, 'ಸಿ' ಮತ್ತು 'ಡಿ' ಭೂಮಿ, ಜಮ್ಮಾ ಹಾಗೂ ಮೀಸಲು ಅರಣ್ಯ ಎಂದು ವಿಭಾಗಿಸಲಾಗಿದೆ. ಇದು ಕೃಷಿ ಮಾಡಿಕೊಂಡು ಬಂದಿರುವ ರೈತಾಪಿ ವರ್ಗಕ್ಕೆ ಆತಂಕ ಮೂಡಿಸಿದೆ. ಈ ಹಿನ್ನೆಲೆಯಲ್ಲಿ ಮಡಿಕೇರಿಯಲ್ಲಿ ಡಿ.20ರಂದು ರೈತರು ಮತ್ತು ಕೃಷಿಕರು ಬೃಹತ್ ಹೋರಾಟಕ್ಕೆ ಮುಂದಾಗಿದ್ದಾರೆ. ಅಷ್ಟರೊಳಗೆ ಒಂದು ಸಮಿತಿ ರಚಿಸಿ 'ಸಿ' ಮತ್ತು 'ಡಿ' ಭೂಮಿ ಸಮಸ್ಯೆ ಪರಿಹಾರಕ್ಕೆ ಸರ್ಕಾರ ಮುಂದಾಗಬೇಕು. ಆ ಮೂಲಕ ರೈತರು ಮತ್ತು ಕೃಷಿಕರಿಗೆ ನ್ಯಾಯ ಒದಗಿಸಬೇಕು ಎಂದು ಸದನದ ಗಮನ ಸೆಳೆದರು.

ತೀರ್ಪು ಪರಿಶೀಲಿಸುವಂತೆ ಒತ್ತಾಯ

'ಸಿ' ಮತ್ತು 'ಡಿ' ಭೂಮಿಗೆ ಸಂಬಂಧಿಸಿದಂತೆ ನ್ಯಾಯಾಲಯಗಳು ಹಲವು ತೀರ್ಪುಗಳನ್ನು ನೀಡಿವೆ. 2022ರ ಪ್ರಕರಣ ಒಂದರಲ್ಲಿ 'ಸಿ' ಮತ್ತು 'ಡಿ' ಭೂಮಿಯನ್ನು ಅರಣ್ಯ ಇಲಾಖೆಗೆ ವರ್ಗಾಯಿಸಿ ಆದೇಶ ನೀಡಿದೆ. ಈ ಸಮಸ್ಯೆಗೆ ಪರಿಹಾರ ಜಟಿಲವಾಗಿದೆ. ಈ ಹಿನ್ನೆಲೆಯಲ್ಲಿ ನ್ಯಾಯಾಲಯ ತೀರ್ಪುಗಳ ಪರಿಶೀಲನೆ ನಡೆಯಬೇಕು. ಇದಕ್ಕಾಗಿ ತೀರ್ಪು ಪರಿಶೀಲನಾ ಸಮಿತಿ ರಚಿಸಲು ಕ್ರಮ ಕೈಗೊಳ್ಳಬೇಕು ಎಂದು ವಿರಾಜಪೇಟೆ ಶಾಸಕ ಅಜ್ಜಿಕುಟ್ಟಿರ ಎಸ್. ಪೊನ್ನಣ್ಣ ಸದನದದಲ್ಲಿ ಒತ್ತಾಯಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ಕಂದಾಯ ಸಚಿವ ಕೃಷ್ಣಬೈರೇಗೌಡ, 'ಸಿ' ಮತ್ತು 'ಡಿ' ಭೂಮಿಗೆ ಸಂಬಂಧಿಸಿದಂತೆ ಸರ್ಕಾರ ಸೂಕ್ತ ಕ್ರಮ ಕೈಗೊಳ್ಳಲಿದೆ ಎಂದು ಭರವಸೆ ನೀಡಿದರು.

ತಮ್ಮನನ್ನು ಕೊಲೆಗೈದು ಪರಾರಿಯಾಗಿದ್ದ ಅಣ್ಣನ ಬಂಧನ

ಮಡಿಕೇರಿ, ಡಿ.17- ಕ್ಷುಲ್ಲಕ ವಿಚಾರಕ್ಕೆ ತಮ್ಮನನ್ನು ಗುಂಡು ಹೊಡೆದು ಕೊಲೆಗೈದು ಪರಾರಿಯಾಗಿದ್ದ ಆರೋಪಿ ಅಣ್ಣ ಮಾಚಯ್ಯ (55)ನನ್ನು ಮಡಿಕೇರಿ ಗ್ರಾಮಾಂತರ ಠಾಣೆ ಪೊಲೀಸರು ಮಂಗಳವಾರ ಬಂಧಿಸಿದ್ದಾರೆ.

ಗಾಳಿಬೀಡು ಗ್ರಾಪಂ ವ್ಯಾಪ್ತಿಯ ವಣಚಲು ಗ್ರಾಮದಲ್ಲಿ ಬಂಧಿಸಿರುವ ಪೊಲೀಸರು, ಆರೋಪಿ ಬಳಿ ಇದ್ದ ಒಂಟಿ ನಳಿಕೆ ಕೋವಿ ಮತ್ತು ಕಾಡತೂಸುಗಳನ್ನು ವಶಪಡಿಸಿಕೊಂಡಿದ್ದಾರೆ. ಆರೋಪಿ ಮಾಚಯ್ಯನನ್ನು ನ್ಯಾಯಾಂಗ ವಶಕ್ಕೆ ಒಪ್ಪಿಸಲಾಗಿದೆ.

ಸೋಮವಾರ ಬೆಳಗ್ಗೆ 9.30ರಲ್ಲಿ ಸಹೋದರರ ನಡುವೆ ಕ್ಷುಲ್ಲಕ ವಿಚಾರವಾಗಿ ಜಗಳ ನಡೆದಿದೆ.

ಈ ವೇಳೆ ಮಾಚಯ್ಯ ತಮ್ಮ ಅಪ್ಪಣ್ಣ (53)ನ ಮೇಲೆ ಹಲ್ಲೆ ನಡೆಸಿ, ಒಂಟಿ ನಳಿಕೆ ಕೋವಿಯಿಂದ ಗುಂಡು ಹೊಡೆದು ಕೊಲೆ ಮಾಡಿ ಪರಾರಿಯಾಗಿದ್ದ.

ಇಂದು ರಸ್ತೆ ಡಾಂಬರೀಕರಣಕ್ಕೆ ಆಗ್ರಹಿಸಿ ಪ್ರತಿಭಟನೆ



ಸುದ್ದಿಗೋಷ್ಠಿಯಲ್ಲಿ ಗಾಳಿಬೀಡು ಗ್ರಾಮದ ಪಾಂಡೀರ ಸುಬ್ರಮಣಿ ಮಾತನಾಡಿದರು.

ಮಡಿಕೇರಿ, ಡಿ.17-ಸಂಪೂರ್ಣವಾಗಿ ಹದಗೆಟ್ಟಿರುವ ಮಡಿಕೇರಿ ತಾಲೂಕಿನ ಗಾಳಿಬೀಡು ರಸ್ತೆಯನ್ನು ಡಾಂಬರೀಕರಣಗೊಳಿಸಬೇಕೆಂದು ಒತ್ತಾಯಿಸಿ ಡಿ.18ರಂದು ವಿವಿಧ ಗ್ರಾಮಸ್ಥರೊಂದಿಗೆ ಪ್ರತಿಭಟನೆ ನಡೆಸಲಾಗುವುದು ಎಂದು ಗಾಳಿಬೀಡು ಗ್ರಾಮದ ಪ್ರಮುಖ ಪಾಂಡೀರ ಸುಬ್ರಮಣಿ ತಿಳಿಸಿದರು.

ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬುಧವಾರ ಬೆಳಗ್ಗೆ 10 ಗಂಟೆಗೆ ಗಾಳಿಬೀಡು, ಕಾಲೂರು, ವಣಚಲು, ಕೂಟುಹೊಳೆ, ಕೆ.ನಿಡುಗಣೆ ಹಾಗೂ ಹೆಬ್ಬೆಟ್ಟಗೇರಿ ಗ್ರಾಮಸ್ಥರು ಮೂರನೇ ಮೈಲು ಜಂಕ್ಷನ್ ಬಳಿ ಪ್ರತಿಭಟನೆ ನಡೆಸಲಿದ್ದಾರೆ. ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳು ಸ್ಥಳಕ್ಕೆ ಬಂದು ಭರವಸೆ ನೀಡುವವರೆಗೆ ಪ್ರತಿಭಟನೆ ಮುಂದುವರಿಸಲಾಗುವುದು ಎಂದರು.

ಗಾಳಿಬೀಡು ರಸ್ತೆ ಸಂಪೂರ್ಣವಾಗಿ ಹದಗೆಟ್ಟಿದ್ದು, ಹಲವು ವರ್ಷಗಳಿಂದ ಡಾಂಬರೀಕರಣವಾಗಿಲ್ಲ. ಹೊಂಡ ಗುಂಡಿಗಳಿಂದ ಕೂಡಿರುವ ರಸ್ತೆಗೆ ತೇಪೆ ಹಾಕುವ ಕಾರ್ಯ ಮಾತ್ರ ನಡೆಯುತ್ತಿದೆ. ಈಗಲೂ ತೇಪೆ ಹಾಕುವ ಕಾರ್ಯಕ್ಕೆ ಅಧಿಕಾರಿಗಳು ಮುಂದಾಗಿದ್ದು, ಇದನ್ನು ಗ್ರಾಮಸ್ಥರು ತೀವ್ರವಾಗಿ ವಿರೋಧಿಸುವುದಾಗಿ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಗ್ರಾಮಸ್ಥರಾದ ಹರೀಶ್ ರೈ, ಶಿವಪ್ರಸಾದ್ ರೈ, ನವೀನ್ ದೇರಳ, ಯು.ಎಸ್.ಗಿರೀಶ್ ಹಾಗೂ ಯಾಲದಾಳು ರಾಜಶೇಖರ ಉಪಸ್ಥಿತರಿದ್ದರು.

ಗುಹ್ಯದಲ್ಲಿ ಭಾರೀ ಗಾತ್ರದ ನಾಗರಹಾವು ಪತ್ತೆ



ಭಾರೀ ಗಾತ್ರದ ನಾಗರಹಾವು.

ಮಡಿಕೇರಿ, ಡಿ.17- ಸಿದ್ದಾಪುರ ಸಮೀಪದ ಗುಹ್ಯ ಗ್ರಾಮದ ಮನೆಯೊಂದರ ಬಳಿ ಕಾಣಿಸಿಕೊಂಡ ಭಾರೀ ಗಾತ್ರದ ನಾಗರಹಾವನ್ನು ಉರಗ ಪ್ರೇಮಿ ಸುರೇಶ್ ಪೂಜಾರಿ ರಕ್ಷಣೆ ಮಾಡಿ ಅರಣ್ಯಕ್ಕೆ ಬಿಟ್ಟಿದ್ದಾರೆ.

ಗುಹ್ಯ ಗ್ರಾಮದ ಕಾವೇರಿ ತಮ್ಮ ಮನೆ ಬಳಿ ಸೌದೆ ತೆಗೆಯುವ ಸಂದರ್ಭ ಹಾವು ಕಾಣಿಸಿಕೊಂಡಿದೆ. ಬಳಿಕ ಪತಿ ಗಣೇಶ್‌ಗೆ ತಿಳಿಸಿದ್ದಾರೆ. ನಂತರ ಗಣೇಶ್, ಉರಗ ಪ್ರೇಮಿ ಸುರೇಶ್ ಪೂಜಾರಿಗೆ ದೂರವಾಣಿ ಮೂಲಕ ವಿಷಯ ತಿಳಿಸಿದರು. ಸ್ಥಳಕ್ಕಾಗಮಿಸಿದ ಸುರೇಶ್ ಸೌದೆ ಒಳಗಿಗೆ ಇದ್ದ ಹಾವನ್ನು ಸುರಕ್ಷಿತವಾಗಿ ಸೆರೆ ಹಿಡಿದು ಮಾಲ್ದಾರೆ ಅರಣ್ಯಕ್ಕೆ ಬಿಟ್ಟಿದ್ದಾರೆ.

ಪೋಸ್ಟಲ್ ಸೇವೆ ಸಮರ್ಪಕವಾಗಿ ಒದಗಿಸಿ



ಐಪಿಪಿಬಿ ರಾಜ್ಯ ಮುಖ್ಯಸ್ಥ ದಿವಾಕರ್, ಎಜಿಎಂಐಪಿಪಿಬಿ, ಹೆಚ್.ಎಲ್.ಸುಧಾಕರ್ ಜಿಲ್ಲಾಧಿಕಾರಿ ಶಿಲ್ಪನಾಗ್ ಅವರೊಂದಿಗೆ ಪೋಸ್ಟಲ್ ಸೇವೆಗಳ ಬಗ್ಗೆ ಚರ್ಚಿಸಿದರು.

ಚಾಮರಾಜನಗರ, ಡಿ.17-ಇಂಡಿಯಾ ಪೋಸ್ಟ್ ಪೇಮೆಂಟ್ಸ್ ಬ್ಯಾಂಕ್ ಐಪಿಪಿಬಿ ರಾಜ್ಯ ಮುಖ್ಯಸ್ಥ ದಿವಾಕರ್, ಎಜಿಎಂಐಪಿಪಿಬಿ, ಹೆಚ್.ಎಲ್.ಸುಧಾಕರ್ ಮತ್ತು ಹಿರಿಯ ಅಧಿಕಾರಿಗಳು ಜಿಲ್ಲಾಧಿಕಾರಿ ಶಿಲ್ಪನಾಗ್ ಅವರನ್ನು ಭೇಟಿ ಮಾಡಿ, ಜಿಲ್ಲೆಯಲ್ಲಿ ಸಾರ್ವಜನಿಕರಿಗೆ ಪೋಸ್ಟಲ್ ಸೇವೆಗಳ ಬಗ್ಗೆ ಚರ್ಚಿಸಿದರು.

ಒಟ್ಟು 93 ಗ್ರಾಮ ಒನ್ ಆಪರೇಟರ್‌ಗಳು ಜಿಲ್ಲೆಯ ಐಬಿಸಿಗಳು ಆಫ್ ಇಂಡಿಯಾ ಪೋಸ್ಟ್ ಪೇಮೆಂಟ್ಸ್ ಬ್ಯಾಂಕಿನಲ್ಲಿವೆ. ಈಗ ಐಬಿಸಿಗಳು ಅರ್ಹವಾಗಿವೆ. ಐಪಿಪಿಬಿಯಲ್ಲಿ ಲಭ್ಯವಿರುವ ಎಲ್ಲಾ ಬ್ಯಾಂಕಿಂಗ್ ಸೇವೆಗಳನ್ನು ಗ್ರಾಮ ಒನ್ ಕೇಂದ್ರಗಳಿಂದ ಗ್ರಾಹಕರಿಗೆ ಒದಗಿಸಲು, ಮನೆ ಬಾಗಿಲಿಗೆ ತಡೆರಹಿತ ಸೇವೆಗಳ ವಿತರಣೆ ಮುಂದುವರಿಸಲು ಮತ್ತು ಸರಿಯಾದ ಎನ್‌ಪಿಸಿಐ ಮ್ಯಾಪಿಂಗ್‌ನೊಂದಿಗೆ ಎಲ್ಲಾ ಅರ್ಹ ಗ್ರಾಹಕರಿಗೆ ಡಿಬಿಟಿ ಪಾವತಿ ತಲುಪಿಸಲು ಆಡಳಿತಕ್ಕೆ ಸಹಕರಿಸುವಂತೆ ಜಿಲ್ಲಾಧಿಕಾರಿಗೆ ಸೂಚನೆ ನೀಡಿದರು.


ನಂತರ ನಗರದ ಜೆ.ಹೆಚ್.ಪಟೇಲ್ ಸಭಾಂಗಣದಲ್ಲಿ ಐಬಿಸಿ ಆನ್ ಬೋರ್ಡಿಂಗ್ ಮತ್ತು ತರಬೇತಿ ಕಾರ್ಯಕ್ರಮ ನಡೆಸಲಾಯಿತು. ಇಡಿಸಿಎಸ್ ಇಲಾಖೆ ಅಧಿಕಾರಿಗಳು ಗ್ರಾಮ ಒನ್ ಕೇಂದ್ರಗಳಲ್ಲಿ ಲಭ್ಯವಿರುವ ಸೇವೆಗಳ ಬಗ್ಗೆ ಚರ್ಚಿಸಿದರು. ಸೇವೆಗಳ ಸಮಸ್ಯೆಗಳಿಗೆ ಸಂಬಂಧಿಸಿದಂತೆ ಎಲ್ಲಾ ನಿರ್ವಾಹಕರೊಂದಿಗೆ ಸವಾಲೋಚಿಸಿದರು. ಪರಿಹಾರೋಪಾಯಗಳ ಬಗ್ಗೆ ಚರ್ಚಿಸಿದರು.

ಇದೇ ವೇಳೆ ಮಾತನಾಡಿದ ಅಪರ ಜಿಲ್ಲಾಧಿಕಾರಿ ಗೀತಾ ಹುಡೇದ, ಗ್ರಾಮ ಒನ್ ಮೂಲಕ ಸಾರ್ವಜನಿಕರಿಗೆ ಪರಿಣಾಮಕಾರಿಯಾಗಿ ಸೇವೆಗಳನ್ನು ತಲುಪಿಸಬೇಕು. ಸಾರ್ವಜನಿಕರಿಗೆ ಉತ್ತಮವಾಗಿ ಸ್ಪಂದಿಸಬೇಕು ಎಂದು ತಿಳಿಸಿದರು.

ಐಪಿಪಿಬಿ ಸಿಬ್ಬಂದಿಯಿಂದ ಎಲ್ಲಾ ಗ್ರಾಮ ಒನ್ ಆಪರೇಟರ್‌ಗಳಿಗೆ ಬ್ರಾಂಡಿಂಗ್ ವಿತರಿಸಲಾಯಿತು. ಕಾರ್ಯಕ್ರಮದಲ್ಲಿ ಇಡಿಸಿಎಸ್ ಉಪನಿರ್ದೇಶಕ ಮಹಾವೀರ್, ಇಡಿಸಿಎಸ್ ಯೋಜನಾ ವ್ಯವಸ್ಥಾಪಕ ಹೇಮಂತ್, ಡಿಪಿಎಂ ನಂಜುಂಡಸ್ವಾಮಿ, ಇತರರು ಉಪಸ್ಥಿತರಿದ್ದರು.

ಮತ್ತೊಂದು ನವೋದಯ ಶಾಲೆ ಮಂಜೂರು ಮಾಡಿ

ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್‌ಗೆ ಸಂಸದ ಸುನೀಲ್ ಬೋಸ್ ಮನವಿ



ನವೋದಯ ವಿದ್ಯಾಲಯ ಮಂಜೂರು ಮಾಡುವಂತೆ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರಿಗೆ ಸಂಸದ ಸುನೀಲ್ ಬೋಸ್ ಮನವಿ ಸಲ್ಲಿಸಿದರು.

ಚಾಮರಾಜನಗರ, ಡಿ.17-ಚಾಮರಾಜನಗರ ಜಿಲ್ಲೆಗೆ ಮತ್ತೊಂದು ನವೋದಯ ವಿದ್ಯಾಲಯ ಮಂಜೂರು ಮಾಡಬೇಕು ಹಾಗೂ ಜಿಲ್ಲೆಯ ಹೊಂಡರಬಾಳಿನಲ್ಲಿರುವ ನವೋದಯ ಶಾಲೆಗೆ ಮತ್ತಷ್ಟು ಮೂಲಸೌಕರ್ಯ ಕಲ್ಪಿಸುವಂತೆ ಸಂಸದ ಸುನೀಲ್ ಬೋಸ್ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಅವರಿಗೆ ಮಂಗಳವಾರ ಮನವಿ ಸಲ್ಲಿಸಿದರು.

ದೆಹಲಿಯಲ್ಲಿ ಕೇಂದ್ರ ಶಿಕ್ಷಣ ಸಚಿವರನ್ನು ಭೇಟಿ ಮಾಡಿ ಮನವಿ ಸಲ್ಲಿಸಿದ ಸುನೀಲ್ ಬೋಸ್, ಗಡಿ ಜಿಲ್ಲೆಯಲ್ಲಿ ಆದ್ಯತೆಯ ಮೇರೆಗೆ ಮತ್ತೊಂದು ನವೋದಯ ಶಾಲೆ ಆರಂಭಿಸಲು ಕ್ರಮ ಕೈಗೊಳ್ಳಬೇಕು. ಚಾಮರಾಜನಗರ ಜಿಲ್ಲೆ ಪ್ರಸ್ತುತ ಶೈಕ್ಷಣಿಕ ವಿಷಯದಲ್ಲಿ ಗೋಚರ ಪ್ರಗತಿ ತೋರುತ್ತಿದೆ. ಸಾಮಾಜಿಕವಾಗಿ ಜಿಲ್ಲೆ ಹಿಂದುಳಿದಿದ್ದು, ಇತರ ರಾಜ್ಯಗಳೊಂದಿಗೆ ಗಡಿ ಹಂಚಿಕೊಂಡಿದೆ. ರಾಜ್ಯದ ಗಡಿ ಕೊನೆಯಲ್ಲಿದೆ. ಇಡೀ ಜಿಲ್ಲೆಗೆ ಒಂದು ನವೋದಯ ಶಾಲೆ ಇದ್ದು, ಇದು ವಿದ್ಯಾರ್ಥಿಗಳ ಸರ್ವತೋಮುಖ ಅಭಿವೃದ್ಧಿಗೆ ಉತ್ತಮವಾಗಿ ಕಾರ್ಯ ನಿರ್ವಹಿಸುತ್ತಿದೆ. ನವೋದಯ ವಿದ್ಯಾಲಯ ಪ್ರವೇಶಕ್ಕೆ ಅರ್ಜಿ ಸಲ್ಲಿಸುವವರ ಸಂಖ್ಯೆ ಪ್ರತಿವರ್ಷ ಹೆಚ್ಚಳವಾಗುತ್ತಿದೆ. ಜೊತೆಗೆ ಆಕಾಂಕ್ಷಿಗಳ ಸಂಖ್ಯೆ ಹೆಚ್ಚುತ್ತಲೇ ಇದೆ ಎಂದು ತಿಳಿಸಿದರು.

ಗ್ರಾಮೀಣ ಭಾಗದ ಮಕ್ಕಳ ಅಗತ್ಯಗಳನ್ನು ಪೂರೈಸಲು ಹಾಗೂ ಅವರನ್ನು ಉತ್ತೇಜಿಸಲು ಜಿಲ್ಲೆಯ ಶೈಕ್ಷಣಿಕ ಪ್ರಗತಿಗಾಗಿ ಮತ್ತೊಂದು ನವೋದಯ ವಿದ್ಯಾಲಯದ ಅಗತ್ಯ ಗುರುತಿಸಲಾಗಿದೆ. ಹಾಗಾಗಿ ಇನ್ನೊಂದು ನವೋದಯ ಶಾಲೆಯನ್ನು ಮಂಜೂರು ಮಾಡಿ, ಜಿಲ್ಲೆಯ ಶೈಕ್ಷಣಿಕ ಪ್ರಗತಿಗೆ ಕೈಜೋಡಿಸಬೇಕು ಎಂದು ಮನವಿ ಮಾಡಿದರು.

ಅಲ್ಲದೇ, ಜಿಲ್ಲೆಯ ಹೊಂಡರಬಾಳಿನಲ್ಲಿರುವ ಜವಾಹರ್ ನವೋದಯ ವಿದ್ಯಾಲಯ ವಸತಿ ಶಾಲೆಯಲ್ಲಿ 460 ವಿದ್ಯಾರ್ಥಿಗಳು, 60 ಸಿಬ್ಬಂದಿ ಮತ್ತು ಅವರ ಕುಟುಂಬದ ಸದಸ್ಯರು ಉಳಿದುಕೊಂಡಿದ್ದಾರೆ. ವಿದ್ಯಾಲಯಕ್ಕೆ ಕೆಲ ಸೌಲಭ್ಯಗಳ ಅಗತ್ಯವಿದ್ದು, ಇದಕ್ಕಾಗಿ ಶಾಲಾ ಮಟ್ಟದಲ್ಲಿ ವ್ಯವಸ್ಥೆ ಮಾಡಲು ಅನುದಾನದ ಕೊರತೆಯಿದೆ. ಹಾಗಾಗಿ ಮೂಲಸೌಕರ್ಯ ಕಲ್ಪಿಸಲು ಅಗತ್ಯ ಅನುದಾನ ನೀಡಬೇಕು ಎಂದು ಒತ್ತಾಯಿಸಿದರು.

ವಿದ್ಯಾಲಯದ ವಸತಿನಿಲಯಗಳ ಡಾರ್ಮೆಟರಿ ಮತ್ತು ಶೈಕ್ಷಣಿಕ ಬ್ಲಾಕ್‌ಗಳಲ್ಲಿ ಬಿಸಿ ನೀರು ಸೌಲಭ್ಯವುಳ್ಳ 10 ವಾಟರ್ ಪ್ಯೂರಿಫೈಯರ್ ವ್ಯವಸ್ಥೆ, ಶಾಲೆಯ ಆಂತರಿಕ ರಸ್ತೆಗಳ ಸುಧಾರಣೆ, 80 ಡ್ಯುಯಲ್ ಡೆಸ್ಕ್‌ಗಳೊಂದಿಗೆ ಹೆಚ್ಚುವರಿಯಾಗಿ 2 ತರಗತಿ ಕೊಠಡಿಗಳ ನಿರ್ಮಾಣ, ಕೌಶಲ ಪ್ರಯೋಗಾಲಯಗಳಿಗಾಗಿ ಎರಡು ಕೊಠಡಿಗಳನ್ನು ನಿರ್ಮಿಸಬೇಕು. ಈ ಎಲ್ಲಾ ಸೌಲಭ್ಯಗಳನ್ನು ಆದ್ಯತೆ ಮೇರೆಗೆ ಒದಗಿಸಿಕೊಡುವಂತೆ ಕೇಂದ್ರ ಸಚಿವರಿಗೆ ಮನವಿ ಮಾಡಿದರು.

ಅಧಿವೇಶನದಲ್ಲಿ ವಿವಿಧ ಬೇಡಿಕೆಗಳ ಈಡೇರಿಸುವಂತೆ ಒತ್ತಾಯಿಸಿ

ಅಂಗನವಾಡಿ ಕಾರ್ಯಕರ್ತೆಯರ ಪ್ರತಿಭಟನೆ ಆರಂಭ



ವಿವಿಧ ಬೇಡಿಕೆ ಈಡೇರಿಕೆಗೆ ಒತ್ತಾಯಿಸಿ ಅಂಗನವಾಡಿ ನೌಕರರ ಸಂಘದ ಜಿಲ್ಲಾ ಘಟಕದ ವತಿಯಿಂದ ಚಾಮರಾಜನಗರದಲ್ಲಿ ಅಹೋರಾತ್ರಿ ಪ್ರತಿಭಟನೆ ಆರಂಭಿಸಿರುವುದು.

ಚಾಮರಾಜನಗರ, ಡಿ.17-ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಹಾಯಕಿಯರನ್ನು ವರ್ಗ 3 ಮತ್ತು 4 ಎಂದು ಪರಿಗಣಿಸಿ ಖಾಯಂ ಸೇರಿದಂತೆ ವಿವಿಧ ಬೇಡಿಕೆಗಳ ಈಡೇರಿಸಬೇಕು ಎಂದು ಒತ್ತಾಯಿಸಿ ರಾಜ್ಯ ಅಂಗನವಾಡಿ ನೌಕರರ ಸಂಘದ ಜಿಲ್ಲಾ ಘಟಕದ ವತಿಯಿಂದ ನಗರದಲ್ಲಿ ಅಹೋರಾತ್ರಿ ಪ್ರತಿಭಟನೆ ಆರಂಭಿಸಲಾಗಿದೆ.

ನಗರದ ಚಾಮರಾಜೇಶ್ವರ ದೇವಸ್ಥಾನ ಮುಂಭಾಗ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಎ.ನಾಗಮಣಿ ನೇತೃತ್ವದಲ್ಲಿ ಸಮಾವೇಶಗೊಂಡ ಪ್ರತಿಭಟನಾಕಾರರು, ಅಲ್ಲಿಂದ ಮೆರವಣಿಗೆ ಹೊರಟು ಭುವನೇಶ್ವರಿ ವೃತ್ತ, ಬಿ.ರಾಚಯ್ಯ ಜೋಡಿರಸ್ತೆ ಮೂಲಕ ಜಿಲ್ಲಾಡಳಿತ ಭವನಕ್ಕೆ ತೆರಳಿ ಅಹೋರಾತ್ರಿ ಪ್ರತಿಭಟನೆ ಆರಂಭಿಸಿದ್ದಾರೆ.

ಎ.ನಾಗಮಣಿ ಮಾತನಾಡಿ, ಚಳಿಗಾಲದ ಅಧಿವೇಶನದಲ್ಲಿ ಗುಜರಾತ್ ಹೈಕೋರ್ಟ್ ತೀರ್ಪಿನಂತೆ ಅಂಗನವಾಡಿ ಕಾರ್ಯಕರ್ತೆಯರು, ಸಹಾಯಕಿರನ್ನು ವರ್ಗ 3 ಮತ್ತು 4 ಎಂದು ಪರಿಗಣಿಸಿ ಖಾಯಂಗೊಳಿಸಬೇಕು. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ 14 ಐಸಿಡಿ 2023ರ ಆದೇಶದ ಪ್ರಕಾರ ಕೂಡಲೇ ಗ್ರಾಚ್ಯುಟಿ ಬಿಡುಗಡೆ ಮಾಡಬೇಕು. 2018ರಿಂದ ಕೇಂದ್ರ ಸರ್ಕಾರ ಯಾವುದೇ ಗೌರವಧನ ಹೆಚ್ಚಳ ಮಾಡಿಲ್ಲ. ಆದ್ದರಿಂದ 26 ಸಾವಿರ ರೂ.ಗೆ ಗೌರವಧನ ಹೆಚ್ಚಿಸಬೇಕು ಎಂದು ಆಗ್ರಹಿಸಿದರು.

2023ರ ವಿಧಾನಸಭಾ ಚುನಾವಣೆ ಸಂದರ್ಭದಲ್ಲಿ ಘೋಷಣೆ ಮಾಡಿದ 15 ಸಾವಿರ ರೂ.ಗೆ ಗೌರವಧನ ಹೆಚ್ಚಿಸಬೇಕು. ನಿವೃತ್ತಿಯಾದವರಿಗೆ ಇಡಗಂಟು ಅಥವಾ ಎನ್‌ಪಿಎಸ್ ಹಣ ಹಾಗೂ 10 ಸಾವಿರ ಮಾಸಿಕ ಪಿಂಚಣಿ ನೀಡಬೇಕು. ಶಿಕ್ಷಣ ಇಲಾಖೆ, ಎಸ್‌ಡಿಎಂಸಿಗಳಿಂದ ಪ್ರಾರಂಭ ಮಾಡಿರುವ ಎಲ್‌ಕೆಜಿ, ಯುಕೆಜಿ ನಿಲ್ಲಿಸಿ ಎಲ್ಲಾ ಅಂಗನವಾಡಿ ಕೇಂದ್ರಗಳನ್ನು ಮೇಲ್ದರ್ಜೆಗೇರಿಸಿ ಅಂಗನವಾಡಿಗಳಲ್ಲೇ ಎಲ್‌ಕೆಜಿ, ಯುಕೆಜಿ ಪ್ರಾರಂಭಿಸಬೇಕು ಎಂದು ಒತ್ತಾಯಿಸಿದರು.

ಪ್ರತಿಭಟನೆಯಲ್ಲಿ ಸಂಘದ ಖಜಾಂಚಿ ಜಿ.ಭಾಗ್ಯ, ಕಾರ್ಯದರ್ಶಿ ಶಾಯಿದ ಭಾನು, ಖಜಾಂಚಿ ಗುರುಲಿಂಗಮ್ಮ, ಸಂತೇಮರಹಳ್ಳಿ ಅಧ್ಯಕ್ಷೆ ಪಾರ್ವತಮ್ಮ, ಖಜಾಂಚಿ ಜಯಮಾಲ, ಕಾರ್ಯದರ್ಶಿ ತುಳಸಮ್ಮ, ಯಳಂದೂರು ಅಧ್ಯಕ್ಷೆ ಮೀನಾಕ್ಷಿ, ಖಜಾಂಚಿ ಕೆಂಪಮ್ಮ, ಗುಂಡ್ಲುಪೇಟೆ ಅಧ್ಯಕ್ಷೆ ಸುಜಿಯಾ, ಖಜಾಂಚಿ ಸುಮಿತ್ರ, ಕಾರ್ಯದರ್ಶಿ ಗುರುಮಲ್ಲಮ್ಮ, ಕೊಳ್ಳೇಗಾಲ ಅಧ್ಯಕ್ಷೆ ಶಾಂತಮ್ಮ, ಕಾರ್ಯದರ್ಶಿ ಸುಂದ್ರಮ್ಮ ಸದಸ್ಯರು ಭಾಗವಹಿಸಿದ್ದಾರೆ.

ಗೌರಿ ಪುಟ್ಟಶೆಟ್ಟಿ ನಿಧನ



ಚಾಮರಾಜನಗರ, ಡಿ.17-ನಗರದ ಉಪ್ಪಾರ ಬಡಾವಣೆಯ ಭಜನೆ ಹಿರಿಯ ಕಲಾವಿದ ಹಾಗೂ ಉಪ್ಪಾರ ಜನಾಂಗದ ಹಿರಿಯ ಮುಖಂಡ ಗೌರಿ ಪುಟ್ಟಶೆಟ್ಟಿ (75) ಹೃದಯಾಘಾತದಿಂದ ಮಂಗಳವಾರ ನಿಧನರಾದರು. ಮೃತರು ಪತ್ನಿ ಮಹದೇವಮ್ಮ, ನಾಲ್ವರು ಪುತ್ರರು, ಇಬ್ಬರು ಪುತ್ರಿಯರು ಹಾಗೂ ಅಪಾರ ಬಂಧು-ಬಳಗವನ್ನು ಅಗಲಿದ್ದಾರೆ. ನಗರದ ಸಂತೇಮರಹಳ್ಳಿ ರಸ್ತೆಯಲ್ಲಿರುವ ಉಪ್ಪಾರ ಸಮುದಾಯ ರುದ್ರಭೂಮಿಯಲ್ಲಿ ಅಂತ್ಯಕ್ರಿಯೆ ನೆರವೇರಿತು.

ಬಸವಾದಿ ಶರಣರ ತತ್ವಾದರ್ಶ ಪಾಲಿಸಬೇಕು



ಮರಿಯಾಲ ಗ್ರಾಮದ ಮುರುಘ ಮಠದಲ್ಲಿ ನಡೆದ ಶರಣ ಸಂಸ್ಕೃತಿ ವೈಭವ, ಮುರುಘ ರಾಜೇಂದ್ರಶ್ರೀಗಳ ಆರಾಧನೆ ಕಾರ್ಯಕ್ರಮವನ್ನು ವಿವಿಧ ಮಠಾಧೀಶರು ಉದ್ಘಾಟಿಸಿದರು.

ಚಾಮರಾಜನಗರ, ಡಿ.17-ಪ್ರತಿಯೊಬ್ಬರು ಬಸವಾದಿ ಶರಣರ ತತ್ವಾದರ್ಶ ಪಾಲಿಸಬೇಕು ಎಂದು ಬೆಳಗಾವಿ ಜಿಲ್ಲೆಯ ಬಸವಬೆಳವಿ ಚಿರಂತೇಶ್ವರ ಮಠದ ಶ್ರೀಶರಣ ಬಸವದೇವರು ಸ್ವಾಮೀಜಿ ತಿಳಿಸಿದರು.

ತಾಲೂಕಿನ ಮರಿಯಾಲ ಗ್ರಾಮದ ಮುರುಘ ರಾಜೇಂದ್ರಸ್ವಾಮೀಜಿ ಮಹಾಸಂಸ್ಥಾನ ಮಠದಲ್ಲಿ ನಡೆದ ಶರಣ ಸಂಸ್ಕೃತಿ ವೈಭವ, ಮುರುಘ ರಾಜೇಂದ್ರಶ್ರೀಗಳ ಆರಾಧನೆ, ಲಿಂಗೈಕ್ಯ ಪೂಜ್ಯರಸ್ಮರಣೋತ್ಸವ ಕಾರ್ಯಕ್ರಮದಲ್ಲಿ ಪ್ರವಚನ ನೀಡಿದ ಅವರು, ಉತ್ತರ ಕರ್ನಾಟಕ ಹಾಗೂ ದಕ್ಷಿಣ ಕರ್ನಾಟಕಕ್ಕೂ ಅವಿನಾಭಾವ ಸಂಬಂಧವಿದೆ. 12ನೇ ಶತಮಾನದ ಬಸವಾದಿ ಶರಣರು ಹಾಕಿಕೊಟ್ಟ ದಾಸೋಹ ಪರಂಪರೆ ಇಂದಿಗೂ ದಕ್ಷಿಣ ಕರ್ನಾಟಕದಲ್ಲಿ ಮುಂದುವರೆದಿದೆ. ಉತ್ತರದಿಂದ ದಕ್ಷಿಣಕ್ಕೆ ಬಂದ ಗುರುಮಲ್ಲೇಶ್ವರರು, ಕಲ್ಬುರ್ಗಿ ಶಾ ಎಂದೇ ಖ್ಯಾತರಾದ ಮುರುಗೇಶ, ಮುರುಘ ರಾಜೇಂದ್ರ, ಮಲೆಮಹದೇಶ್ವರ ಇವರು ಧರ್ಮ ಪ್ರಚಾರಕ್ಕೆ ಬಂದವರು ಶರಣ ಪರಂಪರೆ ಹುಟ್ಟು ಹಾಕಿದವರು ಎಂದರು.

ಧಾರವಾಡ ಮಹಾಮನೆ ಮನಗುಂಡಿ ಮಠದ ಶ್ರೀ ಚನ್ನಬಸವಸ್ವಾಮೀಜಿ ಮಾತನಾಡಿ, ಇಂದು ಅಧ್ಯಯನ ಹಾಗೂ ಸಾಧನೆ ಮಾಡುವವರ ಸಂಖ್ಯೆ ಕಡಿಮೆಯಾಗಿದೆ. ಒಂದು ರೀತಿ ಅಧ್ಯಯನ ಹಾಗೂ ಸಾಧನಾ ಕ್ಷೇತ್ರದಲ್ಲಿ ಬರಗಾಲ ಆವರಿಸಿದೆ. ವಚನಕ್ಕೆ ವಚನಾಂಕಿತವೇ ವೈಶಿಷ್ಟ್ಯ. ಬಸವಣ್ಣನವರ ಜೀವನ ವೃತ್ತಾಂತದ ಬಗ್ಗೆ ಕೆಲ ಕವಿಗಳು, ವಿದ್ವಾಂಸರು ತಮಗೆ ಬೇಕಾದ ಹಾಗೇ ಬರೆದು, ಸಾಹಿತ್ಯವನ್ನು ಹಾಳುಗೆಡವಿದ್ದಾರೆ ಎಂದು ವಿಷಾದ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಮರಿಯಾಲ ಮುರುಘರಾಜೇಂದ್ರ ಮಠಾಧೀಶ ಶ್ರೀ ಇಮ್ಮಡಿ ಮುರುಘ ರಾಜೇಂದ್ರಸ್ವಾಮೀಜಿ, ಕನಕಪುರ ದೇಗುಲ ಮಠದ ಶ್ರೀ ಚನ್ನಬಸವ ಸ್ವಾಮೀಜಿ, ದೇವನೂರು ಮಠದ ಶ್ರೀ ಮಹಾಂತಸ್ವಾಮೀಜಿ ಹಾಗೂ ವಿವಿಧ ಮಠಾಧೀಶರು, ಸುತ್ತಮುತ್ತಲ ಗ್ರಾಮಸ್ಥರು ಇದ್ದರು.

ಇಂದು ಗುಂಡ್ಲುಪೇಟೆ ವಿವಿಧೆಡೆ ವಿದ್ಯುತ್ ವ್ಯತ್ಯಯ

ಗುಂಡ್ಲುಪೇಟೆ, ಡಿ.17-ಪಟ್ಟಣದ ಸೆಸ್ಕ್ ಉಪವಿಭಾಗ ವ್ಯಾಪ್ತಿಯಲ್ಲಿ ತ್ರೈಮಾಸಿಕ ನಿರ್ವಹಣೆ ಕಾಮಗಾರಿ ಹಮ್ಮಿಕೊಂಡಿರುವುದರಿಂದ ಡಿ.18ರಂದು ಬೆಳಗ್ಗೆ 10 ರಿಂದ ಸಂಜೆ 6 ಗಂಟೆ ವರೆಗೆ ವಿವಿಧೆಡೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ. ಗುಂಡ್ಲುಪೇಟೆ, ಬರಗಿ, ಕೋಡಿಹಳ್ಳಿ, ಬೇರಂಬಾಡಿ, ನೇನೆಕಟ್ಟೆ, ವೀರನಪುರ, ಬೊಮ್ಮನಹಳ್ಳಿ, ಕುಂದಗೆರೆ, ಕಟ್ನವಾಡಿ, ದೇಪಾಪುರ, ಗೋವಿಂದಪುರ, ಕಗ್ಗಳ, ಕೆಲಸಿಪುರ, ಲಕ್ಕೂರು, ಫ್ಯಾಕ್ಟರಿ, ಬೆಳವಾಡಿ, ಬಾಚಳ್ಳಿ, ಬೊಮ್ಮಲಾಪುರ, ದಾರಿಬೇಗೂರು, ಕೊಡಸೋಗೆ, ಹೆಗ್ಗವಾಡಿ, ಹಂಗಳ, ಶಿವಪುರ, ಕಲ್ಲಿಗೌಡನಹಳ್ಳಿ, ಎಲಚಟ್ಟಿ, ಗೋಪಾಲ್‌ಪುರ, ದೇವರಹಳ್ಳಿ, ಹೊನ್ನೇಗೌಡನಹಳ್ಳಿ, ಮಲ್ಲಯ್ಯನಪುರ ಹಾಗೂ ಹೊಂಗಹಳ್ಳಿ, ಮುಂಟಿಪುರ, ಹೆಚ್.ಎಸ್.ಹುಂಡಿ ಸುತ್ತಮುತ್ತಲ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಸೆಸ್ಕ್ ಇಂಜಿನಿಯರ್ ತಿಳಿಸಿದ್ದಾರೆ.

ಮೈಸೂರು ಮಿತ್ರ

ಒಂದನೇ ಪುಟದಿಂದ

ಲೋಕಸಭೆಯಲ್ಲಿ ವಿಧೇಯಕ ಮಂಡನೆ

ಸಂವಿಧಾನದ 129ನೇ ತಿದ್ದುಪಡಿ ಮಸೂದೆಯಾಗಿದ್ದು, ಇದು ದೇಶದಲ್ಲಿ ಏಕಕಾಲಕ್ಕೆ ಎಲ್ಲ ಸಂಸ್ಥೆಗಳಿಗೆ ಚುನಾವಣೆ ನಡೆಸುವ ಮಹತ್ತರ ಉದ್ದೇಶ ಹೊಂದಿದೆ. ಈ ವಿಧೇಯಕದ ಜೊತೆಗೆ, ಜಮ್ಮು-ಕಾಶ್ಮೀರ ಮತ್ತು ದೆಹಲಿ ಕೇಂದ್ರಾಡಳಿತ ಪ್ರದೇಶಗಳಲ್ಲಿ ವಿಧಾನಸಭೆ ಜೊತೆಗೆ, ಲೋಕಸಭೆ ಚುನಾವಣೆ ನಡೆಸಲು ಪ್ರಸ್ತಾವಿತ ಕೇಂದ್ರಾಡಳಿತ ಪ್ರದೇಶಗಳ ಕಾನೂನುಗಳು (ತಿದ್ದುಪಡಿ) ಮಸೂದೆ- 2024 ಮಂಡನೆಯಾಗಲಿದೆ.

ಈ ವಿಧೇಯಕಗಳು ಏನನ್ನು ಪ್ರಸ್ತಾಪಿಸುತ್ತದೆ: ಸಂವಿಧಾನದ 129ನೇ ತಿದ್ದುಪಡಿ ಮಸೂದೆಯು ಸಂವಿಧಾನದಲ್ಲಿ ಹೊಸ ವಿಧಿ 82ಎ ಅನ್ನು ಸೇರಿಸಲು ಪ್ರಸ್ತಾಪಿಸುತ್ತದೆ. ಇದು, ಲೋಕಸಭೆ ಮತ್ತು ರಾಜ್ಯಗಳ ವಿಧಾನಸಭೆಗಳಿಗೆ ಏಕಕಾಲದಲ್ಲಿ ಚುನಾವಣೆಗಳನ್ನು ನಡೆಸಲು ಅವಕಾಶ ಕಲ್ಪಿಸುತ್ತದೆ. ಲೋಕಸಭೆ ಮತ್ತು ರಾಜ್ಯಗಳ ವಿಧಾನಸಭೆ ಅಧಿಕಾರಾವಧಿಯನ್ನು ನಿರ್ಧರಿಸಲು ಕಲಂ 83 ಮತ್ತು 172ನೇ ವಿಧಿಗಳನ್ನು ತಿದ್ದುಪಡಿ ಮಾಡಲು ಅವಕಾಶ ನೀಡುತ್ತದೆ.

ಉಭಯ ಬಣಗಳ ಬಲ ಪ್ರದರ್ಶನ

ನಾಯಕ ಮಾಜಿ ಸಚಿವ ರಮೇಶ್ ಜಾರಕಿಹೊಳಿ ನಿನ್ನೆ ರಾತ್ರಿ ಮುಂಬೈನಲ್ಲಿ ಫಡ್ನವೀಸ್ ಅವರನ್ನು ಭೇಟಿ ಮಾಡಿ ಸಮಾವೇಶಕ್ಕೆ ಆಹ್ವಾನಿಸಿದ್ದಾರೆ.

ವಿಜಯೇಂದ್ರ ಅವರು ಅಧಿಕಾರ ವಹಿಸಿಕೊಂಡ ನಂತರದ ಬೆಳವಣಿಗೆಗಳನ್ನು, ಅವರ ಗಮನಕ್ಕೆ ತಂದಿರುವುದಲ್ಲದೆ, ಮುಂಬರುವ ವಿಧಾನಸಭಾ ಚುನಾವಣೆ ಎದುರಿಸಲು ಸಮರ್ಥ ನಾಯಕರೊಬ್ಬರು ಬೇಕು ಎಂದು ತಿಳಿಸಿದ್ದಾರೆ. ಫಡ್ನವೀಸ್ ಭೇಟಿ ವೇಳೆ ಯಡಿಯೂರಪ್ಪ ಮೊಮ್ಮಗ ಹಾಗೂ ಜೆಡಿಎಸ್ ನಾಯಕ ಸಂತೋಷ್ ಸೇರಿದಂತೆ ಮಾಜಿ ಶಾಸಕರುಗಳಿದ್ದರು.

ವಕ್ಫ್ ವಿಚಾರಕ್ಕೆ ಸಂಬಂಧಿಸಿದಂತೆ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್, ರಮೇಶ್ ಜಾರಕಿಹೊಳಿ, ಅರವಿಂದ ಲಿಂಬಾವಳಿ, ಕುಮಾರ್ ಬಂಗಾರಪ್ಪ ಸೇರಿದಂತೆ ಹಲವು ನಾಯಕರು ಪರ್ಯಾಯವಾಗಿ ಸಭೆ ಮತ್ತು ರ್‍ಯಾಲಿಗಳನ್ನು ನಡೆಸಿ, ರಾಜ್ಯಾಧ್ಯಕ್ಷರ ವಿರುದ್ಧವೇ ಹರಿಹಾಯ್ದಿದ್ದರು.

ಇದನ್ನು ವಿರೋಧಿಸಲೆಂದೇ ಮಾಜಿ ಸಚಿವರಾದ ಕಟ್ಟಾ ಸುಬ್ರಹ್ಮಣ್ಯ ನಾಯ್ಡು, ರೇಣುಕಾಚಾರ್ಯ ನಿಷ್ಠಾವಂತ ಬಣ ಎಂಬುದಾಗಿ ಗುರುತಿಸಿಕೊಂಡು ಸಭೆಗಳನ್ನು ನಡೆಸಿ ವಿಜಯೇಂದ್ರ ಹಾಗೂ ಯಡಿಯೂರಪ್ಪ ಅವರನ್ನು ಬೆಂಬಲಿಸಿದರು.

ಎರಡೂ ಬಣಗಳು ಬೀದಿಗಿಳಿಯುತ್ತಿದ್ದಂತೆ ಎಚ್ಚೆತ್ತ ಪಕ್ಷದ ವರಿಷ್ಠರು ಯತ್ನಾಳ್‌ಗೆ ಶೋಕಾಸ್ ನೋಟಿಸ್ ನೀಡಿದ್ದಲ್ಲದೆ, ದೆಹಲಿಗೆ ಕರೆಸಿಕೊಂಡು ಚರ್ಚಿಸಿದರು.

ಇದಾದ ನಂತರವೂ ಯತ್ನಾಳ್, ರಾಜ್ಯಾಧ್ಯಕ್ಷ ವಿಜಯೇಂದ್ರ ವಿರುದ್ಧದ ತಮ್ಮ ನಿಲುವು ಬದಲಿಸದೆ, ಹಿಂದಿನ ಧಾಟಿಯಲ್ಲೇ ವಾಗ್ದಾಳಿ ಮುಂದುವರೆಸಿರುವುದಲ್ಲದೆ, ದಾವಣಗೆರೆಯಲ್ಲೇ ಸಮಾವೇಶ ನಡೆಸಲು ಹೊರಟಿದ್ದಾರೆ.

ಬಿಜೆಪಿ ಎರಡೂ ಬಣಗಳ ಆಂತರಿಕ ಜಗಳ ತಾರಕಕ್ಕೇರಿದ್ದು, ಮುಂದಿನ ದಿನಗಳಲ್ಲಿ ಪಕ್ಷದ ವರಿಷ್ಠರಿಗೆ ಇನ್ನಷ್ಟು ತಲೆ ನೋವಾಗಿ ಪರಿಣಮಿಸಲಿದೆ.

ಸುವರ್ಣಸೌಧದಲ್ಲಿ ಸರಿರಾತ್ರಿವರೆಗೆ ಕಲಾಪ!

ಅವಧಿಯಲ್ಲಿ ದಾಖಲೆ ನಿರ್ಮಾಣವಾಗಲಿ ಎಂದಾಗ, 'ನಾನು ಸಿದ್ಧನಿದ್ದೇನೆ' ಎಂದು ನಗುತ್ತಲೇ ಕಲಾಪ ಮುಂದುವರಿಸಿದರು. ಕೆಲವು ಸದಸ್ಯರು ಮಾತನಾಡಲು ಅವಕಾಶಕೊಡಿ ಸಮಯ ವಾಯಿತು ಎಂದು ಒತ್ತಾಯಿಸಿದಾಗ ಖಾದರ್ ಅವರು, ವಿಶ್ವಕಪ್ ಕ್ರಿಕೆಟ್‌ಗಾಗಿ ತಡರಾತ್ರಿ 3 ಗಂಟೆಯವರೆಗೂ ಕಾಯುವುದಿಲ್ಲವೇ, ಅದೇ ರೀತಿ ಭಾವಿಸಿ ಸಹಕಾರಕೊಡಿ ಎಂದರು.

ಸಚಿವ ಸತೀಶ್ ಜಾರಕಿಹೊಳಿ ಕೂಡಾ ಇದೊಂದು ವಿಶೇಷ ಘಳಿಗೆ ಎಂದು ಬಣ್ಣಿಸಿದರು. ರಾಯಚೂರಿನ ದೇವದುರ್ಗದ ಜೆಡಿಎಸ್ ಶಾಸಕಿ ಕರೆಮ್ಮ ನಾಯ್ಕ್ ಮಧ್ಯರಾತ್ರಿಯಾದರೂ ಕಲಾಪದಲ್ಲಿ ಭಾಗವಹಿಸಿ ತಮ್ಮ ಗಮನ ಸೆಳೆಯುವ ಸೂಚನೆಗೆ ಉತ್ತರ ಪಡೆಯಲು ಹಾಜರಿದ್ದರು.

ಇಂಡಿ ಶಾಸಕ ಯಶವಂತರಾಯಗೌಡ ತಮ್ಮ ಸರದಿ ಬಂದಾಗ, ಕರೆಮ್ಮ ಅವರು ಬಹಳ ಹೊತ್ತಿನಿಂದ ಕಾಯುತ್ತಿದ್ದಾರೆ, ಅವರಿಗೆ ಮೊದಲು ಉತ್ತರ ಕೊಡಿ, ನಂತರ ತೊಗರಿ ಬೆಳೆಹಾನಿಗೆ ಪರಿಹಾರ ನೀಡುವಂತೆ ಮನವಿ ಮಾಡಿದರು.

ಕೃಷ್ಣನಾಯ್ಕ್, ನಾರಾ ಭರತ್ ರೆಡ್ಡಿ, ಕೋನರೆಡ್ಡಿ, ಸದನದಲ್ಲಿ ಹಾಜರಿದ್ದು ಉತ್ತರ ಪಡೆದರು. ಇನ್ನು ಕಾಂಗ್ರೆಸ್ ಸದಸ್ಯ ಎ.ಆರ್.ಕೃಷ್ಣಮೂರ್ತಿ ತಡರಾತ್ರಿ 1 ಗಂಟೆಗೆ ಗಮನ ಸೆಳೆಯುವ ಸೂಚನೆ ಮಂಡಿಸಿ ಉತ್ತರ ಪಡೆದುಕೊಂಡರು.

ಕಲಾಪ ಮುಂದೂಡುವ ವೇಳೆಗೆ ಸ್ಪೀಕರ್, ಡೆಪ್ಯುಟಿ ಸ್ಪೀಕರ್, ಮೂವರು ಸಚಿವರು, 7 ಕಾಂಗ್ರೆಸ್ ಶಾಸಕರು, ಜೆಡಿಎಸ್‌ನ 4 ಶಾಸಕರು, ಬಿಜೆಪಿ ಒಬ್ಬರು ಶಾಸಕರು ಹಾಗೂ ಒಬ್ಬರು ಪಕ್ಷೇತರ ಶಾಸಕರು ಉಪಸ್ಥಿತರಿದ್ದರು.

ಬೆಳಗಾವಿ ಅಧಿವೇಶನ ಹತ್ತು ದಿನಗಳಿಗೆ ನಿಗದಿಯಾಗಿತ್ತಾದರೂ ಕನ್ನಡ ಸಾಹಿತ್ಯ ಸಮ್ಮೇಳನದ ಹಿನ್ನೆಲೆಯಲ್ಲಿ 9 ದಿನಕ್ಕೆ ಇಳಿಸಲಾಯಿತು.

ಮಾಜಿ ಮುಖ್ಯಮಂತ್ರಿ ಎಸ್.ಎಂ.ಕೃಷ್ಣ ಅವರ ನಿಧನದಿಂದ ಮಂಗಳವಾರ ಸಂತಾಪ ಸೂಚನೆ ಹಾಗೂ ಬುಧವಾರ ಸರ್ಕಾರಿ ರಜೆ ಘೋಷಣೆ ಘೋಷಿಸಿದ್ದರಿಂದ ಅಧಿವೇಶನದ ಅವಧಿ 7 ದಿನಕ್ಕೆ ಇಳಿಕೆಯಾಗಿತ್ತು. ಸದನದ ಮುಂದಿರುವ ವಿಷಯಗಳನ್ನು ಮುಗಿಸುವ ದೃಷ್ಟಿಯಿಂದ ಕಲಾಪದ ಅವಧಿಯನ್ನು ಹೆಚ್ಚಿಸಲಾಗಿದ್ದು, ವಿಧಾನಮಂಡಲ ಅಧಿವೇಶನ ಡಿಸೆಂಬರ್ 19 ರವರೆಗೆ ನಡೆಯಲಿದೆ.

ಬಲದಿಂದಲೇ ನಾನು ಸಿಎಂ, ಪ್ರಧಾನಿಯಾದೆ

ಘೋಷಿಸಿದಾಗ, ಈ ರಾಷ್ಟ್ರದ ಬಹುತೇಕ ರಾಜಕೀಯ ವಿರೋಧಿಗಳೆಲ್ಲರೂ ಜೈಲು ಪಾಲಾದರು. ಸರಕಾರದ ವಿರುದ್ಧ ಟೀಕೆ ಮಾಡುತ್ತಿದ್ದವರನ್ನು ಜೈಲಿಗೆ ಕಳುಹಿಸಲಾಯಿತು. ನನ್ನನ್ನೂ ಜೈಲಿಗೆ ಕಳುಹಿಸಲಾಯಿತು. ನನ್ನ ಸೆರೆ ವಾಸವು ನನ್ನ ತಂದೆಯ ಮೇಲೆ ನಕಾರಾತ್ಮಕ ಪರಿ ಣಾಮ ಬೀರಿ, ಅದು ಕುಟುಂಬದ ಮೇಲೆ ಮಾನಸಿಕ ಒತ್ತಡ ಉಂಟು ಮಾಡಿತು. ಕೊನೆಗೆ ಆ ನೋವಿನಲ್ಲಿಯೇ ತಂದೆಯವರು ವಿಧಿವಶರಾದರು. ಪ್ರಜಾಪ್ರಭುತ್ವದಲ್ಲಿ ನಂಬಿಕೆ ಇಟ್ಟಿರುವ ಮತ್ತು ತಮ್ಮ ರಾಜಕೀಯ ನಂಬಿಕೆಗಳ ಜತೆ ನಿಂತಿದ್ದ ಅನೇಕರಿಗೆ ಇದು ಆಘಾತಕಾರಿ ಸಮಯವಾಗಿತ್ತು ಎಂದು ದೇವೇಗೌಡರು ಭಾವುಕರಾಗಿ ನುಡಿದರು. ಈ ಅವಧಿಯಲ್ಲಿ ಭಾರತ ಅನೇಕ ಪಾಠಗಳನ್ನು ಕಲಿತುಕೊಂಡಿತು. ಆ ಸಮಯದಲ್ಲಿಯೇ ಸಂವಿ ಧಾನವು ನಮಗೆ ನೀಡಿದ ಸ್ವಾತಂತ್ರ್ಯ ಎಂತಹುದು ಎಂಬುದನ್ನು ರಾಷ್ಟ್ರ ಅರಿತುಕೊಂಡಿತು. ಯುವ ಪೀಳಿಗೆಯು ಪ್ರಜಾಪ್ರಭುತ್ವವನ್ನು ಸಂರಕ್ಷಿಸುವ ನಿಟ್ಟಿನಲ್ಲಿ ತುರ್ತು ಪರಿಸ್ಥಿತಿ ಸಮಯದಲ್ಲಿ ಅನೇಕರು ಮಾಡಿದ ತ್ಯಾಗವನ್ನು ಸ್ಮರಿಸಬೇಕೆಂದು ಮನವಿ ಮಾಡಿದರು. 1977ರ ನಂತರ ಭಾರತದಲ್ಲಿ ಸಮ್ಮಿಶ್ರ ಸರ ಕಾರಗಳ ಯಶಸ್ಸು ಸಂವಿಧಾನದ ಸದೃಢತೆಗೆ ಹಿಡಿದ ಕನ್ನಡಿ ಎಂದ ಅವರು; ನಾನು ಮೊದಲ ಬಾರಿಗೆ 13 ಪಕ್ಷಗಳ ಒಕ್ಕೂಟವನ್ನು ಮುನ್ನಡೆಸಿದ್ದೇನೆ.

ಆ ಸರಕಾರದ ಆರ್ಥಿಕ ಸಾಧನೆಯ ಹೆಗ್ಗು ರುತುಗಳನ್ನು ಗಮನಿಸಿದರೆ ನಮ್ಮ ಸಂವಿಧಾನದ ಶಕ್ತಿ ಎಂತದ್ದು ಎನ್ನುವುದು ಅರ್ಥವಾಗುತ್ತದೆ. ನಾನು ಅನುಸರಿಸಿದ ಸರಳ ನಿಯಮವೆಂದರೆ, ನೀವು ಸಂವಿಧಾನವನ್ನು ನಿಕಟವಾಗಿ ಮತ್ತು ನಿಷ್ಠೆಯಿಂದ ಅನುಸರಿಸಿದರೆ, ನಾವು ದೊಡ್ಡ ತಪ್ಪುಗಳನ್ನು ತಪ್ಪಿಸಬಹುದು ಎಂದು ಹೇಳಿದರು.

ಸಂವಿಧಾನದ ಪಾವಿತ್ರ್ಯತೆಯನ್ನು ಎತ್ತಿ ಹಿಡಿ ಯಲು ನಿರಂತರ ಪ್ರಯತ್ನಗಳು ನಡೆಯಬೇಕು ಎಂದು ಕರೆ ನೀಡಿದ ಅವರು, ಇಂತಹ ಪ್ರಯತ್ನ ವನ್ನು ನಾವು ಎಂದಿಗೂ ಕೈಬಿಡಬಾರದು ಎಂದರು. ಸಂವಿಧಾನಕ್ಕೆ ಕೊಡುಗೆ ನೀಡಿದ ಡಾ.ಅಂಬೇಡ್ಕರ್ ಮತ್ತು ಇತರರಿಗೆ ಶ್ರದ್ಧಾಂಜಲಿ ಸಲ್ಲಿಸಿದರು. ನಾವು ನಮ್ಮ ಸಂವಿಧಾನ ಅಳವಡಿಸಿಕೊಂಡ ಶತಮಾನೋತ್ಸವವನ್ನು ಆಚರಿಸೋಣ ಮತ್ತು ಈ ರಾಷ್ಟ್ರದ ಭವ್ಯ ಭವಿಷ್ಯದಲ್ಲಿ ಅದರ ಅನೇಕ ಶತಮಾನಗಳನ್ನು ಆಚರಿಸೋಣ ಎಂದು ದೇವೇಗೌಡರು ಕರೆ ನೀಡಿದರು.

ಲೋಕಾಯುಕ್ತರಿಗೆ ಇನ್ನು 7 ದಿನ ಬಾಕಿ!

ಎಂದು ಲೋಕಾಯುಕ್ತ ಮೂಲಗಳು ತಿಳಿಸಿವೆ. ಸಿದ್ದರಾಮಯ್ಯ ಪತ್ನಿ ಪಾರ್ವತಿ ಅವರಿಗೆ ದಾನವಾಗಿ ಬಂದ ಜಮೀನಿನ 30 ವರ್ಷದ ಮೂಲ ಕೆದಕಿ ಸಮಗ್ರ ಮಾಹಿತಿ ಪಡೆಯಬೇಕಿದೆ. ಜೊತೆಗೆ ಕಳೆದ 30 ವರ್ಷದಿಂದ ಇಲ್ಲಿ ತನಕ ಜಮೀನಿನ ಅನ್ಯಕ್ರಾಂತ ಹಾಗೂ ನಿವೇಶನಗಳ ಮಂಜೂರಾತಿ ಸಂಬಂಧ ಇನ್ನು ಕೆಲವು ಅಧಿಕಾರಿಗಳನ್ನು ವಿಚಾರಣೆ ಮಾಡಬೇಕಿದೆ.

ಆದರೆ ನ್ಯಾಯಾಲಯ ನೀಡಿರುವ ಸಮಯದಲ್ಲಿ ಇಷ್ಟು ಪ್ರಕ್ರಿಯೆ ನಡೆಸಲು ಸಾಧ್ಯವಾಗದ ಕಾರಣ ತನಿಖಾ ವರದಿ ಸಲ್ಲಿಸಲು ಲೋಕಾಯುಕ್ತರು ಮತ್ತಷ್ಟು ಸಮಯ ಕೇಳಲಿದ್ದಾರೆ ಎನ್ನಲಾಗಿದೆ.

ಲೋಕಾಯುಕ್ತ ಎಸ್ಪಿ ಟಿ.ಜೆ.ಉದೇಶ್ ಅವರು ಬೆಳಿಗ್ಗೆ ಬಂದರೆ ರಾತ್ರಿ ತನಕ ಕಚೇರಿಯಲ್ಲೇ ಇದ್ದು, ತನಿಖಾ ವರದಿ ಸಿದ್ಧಪಡಿಸುವ ಸಂಬಂಧ ದಾಖಲಾತಿ ಪರಿಶೀಲನೆ ಹಾಗೂ ಅಧಿಕಾರಿಗಳ ವಿಚಾರಣೆ ಮಾಡುವ ನಿರಂತರ ಕೆಲಸ ಮಾಡುತ್ತಿದ್ದಾರೆ. ಆದರೂ ಅಂತಿಮ ತನಿಖಾ ವರದಿ ಸಲ್ಲಿಸಲು ಮತ್ತಷ್ಟು ಕೆಲಸ ಬಾಕಿ ಇದೆ ಎಂದು ತಿಳಿದು ಬಂದಿದೆ. ಈ ಕಾರಣದಿಂದ ವರದಿ ಸಲ್ಲಿಸಲು ನ್ಯಾಯಾಲಯಕ್ಕೆ ಸಮಯಾವಕಾಶ ಕೇಳುವ ಸಾಧ್ಯತೆ ಇದೆ ಎಂದು ತಿಳಿದು ಬಂದಿದೆ.

ಟಿ.ಜೆ.ಉದೇಶ್ ನೇತೃತ್ವದ ಲೋಕಾಯುಕ್ತರ ತನಿಖಾ ತಂಡ ಕಳೆದ ಮೂರು ತಿಂಗಳಿನಿಂದ ಪ್ರಕರಣದ ಬಗ್ಗೆ ಸಮಗ್ರ ತನಿಖೆ ನಡೆಸುತ್ತಿದೆ. ಪಾರ್ವತಿ ಅವರಿಗೆ ದಾನವಾಗಿ ಬಂದ ಮೈಸೂರಿನ ಕೆಸರೆ ಭೂಮಿ, ಮುಡಾದಿಂದ ಮಂಜೂರಾಗಿದ್ದ 14 ನಿವೇಶನಗಳ ಸ್ಥಳದಲ್ಲಿ ಈಗಾಗಲೇ ಸ್ಥಳ ಮಹಜರು ನಡೆಸಿದ್ದಾರೆ.

ಜೊತೆಗೆ ಪ್ರಕರಣ ಎ1 ಆರೋಪಿ ಸಿದ್ದರಾಮಯ್ಯ, ಎ2 ಆರೋಪಿ ಪಾರ್ವತಿ, ಎ3 ಆರೋಪಿ ಮಲ್ಲಿಕಾರ್ಜುನ ಸ್ವಾಮಿ ಹಾಗೂ ಎ4 ಆರೋಪಿ ದೇವರಾಜು, ಕೆಸರೆ ಭೂಮಿ ಅನ್ಯಕ್ರಾಂತ ಮಾಡಿದ್ದ ಹಿಂದಿನ ಜಿಲ್ಲಾಧಿಕಾರಿಗಳೂ ಆದ ಹಾಲಿ ಸಂಸದ ಕುಮಾರ್ ನಾಯಕ್, ಮುಡಾದ ಹಿಂದಿನ ಆಯುಕ್ತರಾಗಿದ್ದ ಪಾಲಯ್ಯ, ಡಾ.ನಟೇಶ್, ಬೆಟಸೂರ್ ಮಠ್ ಸೇರಿದಂತೆ ಹಲವರನ್ನು ವಿಚಾರಣೆ ಮಾಡಿದ್ದಾರೆ. ಮುಡಾದ ಹಾಲಿ ಕೆಲವು ಅಧಿಕಾರಿಗಳನ್ನು ಕೂಡ ವಿಚಾರಣೆಗೊಳಪಡಿಸಿದ್ದಾರೆ. ಆದರೆ ಪ್ರಕರಣದ ಗಂಭೀರ ಆರೋಪ ಎದುರಿಸುತ್ತಿರುವ ಮುಡಾದ ಹಿಂದಿನ ಆಯುಕ್ತ ದಿನೇಶ್ ಕುಮಾರ್ ಅವರನ್ನು ಇನ್ನು ವಿಚಾರಣೆ ಮಾಡಿಲ್ಲ. ಇದರಿಂದ ತನಿಖಾ ಪ್ರಕ್ರಿಯೆ ಇನ್ನು ಬಹಳಷ್ಟಿರುವ ಕಾರಣ ವರದಿ ಸಲ್ಲಿಸಲು ಲೋಕಾಯುಕ್ತರು ಮತ್ತಷ್ಟು ಕಾಲಾವಕಾಶ ಕೋರುವ ಸಾಧ್ಯತೆ ಇದೆ.

ಅಪರಾಧ ಕೃತ್ಯಗಳಲ್ಲಿ ಭಾಗಿಯಾಗುತ್ತಿರುವ ಅಪ್ರಾಪ್ತರ ಸಂಖ್ಯೆ ಹೆಚ್ಚಳ

● ಆತಂಕ ಮೂಡಿಸುತ್ತಿದೆ ಅಪರಾಧ ದಾಖಲಾತಿಯ ಅಂಕಿ-ಅಂಶ ● ರಾಜ್ಯದಲ್ಲಿ ನಾಲ್ಕು ವರ್ಷಗಳಿಂದ 9,941 ಮಂದಿ ಬಾಲಕರು, 930 ಬಾಲಕಿಯರು ನಾನಾ ಕೃತ್ಯಗಳಲ್ಲಿ ಭಾಗಿ

ಮೈಸೂರು, ಡಿ.17(ಎಸ್‌ಪಿಎನ್)– 2020ರಿಂದ 2023ರವರೆಗೆ ಅಪರಾಧ ಜಗತ್ತಿಗೆ ಕಾಲಿಡುತ್ತಿರುವ ಅಪ್ರಾಪ್ತ ಬಾಲಕ ಮತ್ತು ಬಾಲಕಿಯರ ಸಂಖ್ಯೆ ಗಣನೀಯವಾಗಿ ಏರಿಕೆ ಕಂಡಿದೆ. ರಾಜ್ಯ ಅಪರಾಧ ದಾಖಲಾತಿ ವಿಭಾಗದ ಪೊಲೀಸ್ ಅಧೀಕ್ಷಕರ ಕಚೇರಿಯಿಂದ ಬಿಡುಗಡೆಗೊಳಿಸಿರುವ ಅಂಕಿ-ಅಂಶಗಳಿಂದ ಬೆಳಕಿಗೆ ಬಂದಿದೆ.

ಮೈಸೂರು ನಗರ, ಜಿಲ್ಲೆ, ಮಂಡ್ಯ, ಚಾಮರಾಜನಗರ, ಹಾಸನ ಹಾಗೂ ಕೊಡಗು ಜಿಲ್ಲೆ ಸೇರಿದಂತೆ ರಾಜ್ಯದ ವಿವಿಧ ಜಿಲ್ಲೆ ಗಳಲ್ಲಿ ಒಟ್ಟು 9,941 ಮಂದಿ ಬಾಲಕರು, 930 ಮಂದಿ ಬಾಲಕಿಯರು ವಿವಿಧ ಅಪರಾಧ ಕೃತ್ಯದಲ್ಲಿ ಭಾಗಿಯಾಗಿರುವ ಅಂಕಿ-ಅಂಶಗಳನ್ನು ಜಿಲ್ಲಾವಾರು ಬಿಡುಗಡೆಗೊಳಿಸಿದೆ.

ಮೈಸೂರಿನ ಒಡನಾಡಿ ಸಂಸ್ಥೆಯ ಶೃತಿ ಎಂಬುವರು ಸಲ್ಲಿಸಿದ್ದ ಆರ್‌ಟಿಐ ಅರ್ಜಿಗೆ ರಾಜ್ಯ ಅಪರಾಧ ದಾಖಲಾತಿ ವಿಭಾಗದ ಪೊಲೀಸ್ ಅಧೀಕ್ಷಕರ ಕಚೇರಿ ಉತ್ತರಿಸಿದೆ. 2020ರಿಂದ 2023ರವರೆಗೆ ಮೈಸೂರು ನಗರ, ಮೈಸೂರು ಜಿಲ್ಲೆ, ಚಾಮರಾಜನಗರ, ಮಂಡ್ಯ, ಹಾಸನ ಹಾಗೂ ಕೊಡಗು ಜಿಲ್ಲೆಯಲ್ಲಿ ಒಟ್ಟು 1414 ಬಾಲಕರು, 174 ಬಾಲಕಿಯರು ಅಪರಾಧ ಕೃತ್ಯದಲ್ಲಿ ಭಾಗಿಯಾಗಿದ್ದಾರೆ. ಅಂತೆಯೇ 2020ರಲ್ಲಿ 378 ಬಾಲಕರು, 47 ಬಾಲಕಿಯರು, 2021ರಲ್ಲಿ 323 ಬಾಲಕರು, 35 ಬಾಲಕಿಯರು, 2022ರಲ್ಲಿ 372 ಬಾಲಕರು, 51 ಬಾಲಕಿಯರು,



2023ರಲ್ಲಿ 341 ಬಾಲಕರು, 41 ಬಾಲಕಿಯರು ಭಾಗಿಯಾಗಿದ್ದಾರೆ.

ಸಾಮಾಜಿಕ ಮೌಲ್ಯಮಾಪನ ಅಗತ್ಯ: ಅಪರಾಧ ಕೃತ್ಯದಲ್ಲಿ ಭಾಗಿಯಾಗುತ್ತಿರುವ ಅಪ್ರಾಪ್ತ ಬಾಲಕ, ಬಾಲಕಿಯರ ಅಂಕಿ-ಅಂಶಗಳನ್ನು ಗಮನಿಸಿದಾಗ ಗಾಬರಿಗೊಳ್ಳುವಂತಹದು. ಮಕ್ಕಳು ಹೆಚ್ಚಿನ ಮಟ್ಟದಲ್ಲಿ ಅಪರಾಧ ಜಗತ್ತಿಗೆ ತೆರೆದುಕೊಳ್ಳುತ್ತಿರುವುದು. ಅಸಹನೀಯವಾದದ್ದು. ಸಮಾಜದಲ್ಲಿ ಪರಿವರ್ತನೆಯ ಮಾದರಿಗಳನ್ನು ರಾಜ್ಯ ಮತ್ತು ಕೇಂದ್ರ ಸರ್ಕಾರ ರೂಪಿಸಬೇಕಿದೆ. ಈ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಗ್ರಾಮೀಣ ಮಟ್ಟದಲ್ಲಿ ಉತ್ತಮ ಶಿಕ್ಷಣ ಕೊಡುವ ವ್ಯವಸ್ಥೆ ಮಾಡಬೇಕು. ಏಕ ಪೋಷಕ ಹಾಗೂ ವ್ಯಸನಿಗಳ ಕುಟುಂಬಕ್ಕೆ ವಿಶೇಷ ಅನುದಾನ ಒದಗಿಸಿ, ಆ ಕುಟುಂಬದ ಮಕ್ಕಳಲ್ಲಿನ ಬೆಳವಣಿಗೆ, ನಡವಳಿಕೆ ಕುರಿತು ಸಾಮಾಜಿಕ ಮೌಲ್ಯ ಮಾಪನವನ್ನು ಮಾಡಬೇಕು ಎಂದು ಒಡನಾಡಿ ಸಂಸ್ಥೆಯ ಪರಶು ಆಗ್ರಹಿಸಿದ್ದಾರೆ.

ಮಕ್ಕಳಿಂದ ಬಲವಂತದ ದುಡಿತ: ಅತೀ ಚಿಕ್ಕವಯಸ್ಸಿನಲ್ಲಿ ಕುಟುಂಬದ ಹೊಣೆಗಾರಿಕೆ ಅಕ್ಷರದಿಂದ ವಂಚನೆ. ಮಾದರಿ ಅಲ್ಲದ ಶಿಕ್ಷಣ ನೀಡುತ್ತಿರುವುದರಿಂದ ಅಪರಾಧ ಜಗತ್ತು ಅಪ್ರಾಪ್ತರನ್ನು ಸೆಳೆಯುತ್ತಿದೆ. ಮಕ್ಕಳು ಸಣ್ಣಪುಟ್ಟ ತಪ್ಪು ಮಾಡಿದಾಗ. ಸಮರ್ಥವಾಗಿ ಬದುಕು ಬದಲಾಯಿಸುವ ಆಪ್ತ ಸಮಾಲೋಚನೆ ಮೂಲಕ ಮಕ್ಕಳ ಮನಸ್ಸು ಬದಲಾಯಿಸಲು ನೀತಿಗಳನ್ನು ರೂಪಿಸಲು ಸರ್ಕಾರಗಳು ಯೋಚಿಸಬೇಕು ಎಂದಿದ್ದಾರೆ.

> ಅಪರಾಧ ಜಗತ್ತಿನ ಸೆಳೆತಕ್ಕೊಳಗಾಗುತ್ತಿರುವ ಮಕ್ಕಳ ಭವಿಷ್ಯವನ್ನು ರೂಪಿಸುವ ನಿಟ್ಟಿನಲ್ಲಿ ಸಮಾಜ, ಸರ್ಕಾರ ಎರಡೂ ಜೊತೆ ಜೊತೆಯಲ್ಲಿ ಕೆಲಸ ಮಾಡಬೇಕು. ನುರಿತ ಮಕ್ಕಳ ತಜ್ಞರಿಂದ ಅಪರಾಧ ಕೃತ್ಯದಲ್ಲಿ ಭಾಗಿಯಾದ ಮಕ್ಕಳು ಮತ್ತು ಪೋಷಕರಿಗೆ ವಿಶೇಷ ತರಬೇತಿ ನೀಡುವ ವ್ಯವಸ್ಥೆ ಜಾರಿಗೆ ಬರಬೇಕಿದೆ
> -ಪರಶು, ನಿರ್ದೇಶಕ, ಒಡನಾಡಿ ಸಂಸ್ಥೆ

ಡರ್ಲಾ 'ಲೂಟ್ ಅಂಡ್ ರನ್' ಮಾರಾಟ ಮೇಳ

ಡಿ.22ರವರೆಗೆ ನಡೆಯುವ ಮೇಳದಲ್ಲಿ ಉತ್ಕೃಷ್ಟ ಪೀಠೋಪಕರಣ, ಅಲಂಕಾರಿಕ ಸಾಮಗ್ರಿಗಳ ಸಂಗ್ರಹ

ಮೈಸೂರು,ಡಿ.17(ಪಿಎಂ)– ಡರ್ಲಾದ ಐಕಾನಿಕ್ 'ಲೂಟ್ ಅಂಡ್ ರನ್ 2024' ಶೀರ್ಷಿಕೆಯ ಮಾರಾಟ ಮೇಳ ವರ್ಷದ ಬಳಿಕ ಮತ್ತೆ ಆರಂಭವಾಗಿದೆ. ಹೋಂ ಫರ್ನಿಶಿಂಗ್ ಮತ್ತು ಡೆಕೋರ್‌ಗೆ ಸಂಬಂಧಿಸಿದ ಸಾಮಗ್ರಿಗಳ ಮಾರಾಟದಲ್ಲಿ 1983ರಿಂದ ಡರ್ಲಾ ಗ್ರಾಹಕರ ವಿಶ್ವಾಸಕ್ಕೆ ಪಾತ್ರವಾಗಿದೆ.



ಇದೀಗ ಇದರ ಬಹುನಿರೀಕ್ಷಿತ 'ಲೂಟ್ ಅಂಡ್ ರನ್ ಸೇಲ್ 2024' ಮಾರಾಟ ಮೇಳವು ಮೈಸೂರಿನ ಶಿವರಾಂಪೇಟೆಯ ಡರ್ಲಾ ಮಳಿಗೆಯಲ್ಲಿ ಡಿ.13ರಿಂದ ಆರಂಭಗೊಂಡಿದ್ದು, 22ರವರೆಗೆ ನಡೆಯಲಿದೆ. ವರ್ಷದ ವಿರಾಮದ ನಂತರದ ಹಿಂದೆಂದಿಗಿಂತಲೂ ಬೃಹತ್ ಆಗಿ ಮಾತ್ರವಲ್ಲದೆ, ಉತ್ತಮವಾಗಿ ಮೇಳ ಆಯೋಜನೆಗೊಂಡಿದೆ.

40 ವರ್ಷಗಳಿಂದ ಡರ್ಲಾ, ಗುಣಮಟ್ಟದ ಮನೆಯ ಪೀಠೋಪಕರಣಗಳು ಹಾಗೂ ಅಲಂಕಾರಿಕ ಸಾಮಗ್ರಿಗಳನ್ನು ಗ್ರಾಹಕರಿಗೆ ಒದಗಿಸುವಲ್ಲಿ ಯಶಸ್ವಿಯಾಗಿದೆ. ಆ ಮೂಲಕ ಉತ್ಕೃಷ್ಟತೆಯ ಪರಂಪರೆಯನ್ನು ಹೊಂದಿದೆ. ಸುಮಾರು 2 ದಶಕಗಳ ಹಿಂದೆ ಪ್ರಾರಂಭಗೊಂಡ ಲೂಟ್ ಅಂಡ್ ರನ್ ಸೇಲ್ ಮಾರಾಟ ಮೇಳವು ಡರ್ಲಾದ ಪರಂಪರೆಯಲ್ಲಿ ವಿಶಿಷ್ಟ ಛಾಪು ಮೂಡಿಸಿದೆ. ಉತ್ತಮ ಶಾಪಿಂಗ್ ಅನುಭವ ನೀಡುವ ವಾರ್ಷಿಕ ಈವೆಂಟ್ ಆಗಿ ಇದು ಹೊರಹೊಮ್ಮಿದೆ. ಹೆಚ್ಚಿನ ಮಾಹಿತಿಗಾಗಿ ಮೊ.ಸಂ. 98862 24170 ಅನ್ನು ಸಂಪರ್ಕಿಸಬಹುದು.

ಮೈಸೂರಿನ ಚೈತನ್ಯದ ಸಂಭ್ರಮ: ಲೂಟ್ ಅಂಡ್ ರನ್ ಮಾರಾಟ ಮೇಳವು ಮೈಸೂರಿನ ಚೈತನ್ಯದ ಸಂಭ್ರಮವಾಗಿದೆ. ಈ ವರ್ಷ ಮೇಳದಲ್ಲಿ ಅಸಾಧಾರಣ ಅನುಭವ ಗ್ರಾಹಕರಿಗೆ ದೊರೆಯಲಿದ್ದು, ಆ ಮೂಲಕ ಅವರ ನಂಬಿಕೆ ಮತ್ತು ವಿಶ್ವಾಸಕ್ಕೆ ಧನ್ಯವಾದ ಅರ್ಪಿಸಲಾಗುತ್ತಿದೆ ಎಂದು ಡರ್ಲಾದ ಪಾಲುದಾರ ರಾಜೇಶ್ ಡರ್ಲಾ ತಿಳಿಸಿದ್ದಾರೆ. ಸೀಮಿತ ಸಮಯದ ಕೊಡುಗೆಗಳು ಮತ್ತ ವಿಶೇಷ ಬಹುಮಾನಗಳ ಬಾಚಿಕೊಳ್ಳಲು ತ್ವರೆ ಮಾಡುವಂತೆ ಅವರು ಮನವಿ ಮಾಡಿದ್ದಾರೆ.

ಶಾಲಾ ವಾರ್ಷಿಕ ದಿನಾಚರಣೆ



ಮೈಸೂರಿನ ಹೂಟಗಳ್ಳಿಯ ಕೆಹೆಚ್‌ಬಿ ಕಾಲೋನಿಯಲ್ಲಿರುವ ಸುದರ್ಶನ ವಿದ್ಯಾ ಸಂಸ್ಥೆಯಲ್ಲಿ ಶಾಲಾ ವಾರ್ಷಿಕ ದಿನಾಚರಣೆಯು ವಿವಿಧ ಸಾಂಸ್ಕೃತಿಕ ಕಾರ್ಯಕ್ರಮದೊಂದಿಗೆ ಅದ್ದೂರಿಯಾಗಿ ನಡೆಯಿತು. ಈ ವೇಳೆ ಸಂಸ್ಥೆಯ ಕಾರ್ಯದರ್ಶಿ ಡಾ.ಎನ್.ಶ್ರೀನಿವಾಸನ್, ಗುರುರಾಜ್ ರವಿ, ಪುಷ್ಪಾ ಅಯ್ಯಂಗಾರ್, ವೈದೇಹಿ ಅಯ್ಯಂಗಾರ್, ಶಾಲಾ ಮುಖ್ಯೋಪಾಧ್ಯಾಯ ಸುರೇಶ್ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

ಬಾಂಗ್ಲಾದೇಶ ಅಲ್ಪಸಂಖ್ಯಾತರ ರಕ್ಷಣೆಗೆ ಆಗ್ರಹಿಸಿ ಪ್ರಿಯಾಂಕಾ ಸೇರಿ ಕಾಂಗ್ರೆಸ್ ಸಂಸದರಿಂದ ಪ್ರತಿಭಟನೆ

ನವದೆಹಲಿ, ಡಿ.17– ಬಾಂಗ್ಲಾದೇಶದಲ್ಲಿ ದೌರ್ಜನ್ಯ ಎದುರಿಸುತ್ತಿರುವ ಹಿಂದೂಗಳು ಮತ್ತು ಕ್ರಿಶ್ಚಿಯನ್ನರಿಗೆ ನ್ಯಾಯ ಒದಗಿಸುವಂತೆ ಒತ್ತಾಯಿಸಿ ಪ್ರಿಯಾಂಕಾ ಗಾಂಧಿ ವಾದ್ರಾ ಸೇರಿದಂತೆ ಹಲವು ಕಾಂಗ್ರೆಸ್ ಸಂಸದರು ಮಂಗಳವಾರ ಸಂಸತ್ ಆವರಣದಲ್ಲಿ ಪ್ರತಿಭಟನೆ ನಡೆಸಿದರು.

ಸ್ಟ್ಯಾಂಡ್ ವಿತ್ ಮೈನಾರಿಟೀಸ್ ಬಾಂಗ್ಲಾದೇಶ ಎಂದು ಬರೆದಿರುವ ಕೈಚೀಲಗಳೊಂದಿಗೆ ಸಂಸದರು ಸಂಸತ್ ಆವರಣದಲ್ಲಿ ಪ್ರತಿಭಟನೆ ನಡೆಸಿದರು. ಬಾಂಗ್ಲಾದೇಶದಲ್ಲಿ ಅಲ್ಪಸಂಖ್ಯಾತರಿಗೆ ನ್ಯಾಯ ಒದಗಿಸುವಂತೆ ಸರ್ಕಾರವನ್ನು ಒತ್ತಾಯಿಸಿ ಘೋಷಣೆಗಳನ್ನು ಕೂಗಿದರು.

ಕಾಂಗ್ರೆಸ್ ಸಂಸದೆ ಪ್ರಿಯಾಂಕಾ ಗಾಂಧಿ ಅವರು ಸಂಸತ್ತಿಗೆ ಕೆನೆ ಬಣ್ಣದ ಕೈಚೀಲವನ್ನು ಹೊತ್ತುಕೊಂಡು ಆಗಮಿಸಿದ್ದರು. ಅದರ ಮೇಲೆ 'ಬಾಂಗ್ಲಾದೇಶ ಕೆ ಹಿಂದೂ ಔರ್ ಇಸ್ಯೆಯೋಂ ಕೆ ಸಾಥ್ ಖಡೇ ಹೋ' (ಬಾಂಗ್ಲಾದೇಶದ ಹಿಂದೂಗಳು ಮತ್ತು ಕ್ರಿಶ್ಚಿಯನ್ನರೊಂದಿಗೆ ನಿಂತುಕೊಳ್ಳಿ) ಎಂದು ಬರೆಯಲಾಗಿದೆ.

ಪ್ಯಾಲೆಸ್ತೀನಿಯರನ್ನು ಬೆಂಬಲಿಸಿ ನಿನ್ನೆ ಪ್ರಿಯಾಂಕಾ ಗಾಂಧಿ ಸಂಸತ್ತಿಗೆ, 'ಪ್ಯಾಲೆಸ್ತೀನ್' ಎಂದು ಬರೆದಿದ್ದ ಬ್ಯಾಗ್ ಅನ್ನು ಹಿಡಿದುಕೊಂಡು ಬಂದಿದ್ದು ವ್ಯಾಪಕವಾಗಿ ಸುದ್ದಿಯಾಗಿತ್ತು. ಬಾಂಗ್ಲಾದೇಶದಲ್ಲಿ ದೌರ್ಜನ್ಯ ಎದುರಿಸುತ್ತಿರುವ ಹಿಂದೂಗಳು ಮತ್ತು ಕ್ರೈಸ್ತರಿಗೆ ನ್ಯಾಯ ದೊರಕಿಸಿಕೊಡುವಂತೆ ಒತ್ತಾಯಿಸಿ ಪ್ರಿಯಾಂಕಾ ಗಾಂಧಿ ನೇತೃತ್ವದಲ್ಲಿ ಹಲವು ಕಾಂಗ್ರೆಸ್ ಸಂಸದರು ನಿನ್ನೆಯೂ ಸಂಸತ್ ಆವರಣದಲ್ಲಿ ಪ್ರತಿಭಟನೆ ನಡೆಸಿದ್ದರು. ನಿನ್ನೆ ಶೂನ್ಯವೇಳೆಯಲ್ಲಿ ಲೋಕಸಭೆಯಲ್ಲಿ ಮಾತನಾಡಿದ ಪ್ರಿಯಾಂಕಾ ಗಾಂಧಿ, ಬಾಂಗ್ಲಾದೇಶದ ದಾಳಿಯಿಂದ ನೊಂದವರಿಗೆ ಸರ್ಕಾರದ ಬೆಂಬಲ ಕೋರಿದ್ದರು.

ಸರ್ಕಾರವು ಬಾಂಗ್ಲಾದೇಶದಲ್ಲಿ ಅಲ್ಪಸಂಖ್ಯಾತರು, ಹಿಂದೂಗಳು ಮತ್ತು ಕ್ರಿಶ್ಚಿಯನ್ನರ ಮೇಲಿನ ದೌರ್ಜನ್ಯದ ವಿಷಯವನ್ನು ಎತ್ತಬೇಕು. ಅದು ಬಾಂಗ್ಲಾದೇಶ ಸರ್ಕಾರದೊಂದಿಗೆ ಚರ್ಚಿಸಬೇಕು ಮತ್ತು ನೋವಿನಲ್ಲಿರುವವರಿಗೆ ಬೆಂಬಲ ನೀಡಬೇಕು ಎಂದು ಒತ್ತಾಯಿಸಿದ್ದರು.

ಡಿಸಿಪಿ ಮುತ್ತುರಾಜ್ ವಿರುದ್ಧ ಡಿಜಿಪಿಗೆ ಸ್ನೇಹಮಯಿ ಕೃಷ್ಣ ದೂರು

ಸಿಎಂ ಸಿದ್ದರಾಮಯ್ಯ ಆಣತಿಯಂತೆ ಕೆಲಸ ಮಾಡುತ್ತಿದ್ದಾರೆಂದು ಆರೋಪ

ಮೈಸೂರು, ಡಿ.17(ಬಿಎಲ್‌ಯು)– ಮುಖ್ಯಮಂತ್ರಿ ಸಿದ್ದರಾಮಯ್ಯ ಆಣತಿಯಂತೆ ಕೆಲಸ ನಿರ್ವಹಿಸುತ್ತಿರುವ ಮೈಸೂರಿನ ಕಾನೂನು ಮತ್ತು ಸುವ್ಯವಸ್ಥೆ ವಿಭಾಗದ ಡಿಸಿಪಿ ಮುತ್ತುರಾಜ್ ಅವರನ್ನು ವರ್ಗಾವಣೆ ಮಾಡಿ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಆರ್‌ಟಿಐ ಕಾರ್ಯಕರ್ತ ಸ್ನೇಹಮಯಿ ಕೃಷ್ಣ ರಾಜ್ಯ ಪೊಲೀಸ್ ಮಹಾ ನಿರ್ದೇಶಕ(ಡಿಜಿಪಿ) ಡಾ. ಅಲೋಕ್ ಮೋಹನ್ ಅವರಿಗೆ ಮನವಿ ಮಾಡಿದ್ದಾರೆ.



ಸಿದ್ದರಾಮಯ್ಯನವರ ಪತ್ನಿ ಪಾರ್ವತಿ ಅವರು ಅಕ್ರಮವಾಗಿ 14 ನಿವೇಶನ ಪಡೆದಿರುವ ಬಗ್ಗೆ ಹೋರಾಟ ನಡೆಸುತ್ತಿರುವ ನನ್ನ ವಿರುದ್ಧ ಡಿಸಿಪಿ ಮುತ್ತುರಾಜ್ ಅವರು ಸಂಚು ರೂಪಿಸಿ, ನನ್ನ ವಿರುದ್ಧ ಸುಳ್ಳು ಮೊಕದ್ದಮೆ ದಾಖಲಿಸಿದ್ದಾರೆ ಎಂದು ದೂರಿದ್ದಾರೆ.

ಮೈಸೂರಿನ ಚಾಮುಂಡೇಶ್ವರಿ ದೇವಾಲಯ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ ರೂಪ ವಿರುದ್ಧ ನಾನು ಡಿಸೆಂಬರ್ 12ರಂದು ನೀಡಿದ ದೂರು ಆಧರಿಸಿ ಎಫ್‌ಐಆರ್ ದಾಖ ಲಿಸಲು ಮುತ್ತುರಾಜ್, ಡಿಸೆಂಬರ್ 14ರಂದು ರೂಪ ನೀಡಿದ್ದ ದೂರು ಆಧರಿಸಿ ನನ್ನ ವಿರುದ್ಧ ಮೊಕದ್ದಮೆ ದಾಖಲಿಸಿದ್ದಾರೆ ಎಂದು ಆರೋಪಿಸಿದ್ದಾರೆ.

ಸಿದ್ದರಾಮಯ್ಯ ಆಣತಿಯಂತೆ ಕೆಲಸ ನಿರ್ವಹಿಸುತ್ತಿರುವ ಮುತ್ತುರಾಜ್ ನನ್ನ ವಿರುದ್ಧ ಸಂಚು ರೂಪಿಸಿದ್ದು, ಇವರನ್ನು ಕೂಡಲೇ ವರ್ಗಾವಣೆ ಮಾಡಿ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಡಿಜಿಪಿ ಅವರನ್ನು ಕೋರಿದ್ದಾರೆ. ಇದೇ ವೇಳೆ ಮುತ್ತುರಾಜ್ ವಿರುದ್ಧ ರಾಜ್ಯ ಮಾನವ ಹಕ್ಕುಗಳ ಆಯೋಗಕ್ಕೂ ಸ್ನೇಹಮಯಿ ಕೃಷ್ಣ ದೂರು ನೀಡಿದ್ದಾರೆ.

ಬೆಳೆದು ನಿಂತ ಬಟರ್‌ಫ್ರೂಟ್ ಗಿಡಗಳ ತುಂಡರಿಸಿದ ಕಿಡಿಗೇಡಿಗಳು

● ಮಮ್ಮಲ ಮರುಗಿದ ರೈತ ಸಹೋದರರು ● ಲಕ್ಷಾಂತರ ರೂ. ಹಾನಿ ನೋವು

ಮೈಸೂರು, ಡಿ.17(ಎಸ್‌ಬಿಡಿ)– ರೈತ ಸಹೋದರರು ಬೆಳೆದಿದ್ದ ಬಟರ್‌ಫ್ರೂಟ್ ಗಿಡಗಳನ್ನು ಕಿಡಿಗೇಡಿಗಳು ರಾತ್ರೋರಾತ್ರಿ ಕತ್ತರಿಸಿರುವ ಘಟನೆ ಮೈಸೂರು ತಾಲೂಕು, ಜಯಪುರ ಹೋಬಳಿ ಡಿ.ಸಾಲುಂಡಿಯಲ್ಲಿ ನಡೆದಿದೆ.

ಗ್ರಾಮದ ಬಸವೇಗೌಡ ಅವರ ಪುತ್ರರಾದ ಬಸಪ್ಪ ಹಾಗೂ ಬಸವರಾಜು ಅವರು ಕೆಂಚಲಗೂಡು ಸರ್ವೆ ನಂಬರ್‌ನಲ್ಲಿರುವ ತಮ್ಮ 1 ಎಕರೆ 10 ಗುಂಟೆ ಜಮೀನಿನಲ್ಲಿ ತೆಂಗಿನ ಸಸಿಗಳ ಮಧ್ಯ ನೆಟ್ಟಿದ್ದ ಸುಮಾರು 80 ಬಟರ್ ಫ್ರೂಟ್(ಬೆಣ್ಣೆಹಣ್ಣು) ಸಸಿಗಳನ್ನು ಕತ್ತರಿಸಲಾಗಿದೆ.

ಒಂದೂವರೆ ವರ್ಷದ ಹಿಂದೆ ನೆಟ್ಟಿದ್ದ ಬಟರ್‌ಫ್ರೂಟ್ ಗಿಡಗಳು ಸುಮಾರು ನಾಲ್ಕೈದು ಅಡಿ ಎತ್ತರಕ್ಕೆ ಬೆಳೆದಿದ್ದವು. ಇನ್ನು ಒಂದೆರಡು ವರ್ಷ ಕಳೆದಿದ್ದರೆ ಫಸಲು ಬರುತ್ತಿತ್ತು. ಆದರೆ ಡಿ.14ರಂದು ಸಂಜೆ ನೀರು ಹಾಯಿಸಿ ಮನೆಗೆ ಹೋಗಿ, ಮರುದಿನ ತೋಟಕ್ಕೆ ಬಂದ ಸಹೋದರರಿಗೆ ಆಘಾತ ಕಾದಿತ್ತು. ಎಲ್ಲಾ ಬಟರ್‌ಫ್ರೂಟ್ ಗಿಡಗಳ ಬುಡ ಕತ್ತರಿಸಿ, ಬಿಸಾಡಲಾಗಿತ್ತು.

ಈ ಸಂಬಂಧ ಬಸವರಾಜು ಜಯಪುರ ಪೊಲೀಸ್ ಠಾಣೆಗೆ ದೂರು ನೀಡಿದ್ದು, ಸುಮಾರು 2 ಲಕ್ಷ ರೂ. ನಷ್ಟವಾಗಿರುವುದಾಗಿ ತಿಳಿಸಿದ್ದಾರೆ. ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು, ಮುಂದಿನ ಕ್ರಮ ಕೈಗೊಂಡಿದ್ದಾರೆ.

ಬಯಲಲ್ಲಿ ಅಂದರ್-ಬಾಹರ್; ಜೂಜಿಗಿಳಿದಿರುವ ಕೂಲಿ ಕಾರ್ಮಿಕರು!

ಮೈಸೂರು, ಡಿ.17(ಎಸ್‌ಬಿಡಿ)– ಮೈಸೂರಿನಲ್ಲಿ ಬಯಲು ಜೂಜು ಅಡ್ಡೆಗಳು ವ್ಯಾಪಕವಾಗಿದ್ದು, ದಿನಗೂಲಿ ಕಾರ್ಮಿಕರು ದುಡಿದ ಹಣವನ್ನು ಪಣಕ್ಕಿಟ್ಟು ಕುಟುಂಬವನ್ನೂ ಕಷ್ಟಕ್ಕೆ ದೂಡುತ್ತಿದ್ದಾರೆ.

ತಾಲೂಕಿನ ಉದ್ಬೂರು ಗ್ರಾಮದ ಈಶ್ವರ ದೇವಸ್ಥಾನದ ಜಮೀನಿನ ಪಕ್ಕದ ಹಳ್ಳದಲ್ಲಿ ಸೋಮವಾರ ಮಧ್ಯಾಹ್ನ ಅಂದರ್-ಬಾಹರ್ ಆಡುತ್ತಿದ್ದ 10 ಮಂದಿಯನ್ನು ಜಯಪುರ ಠಾಣೆ ಪೊಲೀಸರು ವಶಕ್ಕೆ ಪಡೆದು, ಪಣಕ್ಕಿಟ್ಟಿದ್ದ ಒಟ್ಟು 6,280 ರೂ.ಗಳನ್ನು ಜಪ್ತಿ ಮಾಡಿದ್ದಾರೆ. ಖಚಿತ ಮಾಹಿತಿ ಮೇರೆಗೆ ಸಬ್‌ಇನ್ಸ್‌ಪೆಕ್ಟರ್ ಪ್ರಕಾಶ್ ಎಂ.ಎತ್ತಿನಮನಿ ಹಾಗೂ ಸಿಬ್ಬಂದಿ ದಾಳಿ ನಡೆಸಿದ್ದಾರೆ.

ಮೈಸೂರಿನ ದಟ್ಟಗಳ್ಳಿಯ ಜೋಡಿ ಬೇವಿನಮರ ರಸ್ತೆ ಬದಿ ಖಾಲಿ ಜಾಗದಲ್ಲಿ ಭಾನುವಾರ ಸಂಜೆ ಜೂಜಾಡುತ್ತಿದ್ದ ಆರು ಮಂದಿಯನ್ನು ಕುವೆಂಪುನಗರ ಠಾಣೆ ಪೊಲೀಸರು ವಶಕ್ಕೆ ಪಡೆದು, 7,650 ರೂ. ಹಣವನ್ನು ವಶಪಡಿಸಿಕೊಂಡಿದ್ದಾರೆ.

ಜೂಜು ಅಡ್ಡೆಯಲ್ಲಿ ಸಿಕ್ಕಿಬಿದ್ದವರಲ್ಲಿ ಬಹುತೇಕರು ಗಾರೆ ಕೆಲಸ ಇನ್ನಿತರ ಕೂಲಿ ಕೆಲಸ ಮಾಡುವವರಾಗಿದ್ದಾರೆ. ಕೃಷಿಕರೂ ಇಸ್ಪೀಟ್ ವ್ಯಸನಕ್ಕೆ ಬಲಿಯಾಗುತ್ತಿದ್ದಾರೆ. ದುಡಿದು ಸಂಪಾದಿಸಿದ ಹಣವನ್ನು ಅಂದರ್-ಬಾಹರ್‌ನಲ್ಲಿ ಕಳೆದುಕೊಳ್ಳುತ್ತಿದ್ದಾರೆ. ಹಲವರು ಇಸ್ಪೀಟ್ ಜೊತೆಗೆ ಮದ್ಯಪಾನ, ಧೂಮಪಾನ ಚಟ ಹತ್ತಿಸಿಕೊಳ್ಳುತ್ತಿದ್ದಾರೆ. ಇದರಿಂದ ಅವರ ಕುಟುಂಬಗಳೂ ಸಂಕಷ್ಟಕ್ಕೆ ಸಿಲುಕುತ್ತಿವೆ. ಪೊಲೀಸರು ಶಿಸ್ತು ಕ್ರಮ ವಹಿಸಿ, ಇಸ್ಪೀಟ್ ಅಡ್ಡೆಗಳಿಗೆ ಬ್ರೇಕ್ ಹಾಕಬೇಕು ಎಂದು ಸಾರ್ವಜನಿಕರು ಆಗ್ರಹಿಸಿದ್ದಾರೆ.

ಸ್ಕೂಟರ್‌ನಲ್ಲಿ ಅಡಗಿಸಿಟ್ಟಿದ್ದ ಬಾಂಬ್ ಸ್ಫೋಟ

ರಷ್ಯಾದ ಪರಮಾಣು ರಕ್ಷಣಾ ಪಡೆ ಮುಖ್ಯಸ್ಥ ಲೆಫ್ಟಿನೆಂಟ್ ಜನರಲ್ ಇಗೊರ್ ಕಿರಿಲ್ಲೋವ್ ಸಾವು

ಮಾಸ್ಕೋ, ಡಿ.17– ರಷ್ಯಾದ ಪರಮಾಣು, ಜೈವಿಕ ಮತ್ತು ರಾಸಾಯನಿಕ ರಕ್ಷಣಾ ಪಡೆಗಳ ಮುಖ್ಯಸ್ಥ ಲೆಫ್ಟಿನೆಂಟ್ ಜನರಲ್ ಇಗೊರ್ ಕಿರಿಲ್ಲೋವ್ ಅವರು ಇಂದು ಬೆಳಿಗ್ಗೆ ವಸತಿ ಅಪಾರ್ಟ್‌ಮೆಂಟ್ ಬ್ಲಾಕ್‌ನಲ್ಲಿ ಎಲೆಕ್ಟ್ರಿಕ್ ಸ್ಕೂಟರ್‌ನಲ್ಲಿ ಅಡಗಿಸಿಟ್ಟಿದ್ದ ಬಾಂಬ್ ಸ್ಫೋಟಗೊಂಡು ಸಾವನ್ನಪ್ಪಿದ್ದಾರೆ. ರಷ್ಯಾದ ತನಿಖಾ ಸಮಿತಿ ಈ ಮಾಹಿತಿ ನೀಡಿದೆ.



ಎಲೆಕ್ಟ್ರಿಕ್ ಸ್ಕೂಟರ್‌ನಲ್ಲಿ ಇರಿಸಲಾಗಿದ್ದ ಬಾಂಬ್ ಸ್ಫೋಟಗೊಂಡಿದೆ. ಇಗೊರ್ ಕಿರಿಲ್ಲೋವ್ ಅವರ ಸಹಾಯಕ ಕೂಡ ಸ್ಫೋಟದಲ್ಲಿ ಸಾವನ್ನಪ್ಪಿದ್ದಾರೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ರಷ್ಯಾದ ತನಿಖಾ ಅಧಿಕಾರಿಗಳು ಇಬ್ಬರ ಸಾವಿಗೆ ಸಂಬಂಧಿಸಿದಂತೆ ಪ್ರಕರಣವನ್ನು ದಾಖಲಿಸಿದ್ದಾರೆ ಎಂದು ಸಮಿತಿಯ ವಕ್ತಾರ ಸ್ವೆಟ್ಲಾನಾ ಪೆಟ್ರೆಂಕೊ ತಿಳಿಸಿದ್ದಾರೆ. ತನಿಖಾಧಿಕಾರಿಗಳು, ಫೋರೆನ್ಸಿಕ್ ತಜ್ಞರು ಮತ್ತು ಕಾರ್ಯಾಚರಣೆಯ ಸೇವೆಗಳು ಘಟನಾ ಸ್ಥಳದಲ್ಲಿ ಬೀಡುಬಿಟ್ಟಿದ್ದಾರೆ ಎಂದು ಪೆಟ್ರೆಂಕೊ ಹೇಳಿಕೆಯಲ್ಲಿ ತಿಳಿಸಿದ್ದಾರೆ. ಈ ಕೃತ್ಯದ ಸುತ್ತಲಿನ ಎಲ್ಲಾ ಘಟನಾವಳಿಗಳನ್ನು ತಿಳಿಯಲು ತನಿಖೆ ಮತ್ತು ಶೋಧ ಕಾರ್ಯಾಚರಣೆಗಳನ್ನು ನಡೆಸಲಾಗುತ್ತಿದೆ ಎಂದು ಅವರು ಹೇಳಿದರು.

2022ರ ಫೆಬ್ರವರಿಯಲ್ಲಿ ಉಕ್ರೇನ್‌ನಲ್ಲಿ ಪ್ರಾರಂಭವಾದ ರಷ್ಯಾದ ಮಿಲಿಟರಿ ಕಾರ್ಯಾಚರಣೆಯ ಸಮಯದಲ್ಲಿ ನಿಷೇಧಿತ ರಾಸಾಯನಿಕ ಶಸ್ತ್ರಾಸ್ತ್ರಗಳನ್ನು ಬಳಸಿದ ಆರೋಪದ ಮೇಲೆ ಡಿಸೆಂಬರ್ 16ರಂದು ಕಿರಿಲ್ಲೋವ್‌ಗೆ ಉಕ್ರೇನಿಯನ್ ನ್ಯಾಯಾಲಯವು ಗೈರು ಹಾಜರಿ ಶಿಕ್ಷೆ ವಿಧಿಸಿತು.

ಶ್ರೀ ಗಣಪತಿ ಸಚ್ಚಿದಾನಂದ ಆಶ್ರಮದಲ್ಲಿ ಉಪನಿಷತ್ ಪ್ರವಚನ


ಸಾಧಕರು ಎಂದೂ ಸಾಧಿಸಿದ ಮನಸ್ಥಿತಿಯಲ್ಲಿರಬಾರದು

● ಖ್ಯಾತ ಪ್ರವಚನಕಾರ ಡಾ.ಪಾವಗಡ ಪ್ರಕಾಶ್ ಸಲಹೆ ● ಸೇವೆಯಲ್ಲಿ ನಿರತ ಅದೆಷ್ಟೋ ಮಂದಿ ತಮ್ಮಷ್ಟಕ್ಕೆ ತಾವಿದ್ದಾರೆ!

ಮೈಸೂರು, ಡಿ.17(ಎಸ್‌ಪಿಎನ್)– ಸಾಧಕರು ಎಷ್ಟೇ ಎತ್ತರಕ್ಕೆ ಬೆಳೆದಿದ್ದರೂ ನಾನಿನ್ನು ಸಾಧನೆ ಮಾಡಿಲ್ಲ ಎಂಬ ಮನಸ್ಥಿತಿಯಲ್ಲಿರಬೇಕು. ಅಂತೆಯೇ ವೇದ-ಉಪನಿಷತ್‌ಗಳನ್ನು ಹಲವು ವರ್ಷಗಳ ಕಾಲ ಓದಿ ನೀವು ಅರ್ಥೈಸಿಕೊಂಡಿದ್ದರೂ ನನಗೇನು ತಿಳಿದಿಲ್ಲವೆಂಬಂತೆ ಜನಸಾಮಾನ್ಯರೊಂದಿಗೆ ಬದುಕನ್ನು ಕಲಿಯಬೇಕು ಎಂದು ಖ್ಯಾತ ಪ್ರವಚನಕಾರ ಡಾ.ಪಾವಗಡ ಪ್ರಕಾಶ್ ಸಲಹೆ ನೀಡಿದರು.

ಮೈಸೂರು-ಊಟಿ ರಸ್ತೆಯ ಅವಧೂತ ದತ್ತಪೀಠ ಆವರಣದಲ್ಲಿ ದತ್ತಸೇನೆ ವತಿಯಿಂದ ಏರ್ಪಡಿಸಿದ್ದ ಉಪನಿಷತ್ ಪ್ರದರ್ಶನ ಪ್ರವಚನ ಮಾಲಿಕೆಯ ಎರಡನೇ ದಿನದ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದರು.

ದೇಶದಲ್ಲಿ ಬೇರೆ ಕ್ಷೇತ್ರದಲ್ಲಿ ಅನೇಕ ಸಾಧಕರಿದ್ದಾರೆ. ಆದರೆ, ಅವರ್‍ಯಾರು, ನಾವಿನ್ನು ಸಾಧನೆ ಮಾಡಿಲ್ಲ ಎಂಬರ್ಥದಲ್ಲಿ ತಮ್ಮ ಕೆಲಸದಲ್ಲಿ ತೊಡಗಿಸಿಕೊಂಡಿದ್ದಾರೆ. ಉದಾಹರಣೆಗೆ ಶ್ರೀ ಗಣಪತಿ ಸಚ್ಚಿದಾನಂದ ಸ್ವಾಮೀಜಿಯವರು, ಕಳೆದ 40–50 ವರ್ಷಗಳಿಂದ



ಉಪನಿಷತ್ ಕುರಿತು ಖ್ಯಾತ ಪ್ರವಚನಕಾರ ಡಾ.ಪಾವಗಡ ಪ್ರಕಾಶ್ ಪ್ರವಚನ ನೀಡಿದರು.

ಮೈಸೂರು ಸೇರಿದಂತೆ ಹೊರರಾಜ್ಯ ಹಾಗೂ ವಿದೇಶಗಳಲ್ಲಿ ಧಾರ್ಮಿಕ ಸೇವೆಯಲ್ಲಿ ತೊಡಗಿಸಿಕೊಂಡಿದ್ದಾರೆ. ಇದರ ಜೊತೆಗೆ ನಿತ್ಯ ಸಾವಿರಾರು ಮಂದಿಗೆ ಅನ್ನ ದಾಸೋಹ ಮಾಡುತ್ತಿದ್ದಾರೆ. ಆದರೂ ಸ್ವಾಮೀಜಿ ನಾನು ಯಾವುದೇ ಸಾರ್ವಜನಿಕ ಸೇವೆ ಮಾಡುತ್ತಿಲ್ಲ ಎಂಬ ಮನೋಭಾವನೆಯಲ್ಲಿ ಸಾರ್ಥಕ ಬದುಕು ನಡೆಸುತ್ತಿದ್ದಾರೆ. ಅದಕ್ಕಾಗಿಯೇ ಅವರು, ನಮ್ಮ ಕಣ್ಣಿಗೆ ದೈವಾಂಶ ಸಂಭೂತರಾಗಿ ಕಾಣಿಸುತ್ತಾರೆ ಎಂದು ಬಣ್ಣಿಸಿದರು.

1967ರಲ್ಲಿ ಋಗ್ವೇದ ಕನ್ನಡ ಅನುವಾದದ 38 ಸಂಪುಟಗಳ ಬೃಹತ್ ಗ್ರಂಥವನ್ನು ಪ್ರಕಟಿಸಲು ಹಲವು ವರ್ಷಗಳೇ ಬೇಕಾಯಿತು. ಅಲ್ಲದೆ, ವೇದ-ಉಪನಿಷತ್‌ಗಳ ಸಂಪುಟಗಳು ಸಂಸ್ಕೃತದಲ್ಲಿ ಪ್ರಕಟಗೊಂಡಿದ್ದರೂ ನಮ್ಮ ದೇಶದ ಆಯಾಯ ಪ್ರಾದೇಶಿಕ ಭಾಷೆಗಳಿಗೆ ಅನುವಾದಗೊಳಿಸಿ, ಪ್ರಕಟಣೆ ಮಾಡಿಲ್ಲ. ಅದರಂತೆ ಕರ್ನಾಟಕದಲ್ಲಿಯೂ ಇಲ್ಲಿಯವರೆಗೂ ವೇದ-ಉಪನಿಷತ್ ಕನ್ನಡ ಅನುವಾದ ಸಂಪುಟಗಳನ್ನು ಪ್ರಕಟಿಸುವ ಗೋಜಿಗೆ ಹೋಗಿಲ್ಲ. ಆದರೆ, ಕನ್ನಡ ನಿಘಂಟು ಸಂಸ್ಥೆಯು ವೇದ-ಉಪನಿಷತ್‌ಗಳ 28 ಸಂಪುಟಗಳಲ್ಲಿ 4 ಸಂಪುಟಗಳಷ್ಟೆ ಪ್ರಕಟಣೆ ಮಾಡಲು ಮುಂದಾಗುತ್ತಿದೆ ಎಂದು ಮಾಹಿತಿ ನೀಡಿದರು.

ಇನ್ಫೋಸಿಸ್ ಫೌಂಡೇಶನ್ ಮುಖ್ಯಸ್ಥೆ ಸುಧಾಮೂರ್ತಿ ಅವರ ಬಳಿ ಸಾವಿರಾರು ಕೋಟಿ ಹಣವಿದೆ. ಆದರೆ, ಅವರ ಹತ್ತಿರ ಸಂಬಂಧಿಯೊಬ್ಬರನ್ನು ಬದುಕಿಸಿಕೊಳ್ಳಲಾಗಲಿಲ್ಲ ಎಂದು ಕಾರ್ಯಕ್ರಮವೊಂದರಲ್ಲಿ ಭೇಟಿಯಾಗಿದ್ದಾಗ ನನ್ನ ಬಳಿ ಅಳಲು ತೋಡಿಕೊಂಡಿದ್ದರು. ಮನುಷ್ಯನಿಗೆ ಸಾವು ಸಂಭವಿಸುವ ಮುನ್ನ ನಿಮ್ಮ ಸಾಧನೆ ಹಾಗೂ ಆತ್ಮದರ್ಶನ ವಿಮರ್ಶೆಗೆ ಮುಂದಾ ಗುವಂತೆ ಸಲಹೆ ನೀಡಿದರಲ್ಲದೆ, ಭಗವದ್ಗೀತೆ, ವೇದ-ಉಪನಿಷತ್‌ಗಳಲ್ಲಿರುವ ರಹಸ್ಯಗಳಲ್ಲಿ ನನಗೆ ಗೊತ್ತು ಎಂದು ಸಾರ್ವಜನಿಕವಾಗಿ ಎಲ್ಲಿಯೂ ಹೇಳಬೇಡಿ. ರುದ್ರಯಾಗ, ಲಲಿತಾ ಸಹಸ್ರಯಾಗ ಹಾಗೂ ಭಗವದ್ಗೀತೆಗಳನ್ನು ಎಲ್ಲರೂ ತಿಳಿದುಕೊಂಡು ಅದರಂತೆ ಬದುಕುವುದನ್ನು ರೂಢಿಸಿಕೊಳ್ಳಿ ಎಂದು ಕಿವಿಮಾತು ಹೇಳಿದರು.

ಈ ವೇಳೆ ಮುಡಾ ಮಾಜಿ ಅಧ್ಯಕ್ಷ ಹೆಚ್.ವಿ. ರಾಜೀವ್, ಉದ್ಯಮಿ ರವಿಶಾಸ್ತ್ರಿ, ಮೈಸೂರು ನಗರ ಮತ್ತು ಜಿಲ್ಲಾ ಬ್ರಾಹ್ಮಣ ಸಂಘದ ಅಧ್ಯಕ್ಷ ಡಿ.ಟಿ.ಪ್ರಕಾಶ್, ಕೆ.ರಘುರಾಮ್ ವಾಜಪೇಯಿ, ದತ್ತ ಸೇನೆಯ ಕೆ.ಆರ್.ಸತ್ಯನಾರಾಯಣ, ಒಂಟಿಕೊಪ್ಪಲು ಲಕ್ಷ್ಮಿವೆಂಕಟರಮಣ ಸ್ವಾಮಿ ದೇವಸ್ಥಾನದ ಪುಟ್ಟಸ್ವಾಮಿ ಸೇರಿದಂತೆ ಇತರರಿದ್ದರು.

ಕೋಟೆ, ತಾರಕ ನಡುವೆ ಬಸ್ ಸಂಚಾರ ಆರಂಭ



ಚಾಲಕ ಮತ್ತು ನಿರ್ವಾಹಕರನ್ನು ಗ್ರಾಮಸ್ಥರು ಅಭಿನಂದಿಸಿದರು.

ಹೆಚ್.ಡಿ.ಕೋಟೆ, ಡಿ.17– ಹೆಚ್.ಡಿ. ಕೋಟೆ ಹಾಗೂ ತಾರಕ ಗ್ರಾಮದ ನಡುವೆ ಕೆಎಸ್‌ಆರ್‌ಟಿಸಿ ಬಸ್ ಸಂಚಾರ ಮತ್ತೆ ಆರಂಭವಾಗಿದೆ.

ಕೊರೊನಾ ವೇಳೆ ಈ ಮಾರ್ಗದಲ್ಲಿ ಬಸ್ ಸಂಚಾರ ಸ್ಥಗಿತಗೊಳಿಸಲಾಗಿತ್ತು. ಆದರೆ ಈ ಭಾಗದ ಜನರ ಅನುಕೂಲಕ್ಕಾಗಿ ಹಾಗೂ ಒತ್ತಾಯದ ಮೇರೆಗೆ ಮತ್ತೆ ಬಸ್ ಸಂಚಾರ ಆರಂಭಿಸಲಾಗಿದೆ. ಸಾರಿಗೆ ಬಸ್ ಹೆಚ್.ಡಿ.ಕೋಟೆಯಿಂದ ಹೆಗ್ಗಡಪುರ, ನಾಗನಹಳ್ಳಿ, ಹಿರೇಹಳ್ಳಿ ಮಾರ್ಗವಾಗಿ ತಾರಕ ಗ್ರಾಮಕ್ಕೆ ತೆರಳಲಿದೆ. ಕಾಡಂಚಿನ 9 ಗ್ರಾಮಗಳ ಜನರ ಅನುಕೂಲಕ್ಕಾಗಿ ಬೆಳಗ್ಗೆ ಹಾಗೂ ರಾತ್ರಿ ವೇಳೆ ಸಾರಿಗೆ ಬಸ್ ವ್ಯವಸ್ಥೆ ಮಾಡಿಕೊಡುವಂತೆ ಇತ್ತೀಚೆಗೆ ಬಿ.ಹೀರೆಹಳ್ಳಿ ಗ್ರಾಮಸ್ಥರು ಹೋರಾಟ ನಡೆಸಿದ್ದರು. ಇದೀಗ ಬಸ್ ಸೌಲಭ್ಯ ಕಲ್ಪಿಸಿದ ಕೆಎಸ್‌ಆರ್‌ಟಿಸಿ ಅಧಿಕಾರಿಗಳಿಗೆ ಗ್ರಾಮಸ್ಥರು ಧನ್ಯವಾದ ತಿಳಿಸಿದ್ದಾರೆ. ಇದೇ ವೇಳೆ ಚಾಲಕ ಮತ್ತು ನಿರ್ವಾಹಕರನ್ನು ಮುಖಂಡರಾದ ರಂಗರಾಜು, ಸ್ವಾಮಿಗೌಡ, ಕೃಷ್ಣೇಗೌಡ, ಸಿದ್ದೇಗೌಡ, ಮಂಜೇಗೌಡ, ರತ್ನಮ್ಮ, ಮಹಿಳಾ ಸಂಘಟನೆ ಪುಷ್ಪ ಸನ್ಮಾನಿಸಿದರು.

ನೇಮಕ

ಹೆಚ್.ಡಿ.ಕೋಟೆ, ಡಿ.17– ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಹೆಚ್.ಡಿ.ಕೋಟೆ ತಾಲೂಕು ಯುವ ಸಮಿತಿ ಅಧ್ಯಕ್ಷರಾಗಿ ಸತೀಶ್ ನೇಮಕವಾಗಿದ್ದಾರೆ.



ಸಹಕಾರ ಕ್ಷೇತ್ರದಲ್ಲಿ ಹಾಲು ಉತ್ಪಾದಕರ ಸಂಘ ಉತ್ತಮ

ವಿಚಾರಗೋಷ್ಠಿಯಲ್ಲಿ ಮೈಮುಲ್ ಅಧ್ಯಕ್ಷ ಆರ್.ಚೆಲುವರಾಜು





ಪ್ರಗತಿಪರ ಹೈನುಗಾರರ ತಾಂತ್ರಿಕ ವಿಚಾರಗೋಷ್ಠಿಯನ್ನು ಮೈಮುಲ್ ಅಧ್ಯಕ್ಷ ಆರ್.ಚೆಲುವರಾಜು ಉದ್ಘಾಟಿಸಿದರು. ಮತ್ತೊಂದು ಚಿತ್ರದಲ್ಲಿ ಗೋಷ್ಠಿಯಲ್ಲಿದ್ದ ಮಹಿಳೆಯರನ್ನು ಕಾಣಬಹುದು.

ತಿ.ನರಸೀಪುರ, ಡಿ.17– ಸಹಕಾರ ಕ್ಷೇತ್ರದಲ್ಲಿ ಹಾಲು ಉತ್ಪಾದಕರ ಸಹಕಾರ ಸಂಘವು ಉತ್ತಮವಾಗಿ ನಡೆಯುತ್ತಿದೆ ಎಂದು ಮೈಮುಲ್ ಅಧ್ಯಕ್ಷ ಆರ್. ಚೆಲುವರಾಜ್ ತಿಳಿಸಿದರು.

ಪಟ್ಟಣದ ಎಪಿಎಂಸಿ ಆವರಣದಲ್ಲಿರುವ ಮೈಮುಲ್ ಉಪಕಚೇರಿಯಲ್ಲಿ ಮೈಸೂರು ಜಿಲ್ಲಾ ಹಾಲು ಉತ್ಪಾದಕರ ಸಹಕಾರ ಸಂಘಗಳ ಒಕ್ಕೂಟದಿಂದ ಮಂಗಳವಾರ ನಡೆದ ಪ್ರಗತಿಪರ ಹೈನುಗಾರರ ತಾಂತ್ರಿಕ ವಿಚಾರ ಗೋಷ್ಠಿ ಉದ್ಘಾಟಿಸಿ ಅವರು ಮಾತನಾಡಿದರು.

ಸಹಕಾರ ಕ್ಷೇತ್ರಗಳ ಪೈಕಿ ಹೈನುಗಾರರ ಸಹಕಾರದಿಂದ ಹಾಲು ಉತ್ಪಾದಕರ ಸಂಘ ಉತ್ತಮವಾಗಿ ನಡೆಯುತ್ತಿದ್ದು, ರೈತರು ಇನ್ನೂ ಹೆಚ್ಚಿನ ಪ್ರಮಾಣದಲ್ಲಿ ಹೈನುಗಾರಿಕೆಯಲ್ಲಿ ತಮ್ಮನ್ನು ತೊಡಗಿಸಿಕೊಳ್ಳುವ ಮೂಲಕ ಸಂಘ ಮಾದರಿ ಸಹಕಾರಿ ಸಂಸ್ಥೆಯಾಗಿ ಬೆಳೆಯಲು ಕಾರಣರಾಗಬೇಕು ಎಂದರು.

ರೈತರು ಅನೇಕ ಬೆಳೆಗಳನ್ನು ಬೆಳೆಯುತ್ತಾರೆ. ಆದರೆ ಅವರು ಬೆಳೆದ ಯಾವುದೇ ಬೆಳೆಗೆ ನಿಖರ ಬೆಲೆ ನಿಗದಿತ ಸಮಯಕ್ಕೆ ದೊರಕುತ್ತಿಲ್ಲ. ಆದರೆ ಹಾಲು ಉತ್ಪಾದನೆಯಲ್ಲಿ ಸರಿಯಾದ ಸಮಯಕ್ಕೆ ಯಾವುದೇ ತೊಂದರೆ ಇಲ್ಲದೇ ಹಣ ದೊರಕುತ್ತದೆ. ಅಲ್ಲದೇ ರೈತರು ಎಷ್ಟೇ ಹಾಲು ಉತ್ಪಾದನೆ ಮಾಡಿದರೂ ಮೈಮುಲ್ ನಿರಾಕರಿಸದೇ ಹಾಲು ಪಡೆದು ಮಾರಾಟ ಮಾಡಿ ರೈತರಿಗೆ ಹಣವನ್ನು ಬಟವಾಡೆ ಮಾಡಲಾಗುತ್ತಿದೆ. ಹಾಗಾಗಿ ರೈತರು ಹೆಚ್ಚಾಗಿ ಹಾಲು ಉತ್ಪಾದನೆಯಲ್ಲಿ ತೊಡಗಿ ಆರ್ಥಿಕವಾಗಿ ಸದೃಢರಾಗಬೇಕು ಎಂದು ಸಲಹೆ ನೀಡಿದರು.

ಮೈಸೂರು ಜಿಲ್ಲೆಯಲ್ಲಿ 8.5 ಲಕ್ಷ ಲೀಟರ್ ಹಾಲು ಉತ್ಪಾದನೆಯಾಗುತ್ತಿದೆ. ಒಕ್ಕೂಟವು ಮೊಸರು, ಮಜ್ಜಿಗೆ ಸೇರಿದಂತೆ ಎಲ್ಲಾ ಉತ್ಪಾದನೆಯಿಂದ 4.5 ಲಕ್ಷ ಲೀಟರ್ ಹಾಲು ಮಾರಾಟ ಮಾಡುತ್ತದೆ. ಉಳಿಕೆ ಹಾಲನ್ನು ಪೌಡರ್ ಮಾಡಿ ರಾಜ್ಯದ ಬೇರೆ ಬೇರೆ ಒಕ್ಕೂಟಗಳಿಗೆ ಮಾರಾಟ ಮಾಡಿ ಸರಿ ದೂಗಿಸಿಕೊಂಡು ರೈತರಿಗೆ ಯಾವುದೇ ತೊಂದರೆಯಾಗದಂತೆ ಒಕ್ಕೂಟ ನಡೆಸಿಕೊಂಡು ಹೋಗುತ್ತಿದ್ದೇವೆ. ಇತ್ತೀಚಿನ ದಿನಗಳಲ್ಲಿ ಹೈನುಗಾರಿಕೆ ಫ್ಯಾಷನ್ ಆಗಿ ಮಾರ್ಪಟ್ಟಿದ್ದು, ನಗರ ಪ್ರದೇಶದಲ್ಲಿರುವ ವಿದ್ಯಾವಂತರು ಕೂಡ ಗ್ರಾಮೀಣ ಪ್ರದೇಶಗಳಲ್ಲಿ ಜಮೀನು ಖರೀದಿಸಿ ಹೈನುಗಾರಿಕೆಯಲ್ಲಿ ತೊಡಗಿಕೊಳ್ಳುತ್ತಿದ್ದಾರೆ. ಆದರೆ ಹಾಲಿನ ಉತ್ಪಾದನೆ ಎಷ್ಟೇ ಹೆಚ್ಚಾದರೂ ಮಾರುಕಟ್ಟೆಗೆ ಬೇಕಾದ ವ್ಯವಸ್ಥೆ ಮಾಡಿಕೊಂಡು ಹಾಲು ಮಾರಾಟ ಮಾಡಿ ಹಣ ಬಟವಾಡೆ ಮಾಡುವ ಕೆಲಸ ಒಕ್ಕೂಟ ಮಾಡುತ್ತಿದೆ ಎಂದರು. ಇದೇ ವೇಳೆ ಮಹಿಳಾ ಹಾಲು ಉತ್ಪಾದಕರಿಗೆ ಬಡ್ಡಿ ರಹಿತ ಚೆಕ್‌ಗಳನ್ನು ವಿತರಿಸಲಾಯಿತು. ಮೈಮುಲ್ ಮಾಜಿ ಅಧ್ಯಕ್ಷ ಓಂ ಪ್ರಕಾಶ್, ಕೆ.ಜಿ.ಮಹೇಶ್, ವ್ಯವಸ್ಥಾಪಕ ಎಲ್.ಆರ್.ಕರಿಬಸವರಾಜು, ಜಿಲ್ಲಾ ಉಪವ್ಯವಸ್ಥಾಪಕಿ ಸೌಮ್ಯ, ಸಂಪನ್ಮೂಲ ವ್ಯಕ್ತಿ ಕೃಷ್ಣಾರೆಡ್ಡಿ, ಸಹಾಯಕ ವ್ಯವಸ್ಥಾಪಕ ಪ್ರಭು ಶಂಕರ್, ವಿಸ್ತರಣಾಧಿಕಾರಿಗಳಾದ ಆರ್.ಪ್ರಮೋದ್, ದಿವ್ಯಶ್ರೀ, ಅನಿತಾ, ಶಿವಕುಮಾರ್, ರಂಜಿತಾ, ಕಾರ್ಯದರ್ಶಿಗಳಾದ ಮಾದಪ್ಪ ಅಂದಾನಿಗೌಡ, ನಂಜುಂಡಸ್ವಾಮಿ, ನಾಗೇಂದ್ರ, ಕೃಷ್ಣಪ್ಪ, ಎಸ್‌ಡಿಎಂಸಿ ಅಧ್ಯಕ್ಷ ಮಹೇಶ್ ಹಾಗೂ ಪ್ರಗತಿಪರ ರೈತರು ಮತ್ತು ಮಹಿಳೆಯರು ಹಾಜರಿದ್ದರು.

> ನಾವು ಮೊದಲೆಲ್ಲಾ ನಮ್ಮ ಆಹಾರ ಪದ್ಧತಿಗೆ ತಕ್ಕಂತೆ ಮನೆಯಲ್ಲೇ ಬೆಳೆ ಬೆಳೆದುಕೊಳ್ಳುತ್ತಿದ್ದೆವು. ಇದೀಗ ತಾಂತ್ರಿಕತೆಗೆ ಮಾರು ಹೋಗಿ ರೋಗ ರುಜಿನಗಳಿಗೆ ಬಲಿಯಾಗುತ್ತಿದ್ದೇವೆ. ಅಲೋಪತಿ ಔಷಧ ಮರೆಯಾಗಿ ಇಂಗ್ಲಿಷ್ ಔಷಧಿಗೆ ಮಾರು ಹೋಗುತ್ತಿರುವುದರಿಂದ ಆರೋಗ್ಯದಲ್ಲಿ ಏರು ಪೇರಾಗುತ್ತಿದೆ. ಕ್ಯಾನ್ಸರ್, ಮಧುಮೇಹ, ಹೃದಯ ಸಂಬಂಧಿತ ಕಾಯಿಲೆಗಳು ಹೆಚ್ಚಾಗುತ್ತಿವೆ. ಆರೋಗ್ಯ ಪೂರ್ಣ ಭಾರತ ಕನಸು ನನಸಾಗಲು ಸಾಧ್ಯವಾಗುತ್ತಿಲ್ಲ. ನಮ್ಮ ಆರೋಗ್ಯದ ಇಂದಿನ ಸ್ಥಿತಿಗೆ ಅತಿಯಾದ ರಾಸಾಯನಿಕ ಬಳಕೆಯೇ ಕಾರಣವಾಗಿವೆ. ಹೈನುಗಾರಿಕೆ ಹಾಗೂ ನಾಟಿ ಸಂಪ್ರದಾಯಗಳು ನಮ್ಮ ಪರಿಸರಕ್ಕೆ ಪೂರಕ ಕೆಲಸ ಮಾಡುತ್ತವೆ. ಹಾಗಾಗಿ ನಾವೆಲ್ಲರೂ ನಾಟಿ ಪದ್ಧತಿ ಅಳವಡಿಸಿಕೊಂಡರೆ ಮಾತ್ರ ಆರೋಗ್ಯಕರ ಸಮಾಜ ನಿರ್ಮಾಣ ಸಾಧ್ಯ. ಹಾಗಾಗಿ ಪ್ರತಿ ಮನೆಯಲ್ಲಿ ಪ್ರತಿಯೊಬ್ಬರೂ ನಾಟಿ ವೈದ್ಯರಾಗುವ ಮೂಲಕ ಆರೋಗ್ಯ ಕಾಪಾಡಿಕೊಂಡು ನೆಮ್ಮದಿ ಬದುಕು ಸಾಗಿಸಬೇಕು. **- ಸದಾನಂದ, ಮೈಮುಲ್ ನಿರ್ದೇಶಕ.**

ಹುಣಸೂರಲ್ಲಿ ವಿಶ್ವ ವಿಕಲಚೇತನರ ದಿನಾಚರಣೆ



ಹುಣಸೂರಲ್ಲಿ ವಿಶ್ವ ವಿಕಲಚೇತನರ ದಿನಾಚರಣೆ ನಡೆಯಿತು.

ಹುಣಸೂರು, ಡಿ.17– ಸ್ವಾಮಿ ವಿವೇಕಾನಂದ ಯೂತ್ ಮೂವ್‌ಮೆಂಟ್ 1984 ರಿಂದ ಆರೋಗ್ಯ, ಅಕ್ಷರ, ಹಸಿವು ಮುಕ್ತ ಸಮಾಜವಾಗಿ ಪರಿವರ್ತಿಸಲು ಹಗಲಿರುಳು ಶ್ರಮಿಸುತ್ತಿದೆ ಎಂದು ಸಂಸ್ಥೆ ವ್ಯವಸ್ಥಾಪಕ ಎಂ.ಪಿ.ರಮೇಶ್ ತಿಳಿಸಿದರು.

ರೋಟರಿ ಕ್ಲಬ್ ಹುಣಸೂರು ಮತ್ತು ಸ್ವಾಮಿ ವಿವೇಕಾನಂದ ಯೂತ್ ಮೂವ್‌ಮೆಂಟ್ ಹಾಗೂ ಇನ್ನರ್‌ವ್ಹೀಲ್ ಕ್ಲಬ್ ಸಹಯೋಗದಲ್ಲಿ ನಡೆದ ವಿಶ್ವ ವಿಕಲಚೇತನರ ದಿನಾಚರಣೆಯಲ್ಲಿ ಮಾತನಾಡಿದ ಅವರು, ಮಹಿಳೆಯರಿಗೆ ಉಚಿತ ತರಬೇತಿ, ಹೊಲಿಗೆ ಯಂತ್ರ, ವಿಕಲಚೇತನರಿಗೆ ಸರ್ಕಾರದ ಸೌಲಭ್ಯಗಳ ಸಮಗ್ರ ಮಾಹಿತಿ ಮತ್ತು ಅವರ ಸ್ವಾವಲಂಬನೆಗೆ ಬೇಕಾದ ಪರಿಕರಗಳನ್ನು ನೀಡುವ ಮೂಲಕ ಸಮಾಜದಲ್ಲಿ ಸಮಾನತೆ ಸಿಗುವಂತೆ ನೋಡಿಕೊಳ್ಳುವ ಪ್ರಯತ್ನವನ್ನು ಸಂಸ್ಥೆ ನಿರಂತರವಾಗಿ ಮಾಡುತ್ತಿದೆ ಎಂದರು.

ರೋಟರಿ ಅಧ್ಯಕ್ಷ ಕೆ.ಪಿ.ಪ್ರಸನ್ನ ಮಾತನಾಡಿ, ಸಮಾಜದಲ್ಲಿ ವಿಕಲ ಚೇತನರಿಗೆ ಅನುಕಂಪದ ಅಗತ್ಯವಿಲ್ಲ. ಆದರೆ ಅವರ ಬದುಕಿಗೆ ಬೇಕಾದ ಕಲಿಕೆ ಅಥವಾ ಗುರಿ ಮುಟ್ಟುವ ಸಲಹೆ ಸಹಕಾರದ ಅವಶ್ಯಕತೆ ಇದೆ ಎಂದರು. ರೋಟರಿ ಕಾರ್ಯದರ್ಶಿ ಹೆಚ್.ಆರ್.ಕೃಷ್ಣಕುಮಾರ್ ಮಾತನಾಡಿ, ಆರೋಗ್ಯ ವಿಚಾರದಲ್ಲಿ ಅಂತಾರಾಷ್ಟ್ರೀಯ ರೋಟರಿ ಸಂಸ್ಥೆ ವಿಶೇಷಚೇತನರ ಅಂಗವೈಕಲ್ಯ ನಿರ್ಮೂಲನೆಗಾಗಿ ಹಲವು ವರ್ಷಗಳಿಂದ ವಿಶ್ವಸಂಸ್ಥೆಯೊಂದಿಗೆ ನಿಂತು ಆರ್ಥಿಕ ನೆರವು ನೀಡಿ ಪೋಲಿಯೋ ನಿರ್ಮೂಲನೆಗೆ ಮುಂದಾಗಿರುವುದು ಶ್ಲಾಘನೀಯ ಎಂದರು.

ವೆಂಕಟಸ್ವಾಮಿ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಇನ್ನರ್‌ವ್ಹೀಲ್ ಅಧ್ಯಕ್ಷೆ ಸ್ಮಿತಾ, ನಗರಸಭಾ ಸದಸ್ಯರಾದ ದೇವರಾಜು, ರಾಣಿ ಪೆರುಮಾಳ್, ಆರೋಗ್ಯ ಇಲಾಖೆಯ ರಾಜೇಶ್ವರಿ, ಸಂಯೋಜಕರಾದ ಫರೀನಾ, ದೇವರಾಜು, ನಾಗೇಂದ್ರ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಕೃಷ್ಣೇಗೌಡ, 150ಕ್ಕೂ ಹೆಚ್ಚು ವಿಕಲಚೇತನರು ಭಾಗವಹಿಸಿದ್ದರು.

ವಿವಿಧ ಸ್ಪರ್ಧೆಗಳಲ್ಲಿ ಜಯಗಳಿಸಿದ ವಿಕಲಚೇತನ ಮಕ್ಕಳು ಮತ್ತು ವಿಕಲಚೇತನರಿಗೆ ಬಹುಮಾನಗಳನ್ನು ವಿತರಿಸಲಾಯಿತು.

ಎಲ್ಲರ ಸಹಕಾರದಿಂದ ಕನ್ನಡ ಸಾಹಿತ್ಯ ಸಮ್ಮೇಳನ ಯಶಸ್ವಿ



ಸಾಹಿತ್ಯ ಸಮ್ಮೇಳನ ಕಾರ್ಯ ನಿರ್ವಹಣಾ ಸಮಿತಿ ಅಧ್ಯಕ್ಷ, ಸಂಚಾಲಕರ ಆಯ್ಕೆ ಸಭೆ ನಡೆಯಿತು.

ಸರಗೂರು, ಡಿ.17– ಸಾಹಿತ್ಯಾಸಕ್ತರು, ಜನಪ್ರತಿನಿಧಿಗಳು, ಶಿಕ್ಷಣ, ಕಲೆ, ರಂಗಭೂಮಿ ಕ್ಷೇತ್ರದವರು ಸೇರಿದಂತೆ ಎಲ್ಲರ ಸಹಕಾರದಿಂದ ಕನ್ನಡ ಸಾಹಿತ್ಯ ಸಮ್ಮೇಳನ ಯಶಸ್ವಿಯಾಗಲಿದೆ ಎಂದು ಜಿಲ್ಲಾ ಕಸಾಪ ಮಾಜಿ ಅಧ್ಯಕ್ಷ ಡಾ.ವೈ.ಡಿ.ರಾಜಣ್ಣ ಅಭಿಪ್ರಾಯಪಟ್ಟರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ನಡೆದ ಸರಗೂರು ತಾಲೂಕು ಕನ್ನಡ ಸಾಹಿತ್ಯ ಸಮ್ಮೇಳನ ಕಾರ್ಯ ನಿರ್ವಹಣಾ ಸಮಿತಿ ಅಧ್ಯಕ್ಷ, ಸಂಚಾಲಕರ ಆಯ್ಕೆ ಸಭೆಯಲ್ಲಿ ಮಾತನಾಡಿದ ಅವರು, ಸಾಹಿತ್ಯ ಮತ್ತು ಸಂಸ್ಕೃತಿ, ಪರಂಪರೆ ಬಗ್ಗೆ ಅರಿವಿದ್ದಾಗ ಮಾತ್ರ ಮನುಷ್ಯ ನಾಗರಿಕನಾಗುತ್ತಾನೆ. ನಾಡು–ನುಡಿ ಪ್ರೇಮ, ಎಲ್ಲರೂ ನಮ್ಮವರು ಎನ್ನುವ ಅಭಿಮಾನ ಮೂಡಿಸುವ ಕಾರ್ಯ ಕನ್ನಡಿಗರ ಆದ್ಯತೆ ಆಗಬೇಕಿದೆ. ಎಲ್ಲಾ ರಂಗದಲ್ಲೂ ಕನ್ನಡತನ ಪಸರಿಸುವ ದೃಷ್ಟಿಯಿಂದ ಸಾಹಿತ್ಯ ಸಮ್ಮೇಳನಗಳ ಅವಶ್ಯಕತೆ ಇದೆ ಎಂದರು.

ಜಿಪಂ ಮಾಜಿ ಸದಸ್ಯ ಪಿ.ರವಿ ಮಾತನಾಡಿ, ಸಮ್ಮೇಳನ ಹೆಚ್ಚು ಜನಾಕರ್ಷಕ ಹಾಗೂ ಅರ್ಥಪೂರ್ಣವಾಗಿ ನಡೆಯಲು ನಾವೆಲ್ಲರೂ ಶ್ರಮಿಸಬೇಕಿದೆ. ತಾಲೂಕಿನಲ್ಲಿ ಕನ್ನಡದ ವಾತಾವರಣಕ್ಕೆ ಇನ್ನಷ್ಟು ಶಕ್ತಿ ತುಂಬಬೇಕಿದೆ. ಸರಗೂರು ತಾಲೂಕಿನ ಪ್ರತಿಭೆಗಳಿಗೆ ಅಭಿನಂದಿಸುವ ಕಾರ್ಯ ಸಮ್ಮೇಳನದ ಮೂಲಕ ಜರುಗಲಿದೆ ಎಂದರು.

ಸರಗೂರು ಕಸಾಪ ಅಧ್ಯಕ್ಷ ಎಂ.ಕೆಂಡಗಣ್ಣಸ್ವಾಮಿ ಮಾತನಾಡಿದರು. ಈ ವೇಳೆ ಸರಗೂರು ತಾಲೂಕು ಕನ್ನಡ ಸಾಹಿತ್ಯ ಸಮ್ಮೇಳನ ಸ್ವಾಗತ ಸಮಿತಿ ಅಧ್ಯಕ್ಷರಾಗಿ ಶಾಸಕ ಅನಿಲ್, ನಗರ ಶೃಂಗಾರ ಸಮಿತಿ ಸಂಚಾಲಕಿ ಪಪಂ ಅಧ್ಯಕ್ಷೆ ರಾಧಿಕಾ, ಕಾರ್ಯ ನಿರ್ವಹಣಾ ಸದಸ್ಯರಾಗಿ ಪುರಸಭೆ ಮಾಜಿ ಅಧ್ಯಕ್ಷ ಎಸ್.ಬಿ.ಸತೀಶ್ ಕುಮಾರ್, ಮಹಿಳಾ ಸಮಿತಿ ಸಂಚಾಲಕರಾಗಿ ಜಿಪಂ ಮಾಜಿ ಉಪಾಧ್ಯಕ್ಷೆ ಹೆಚ್.ಆರ್. ಭಾಗ್ಯಲಕ್ಷ್ಮಿ, ವೇದಿಕೆ ಸಂಚಾಲಕ ಆದಿ ಕರ್ನಾಟಕ ಮಹಾಸಭಾ ಕಾರ್ಯದರ್ಶಿ ಮಲ್ಲೇಶ್, ಆಹಾರ ಸಮಿತಿ ಸಂಚಾಲಕರಾಗಿ ವೀರಶೈವ ಸಮಾಜದ ಟೌನ್ ಅಧ್ಯಕ್ಷ ಎಸ್.ಎನ್.ಮೋಹನ ಕುಮಾರ್, ಮೆರವಣಿಗೆ ಸಮಿತಿ ಸಂಚಾಲಕರಾಗಿ ಪ್ರಗತಿ ವಿದ್ಯಾಸಂಸ್ಥೆ ಮುಖ್ಯಶಿಕ್ಷಕ ಸತೀಶ್ ಕುಮಾರ್, ಪ್ರಚಾರ ಸಮಿತಿ ಸಂಚಾಲಕರಾಗಿ ಎಸ್.ಆರ್.ನಾಗರಾಮ್, ನಾಗೇಶ್, ಸಾಂಸ್ಕೃತಿಕ ಸಮಿತಿ ಸಂಚಾಲಕ ನಿಂಗ ರಾಜು, ಧ್ವಜಾರೋಹಣಾ ಸಮಿತಿ ಸಂಚಾಲಕ ನಾಗೇಂದ್ರಯ್ಯ, ಸಾಧಕರ ಆಯ್ಕೆ ಸಮಿತಿ ಸಂಚಾಲಕ ಮಹೇಶ್, ಸ್ಮರಣ ಸಂಚಿಕೆ ಸಮಿತಿ ಸಂಚಾಲಕ ರಾಜು, ಸ್ವಯಂ ಸೇವಕ ಸಮಿತಿ ಸಂಚಾಲಕರಾಗಿ ವಿವೇಕಾನಂದ ಆಸ್ಪತ್ರೆಯ ಬಂಗಾರಶೆಟ್ಟಿ, ಮೇಲ್ವಿಚಾರಣಾ ಸಮಿತಿಗೆ ಕೆಂಡಗಣ್ಣಸ್ವಾಮಿ, ಜಿಪಂ ಮಾಜಿ ಸದಸ್ಯರಾದ ವೆಂಕಟಸ್ವಾಮಿ, ಮಹದೇವಮ್ಮ, ಚಿಕ್ಕವೀರನಾಯಕ, ಪದ್ಮ, ತಾಪಂ ಮಾಜಿ ಅಧ್ಯಕ್ಷ ಸಿ.ಕೆ.ಗಿರೀಶ್, ಪಪಂ ಉಪಾಧ್ಯಕ್ಷ ಶಿವಕುಮಾರ್, ಸದಸ್ಯ ಶ್ರೀನಿವಾಸ್, ಆದಿ ಕರ್ನಾಟಕ ಮಹಾಸಭಾ ಅಧ್ಯಕ್ಷ ಶಿವಣ್ಣ, ಬಸವರಾಜು, ಶಿವಶಂಕರ್, ಎಸ್.ಎನ್ ನಾಗರಾಜು, ಮೋಹನ್ ಕುಮಾರ್, ಎಂ.ಪಿ. ಮಂಜುನಾಥ್, ಶಿವರಾಜ್, ಪ್ರಭುಸ್ವಾಮಿ, ಕುರ್ಣೇಗಾಲ ಗ್ರಾಪಂ ಸದಸ್ಯ ಬೆಟ್ಟಸ್ವಾಮಿ, ಸೋಮ ಶೇಖರ್, ಕೆಂಪಣ್ಣ, ನಿಂಗರಾಜು ಅವರನ್ನು ಆಯ್ಕೆ ಮಾಡಲಾಯಿತು. ಸರಗೂರು ತಾಲೂಕು ಹೋರಾಟಗಾರ ಕೃಷ್ಣ ಇನ್ನಿತರರಿದ್ದರು.

ವಿದ್ಯಾರ್ಥಿಗಳು ಪಠ್ಯೇತರ ಚಟುವಟಿಕೆಗೂ ಆದ್ಯತೆ ನೀಡಿ



ಶಾಲಾ ವಾರ್ಷಿಕೋತ್ಸವವನ್ನು ಕಳಲೆ ಕೇಶವಮೂರ್ತಿ ಉದ್ಘಾಟಿಸಿದರು.

ನಂಜನಗೂಡು, ಡಿ.17– ಮಕ್ಕಳಿಗೆ ಆಸ್ತಿ ಮಾಡಬೇಡಿ. ಬದಲಾಗಿ ಮಕ್ಕಳನ್ನೇ ಆಸ್ತಿಯನ್ನಾಗಿ ಮಾಡಿ. ಜಾಗತೀಕರಣದಿಂದಾಗಿ ವಿಶ್ವವೇ ಒಂದು ಗ್ರಾಮದಂತಾಗಿದ್ದು, ವಿದ್ಯೆ, ಕೌಶಲ್ಯ ಹೊಂದಿದವರು ಪ್ರಪಂಚದ ಯಾವುದೇ ಮೂಲೆಯಲ್ಲಾದರೂ ಉತ್ತಮ ಜೀವನ ನಡೆಸುತ್ತಾರೆ ಎಂದು ನೀಲಕಂಠೇಶ್ವರ ಆಂಗ್ಲ ಮಾಧ್ಯಮ ಶಾಲೆ ಅಧ್ಯಕ್ಷ ಅರುಣೇಶ್ ತಿಳಿಸಿದರು.

ನಗರದ ಕಬ್ಬಳ್ಳಿ ಸಾಹುಕಾರ್ ಜವನಪ್ಪನವರ ವಿದ್ಯಾರ್ಥಿ ನಿಲಯದ ಆವರಣದಲ್ಲಿ ನಡೆದ ನೀಲಕಂಠೇಶ್ವರ ಶಾಲೆಯ ವಾರ್ಷಿಕೋತ್ಸವದಲ್ಲಿ ಮಾತನಾಡಿದ ಅವರು, ಇಂದಿನ ಶಿಕ್ಷಣ ವ್ಯವಸ್ಥೆಯಲ್ಲಿ ವಿದ್ಯಾರ್ಥಿಗಳು ಪಠ್ಯೇತರ ಚಟುವಟಿಕೆಗಳಿಂದ ದೂರವಾಗುತ್ತಿದ್ದಾರೆ. ವಿದ್ಯಾರ್ಥಿಗಳು ಪಾಠದ ಜೊತೆಗೆ ಕ್ರೀಡಾ ಚಟುವಟಿಕೆಗಳಿಗೂ ಹೆಚ್ಚಿನ ಆದ್ಯತೆ ನೀಡಬೇಕು. ಶಾಲೆಗೆ ಪ್ರತಿ ವರ್ಷ ಎಸ್‌ಎಸ್ ಎಲ್‌ಸಿ ಯಲ್ಲಿ ಉತ್ತಮ ಫಲಿತಾಂಶ ಲಭ್ಯವಾಗುತ್ತಿದ್ದು, ಪ್ರೋತ್ಸಾಹ ನೀಡುತ್ತಿರುವ ಎಲ್ಲಾ ಮಹನೀಯರ ಕೊಡುಗೆಯನ್ನು ಸಂಸ್ಥೆ ನೆನೆಯುತ್ತದೆ ಎಂದರು.

ಮಾಜಿ ಶಾಸಕ ಕೇಶವಮೂರ್ತಿ ಮಾತನಾಡಿ, ನಗರದ ಜೂನಿಯರ್ ಕಾಲೇಜಿನ ಪ್ರಾಂಶುಪಾಲರಾಗಿ ದುಡಿದ ಸೋಮಶೇಖರ್ ಅವರು ಸ್ಥಾಪಿಸಿದ ಶಾಲೆ ನಗರದ ಬಡ ಜನರ ಮಕ್ಕಳ ಶಿಕ್ಷಣಕ್ಕೆ ಹೆಚ್ಚು ಒತ್ತು ನೀಡುವ ಮೂಲಕ ಜನರ ಮೆಚ್ಚುಗೆಗೆ ಪಾತ್ರವಾಗಿದೆ. ಉತ್ತಮ ಶಿಕ್ಷಕರು ಹಾಗೂ ಉತ್ತಮ ಆಡಳಿತ ವ್ಯವಸ್ಥೆ ಹೊಂದಿರುವ ಕಾರಣ ಶಾಲೆ ಕಡಿಮೆ ಅವಧಿಯಲ್ಲಿ ಉತ್ತಮ ಸಾಧನೆ ಮಾಡಿದೆ ಎಂದರು. ಕಾರ್ಯಕ್ರಮದ ಅಂಗವಾಗಿ ಶಾಲೆ ವಿದ್ಯಾರ್ಥಿಗಳು ನಡೆಸಿಕೊಟ್ಟ ಸಾಂಸ್ಕೃತಿಕ ಕಾರ್ಯಕ್ರಮ ಪೋಷಕರ ಮೆಚ್ಚುಗೆಗೆ ಪಾತ್ರವಾಯಿತು.

ಕಾರ್ಯಕ್ರಮದಲ್ಲಿ ಯು.ಎನ್.ಪದ್ಮನಾಭರಾವ್, ಬಿಇಓ ಮಹೇಶ್, ಪ್ರೌಢಶಾಲಾ ಸಹ ಶಿಕ್ಷಕರ ಸಂಘದ ಅಧ್ಯಕ್ಷ ರಮೇಶ, ಜೆಎಸ್‌ಎಸ್ ಶಾಲೆ ಪ್ರಾಂಶುಪಾಲ ಸುಬ್ಬಣ್ಣ, ಕಾರ್ಯದರ್ಶಿ ಕುಮಾರಸ್ವಾಮಿ, ಮುಖ್ಯೋಪಾಧ್ಯಾಯರಾದ ರಾಜೇಶ್ವರಿ, ಟಿ.ಎಸ್.ಮಮತಾ, ನಟರಾಜ್, ಲತಾ, ಮಂಜುಳ, ಆರ್.ವಿ.ಮಹದೇವಸ್ವಾಮಿ, ನಗರಸಭೆ ಸದಸ್ಯೆ ಶ್ವೇತ ಲಕ್ಷ್ಮಿ ಉಪಸ್ಥಿತರಿದ್ದರು.

ಹೆಮ್ಮರಗಾಲ ಗ್ರಾಪಂಗೆ ಎಂ.ಶ್ರೀಧರ್ ಅಧ್ಯಕ್ಷ



ಹೆಮ್ಮರಗಾಲ ಗ್ರಾಪಂ ಅಧ್ಯಕ್ಷರಾಗಿ ಎಂ.ಶ್ರೀಧರ್ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.


ನಂಜನಗೂಡು, ಡಿ.17– ತಾಲೂಕಿನ ಹೆಮ್ಮರಗಾಲ ಗ್ರಾಪಂ ನೂತನ ಅಧ್ಯಕ್ಷರಾಗಿ ಎಂ.ಶ್ರೀಧರ್ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

16 ಸದಸ್ಯ ಬಲದ ಹೆಮ್ಮರಗಾಲ ಗ್ರಾಪಂ ಅಧ್ಯಕ್ಷ ಸ್ಥಾನ ಎಸ್ಸಿ ವರ್ಗಕ್ಕೆ ಮೀಸಲಾಗಿತ್ತು. ಹಿಂದಿನ ಅಧ್ಯಕ್ಷೆ ಭಾಗ್ಯ ಉಮೇಶ್ ಅವರ ರಾಜೀನಾಮೆಯಿಂದ ತೆರವಾಗಿದ್ದ ಸ್ಥಾನಕ್ಕೆ ಸೋಮವಾರ ನಡೆದ ಚುನಾವಣೆಯಲ್ಲಿ ಎಂ.ಶ್ರೀಧರ್ ಅವರನ್ನು ಹೊರತುಪಡಿಸಿ ಬೇರೆ ಯಾರೂ ನಾಮಪತ್ರ ಸಲ್ಲಿಸದ ಕಾರಣ ಚುನಾವಣಾಧಿಕಾರಿ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಎಇಇ ಶಿವಕುಮಾರ್ ಅವಿರೋಧ ಆಯ್ಕೆ ಘೋಷಿಸಿದರು. ಚುನಾವಣಾ ಪ್ರಕ್ರಿಯೆಯಲ್ಲಿ 16 ಸದಸ್ಯರು ಹಾಜರಿದ್ದರು.

ನೂತನ ಅಧ್ಯಕ್ಷ ಎಂ.ಶ್ರೀಧರ್ ಮಾತನಾಡಿ, ಮುಂದಿನ ದಿನಗಳಲ್ಲಿ ಗ್ರಾಪಂನ ಎಲ್ಲಾ ಸದಸ್ಯರ ಸಹಕಾರ ಪಡೆದು ಗ್ರಾಪಂ ವ್ಯಾಪ್ತಿಯಲ್ಲಿ ಸ್ವಚ್ಛತೆಗೆ ಆದ್ಯತೆ ನೀಡಲಾಗುವುದು. ಅಲ್ಲದೇ ಸ್ವಚ್ಛತೆ ಬಗ್ಗೆ ಜನತೆಗೆ ಅರಿವು ಮೂಡಿಸಿ ಗ್ರಾಪಂ ವ್ಯಾಪ್ತಿಯ ಗ್ರಾಮಗಳಲ್ಲಿ ಮೂಲ ಸೌಕರ್ಯ ಕಲ್ಪಿಸಲು ಶ್ರಮಿಸುತ್ತೇನೆ ಎಂದರು.

ಈ ವೇಳೆ ಉಪಾಧ್ಯಕ್ಷೆ ಜಯಮ್ಮ, ಸದಸ್ಯರಾದ ಪುರುಷೋತ್ತಮ, ಪುಟ್ಟಸ್ವಾಮಿ ನಾಯಕ, ಪ್ರಶಾಂತ್, ಶೀಲಾ, ಅಂಬಿಕಾ, ಭಾಗ್ಯ, ಗೀತಾ, ರವಿಕುಮಾರ, ನಾಗರಾಜು, ಗೌರಮ್ಮ, ಜ್ಯೋತಿ, ಶಿವಮಾದಪ್ಪ, ಮಹದೇವಮ್ಮ ಮುಖಂಡರಾದ ಸಿದ್ಧಶೆಟ್ಟಿ, ನಾರಾಯಣ, ಡಿ.ಮಹದೇವ ನಾಯಕ, ನಾಗರಾಜು, ಶಂಕರಪ್ಪ, ರಾಜಶೇಖರಮೂರ್ತಿ, ಬಸವರಾಜನಾಯಕ, ಪಿಡಿಓ ಪುಟ್ಟಸ್ವಾಮಿಚಾರಿ ಸೇರಿದಂತೆ ಇತರರಿದ್ದರು.

ಶುದ್ಧ ಕುಡಿಯುವ ನೀರಿನ ಘಟಕ ಪರಿಶೀಲನೆ



ಬನ್ನೂರಿನ ತೇರಿನ ಬೀದಿಯಲ್ಲಿರುವ ಮಾಯಮ್ಮ ಶುದ್ಧ ಕುಡಿಯುವ ನೀರಿನ ಘಟಕಕ್ಕೆ ಮಂಗಳವಾರ ನರಸೀಪುರ ತಾಲೂಕು ಆಹಾರ ಸುರಕ್ಷತಾ ಅಧಿಕಾರಿ ಜಿ.ಎಸ್.ಸುಮಂತ್ ಭೇಟಿ ನೀಡಿ ಪರಿಶೀಲಿಸಿದರು.


ವೀರಶೈವ ಲಿಂಗಾಯತ ಸಮಾಜದಿಂದ ಸನ್ಮಾನ



ಪಿರಿಯಾಪಟ್ಟಣ ತಾಲೂಕಿನ ವೀರಶೈವ ಲಿಂಗಾಯತ ನೌಕರರ ಸಂಘದ ನೂತನ ಅಧ್ಯಕ್ಷ ಪರಮಶಿವಯ್ಯ, ಕಾರ್ಯದರ್ಶಿ ನಂಜುಂಡಸ್ವಾಮಿ, ಖಜಾಂಚಿ ಲೋಕೇಶ್ ಅವರನ್ನು ತಾಲೂಕು ವೀರಶೈವ ಲಿಂಗಾಯತ ಸಮಾಜದಿಂದ ಸನ್ಮಾನಿಸಲಾಯಿತು. ಈ ವೇಳೆ ತಾಲೂಕು ಶಿವಕುಮಾರಸ್ವಾಮಿ ಬಳಗದ ಅಧ್ಯಕ್ಷ ಶಿವಕುಮಾರಸ್ವಾಮಿ, ನೌಕರರ ಸಂಘದ ಮಾಜಿ ಅಧ್ಯಕ್ಷ ಬಿ.ಸಿ.ಮಹದೇವಪ್ಪ ಮುಖಂಡರಾದ ಶಿವಮೂರ್ತಿ, ಮಹದೇವಪ್ಪ, ಪುಟ್ಟರಾಜು, ಎಂ.ಮಲ್ಲೇಶ್, ನಾಗೇಂದ್ರ, ಧರ್ಮಪಾಲ್, ಸಮಾಜದ ಮುಖಂಡರಾದ ಶಿವದೇವ, ಮಹೇಶ್, ಗಿರೀಶ್, ಮಂಜುನಾಥ್, ಗಣೇಶ್, ಶಿವಪ್ಪ ಸೇರಿದಂತೆ ಇನ್ನಿತರರಿದ್ದರು.

ಬೀದಿಬದಿ ವ್ಯಾಪಾರಿಗಳಿಗೆ ಸ್ಥಳಾವಕಾಶ ನೀಡುವಂತೆ ಪ್ರತಿಭಟನೆ

ಪುರಸಭಾಧಿಕಾರಿಗಳ ಭರವಸೆ ಹಿನ್ನೆಲೆ: ಅನಿರ್ದಿಷ್ಟಾವಧಿ ಧರಣಿ ಹಿಂಪಡೆದ ದಸಂಸ



ದಸಂಸ ಜಿಲ್ಲಾ ಸಂಚಾಲಕ ಆಲಗೂಡು ಚಂದ್ರಶೇಖರ್ ಕಟ್ಟಡ ನೆಲಸಮಗೊಳಿಸುವ ಆದೇಶದ ಪ್ರತಿ ಪ್ರದರ್ಶಿಸಿದರು.

ತಿ.ನರಸೀಪುರ, ಡಿ.17– ಶಿಥಿಲಾವಸ್ಥೆ ತಲುಪಿರುವ ಮಾರುಕಟ್ಟೆ ರಸ್ತೆಯ ವಾಣಿಜ್ಯ ಮಳಿಗೆ ಹಳೇ ಕಟ್ಟಡ ನೆಲಸಮಗೊಳಿಸಿ ಬೀದಿಬದಿ ವ್ಯಾಪಾರಿಗಳಿಗೆ ತುರ್ತಾಗಿ ಸ್ಥಳಾವಕಾಶ ಕಲ್ಪಿಸಬೇಕೆಂದು ಆಗ್ರಹಿಸಿ ಪಟ್ಟಣ ಪುರಸಭೆ ಎದುರು ದಸಂಸ ಮಂಗಳವಾರ ಹಮ್ಮಿಕೊಂಡಿದ್ದ ಅನಿರ್ದಿಷ್ಟಾವಧಿ ಧರಣಿಯನ್ನು ಪುರಸಭೆ ಅಧಿಕಾರಿಗಳಿಂದ ಕಟ್ಟಡ ನೆಲಸಮಗೊಳಿಸುವ ಭರವಸೆ ದೊರಕಿದ ಹಿನ್ನೆಲೆಯಲ್ಲಿ ತಾತ್ಕಾಲಿಕವಾಗಿ ಹಿಂಪಡೆಯಲಾಯಿತು.

ವಾಹನ ಸಂಚಾರಕ್ಕೆ ಅಡಚಣೆಯಾಗುತ್ತಿದೆ ಎಂಬ ಕಾರಣಕ್ಕೆ ಪುರಸಭೆ ಅಧಿಕಾರಿಗಳು ಪೊಲೀಸರ ಸಹಕಾರದೊಂದಿಗೆ ರಸ್ತೆಬದಿ ವ್ಯಾಪಾರಿಗಳನ್ನು ತೆರವುಗೊಳಿಸಿದ್ದರು. ಈ ಹಿನ್ನೆಲೆಯಲ್ಲಿ ದಲಿತ ಸಂಘರ್ಷ ಸಮಿತಿ ಒಕ್ಕಲೆಬ್ಬಿಸಿದ್ದ ವ್ಯಾಪಾರಿಗಳಿಗೆ ಪರ್ಯಾಯ ವ್ಯವಸ್ಥೆ ಕಲ್ಪಿಸುವಂತೆ ಪುರಸಭೆ ಅಧಿಕಾರಿಗಳಿಗೆ ಆಗ್ರಹಿಸಿತ್ತು. ಅಲ್ಲದೇ ನಿರುಪಯುಕ್ತ ನೂರು ವರ್ಷ ಹಳೆಯದಾದ ಮಾರ್ಕೆಟ್ ರಸ್ತೆಯ ವಾಣಿಜ್ಯ ಮಳಿಗೆ ಕಟ್ಟಡ ನೆಲಸಮಗೊಳಿಸಿ ಅಲ್ಲಿ ಬೀದಿಬದಿ ವ್ಯಾಪಾರಿಗಳು ವ್ಯಾಪಾರ ಮಾಡಲು ಪರ್ಯಾಯ ವ್ಯವಸ್ಥೆ ಕಲ್ಪಿಸುವಂತೆ ಒತ್ತಾಯಿಸಿತ್ತು. ಆದರೆ ಒತ್ತಾಯಕ್ಕೆ ಪೂರಕ ಸ್ಪಂದನೆ ಸಿಗದ ಹಿನ್ನೆಲೆಯಲ್ಲಿ ಮಂಗಳವಾರ ಪುರಸಭೆ ಎದುರು ಅನಿರ್ದಿಷ್ಟಾವಧಿ ಧರಣಿ ನಡೆಸಲು ದಸಂಸ ಸಿದ್ಧತೆ ನಡೆಸಿ ಧರಣಿ ಸಹ ಕುಳಿತಿತ್ತು. ಆದರೆ ಪುರಸಭೆ ಮುಖ್ಯಾಧಿಕಾರಿ ಬಿ.ಕೆ.ವಸಂತಕುಮಾರಿ ಉನ್ನತ ಅಧಿಕಾರಿಗಳನ್ನು ಭೇಟಿ ಮಾಡಿ ಕಟ್ಟಡ ನೆಲಸಮಗೊಳಿಸುವ ಬಗ್ಗೆ ಮಾತುಕತೆ ನಡೆಸಿ, ಅವರ ಒಪ್ಪಿಗೆ ಯೊಂದಿಗೆ ಧರಣಿ ನಿರತರಿಗೆ ಕಟ್ಟಡ ನೆಲಸಮ ಗೊಳಿಸುವ ಸಂಬಂಧ ಆದೇಶದ ಪ್ರತಿ ನೀಡಿದ ಹಿನ್ನೆಲೆಯಲ್ಲಿ ಅನಿರ್ದಿಷ್ಟಾವಧಿ ಧರಣಿಗೆ ಸಿದ್ಧರಾಗಿದ್ದ ಪ್ರತಿಭಟನಾನಿರತರು ಮುಖ್ಯಾಧಿಕಾರಿಯವರ ಕಾರ್ಯ ವೈಖರಿ ಪ್ರಶಂಸಿಸಿ ಧರಣಿ ಹಿಂಪಡೆದರು.

ದಸಂಸ ಜಿಲ್ಲಾ ಸಂಚಾಲಕ ಆಲಗೂಡು ಡಾ.ಚಂದ್ರಶೇಖರ್ ಮಾತನಾಡಿ, ನಮ್ಮ ಮನವಿಗೆ ಸ್ಪಂದಿಸಿದ ಪುರಸಭೆ ಅಧಿಕಾರಿ ವರ್ಗ ಶಿಥಿಲಾವಸ್ಥೆಯಲ್ಲಿದ್ದ ಮಾರ್ಕೆಟ್ ರಸ್ತೆಯ ವಾಣಿಜ್ಯ ಮಳಿಗೆ ಹಳೆ ಕಟ್ಟಡ ನೆಲಸಮಗೊಳಿಸುವ ಆದೇಶ ಪ್ರತಿ ನೀಡಿದ್ದಾರೆ. ಹಾಗಾಗಿ ಅವರಿಗೆ ಅಭಿನಂದನೆ ಸಲ್ಲಿಸಿ ನಮ್ಮ ಸಾಂಕೇತಿಕ ಪ್ರತಿಭಟನೆ ಹಿಂಪಡೆಯುತ್ತೇವೆ. ಒಂದು ವೇಳೆ ಕೇವಲ ಆದೇಶ ಪ್ರತಿ ತೋರಿಸಿ 2–3 ದಿನದೊಳಗೆ ಕಾರ್ಯಾಚರಣೆ ಆರಂಭಿಸದಿದ್ದಲ್ಲಿ ಮತ್ತೆ ಚಳವಳಿ ಮುಂದು ವರೆಯಲಿದೆ ಎಂದು ಎಚ್ಚರಿಸಿದರು. ಈ ವೇಳೆ ಜಿಲ್ಲಾ ಸಂಘಟನಾ ಸಂಚಾಲಕ ಕೆಂಪಯ್ಯನ ಹುಂಡಿ ರಾಜು, ಟೌನ್ ಸಂಚಾಲಕ ಎಸ್. ಗಿರೀಶ್, ಕನ್ನಾಯಕನಹಳ್ಳಿ ಮರಿಸ್ವಾಮಿ, ನಿಲಸೋಗೆ ಕುಮಾರ್, ತೊಟ್ಟವಾಡಿ ರಾಜಪ್ಪ, ಕೊಳತ್ತೂರು ಪ್ರಭಾಕರ್, ವಿನಯ್ ಕುಮಾರ್, ಮನೋಜ್ ಕುಮಾರ್, ಕಾರ್ ಸ್ವಾಮಿ, ಚೌಹಳ್ಳಿ ಪರಶುರಾಮ್, ಭೈರಾಪುರ ಅರ್ಜುನ್, ಮಾರನಪುರ ಕೇಶವ ಮೂರ್ತಿ, ಬೆಟ್ಟಹಳ್ಳಿ ರವಿಕಾಂತ್, ಕೂಡ್ಲೂರು ಶಿವನಂಜು, ಕುಪ್ಯ ಗವಿ ಸಿದ್ದಯ್ಯ, ಜಯಣ್ಣ, ಮಾದಿಗಳ್ಳಿ ಚಿನ್ನಸ್ವಾಮಿ, ಯಡದೊರೆ ಕೃಷ್ಣ, ಹೆಮ್ಮಿಗೆ ಮಲ್ಲೇಶ್, ಪ್ರಸನ್ನ, ಬಿಲಿಗೆರೆಹುಂಡಿ ಮಹದೇವ ಸ್ವಾಮಿ, ರಾಜಶೇಖರ್ ಮತ್ತಿತರರಿದ್ದರು.

ನಿಧನ

ತಿಮ್ಮೇಗೌಡ



ತಿ.ನರಸೀಪುರ, ಡಿ.17– ಬನ್ನೂರು ಟೌನ್ ನಿವಾಸಿ, ಲಯನ್ಸ್ ಕ್ಲಬ್ ಮಾಜಿ ಅಧ್ಯಕ್ಷ ಲಯನ್ ಬಿ.ಸಿ.ತಿಮ್ಮೇಗೌಡ (65) ಮಂಗಳವಾರ ನಿಧನರಾದರು. ಮೃತರು ಪತ್ನಿ, ಪುತ್ರ, ಇಬ್ಬರು ಪುತ್ರಿಯರು ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಬನ್ನೂರಿನ ಕಾವೇರಿ ನದಿ ತೀರದಲ್ಲಿ ನೆರವೇರಿತು ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಪುಟ್ಟಸ್ವಾಮಿಗೌಡ



ಹುಣಸೂರು, ಡಿ.17– ತಾಲೂಕಿನ ಶ್ಯಾನಬೋಗನಹಳ್ಳಿ ಗ್ರಾಮದ ರೈತ ಮುಖಂಡ ಪುಟ್ಟಸ್ವಾಮಿಗೌಡ(48) ಮಂಗಳವಾರ ನಿಧನರಾದರು. ಮೃತರು ಪತ್ನಿ, ಇಬ್ಬರು ಪುತ್ರರು ಸೇರಿದಂತೆ ಅಪಾರ ಬಂಧುಗಳನ್ನು ಅಗಲಿದ್ದಾರೆ. ಅಂತ್ಯಕ್ರಿಯೆ ಬುಧವಾರ ಮಧ್ಯಾಹ್ನ ಸ್ವಗ್ರಾಮದಲ್ಲಿ ನಡೆಯಲಿದೆ ಎಂದು ಕುಟುಂಬದ ಮೂಲಗಳು ತಿಳಿಸಿವೆ.

ಅರಣ್ಯ ಸಂಚಾರಿ ದಳದಿಂದ ನಾಗಮಂಗಲದಲ್ಲಿ ಒಬ್ಬನ ಬಂಧನ: ಕೋಟ್ಯಾಂತರ ಮೌಲ್ಯದ 3.10 ಕೆಜಿ ತಿಮಿಂಗಿಲದ ವಾಂತಿ ವಶಕ್ಕೆ

ಮೈಸೂರು, ಡಿ.17(ಎಂಟಿವೈ)– ಮೈಸೂರು ಅರಣ್ಯ ಸಂಚಾರಿ ದಳದ ಸಿಬ್ಬಂದಿ ಮಂಡ್ಯ ಜಿಲ್ಲೆ ನಾಗಮಂಗಲದ ಮನೆಯೊಂದರ ಮೇಲೆ ದಾಳಿ ನಡೆಸಿ, ಒಬ್ಬನ ಬಂಧಿಸಿ, ಕೋಟ್ಯಾಂತರ ರೂ. ಮೌಲ್ಯದ ತಿಮಿಂಗಿಲದ ವಾಂತಿ(ಅಂಬರ್‌ಗ್ರಿಸ್) ವಶಪಡಿಸಿಕೊಂಡಿದ್ದಾರೆ.

ಮಂಡ್ಯ ಜಿಲ್ಲೆಯ ನಾಗಮಂಗಲ ತಾಲೂಕಿನ ಹಳೆಯ ಪೋಸ್ಟ್ ಆಫೀಸ್ ಬಡಗೂಡಮ್ಮ ದೇವಾಲಯ ರಸ್ತೆಯ ಮನೆಯೊಂದರ ಮೇಲೆ ಮಿಂಚಿನ ದಾಳಿ ನಡೆಸಿದ ಅರಣ್ಯ ಸಂಚಾರಿ ದಳ, ವಿನಯ್ ಕುಮಾರ್ ಆರ್.ಸಿ. ಬಿನ್ ಚಲುವರಾಜು(31) ಎಂಬಾತನನ್ನು ವಶಕ್ಕೆ ಪಡೆದು ಮನೆಯನ್ನು ಶೋಧಿಸಿದಾಗ ಬಕೆಟ್‌ನಲ್ಲಿಟ್ಟಿದ್ದ ತಿಮಿಂಗಿಲದ ವಾಂತಿ (ಅಂಬರ್‌ಗ್ರಿಸ್) ಪತ್ತೆಯಾಗಿದೆ. ಮಹಜರು ಬಳಿಕ ಆರೋಪಿ ವಿನಯ್‌ಕುಮಾರ್‌ನನ್ನು ಬಂಧಿಸಿದ್ದಾರೆ.

ಆರೋಪಿಯಿಂದ ಒಟ್ಟು 3.6 ಕೋಟಿ ಮೌಲ್ಯದ 3.10 ಕೆಜಿ ತಿಮಿಂಗಿಲದ ವಾಂತಿ, ಕಪ್ಪು ಬ್ಯಾಗ್, ಬಕೆಟ್ ಹಾಗೂ ಮೊಬೈಲ್ ವಶಕ್ಕೆ ಪಡೆಯಲಾಗಿದೆ. ಆರೋಪಿಯೊಂದಿಗೆ ಇನ್ನಷ್ಟು ಮಂದಿ ಭಾಗಿಯಾಗಿದ್ದು, ಅವರ ಬಗ್ಗೆ ವಿಚಾರಣೆ ವೇಳೆ ಮಾಹಿತಿ ನೀಡಿಲ್ಲ. ಅಲ್ಲದೆ, ಬೆಂಗಳೂರು ಮೂಲದ ವ್ಯಕ್ತಿಯೊಬ್ಬರು ಮನೆಯಲ್ಲಿ ಟ್ಟಿರುವಂತೆ ತಿಮಿಂಗಿಲದ ವಾಂತಿಯನ್ನು ನೀಡಿದ್ದರು. ಅದನ್ನು ಬಕೆಟ್‌ನಲ್ಲಿ ಉಪ್ಪು ನೀರಿನೊಂದಿಗೆ ಇಟ್ಟಿದ್ದಾಗಿ ಆರೋಪಿ ಅರಣ್ಯ ಸಂಚಾರಿ ದಳಕ್ಕೆ ಮಾಹಿತಿ ನೀಡಿದ್ದಾನೆ. ಹಾಗಾಗಿ ಅಂಬರ್‌ಗ್ರಿಸ್ ಎಲ್ಲಿಂದ ತಂದರು, ವಿನಯ್‌ಕುಮಾರ್‌ನೊಂದಿಗೆ ಇರುವವರು ಯಾರು. ಈ ಹಿಂದೆ ಅರಣ್ಯ ಅಪರಾಧ ಕೃತ್ಯದಲ್ಲಿ ಭಾಗಿಯಾಗಿದ್ದಾರಾ ಎಂದು ತನಿಖೆಯಿಂದಷ್ಟೇ ತಿಳಿಯಬೇಕಾಗಿದೆ. ಅಲ್ಲದೆ, ಈ ಪ್ರಕರಣ ಅರಣ್ಯ ಸಂಚಾರಿ ದಳಕ್ಕೆ ಸವಾಲಾಗಿ ಪರಿಣಮಿಸಿದೆ.



ತಿಮಿಂಗಿಲದ ವಾಂತಿಯೊಂದಿಗೆ ಬಂಧಿತ ಆರೋಪಿ ವಿನಯ್‌ಕುಮಾರ್, ಅರಣ್ಯ ಸಂಚಾರಿ ದಳದ ಸಿಬ್ಬಂದಿಗಳ ಕಾಣಬಹುದು.

ಹಳೆ ಮೈಸೂರು ಭಾಗದಲ್ಲಿ ವಿರಳ: ತಿಮಿಂಗಿಲದ ವಾಂತಿ (ಅಂಬರ್‌ಗ್ರಿಸ್) ಸಾಗಾಟ ಅಥವಾ ಮಾರಾಟ ಪ್ರಕರಣ ಹಳೆ ಮೈಸೂರು ಭಾಗದಲ್ಲಿ ವಿರಳ. ಎರಡು ವರ್ಷದ ಹಿಂದೆ ಕುಶಾಲನಗರ ಬಳಿ ಇಬ್ಬರನ್ನು ಬಂಧಿಸಿ 2 ಕೋಟಿ ರೂ. ಮೌಲ್ಯದ ಎರಡು ಕೆಜಿ ತಿಮಿಂಗಿಲದ ವಾಂತಿ ವಶಪಡಿಸಿಕೊಳ್ಳಲಾಗಿತ್ತು. ಆ ಪ್ರಕರಣ ಇನ್ನು ನ್ಯಾಯಾಲಯದಲ್ಲಿದೆ. ಅದನ್ನು ಹೊರತುಪಡಿಸಿದರೆ, ನಾಗಮಂಗಲದಲ್ಲಿ ವಶಪಡಿಸಿಕೊಂಡಿರುವ ಅಂಬರ್‌ಗ್ರಿಸ್ ದೊಡ್ಡ ಮೊತ್ತದ್ದಾಗಿರುವ ದಾಖಲೆಯಾಗಿದೆ. ಸಮುದ್ರದ ತೀರದಲ್ಲಿ ಅಂಬರ್‌ಗ್ರಿಸ್ ಪ್ರಕರಣ ಕಂಡು ಬರುತ್ತದೆ. ತಿಮಿಂಗಿಲಗಳು ಒಮ್ಮೊಮ್ಮೆ ತಿಂದ ಆಹಾರವನ್ನು ಅರಗಿಸಿಕೊಳ್ಳಲಾಗದೆ ಸಮುದ್ರದ ದಡ ಇಲ್ಲವೇ ದ್ವೀಪ ಭಾಗದಲ್ಲಿ ವಾಂತಿ ಮಾಡುತ್ತವೆ. ಅದನ್ನು ಕಳ್ಳರು ಅಕ್ರಮವಾಗಿ ಕೊಂಡೊಯ್ದು ಸ್ಮಗ್ಲಿಂಗ್ ಮಾಡುವ ಅಭ್ಯಾಸ ಮಾಡಿಕೊಂಡಿದ್ದಾರೆ. ತಿಮಿಂಗಿಲದ ವಾಂತಿಯನ್ನು ಚೀನಾ ಸೇರಿದಂತೆ ವಿವಿಧ ದೇಶಗಳಲ್ಲಿ ಸುಗಂಧ ದ್ರವ್ಯ(ಸೆಂಟ್) ಹಾಗೂ ಔಷಧ ತಯಾರಿಕೆಗೆ ಬಳಸುತ್ತಾರೆ ಎನ್ನಲಾಗಿದ್ದು, ಹಾಗಾಗಿ ಕೋಟ್ಯಾಂತರ ರೂ. ನೀಡಿ ಕೊಂಡುಕೊಳ್ಳಲಿದ್ದಾರೆ ಎಂದು ತಿಳಿದು ಬಂದಿದೆ. ಮುಕ್ತ ಮಾರುಕಟ್ಟೆಯಲ್ಲಿ ಅಂಬರ್‌ಗ್ರಿಸ್ ಮಾರಾಟ ನಿಷೇಧವಿರುವ ಕಾರಣ ಅದರ ನಿಖರ ಮೌಲ್ಯ ತಿಳಿದು ಬರುವುದಿಲ್ಲ. ಆದರೆ, ಕಳ್ಳರು ಮಾತ್ರ ಕಳ್ಳ ಸಾಗಾಣಿಕೆ ಮಾಡಿ, ಹೆಚ್ಚು ಹಣ ಗಳಿಸುವ ಗೀಳಿಗೆ ಬಿದ್ದು ಅಂಬರ್‌ಗ್ರಿಸ್ ಕಳ್ಳ ಸಾಗಾಣೆ ಮಾಡಿ ಸಿಕ್ಕಿ ಬಿದ್ದಿದ್ದಾರೆ. ಬಂಧಿತ ಆರೋಪಿ ವಿನಯ್‌ಕುಮಾರ್ ಆರ್.ಸಿ. ವಿರುದ್ಧ ವನ್ಯಜೀವಿ ಕಾಯ್ದೆ 1972ರ ಷೆಡ್ಯೂಲ್–1ರಂತೆ ಪ್ರಕರಣ ದಾಖಲಿಸಿದ್ದಾರೆ.

> ಅಕ್ರಮವಾಗಿ ತಿಮಿಂಗಿಲದ ವಾಂತಿ ದಾಸ್ತಾನು ಮಾಡಿದ್ದ ನಾಗಮಂಗಲದ ವಿನಯ್‌ಕುಮಾರ್‌ನನ್ನು ಬಂಧಿಸಲಾಗಿದೆ. ಈ ಪ್ರಕರಣದಲ್ಲಿ ಇನ್ನಷ್ಟು ಮಂದಿ ಇರುವ ಸಾಧ್ಯತೆಯಿದ್ದು, ತನಿಖೆ ನಡೆಸಲಾಗುತ್ತಿದೆ. ಮಾಲಿನ ಮೌಲ್ಯ ನಿಖರವಾಗಿ ಹೇಳಲು ಸಾಧ್ಯವಿಲ್ಲ. ಅದನ್ನು ಮುಕ್ತ ಮಾರುಕಟ್ಟೆಯಲ್ಲಿ ಮಾರಾಟ ಮಾಡುವ ಪದ್ಧತಿ ಇಲ್ಲದ ಕಾರಣ ನಿಖರ ಮೌಲ್ಯ ನಿಗದಿ ಮಾಡುವುದು ಸಾಧ್ಯವಿಲ್ಲ. ಆದರೆ, ಕಳ್ಳ ಸಾಗಾಣೆದಾರರು ಕೋಟ್ಯಾಂತರ ರೂ. ಮೌಲ್ಯ ಎನ್ನುತ್ತಾರೆ. ವನ್ಯಜೀವಿ ಕಾಯ್ದೆ 1972ರ ಷೆಡ್ಯೂಲ್–1ರನ್ವಯ ಪ್ರಕರಣ ದಾಖಲಿಸಲಾಗಿದೆ.
> – ಡಾ. ಚಂದ್ರಶೇಖರ್‌ಗೌಡ ಪಾಟೀಲ್, ಡಿಸಿಎಫ್, ಅರಣ್ಯ ಸಂಚಾರಿ ದಳ

ಅರಣ್ಯ ಸಂಚಾರಿ ದಳದ ಡಿಸಿಎಫ್ ಡಾ.ಚಂದ್ರಶೇಖರ್‌ಗೌಡ ಪಾಟೀಲ್ ನೇತೃತ್ವದಲ್ಲಿ ನಡೆದ ದಾಳಿಯಲ್ಲಿ ಎಸಿಎಫ್ ಜಿ.ರುದ್ರೇಶ್, ಆರ್‌ಎಫ್‌ಓಗಳಾದ ಕೆ.ಸುರೇಂದ್ರ, ಸಚಿನ್, ಡಿಆರ್‌ಎಫ್‌ಓಗಳಾದ ಸಿ.ಎಸ್.ಮೋಹನ್, ವಿ.ಮುತ್ತುರಾಜು, ಗಸ್ತು ಪಾಲಕರಾದ ದೇವರಾಜ ಬಂಡಿವಡ್ಡರ್, ಕುಮಾರ್ ಹಾಗೂ ಇನ್ನಿತರರು ಪಾಲ್ಗೊಂಡಿದ್ದರು.

ಏಷ್ಯನ್ ಜೂನಿಯರ್ ಟೆನ್ನಿಸ್ ಪಂದ್ಯಾವಳಿಯಲ್ಲಿ ಪದ್ಮಪ್ರಿಯ ಚಾಂಪಿಯನ್

ಮೈಸೂರು, ಡಿ.17(ಎಂಟಿವೈ)– ಬೆಂಗಳೂರಲ್ಲಿ ನಡೆದ 14 ವರ್ಷದೊಳಗಿನ ಏಷ್ಯನ್ ಜೂನಿಯರ್ ಟೆನ್ನಿಸ್ ಟೂರ್ನಮೆಂಟ್ ನಲ್ಲಿ ಹಿರಿಯ ಅರಣ್ಯಾಧಿಕಾರಿ ದಂಪತಿ ಪುತ್ರಿ ಪದ್ಮಪ್ರಿಯ ಚಾಂಪಿಯನ್ ಆಗಿ, ಅಗ್ರಶ್ರೇಯಾಂಕದ ಆಟಗಾರ್ತಿಯಾಗಿ ಹೊರಹೊಮ್ಮಿದ್ದಾರೆ.

ಬೆಂಗಳೂರಿನ ಕರ್ನಾಟಕ ರಾಜ್ಯ ಲಾನ್ ಟೆನಿಸ್ ಸಂಸ್ಥೆ(ಕೆಎಸ್‌ಎಲ್‌ಟಿಎ)ಯ ಟೆನಿಸ್ ಸ್ಟೇಡಿಯಂ ಕೋರ್ಟ್ 1ರಲ್ಲಿ ನಡೆದ ಫೈನಲ್ ಪಂದ್ಯದಲ್ಲಿ ದಿಯಾ ರವಿಕುಮಾರ್ ಜಾನಕಿ ವಿರುದ್ಧ 2–6, 3–6 ನೇರ ಸೆಟ್‌ಗಳಲ್ಲಿ ಪದ್ಮಪ್ರಿಯಾ ಗೆಲುವು ಸಾಧಿಸುವ ಮೂಲಕ ಚಾಂಪಿಯನ್ ಆಗಿ ಪ್ರಶಸ್ತಿಯನ್ನು ತನ್ನದಾಗಿಸಿಕೊಂಡಿದ್ದಾರೆ. ಇವರು ಹುಲಿ ಯೋಜನೆಯ ನಿರ್ದೇಶಕ ಡಾ. ಪಿ.ರಮೇಶ್ ಕುಮಾರ್ ಹಾಗೂ ಮೈಸೂರು ವೃತ್ತದ ಸಿಎಫ್ ಡಾ. ಮಾಲತಿಪ್ರಿಯಾ ದಂಪತಿ ಪುತ್ರಿ ಟೆನ್ನಿಸ್ ಕ್ರೀಡಾ ಕ್ಷೇತ್ರದಲ್ಲಿ ಈಗಾಗಲೇ ಹಲವು ಪ್ರಶಸ್ತಿಯನ್ನು ಮುಡಿಗೇರಿಸಿಕೊಂಡು ದೇಶದ ಉದಯೋನ್ಮುಖ ಟೆನ್ನಿಸ್ ತಾರೆಯಾಗಿ ಹೊರಹೊಮ್ಮುವ ತವಕದಲ್ಲಿದ್ದಾರೆ.

ಫೈನಲ್ ಪಂದ್ಯದಲ್ಲಿ ಪದ್ಮಪ್ರಿಯ ಅವರ ಆಕ್ರಮಣಕಾರಿ ಆಟದ ಎದುರು ರನ್ನರ್ ಅಪ್ ಸ್ಥಾನಕ್ಕೆ ತೃಪ್ತಿಪಟ್ಟ ಜಾನಕಿ ದಿವ್ಯ ಯಾವುದೇ ಹಂತದಲ್ಲೂ ಪ್ರತಿರೋಧ ತೋರಲಿಲ್ಲ. ಇದು ಪದ್ಮಪ್ರಿಯ ಮೇಲುಗೈ ಸಾಧಿಸಲು ನೆರವಾಯಿತು. ಫೈನಲ್ ಪಂದ್ಯಕ್ಕೂ ಮುನ್ನ 2ನೇ ಶ್ರೇಯಾಂಕದಲ್ಲಿದ್ದ ಪದ್ಮಪ್ರಿಯ ಅವರು ಇದೀಗ ಪ್ರಶಸ್ತಿಗೆ ಮುತ್ತಿಕ್ಕಿದ ಬೆನ್ನಲ್ಲೇ ಅಗ್ರಸ್ಥಾನಕ್ಕೇರಿದ್ದಾರೆ. ಇದರೊಂದಿಗೆ ಪ್ರಶಸ್ತಿಯ ಜೊತೆಗೆ ನಂಬರ್ 1 ಸ್ಥಾನವೂ ಬೋನಸ್ ಆಗಿ ಸಿಕ್ಕಿದೆ ಸೆಮಿಫೈನಲ್ ಪಂದ್ಯವು ಮಳೆಯಿಂದ ರದ್ದಾಗಿತ್ತು. ರದ್ದಾದ ಅವಧಿಯಲ್ಲಿ ಕೃಶಿಕಾ ಗೌತಮ್ ವಿರುದ್ಧ 4–0 ಮುನ್ನಡೆ ಸಾಧಿಸಿದ್ದ ಪದ್ಮಪ್ರಿಯ ಫೈನಲ್‌ಗೆ ಅರ್ಹತೆ ಪಡೆದುಕೊಂಡರು. ಮತ್ತೊಂದು ಸೆಮೀಸ್‌ನಲ್ಲಿ ನೀಶಾ ಎಂಜಾ ವಿರುದ್ಧ ದಿಯಾ ಜಾನಕಿ 5–1 ಅಂತರದಲ್ಲಿ ಮುನ್ನಡೆ ಸಾಧಿಸಿ ಅಂತಿಮ ಘಟ್ಟಕ್ಕೆ ಅರ್ಹತೆ ಪಡೆದುಕೊಂಡಿದ್ದರು.



ಏಷ್ಯನ್ ಜೂನಿಯರ್ ಟೆನ್ನಿಸ್ ಟೂರ್ನಮೆಂಟ್‌ನಲ್ಲಿ ಚಾಂಪಿಯನ್ ಆಗಿ ಹೊರಹೊಮ್ಮಿದ ಪುತ್ರಿ ಪದ್ಮಪ್ರಿಯಾ ಅವರೊಂದಿಗೆ ಹುಲಿ ಯೋಜನೆಯ ನಿರ್ದೇಶಕ ಡಾ. ಪಿ.ರಮೇಶ್‌ಕುಮಾರ್ ಹಾಗೂ ಮೈಸೂರು ವೃತ್ತದ ಸಿಎಫ್ ಡಾ.ಮಾಲತಿ ಪ್ರಿಯಾ ದಂಪತಿ.

ಪದ್ಮಪ್ರಿಯ ಬಾಲ್ಯದಿಂದಲೇ ಟೆನ್ನಿಸ್‌ನಲ್ಲಿ ಒಲವು ಬೆಳೆಸಿಕೊಂಡಿದ್ದು ಈಗಾಗಲೇ ರಾಜ್ಯ, ದೇಶದ ಹಲವು ಟೂರ್ನಿಗಳಲ್ಲಿ ಹಲವು ಪ್ರಶಸ್ತಿ ಮುಡಿಗೇರಿಸಿಕೊಂಡಿದ್ದಾರೆ.

ಉತ್ತಮ ವ್ಯಕ್ತಿಗಳಾಗಲು ಮನಸ್ಸಿನ ಸ್ವಚ್ಛತೆ ಅವಶ್ಯ

ರಾಜಯೋಗಿನಿ ಬ್ರಹ್ಮಾಕುಮಾರಿ ಲಕ್ಷ್ಮೀಜಿ ಅಭಿಮತ

ಮೈಸೂರು, ಡಿ. 17– ಉತ್ತಮ ವ್ಯಕ್ತಿಯಾಗಲು ಮನಸ್ಸಿನ ಚಿಂತನೆಗಳ ಗುಣಮಟ್ಟ ಪ್ರಮುಖ ಪಾತ್ರ ವಹಿಸುತ್ತವೆ. ಮೃದುವಾದ, ಪ್ರೀತಿಪೂರ್ವಕ ಮತ್ತು ಪ್ರೇರಣಾದಾಯಕವಾಗಿ ಆಡುವ ಮಾತುಗಳು ಕೂಡ ಸಮಾಜ ಸೇವೆಯ ಭಾಗವೇ ಆಗಿದೆ ಎಂದು ಮೈಸೂರು ಉಪವಲಯದ ಮುಖ್ಯ ಸಂಚಾಲಕಿ ರಾಜಯೋಗಿನಿ ಬ್ರಹ್ಮಾಕುಮಾರಿ ಲಕ್ಷ್ಮೀಜಿ ತಿಳಿಸಿದರು.

ಅಂತರರಾಷ್ಟ್ರೀಯ ಆಧ್ಯಾತ್ಮಿಕ ಸಂಸ್ಥೆ ಪ್ರಜಾಪಿತ ಬ್ರಹ್ಮಾಕುಮಾರಿ ಈಶ್ವರೀಯ ವಿಶ್ವವಿದ್ಯಾಲಯ ಏರ್ಪಡಿಸಲಾಗಿರುವ ಆಧ್ಯಾತ್ಮಿಕ ಸಶಕ್ತೀಕರಣದಿಂದ ಸ್ವಚ್ಛ ಮತ್ತು ಆರೋಗ್ಯಕರ ಸಮಾಜ ನಿರ್ಮಾಣಕ್ಕಾಗಿ ಕೊಚ್ಚಿಯಿಂದ ಮೈಸೂರಿನವರೆಗೆ ಏರ್ಪಡಿಸಿರುವ ಸರಣಿ ಕಾರ್ಯಕ್ರಮಗಳ ಸಂಪನ್ನ ಸಮಾರಂಭದಲ್ಲಿ ಅವರು ಮಾತನಾಡುತ್ತಿದ್ದರು.

ಸಾಮಾನ್ಯ ಜನರು ಅವಶ್ಯಕತೆಗಿಂತ ಹೆಚ್ಚು ಯೋಚನೆ ಮಾಡಿ ತಮ್ಮ ಆಂತರಿಕ ಶಕ್ತಿಯನ್ನು ವ್ಯರ್ಥಮಾಡಿಕೊಳ್ಳುತ್ತಿದ್ದಾರೆ. ಆಂತರಿಕ ಶಕ್ತಿ ಇಲ್ಲದೆ ವ್ಯಕ್ತಿಯು ಸಶಕ್ತವಾಗಿ ಆಲೋಚನೆ ಮಾಡಲು ಸಾಧ್ಯವಾಗುತ್ತಿಲ್ಲ, ಆದ್ದರಿಂದ ಆಧ್ಯಾತ್ಮಿಕ ಸಶಕ್ತೀಕರಣವೆಂದರೆ ಮನಸ್ಸಿನಲ್ಲಿ ನಡೆಯುವ ಅಶುದ್ಧ ವ್ಯರ್ಥ ಸಂಕಲ್ಪಗಳಿಗೆ ಕಡಿವಾಣ ಹಾಕುವ ಕೌಶಲ್ಯವನ್ನು ಹೊಂದುವುದು ಎಂದು ತಿಳಿಸಿದರು. ಸ್ವಧರ್ಮವೇ ಶಾಂತಿ. ಜ್ಞಾನ ಮಾರ್ಗದಲ್ಲಿ ನಡೆದು ಶಾಂತಿಯನ್ನು ಕಾಪಾಡಿಕೊಳ್ಳಬೇಕು. ನಮ್ಮ ಮನಸ್ಸಿನ ಪರಿಶುದ್ಧತೆ ಸದ್ಭಾವನೆ ಬದುಕಿಗೆ ಅಗತ್ಯ ಎಂದರು. ಕರ್ಮದಲ್ಲಿ ಮೂರು ವಿಧ ಅಕರ್ಮ, ಸುಕರ್ಮ ಮತ್ತು ವಿಕರ್ಮ. ಬದುಕಿದ್ದಾಗ ಯಾವ ಕರ್ಮ ಮಾಡುತ್ತೇವೋ ಅದರ ಫಲ ತೆಗೆದುಕೊಂಡು ಹೋಗುತ್ತೇವೆ. ಸಮಾಜಕ್ಕೆ ಕೊಟ್ಟ ಕೊಡುಗೆಯಷ್ಟೇ ನಮ್ಮೊಂದಿಗೆ ಬರುತ್ತದೆ ಎಂದು ಹೇಳಿದರು.

ನಮ್ಮೆಲ್ಲರ ಬದುಕು ನಾವು ಕಾಲವಾದ ನಂತರವೂ ಸ್ಮರಿಸುವಂತಿರಬೇಕು. ಅರಿಷಡ್ವರ್ಗಗಳ ದಾಸರಾದರೆ, ಅಹಂಕಾರದಿಂದ ವರ್ತಿಸಿದರೆ ಅದರ ಫಲವನ್ನು ನಾವು ಕಷ್ಟಗಳ ರೂಪದಲ್ಲಿ ಪಡೆಯುತ್ತೇವೆ. ದುಃಖ–ದುಮ್ಮಾನಗಳು ನಮ್ಮ ಬದುಕಿನಲ್ಲಿ ಎದುರಾಗುತ್ತವೆ. ವೈಯಕ್ತಿಕ ಬದುಕು ಶುದ್ಧವಾಗಿಟ್ಟುಕೊಂಡು ಸಮಾಜಕ್ಕೆ ಒಳ್ಳೆಯದು ಮಾಡುವ ಸಂಕಲ್ಪ ಮಾಡಬೇಕು ಎಂದರು.


ಅಭಿಯಾನದ ರೂವಾರಿ ಡಾ ಇವಿ ಸೋಮನಾಥನ್ ಮಾತನಾಡಿ, ವಿದ್ಯಾರ್ಥಿಗಳು ತಮ್ಮ ಜೀವನದಲ್ಲಿ ಸಫಲ ಹೊಂದಲು ಸಾಕಷ್ಟು ಆಯ್ಕೆ ಇದ್ದರೂ, ಅವರು ಉತ್ತಮ ವ್ಯಕ್ತಿಯಾಗಲು ಆಗುತ್ತಿಲ್ಲ. ಉತ್ತಮ ಶಿಕ್ಷಣ ವ್ಯವಸ್ಥೆ ಇಂದಿನ ನಮ್ಮ ಶಾಲೆಗಳಲ್ಲಿ ಇಲ್ಲದಿರುವುದರಿಂದ ಸಮಾಜ ದಲ್ಲಿ ಮಾನಸಿಕ ಆರೋಗ್ಯ ಇಲ್ಲ. ಮಕ್ಕಳಿಗೆ ಚಿಕ್ಕ ವಯಸ್ಸಲ್ಲೇ ಧ್ಯಾನದ ಪ್ರಕ್ರಿಯೆ ಮೂಲಕ ಮನಸ್ಸನ್ನು ನಿಯಂತ್ರಿಸುವ ಕಲೆಯನ್ನು ತಿಳಿಸಬೇಕು ಎಂದರು.

ಮಾಜಿ ಸಚಿವರಾದ ಕೆ.ಸಿ.ನಾರಾಯಣಗೌಡ, ಚಾಮರಾಜನಗರದ ಸಂಚಾಲಕಿ ರಾಜಯೋಗಿನಿ ಬ್ರಹ್ಮಾಕುಮಾರಿ ದಾನೇಶ್ವರೀಜೀ, ಅಮ್ಮ ರಾಮಚಂದ್ರ, ಡಿ.ಕೆ.ಶಾರದಾ, ಪಿ.ಎಸ್. ರಮೇಶ್, ನಾಗರಾಜ್ ಭೈರಿ, ಆರ್.ಕೆ. ಪದ್ಮನಾಭ, ಡಾ. ಗಿರೀಶ್ ಭಾಯ್, ಧೀರೇಂದ್ರ ರಾಜುಬಾಯಿ, ಡಿ.ಕೆ.ಶಿವಲೀಲಾ, ಬಿ.ಕೆ.ರಂಗನಾಥ ಬಾಯಿ ಇನ್ನಿತರರು ಈ ವೇಳೆ ಉಪಸ್ಥಿತರಿದ್ದರು.

ಆರ್ಥಿಕ ಮಾನದಂಡದ ಆಧಾರದಲ್ಲಿ ಮೀಸಲಾತಿ: ದೇವೇಗೌಡ ಸಲಹೆ

ನವದೆಹಲಿ: ಜಾತಿ ಆಧಾರದ ಮೇಲೆ ಮೀಸಲಾತಿಯನ್ನು ಮುಂದುವರಿಸಬೇಕೇ ಅಥವಾ ಆರ್ಥಿಕ ಮಾನದಂಡಕ್ಕೆ ತಕ್ಕಂತೆ ಬದಲಾಯಿಸಬೇಕೇ ಎಂಬ ಬಗ್ಗೆ ಸಂಸತ್ ಚರ್ಚೆ ನಡೆಸುವ ಅಗತ್ಯ ಇದೆ ಎಂದು ರಾಜ್ಯಸಭಾ ಸದಸ್ಯ ಎಚ್.ಡಿ.ದೇವೇಗೌಡ ಸಲಹೆ ನೀಡಿದರು. ರಾಜ್ಯಸಭೆಯಲ್ಲಿ 'ಭಾರತದ ಸಂವಿಧಾನದ 75 ವರ್ಷಗಳ ವೈಭವದ ಪಯಣ' ಕುರಿತ ಚರ್ಚೆಯಲ್ಲಿ ಪಾಲ್ಗೊಂಡು ಮಾತನಾಡಿದ ಅವರು, 'ಈ ಹಿಂದೆ ನಾವು ನೀಡಿದ್ದ ಮೀಸಲಾತಿಯಿಂದಲೂ ಜನರ ಸ್ಥಿತಿಯಲ್ಲಿ ಭಾರಿ ಬದಲಾವಣೆ ಆಗಿಲ್ಲ. ಎರಡು ಹೊತ್ತಿನ ಊಟಕ್ಕೆ ಸಂಕಷ್ಟ ಪಡುವ ಜನರು ಇದ್ದಾರೆ' ಎಂದರು. ಆಧುನಿಕ ಭಾರತವನ್ನು ರೂಪಿಸುವಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಅವರ ದೂರದೃಷ್ಟಿಯ ಸಂವಿಧಾನ ಅಸಾಧಾರಣ ಕೊಡುಗೆ ನೀಡಿದೆ. ಬಾಬಾ ಸಾಹೇಬ್ ಅವರ ನೇತೃತ್ವದಲ್ಲಿ ರಚನೆಯಾದ ನಮ್ಮ ಸಂವಿಧಾನವು ಅನೇಕ ಒತ್ತಡಗಳು ಮತ್ತು ನಮ್ಮ ಕಾಲದ ರಾಜಕೀಯವನ್ನು ತಡೆದುಕೊಂಡು ನಿಂತಿದೆ ಎಂದು ಅವರು ಹೇಳಿದರು.

ಬಂಡೀಪುರದಲ್ಲಿ ಬೈಕ್ ಸವಾರನ ಅಟ್ಟಾಡಿಸಿದ ಕಾಡಾನೆ



ಮೈಸೂರು, ಡಿ.17(ಬಿಎಲ್‌ಯು)– ಆನೆ ದಾಳಿಯಿಂದ ಬೈಕ್ ಸವಾರರಿಬ್ಬರು ಅದೃಷ್ಟವ ಶಾತ್ ಪಾರಾದ ರೋಮಾಂಚನಕಾರಿ ಘಟನೆ ಮೈಸೂರಿನ ಬಂಡೀಪುರ ಅಭಯಾರಣ್ಯದಲ್ಲಿ ನಡೆದಿದೆ. ಬಂಡೀಪುರ ಅಭಯಾರಣ್ಯದ ರಸ್ತೆಯಲ್ಲಿ ಮಾನಂದವಾಡಿಯಿಂದ ಮೈಸೂರು ಕಡೆಗೆ ಬೈಕ್ ಸವಾರರಿಬ್ಬರು ಬರುತ್ತಿದ್ದರು.

ಈ ಸಂದರ್ಭದಲ್ಲಿ ರಸ್ತೆ ಪಕ್ಕದಲ್ಲೇ ಒಂಟಿ ಸಲಗವೊಂದು ನಿಂತಿತ್ತು. ಆನೆ ಇದೆ, ಮುಂದೆ ಹೋಗಬೇಡಿ ಎಂದು ಕೆಲವರು ಎಚ್ಚರಿಸಿದರು. ಆದರೆ, ಆನೆ ಸಮೀಪವೇ ಹೋದ ಬೈಕ್ ಸವಾರರು ಮೊಬೈಲ್‌ನಲ್ಲಿ ವಿಡಿಯೋ ಚಿತ್ರೀಕರಣ ಮಾಡುತ್ತಿದ್ದರು.

ಈ ಸಂದರ್ಭದಲ್ಲಿ ಕೋಪೋದ್ರಿಕ್ತ ಒಂಟಿ ಸಲಗ ದಿಢೀರ್ ದಾಳಿಗೆ ಮುಂದಾಗಿ, ಬೈಕ್ ಸವಾರರ ಅಟ್ಟಾಡಿಸಿದೆ. ಇದರಿಂದ ಭಯಭೀತರಾಗಿ ಇಬ್ಬರು ಬೈಕ್ ಅನ್ನು ಅಲ್ಲೇ ಬಿಟ್ಟು ಓಡಿದ್ದಾರೆ. ಎದುರು ಬರುತ್ತಿದ್ದ ಲಾರಿ ಅಡ್ಡ ಹಾಕಿ ಒಳಗೆ ಕುಳಿತಿದ್ದಾರೆ. ಮುಂದೆ ಸಾಗದ ಲಾರಿ ಅಲ್ಲೇ ನಿಂತಿದ್ದನ್ನು ನೋಡಿದ ಆನೆ ಕೆಲ ಸಮಯ ನಿಂತಿದ್ದು, ನಂತರ ಅಲ್ಲಿಂದ ನಿರ್ಗಮಿಸಿದೆ.

ಕಾಡುಪ್ರಾಣಿಗಳನ್ನು ಕೆಣಕಬೇಡಿ, ವಿಡಿಯೋ ಚಿತ್ರೀಕರಣ ಮಾಡಬೇಡಿ ಹಾಗೂ ಯಾವುದೇ ರೀತಿಯ ಆಹಾರ ನೀಡಬೇಡಿ ಎಂದು ಬಂಡೀಪುರ ಹಾಗೂ ನಾಗರಹೊಳೆ ಅಭಯಾರಣ್ಯದ ರಸ್ತೆ ಉದ್ದಕ್ಕೂ ಎಚ್ಚರಿಕೆ ಫಲಕಗಳನ್ನು ಅಳವಡಿಸಲಾಗಿದೆ.

ಆದರೆ ಕೆಲವು ಕಿಡಿಗೇಡಿಗಳು ಅರಣ್ಯ ಇಲಾಖೆಯವರ ಸೂಚನೆ ಧಿಕ್ಕರಿಸುತ್ತಿದ್ದಾರೆ. ಇದರಿಂದ ಕೆಲವರು ಪ್ರಾಣ ಕಳೆದುಕೊಂಡಿರುವ ನಿದರ್ಶನಗಳಿವೆ.

ಮೈಸೂರು ವಿವಿ ನೌಕರರ ವೇದಿಕೆ, ನವ ವಿಶ್ವಮಾನವ ಟ್ರಸ್ಟ್‌ನಿಂದ ಮಾಜಿ ಮುಖ್ಯಮಂತ್ರಿ ಎಸ್.ಎಂ.ಕೃಷ್ಣರಿಗೆ ನುಡಿ ನಮನ

ಮೈಸೂರು, ಡಿ.17(ಎಂಟಿವೈ)– ನಾಡು ಕಂಡ ವರ್ಣರಂಜಿತ ರಾಜಕಾರಣಿ ಮಾಜಿ ಮುಖ್ಯಮಂತ್ರಿ ದಿ. ಎಸ್.ಎಂ.ಕೃಷ್ಣ ಅವರಿಗೆ ವಿಶ್ವಮಾನವ ಮೈಸೂರು ವಿಶ್ವವಿದ್ಯಾನಿಲಯ ನೌಕರರ ವೇದಿಕೆ ಹಾಗೂ ನವ ವಿಶ್ವಮಾನವ ಟ್ರಸ್ಟ್ ವತಿಯಿಂದ ನುಡಿ ನಮನ ಸಲ್ಲಿಸಲಾಯಿತು.

ಮೈಸೂರು ವಿಶ್ವವಿದ್ಯಾನಿಲಯದ ಸಂಜೆ ಕಾಲೇಜು ಆವರಣದಲ್ಲಿ ಆಯೋಜಿಸಿದ್ದ 'ಎಸ್.ಎಂ.ಕೃಷ್ಣ ಅವರ ಶ್ರದ್ಧಾಂಜಲಿ' ಕಾರ್ಯಕ್ರಮದಲ್ಲಿ, ಶ್ರೀಯುತರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಿ, ಗೌರವ ಸಮರ್ಪಿಸಲಾಯಿತು.

ಈ ವೇಳೆ ಕಾಂಗ್ರೆಸ್ ಜಿಲ್ಲಾಧ್ಯಕ್ಷ ಡಾ.ಬಿ.ಜೆ. ವಿಜಯ್‌ಕುಮಾರ್ ಮಾತನಾಡಿ, ಮಹಾರಾಜ ಕಾಲೇಜಿನಲ್ಲಿ ಓದಿದ ಮಾಜಿ ಮುಖ್ಯಮಂತ್ರಿ ಎಸ್.ಎಂ.ಕೃಷ್ಣ ಅವರ ಹೆಸರು ಚಿರಸ್ಥಾಯಿಯಾಗಿ ಉಳಿಯಬೇಕಾದರೆ ವಿಶ್ವವಿದ್ಯಾನಿಲಯ ಸಂಜೆ ಕಾಲೇಜಿಗೆ ಅವರ ಹೆಸರನ್ನು ನಾಮಕರಣ ಮಾಡಬೇಕು. ಈ ಸಂಬಂಧ ಸಿಂಡಿಕೇಟ್ ಸದಸ್ಯರು ಪ್ರಸ್ತಾವನೆಯನ್ನು ವಿಶ್ವವಿದ್ಯಾನಿಲಯದ ಮುಂದೆ ಇಡಬೇಕು. ನಾನು ಯುವ ಕಾಂಗ್ರೆಸ್ ಅಧ್ಯಕ್ಷನಾಗಿದ್ದಾಗಿನಿಂದಲೂ ಎಸ್.ಎಂ.ಕೃಷ್ಣ ಅವರೊಂದಿಗೆ ಒಡನಾಟ ಇತ್ತು ಅವರು ಸಿಎಂ ಆಗಿದ್ದಾಗ ಯಶಸ್ವಿನಿ, ಬಿಸಿಯೂಟ, ಸ್ತ್ರೀಶಕ್ತಿ ಸೇರಿದಂತೆ ಹಲವು ಜನಪರ ಯೋಜನೆಗಳನ್ನು ಜಾರಿಗೊಳಿಸಿದರು ಎಂದರು.



ವಿಶ್ವಮಾನವ ಮೈಸೂರು ವಿವಿ ನೌಕರರ ವೇದಿಕೆಯು ಮಂಗಳವಾರ ಸಂಜೆ ಕಾಲೇಜು ಎದುರು ಏರ್ಪಡಿಸಿದ್ದ ನುಡಿನಮನ ಕಾರ್ಯಕ್ರಮದಲ್ಲಿ ಮಾಜಿ ಮುಖ್ಯಮಂತ್ರಿ ಎಸ್.ಎಂ. ಕೃಷ್ಣ ಅವರ ಭಾವಚಿತ್ರಕ್ಕೆ ಗಣ್ಯರು ಪುಷ್ಪನಮನ ಸಲ್ಲಿಸಿದರು.

ನಟರಾಜ ಪ್ರತಿಷ್ಠಾನದ ವಿಶೇಷಾಧಿಕಾರಿ ಪ್ರೊ.ಎಸ್.ಶಿವರಾಜಪ್ಪ ಮಾತನಾಡಿ, ಎಸ್.ಎಂ. ಕೃಷ್ಣ ಅವರದು ಮೇರು ಸದೃಶ ವ್ಯಕ್ತಿತ್ವ ಸುಸಂಸ್ಕೃತ ರಾಜಕಾರಣಿ. ಅದಕ್ಕಿಂತ ಮಿಗಿಲಾಗಿ ಮುತ್ಸದ್ದಿಯಾಗಿದ್ದರು. ಕೆರೆಗಳಿಗೆ ನೀರು ತುಂಬಿಸುವುದು ಸೇರಿದಂತೆ ಹಲವಾರು ಅಭಿವೃದ್ಧಿ ಕಾರ್ಯಗಳನ್ನು ಮಾಡಿದರು. ಡಾ.ರಾಜ್‌ಕುಮಾರ್ ಅಪಹರಣ, ಕಾವೇರಿ ನೀರಿನ ಸಮಸ್ಯೆ, ಬರ ಮೊದಲಾದ ಪರಿಸ್ಥಿತಿಗಳನ್ನು ಅತ್ಯಂತ ಸಮರ್ಥವಾಗಿ ನಿರ್ವಹಿಸಿದರು ಎಂದರು.

ಸಿಂಡಿಕೇಟ್ ಮಾಜಿ ಸದಸ್ಯ ಡಾ.ಈ.ಸಿ. ನಿಂಗರಾಜ್‌ಗೌಡ ಮಾತನಾಡಿ, ಎಸ್.ಎಂ. ಕೃಷ್ಣ ಮಹಾರಾಷ್ಟ್ರ ರಾಜ್ಯಪಾಲರಾಗಿದ್ದಾಗ ಮೂರು ಬಾರಿ ಅಲ್ಲಿನ ರಾಜಭವನಕ್ಕೆ ಹೋಗಿದ್ದೆ. ಕೊನೆಯ ಬಾರಿ ಹೋದಾಗ ಪ್ರೇಮಾ ಕೃಷ್ಣ ಅವರು ಸದ್ಯದಲ್ಲಿಯೇ ರಾಜ್ಯಕ್ಕೆ ವಾಪಸ್ ಆಗುತ್ತಾರೆ ಎಂದಿದ್ದರು. ಏಕೆಂದರೆ ಜನರ ಒಡನಾಟ ಇಲ್ಲದ ಈ ಹುದ್ದೆ ಸಾಕಾಗಿದೆ ಎಂದಿದ್ದರಂತೆ. ಸಾಮಾನ್ಯವಾಗಿ ಎಸ್.ಎಂ. ಕೃಷ್ಣ ಅವರೆಂದರೆ ಜನರಿಂದ ದೂರವಿರುವ ರಾಜಕಾರಣಿ ಎಂಬ ಅಭಿಪ್ರಾಯವಿತ್ತು. ಆದರೆ ಅವರು ಜನರ ನಡುವೆ ಇರಲು ಮತ್ತೆ ರಾಜ್ಯಕ್ಕೆ ಬಂದು ರಾಜ್ಯಸಭಾ ಸದಸ್ಯರಾಗಿ, ಕೇಂದ್ರ ಸಚಿವರಾಗಿ ಕೆಲಸ ಮಾಡಿದರು ಎಂದು ಸ್ಮರಿಸಿದರು.

ಹಿರಿಯ ಪತ್ರಕರ್ತ ಅಂಶಿ ಪ್ರಸನ್ನ ಕುಮಾರ್ ಮಾತನಾಡಿ, ಎಸ್.ಎಂ. ಕೃಷ್ಣ ಅವರು ಕಡಿಮೆ ಮಾತನಾಡುತ್ತಿದ್ದರು. ಪತ್ರಕರ್ತರು ಎಷ್ಟೇ ಪ್ರಚೋದಿಸಿದರೂ ಹೇಳಬೇಕಾದ ವಿಷಯ ಬಿಟ್ಟು ಬೇರೆ ಯಾವುದಕ್ಕೂ ಪ್ರತಿಕ್ರಿಯೆ ನೀಡುತ್ತಿರಲಿಲ್ಲ. ಇದು ಇಂದಿನ ರಾಜಕಾರಣಿಗಳಿಗೆ ಮಾದರಿಯಾಗಬೇಕು ಎಂದು ಅಭಿಪ್ರಾಯಪಟ್ಟರು.

ಜಿಲ್ಲಾ ಕಸಾಪ ಮಾಜಿ ಅಧ್ಯಕ್ಷ ಎಂ. ಚಂದ್ರಶೇಖರ್, ಮೈಸೂರು ವಕೀಲರ ಸಂಘದ ಮಾಜಿ ಕಾರ್ಯದರ್ಶಿ ಎಸ್. ಉಮೇಶ್, ಮಾನಸ ಗಂಗೋತ್ರಿ ಸಮಾಜ ಕಾರ್ಯ ವಿಭಾಗದ ಪ್ರಾಧ್ಯಾಪಕಿ ಡಾ.ಎಚ್.ಪಿ. ಜ್ಯೋತಿ, ಸಿಂಡಿಕೇಟ್ ಸದಸ್ಯರಾದ ಡಾ.ಜೆ. ಶಿಲ್ಪಾ, ಡಾ.ಸಿ. ಬಸವರಾಜು ಜಟ್ಟಿಹುಂಡಿ, ಗೋಕುಲ್ ಗೋವರ್ಧನ್ ಮಾತನಾಡಿದರು.

ಈ ಸಂದರ್ಭದಲ್ಲಿ ಮೈವಿವಿ ಸಂಜೆ ಕಾಲೇಜಿನ ಪ್ರಾಂಶುಪಾಲ ಪ್ರೊ.ಎಸ್. ಮಹದೇವಮೂರ್ತಿ, ಮಂಜುನಾಥ್, ಪುಣ್ಯಕೋಟಿ ಸೇವಾ ಸಮಿತಿಯ ಹನುಮಂತೇಶ್, ಎಸ್‌ಐ ದೊರೆಸ್ವಾಮಿ, ಜಿಲ್ಲಾ ಕಸಾಪ ಕೋಶಾಧ್ಯಕ್ಷ ಜಿ.ಪ್ರಕಾಶ್, ಮೀನಾ, ವಿಶ್ವಮಾನವ ಮೈಸೂರು ವಿವಿ ನೌಕರರ ವೇದಿಕೆ ಅಧ್ಯಕ್ಷ ಆರ್. ವಾಸುದೇವ, ಉಪಾಧ್ಯಕ್ಷ ಭಾಸ್ಕರ್, ಕಾರ್ಯದರ್ಶಿ ವಿನೋದ್, ಡಾ.ನವೀನ್ ಕುಮಾರ್, ಚೆಲುವೇಶ್, ಚೆಲುವಾಂಬಿಕಾ ಇನ್ನಿತರರು ಉಪಸ್ಥಿತರಿದ್ದರು.

ಮೈಸೂರು ಚಿತ್ರಮಂದಿರಗಳಲ್ಲಿ

ಪದ್ಮ ಚಿತ್ರಮಂದಿರ	(ದೂ: 2521923)
ಮುತ್ತು (ತ)	4 ಪ್ರದರ್ಶನಗಳು
ವುಡ್‌ಲ್ಯಾಂಡ್ಸ್ ಚಿತ್ರಮಂದಿರ	(ದೂ: 2422871)
ಭೈರತಿ ರಣಗಲ್(ಕ)	4 ಪ್ರದರ್ಶನಗಳು
ಬಾಲಾಜಿ ಚಿತ್ರಮಂದಿರ	(ದೂ: 2497199)
ಪುಷ್ಪ–2 (ಹಿಂ)	4 ಪ್ರದರ್ಶನಗಳು
ಮಹದೇಶ್ವರ ಚಿತ್ರಮಂದಿರ	(ಮೊ:9900820093)
ಭೈರತಿ ರಣಗಲ್ (ಕ)	4 ಪ್ರದರ್ಶನಗಳು
ಗಾಯಿತ್ರಿ	
ಭೈರತಿ ರಣಗಲ್ (ಕ)	4 ಪ್ರದರ್ಶನಗಳು
ರಾಜಕಮಲ್	
ಮಿಸ್ ಯು (ತ)	4 ಪ್ರದರ್ಶನಗಳು
ಸಂಗಂ	
ಪುಷ್ಪ–2 (ತೆ)	4 ಪ್ರದರ್ಶನಗಳು
ಲಿಡೋ	
ಲಕ್ಕಿ ಭಾಸ್ಕರ್ (ಕ)	4 ಪ್ರದರ್ಶನಗಳು
ತಿಬ್ಬಾದೇವಿ	
ಪುಷ್ಪ–2 (ಕ)	4 ಪ್ರದರ್ಶನಗಳು
ಪ್ರಭಾ	
ಬಘೀರಾ (ಕ)	4 ಪ್ರದರ್ಶನಗಳು

ಡಿಆರ್‌ಸಿ ಸಿನಿಮಾಸ್
ದೂ : 4240422/4241800

ಸ್ಕ್ರೀನ್ 1	ಪುಷ್ಪಾ 2 (ಕ): ಬೆ.10ಕ್ಕೆ, ಮ.1.55ಕ್ಕೆ, ಪುಷ್ಪಾ 2 (ಹಿಂ): ಸಂ.5.50ಕ್ಕೆ, ರುಧೀರಂ (ಮ): ರಾ.9.50ಕ್ಕೆ
ಸ್ಕ್ರೀನ್ 2	ಸೌಧುಕವ್ವಂ (ತ): ಬೆ.11.05ಕ್ಕೆ, ಭೈರತಿ ರಣಗಲ್ (ಕ): ಮ.1.45ಕ್ಕೆ, ಮೋನಾ 2 (3ಡಿ)(ಇಂ): ಸಂ.4.40ಕ್ಕೆ, ಮಿಸ್ ಯು (ತ): ರಾ.7ಕ್ಕೆ, ಪುಷ್ಪಾ 2 (ಕ): ರಾ.9.40ಕ್ಕೆ.
ಸ್ಕ್ರೀನ್ 3	ದಿ ಲಾರ್ಡ್ ಆಫ್ ದಿ ರಿಂಗ್ಸ್ (ಇಂ): ಬೆ.11.10ಕ್ಕೆ, ರಾ.9.55ಕ್ಕೆ, ಮೋನಾ 2 (3ಡಿ) (ಇಂ): ಮ.1.55ಕ್ಕೆ, ಹರಿದಾಸರ ದಿನಚರಿ (ಕ): ಸಂ.4ಕ್ಕೆ, ಪುಷ್ಪಾ 2 (ಕ): ಸಂ.6.05ಕ್ಕೆ.
ಸ್ಕ್ರೀನ್ 4	ಮೋನಾ 2(3ಡಿ)(ಇಂ): ಬೆ.11.55ಕ್ಕೆ, ಪುಷ್ಪಾ 2 (ತೆ): ಮ.2.10ಕ್ಕೆ, ಸಂ.6ಕ್ಕೆ, ರಾ.9.50ಕ್ಕೆ

ಐನಾಕ್ಸ್ ಮೂವೀಸ್
INOX LIVE THE MOVIE
ದೂ : 2533444 / 2433456

ಸ್ಕ್ರೀನ್ 1	ಬ್ಯಾಡ್ ನ್ಯೂಸ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4ಕ್ಕೆ, ರಾ.7ಕ್ಕೆ, ರಾ.10ಕ್ಕೆ.
ಸ್ಕ್ರೀನ್ 2	ಕಲ್ಕಿ 2898 ಎಡಿ (ಕ): ಬೆ.11.40ಕ್ಕೆ, ಸಂ.6.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.3.20ಕ್ಕೆ, ರಾ.9.45ಕ್ಕೆ.
ಸ್ಕ್ರೀನ್ 3	ಇಂಡಿಯನ್ 2 (ತ): ಬೆ.9.40ಕ್ಕೆ, ಸಂ.4.05ಕ್ಕೆ, ಟ್ವಿಸ್ಟರ್ಸ್ (ಇಂ): ಮ.1.20ಕ್ಕೆ, ರಾ.7.45ಕ್ಕೆ, ಡಾರ್ಲಿಂಗ್ ವೈ ದಿಸ್ ಕೊಲವರಿ (ತೆ): ರಾ.10.30ಕ್ಕೆ.
ಸ್ಕ್ರೀನ್ 4	ವಿದ್ಯಾರ್ಥಿ ವಿದ್ಯಾರ್ಥಿನಿಯರೇ (ಕ): ಬೆ.11.30ಕ್ಕೆ, ಕಲ್ಕಿ 2898 ಎಡಿ (3ಡಿ)(ತೆ): ಮ.2.50ಕ್ಕೆ, ಹಿರಣ್ಯ (ಕ): ಸಂ.6.30ಕ್ಕೆ, ಕಲ್ಕಿ 2898 ಎಡಿ (ಹಿಂ): ರಾ.9.30ಕ್ಕೆ.

ಮೈಸೂರು ವಿಷನ್ ಸಿನಿಮಾ
ದೂ : 0821–2973519

ಸ್ಕ್ರೀನ್ 1	ಅಮರನ್ (ಕ): ಬೆ.10.30ಕ್ಕೆ, ರಾ.7.30ಕ್ಕೆ, ಭೈರತಿ ರಣಗಲ್ (ಕ): ಮ.1.45ಕ್ಕೆ, ಧೀರ ಭಗತ್ ರಾಯ್ (ಕ): ಸಂ.4.30ಕ್ಕೆ.
ಸ್ಕ್ರೀನ್ 2	ಭೈರತಿ ರಣಗಲ್ (ಕ): ಬೆ.10.40ಕ್ಕೆ, ಪುಷ್ಪಾ 2 (ಕ): ಮ.1.15ಕ್ಕೆ, ಸಂ.5.15ಕ್ಕೆ, ರಾ.9.15ಕ್ಕೆ
ಸ್ಕ್ರೀನ್ 3	ಪುಷ್ಪಾ 2 (ಕ): ಬೆ.11.30ಕ್ಕೆ, ರಾ.7.45ಕ್ಕೆ, ಪುಷ್ಪಾ 2 (ತೆ): ಸಂ.4ಕ್ಕೆ.
ಸ್ಕ್ರೀನ್ 4	ಪುಷ್ಪಾ 2 (ತೆ): ಬೆ.10.30ಕ್ಕೆ, ಸಂ.6ಕ್ಕೆ, ರಾ.9.45ಕ್ಕೆ, ಪುಷ್ಪಾ 2 (ಕ): ಮ.2.15ಕ್ಕೆ.

ಪಿವಿಆರ್ ಸಿನಿಮಾಸ್
ನೆಕ್ಸಸ್ ಸೆಂಟರ್‌ಸಿಟಿ ಮಾಲ್, 2ನೇ ಮಹಡಿ, ಮೊ.ನಂ: 8951357139

ಕಿಂಗ್‌ಡಮ್ ಆಫ್ ದಿ ಪ್ಲಾನೆಟ್ ಆಫ್ ದಿ ಎಪಿಸ್ (ಇಂ): ಬೆ.10ಕ್ಕೆ, ಮ.1.05ಕ್ಕೆ, ಸಂ.4.10ಕ್ಕೆ, ರಾ.7.20ಕ್ಕೆ, ರಾ.10.30ಕ್ಕೆ, ಶ್ರೀಕಾಂತ್ (ಹಿಂ): ಬೆ.10ಕ್ಕೆ, ಮ.1ಕ್ಕೆ, ಸಂ.4.25ಕ್ಕೆ, ರಾ.7ಕ್ಕೆ, ರಾ.10.15ಕ್ಕೆ, ಸ್ಟಾರ್ (ತ): ಬೆ.11.45ಕ್ಕೆ, ಮ.3.05ಕ್ಕೆ, ಸಂ.6.25ಕ್ಕೆ, ರಾ.9.45ಕ್ಕೆ, ಅರಮನೈ 4 (ತ): ಮ.12.30ಕ್ಕೆ, ಪ್ರತಿನಿಧಿ 2 (ತೆ): ಮ.12.55ಕ್ಕೆ, ರಾ.9.15ಕ್ಕೆ, ರಾಮನ ಅವತಾರ (ಕ): ಮ.3.40ಕ್ಕೆ, ಅಂಜನೀಪುತ್ರ (ಕ): ಸಂ.4ಕ್ಕೆ, ಗ್ರೇ ಗೇಮ್ಸ್ (ಕ): ಸಂ.6.35ಕ್ಕೆ, ಕೃಷ್ಣಮ್ಮ (ತೆ): ರಾ.7.25ಕ್ಕೆ, ಮಾರಿವಿಲ್ಲಿನ್ ಗೋಪುರಂಗಲ್ (ಮ): ರಾ.10ಕ್ಕೆ.

ಸೂಚನೆ : ಸಿನಿಮಾ ಮಾರ್ಗದರ್ಶಿಯಲ್ಲಿ ಮಾಹಿತಿಯನ್ನು ಪರಿಪೂರ್ಣಗೊಳಿಸಲು ನಾವು ಸಾಧ್ಯವಾದಷ್ಟೂ ಪ್ರಯತ್ನಿಸುತ್ತಿದ್ದೇವೆ. ಆದರೂ ಕೆಲವೊಮ್ಮೆ ಮಾಹಿತಿ ಅಲಭ್ಯತೆಯಿಂದ ಲೋಪಗಳು ಉಂಟಾಗುವ ಸಾಧ್ಯತೆಯಿದ್ದು, ಸಾರ್ವಜನಿಕರು ಸಹಕರಿಸಬೇಕಾಗಿ ಕಳಕಳಿ ಮನವಿ.

ಮೈಸೂರು ಚಳಿಗಾಲದ ರೇಸ್

6ನೇ ದಿನ, ಬುಧವಾರ, 18–12–2024

ಇಂದಿನ ರೇಸ್‌ಗೆ ನಮ್ಮ ಆಯ್ಕೆ

ಮೊದಲನೇ ರೇಸ್ ಮಧ್ಯಾಹ್ನ 2.00 ಗಂಟೆಗೆ

I. ವರುಣ ಪ್ಲೇಟ್–1800 ಮೀ. ರೇಟೆಡ್ 00 ರಿಂದ 25. ಮಧ್ಯಾಹ್ನ 2ಕ್ಕೆ
1. ಎಕೋ ಸಿಸ್ಟಮ್ 2. ಅಗೇನೆಸ್ಟ್ ಆಲ್ ಆಡ್ಸ್ 3. ಮಿರಾಕಲ್ ಹನಿ

II. ಸ್ಪ್ಲಾಶ್ ಪ್ಲೇಟ್–1200 ಮೀ. ರೇಟೆಡ್ 00 ರಿಂದ 25. ಮ.2.30ಕ್ಕೆ
1. ಫ್ರೀ ಸ್ಪಿರಿಟೆಡ್ 2. ಕಂಟ್ರಿ ಮ್ಯಾಜಿಕ್ 3. ಗ್ರಾಬ್

III ಕುಟ್ಟಾ ಪ್ಲೇಟ್ ಡಿII–1400 ಮೀ. ರೇಟೆಡ್ 20 ರಿಂದ 45. ಮ.3.00ಕ್ಕೆ
1. ವರದಾನ್ 2. ಡೀಮ್ಡ್ ಫೈರ್ 3. ನಿಂಬಲ್ ಸ್ಪಿರಿಟ್

IV. ಸಾಲಿಟೇರ್ ಪ್ಲೇಟ್–1200 ಮೀ. ರೇಟೆಡ್ 20 ರಿಂದ 45. ಮ.3.30ಕ್ಕೆ
1. ಪರ್ಫೆಕ್ಟ್ ಎಂಪ್ರೆಸ್ 2. ರೆಡ್ ಹಿಲ್ಸ್ 3. ಜೆಸ್ಟ್ ಬ್ಲೂಸ್

V. C.D.ದಶರಥ ರಾಮಶೆಟ್ಟಿ ಮೆಮೋರಿಯಲ್ ಟ್ರೋಫಿ–1400 ಮೀ. ರೇಟೆಡ್ 80 ಮತ್ತು ಮೇಲ್ವರ್ಗ. ಮ.4.00ಕ್ಕೆ
1. ದಿ ಪ್ರೊಟೆಕ್ಟರ್ 2. ರೈಸ್ ಎ ಬಕ್ 3. ಐರನ್ ಕ್ಲಾಡ್

VI. ಕುಟ್ಟಾ ಪ್ಲೇಟ್ ಡಿI–1400 ಮೀ. ರೇಟೆಡ್ 20 ರಿಂದ 45. ಸಂಜೆ 4.30ಕ್ಕೆ
1. ರೋಡ್ ರನ್ನರ್ 2. ದಿ ವೆಲ್‌ಕಮ್ 3. ಡಿ ಲಾರ್ಡ್

VII. ಹಳೆಬೀಡು ಪ್ಲೇಟ್– 1400 ಮೀ. ರೇಟೆಡ್ 40 ರಿಂದ 65. ಸಂ.5.00ಕ್ಕೆ
1 ಮಿಸ್ಟಿಕ್ ಡಿವೈನ್ 2 ಓರ್ಲಿ 3. ತಲೈವಾ

ದಿನದ ಅತ್ಯುತ್ತಮ	ಎಕೋ ಸಿಸ್ಟಮ್
ಡಬ್ಬಲ್	ರೋಡ್ ರನ್ನರ್, ಮಿಸ್ಟಿಕ್ ಡಿವೈನ್
ಜಾಕ್‌ಪಾಟ್	3, 4, 5, 6 ಮತ್ತು 7
ಮಿನಿ ಜಾಕ್‌ಪಾಟ್	4, 5, 6 ಮತ್ತು 7
I ಟ್ರಿಬಲ್	2, 3 ಮತ್ತು 4
II ಟ್ರಿಬಲ್	5, 6 ಮತ್ತು 7
ಎಕ್ಸ್‌ಆಕ್ಟ್	1 ರಿಂದ 7

ಟಿಪ್‌ಸ್ಟರ್ ಪಿಜೆಸಿ

ಲಕ್ಷ್ಮಣ್ ರಾವ್ ಪವಾರ್ ನಿಧನ



ಮೈಸೂರು, ಡಿ.17– ಮೈಸೂರು ಸಿದ್ಧಾರ್ಥನಗರ ನಿವಾಸಿ ಹಾಗೂ ಅಶೋಕ ರಸ್ತೆಯ ಜ್ಯುವೆಲರಿ, ಟೆಕ್ಸ್‌ಟೈಲ್ ಉದ್ಯಮಿ ಲಕ್ಷ್ಮಣ್ ರಾವ್ ಪವಾರ್ (53) ಇಂದು ದೀರ್ಘಕಾಲದ ಅನಾರೋಗ್ಯದ ನಂತರ ನಿಧನರಾದರು. ಮೃತರು ಪೋಷಕರು, ಪತ್ನಿ, ಇಬ್ಬರು ಪುತ್ರರು, ಪುತ್ರಿ, ಅಳಿಯ, ಮೊಮ್ಮಕ್ಕಳು ಹಾಗೂ ಅಪಾರ ಬಂಧು–ಮಿತ್ರರನ್ನು ಅಗಲಿದ್ದಾರೆ, ಮೃತರ ಅಂತ್ಯಕ್ರಿಯೆ ಡಿ.18 (ಬುಧವಾರ) ತಿ.ನರಸೀಪುರದಲ್ಲಿ ನರವೇರಲಿದೆ ಎಂದು ಕುಟುಂಬ ಮೂಲಗಳು ತಿಳಿಸಿವೆ.

ಭವಿಷ್ಯದ ಜಗತ್ತು ಜ್ಞಾನ–ಕೌಶಲದ ಆಧಾರದಲ್ಲಿ ಮುನ್ನಡೆಯಲಿದೆ

ಸಿಎಫ್‌ಟಿಆರ್‌ಐ ಶಾಲೆಯ ವಜ್ರಮಹೋತ್ಸವದಲ್ಲಿ ಚಿಂತಕ ಪ್ರೊ.ಎಂ.ಕೃಷ್ಣೇಗೌಡ



ಮೈಸೂರಿನ ಕಲಾಮಂದಿರದಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ ಸಿಎಫ್‌ಟಿಆರ್‌ಐ ಶಾಲೆಯ ವಜ್ರಮಹೋತ್ಸವ ಸಮಾರಂಭದಲ್ಲಿ ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದವರಿಗೆ ಬಹುಮಾನ ಹಾಗೂ ಪರೀಕ್ಷೆಗಳಲ್ಲಿ ಉತ್ತಮ ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಲಾಯಿತು.

ಮೈಸೂರು,ಡಿ.17(ಪಿಎಂ)– ಭವಿಷ್ಯದ ಜಗತ್ತು ಜ್ಞಾನ ಮತ್ತು ಕೌಶಲ್ಯದ ಆಧಾರದಲ್ಲಿ ಮುನ್ನಡೆಯಲಿದ್ದು, ಈ ನಿಟ್ಟಿನಲ್ಲಿ ವಿದ್ಯಾರ್ಥಿಗಳನ್ನು ಸಜ್ಜುಗೊಳಿಸಬೇಕಿದೆ ಎಂದು ಚಿಂತಕ ಮತ್ತು ವಾಗ್ಮಿ ಪ್ರೊ.ಎಂ.ಕೃಷ್ಣೇಗೌಡ ಹೇಳಿದರು.

ಮೈಸೂರಿನ ಕಲಾಮಂದಿರದಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ ಸಿಎಫ್‌ಟಿಆರ್‌ಐ (ಸಿಎಸ್‌ಐಆರ್–ಕೇಂದ್ರೀಯ ಆಹಾರ ತಾಂತ್ರಿಕ ಸಂಶೋಧನಾಲಯ) ಶಾಲೆಯ ವಜ್ರಮಹೋತ್ಸವ ಸಮಾರಂಭ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮದ ಉದ್ಘಾಟನಾ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಮಾತನಾಡಿದ ಅವರು, ಮುಂದಿನ ದಿನಗಳಲ್ಲಿ ಕೇವಲ ಶಿಕ್ಷಣ ಅಷ್ಟೇ ಮುಖ್ಯ ವಾಗುವುದಿಲ್ಲ. ವಿದ್ಯಾರ್ಥಿಗಳನ್ನು ಜ್ಞಾನವಂತರಾಗಿಸಿ, ಅವರಿಗೆ ಸಾಮರ್ಥ್ಯ ಅಭಿವೃದ್ಧಿಗೆ ಒತ್ತು ನೀಡಿ, ಕೌಶಲ್ಯ ಕರಗತ ಮಾಡಿಸಬೇಕಾಗುತ್ತದೆ ಎಂದು ತಿಳಿಸಿದರು.

ನಾನು ಶಾಲೆಗೆ ಸೇರಿ ಇಂದಿಗೆ 61 ವರ್ಷಗಳಾಗಿವೆ. ಆಗ ನಮ್ಮ ಊರಿನಲ್ಲಿ ಅಕ್ಷರಸ್ಥರೇ ಇರಲಿಲ್ಲ. ಹೀಗಾಗಿ ಕಾಗದ ಪತ್ರ ಓದಿಸಲು ಅಕ್ಷರಸ್ಥರು ಸಿಗುತ್ತಿರಲಿಲ್ಲ. ಆ ನಂತರದಲ್ಲಿ ನಮ್ಮೂರಿನಲ್ಲಿ ಸರ್ಕಾರಿ ಶಾಲೆಯೊಂದು ಆರಂಭಗೊಂಡಿತು. ಅದಾಗ್ಯೂ ಸಾಕಷ್ಟು ಪೋಷಕರು ತಮ್ಮ ಮಕ್ಕಳನ್ನು ಶಾಲೆಗೆ ಸೇರಿಸಲಿಲ್ಲ. ಕೆಲವರು ಶಾಲೆಗೆ ಸೇರಿಸಿದ್ದರು. ಏಕೆಂದರೆ ಕಾಗದ ಪತ್ರ ಓದುವಂತಾಗಲಿ ಎಂಬುದು ಅವರ ಮಹದಾಸೆಯಾಗಿತ್ತು. ಸ್ವಲ್ಪ ದಿನಗಳ ನಂತರ ಸಮಾಜದಲ್ಲಿ ಇಂತಹ ವಾತಾವರಣ ಬದಲಾಗಿ ನಮ್ಮ ಮಕ್ಕಳು ಎಸ್‌ಎಸ್‌ಎಲ್‌ಸಿ ಪಾಸ್ ಮಾಡಿದರೆ ಒಂದು ಗೌರವ ಎಂಬ ಭಾವನೆ ಮೂಡಿತ್ತು ಎಂದು ಹೇಳಿದರು.

ನಂತರ ಒಂದು ಪದವಿ ಮಾಡಿಕೊಂಡರೆ ಸಾಕು ಎನ್ನುವ ಸನ್ನಿವೇಶ ಇತ್ತು ಇಂದು ಪೋಷಕರು ಮಕ್ಕಳ ಶಿಕ್ಷಣಕ್ಕೆ ಸಾಕಷ್ಟು ಒತ್ತು ನೀಡುವ ವಾತಾವರಣ ನಿರ್ಮಾಣವಾಗಿದೆ. 100 ವರ್ಷಗಳ ಹಿಂದೆ ದೈಹಿಕ ಶಕ್ತಿಗೆ ಆದ್ಯತೆ ಇತ್ತು. ಈಗ ಮನುಷ್ಯನ ಶಕ್ತಿ ಎಂದರೆ ಉದ್ಯೋಗ ಎನ್ನುವಂತಾಗಿದೆ. ಆದರೆ ಮುಂದಿನ ಜಗತ್ತು ಜ್ಞಾನ ಮತ್ತು ಕೌಶಲ್ಯದ ಆಧಾರದಲ್ಲಿ ಮುನ್ನಡೆಯಲಿದೆ ಎಂದರು.

ಶಿಕ್ಷಣ ಎಂದರೆ ಕೇವಲ ಮಾಹಿತಿ ಸಂಗ್ರಹವಲ್ಲ. ಜ್ಞಾನ ಮತ್ತು ವಿವೇಕ ಸಹ ಅದರಲ್ಲಿ ಅಡಕವಾಗಿರಬೇಕು. ಇದನ್ನು ವಿವೇಕಾನಂದರು ಒತ್ತಿ ಹೇಳಿದ್ದಾರೆ. 60 ವರ್ಷಗಳ ಹಿಂದೆ ಮೈಸೂರಿನ ಸಿಎಫ್‌ಟಿಆರ್‌ಐ ಶಾಲೆ ಆರಂಭವಾಯಿತು. ಇಂದು ವಿದ್ಯಾರ್ಥಿಗಳು ಮಾತ್ರವಲ್ಲ, ಶಾಲೆ ಉಳಿಸಿ ಬೆಳೆಸುವುದು ದೊಡ್ಡ ಸವಾಲು. ಒಂದು ಜಾಗದಿಂದ ಜಾಗಕ್ಕೆ ಹಾಗೂ ಕಾಲದಿಂದ ಕಾಲಕ್ಕೆ ಶಿಕ್ಷಣದ ವ್ಯಾಖ್ಯಾನ ಬದಲಾವಣೆಯಾಗುತ್ತದೆ ಎಂದು ಅವರು ವಿಶ್ಲೇಷಿಸಿದರು.

ವಿವಿಧ ಸ್ಪರ್ಧೆ ವಿಜೇತರಾದವರು ಹಾಗೂ ಪರೀಕ್ಷೆಗಳಲ್ಲಿ ಉತ್ತಮ ಅಂಕ ಗಳಿಸಿದ ಶಾಲೆಯ ವಿದ್ಯಾರ್ಥಿಗಳಿಗೆ ಇದೇ ವೇಳೆ ಬಹುಮಾನ ಹಾಗೂ ಪ್ರತಿಭಾ ಪುರಸ್ಕಾರ ನೀಡಲಾಯಿತು. ಬಳಿಕ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆದವು. ಇದಕ್ಕೂ ಮುನ್ನ ರಾಜವಂಶಸ್ಥರೂ ಆದ ಮಳವಳ್ಳಿ ಶ್ರೀ ಮಂಟೇಸ್ವಾಮಿ ಮಠ, ಆದಿಹೊನ್ನಾಯಕನಹಳ್ಳಿ ಮತ್ತು ಕಪ್ಪಡಿ ಕ್ಷೇತ್ರದ ಪೀಠಾಧಿಪತಿಗಳಾದ ಶ್ರೀ ವರ್ಚಸ್ವೀ ಶ್ರೀಕಂಠ ಸಿದ್ದಲಿಂಗ ರಾಜೇ ಅರಸ್ ಸಮಾರಂಭ ಉದ್ಘಾಟಿಸಿದರು.

ಸಿಎಫ್‌ಟಿಆರ್‌ಐ ಎಜುಕೇಷನ್ ಸೊಸೈಟಿ ಅಧ್ಯಕ್ಷರೂ ಆದ ಸಿಎಫ್‌ಟಿಆರ್‌ಐ ನಿರ್ದೇಶಕಿ ಡಾ.ಶ್ರೀದೇವಿ ಅನ್ನಪೂರ್ಣ ಸಿಂಗ್ ಅಧ್ಯಕ್ಷತೆ ವಹಿಸಿದ್ದರು. ಅತಿಥಿಗಳಾಗಿ ಸಿಎಫ್‌ಟಿಆರ್‌ಐ ಮಾಜಿ ನಿರ್ದೇಶಕ ಡಾ.ವಿ.ಪ್ರಕಾಶ್, ಸಿಎಫ್‌ಟಿಆರ್‌ಐ ಶಾಲೆಯ ಸಂಸ್ಥಾಪಕರಾದ ದಿ. ಕ್ಯಾರೊಲಿನ್ ಡಬ್ಲ್ಯೂ ಪಾರ್ಪಿಯಾ ಅವರ ಪುತ್ರಿ ಜೂಲಿ ಕಾರ್ಯಪ್ಪ, ಉದ್ಯಮಿ ಹಾಗೂ ಶಾಲೆಯ ಹಳೇ ವಿದ್ಯಾರ್ಥಿ ಸಿದ್ ಮುಖರ್ಜಿ, ಸಿಎಫ್‌ಟಿಆರ್‌ಐ ಎಜುಕೇಷನ್ ಸೊಸೈಟಿ ಕಾರ್ಯದರ್ಶಿ ಡಾ.ಅರುಣ್ ಕುಮಾರ್ ಪನ್ನೀರಸೆಲ್ವಂ, ಶಾಲೆ ಪ್ರಾಂಶುಪಾಲರಾದ ಥಂಕಮ್ಮ ತೇರೇಸ ಮತ್ತಿತರರು ಹಾಜರಿದ್ದರು.

ಭೋವಿ ಅಭಿವೃದ್ಧಿ ನಿಗಮದ ಬಹುಕೋಟಿ ಹಗರಣ

ಎಸ್‌ಐಟಿ ತಂಡ ಸ್ಥಿರೀಕರಿಸಿದ ಹೈಕೋರ್ಟ್

ಬೆಂಗಳೂರು: ಭೋವಿ ಅಭಿವೃದ್ಧಿ ನಿಗಮದಲ್ಲಿ ನಡೆದಿದೆ ಎನ್ನಲಾದ ಬಹುಕೋಟಿ ರೂಪಾಯಿಗಳ ಅವ್ಯವಹಾರ ಪ್ರಕರಣದ ಆರೋಪಿಯಾಗಿದ್ದ ಉದ್ಯಮಿ ಜೀವಾ ಆತ್ಮಹತ್ಯೆ ಪ್ರಕರಣದ ತನಿಖೆಗೆ ಸಂಬಂಧಿಸಿದಂತೆ ಸಿಬಿಐ ಅಧಿಕಾರಿಯ ಜೊತೆ ಇಬ್ಬರು ಎಸ್.ಪಿ ಕೇಡರ್ ಪೊಲೀಸ್ ಅಧಿಕಾರಿಗಳ ಎಸ್‌ಐಟಿ ನೇಮಕ ಮಾಡಿದ್ದ ತನ್ನ ಈ ಹಿಂದಿನ ಆದೇಶವನ್ನು ಹೈಕೋರ್ಟ್ ಸ್ಥಿರೀಕರಿಸಿದೆ. ಕೂಡಲೇ ತನಿಖೆ ಆರಂಭಿಸುವಂತೆಯೂ ಎಸ್‌ಐಟಿಗೆ ನಿರ್ದೇಶಿಸಿದೆ.

ಈ ಸಂಬಂಧ ರಾಜ್ಯ ಪ್ರಾಸಿಕ್ಯೂಷನ್ ತೆಗೆದಿದ್ದ ತಕರಾರನ್ನು ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಅವರಿದ್ದ ಏಕಸದಸ್ಯ ನ್ಯಾಯಪೀಠ ಮಂಗಳವಾರ ಪರಿಶೀಲಿಸಿತಲ್ಲದೆ, ಹೈಕೋರ್ಟ್ ನೀಡಿರುವ ಆದೇಶವನ್ನು ಸಂಪೂರ್ಣ ಅನುಪಾಲನೆ ಮಾಡಲಾಗುವುದು ಎಂದು ಸಿಬಿಐ ತಿಳಿಸಿರುವ ಕಾರಣ ಈ ಹಿಂದೆ ನೀಡಲಾದ ಆದೇಶದಲ್ಲಿ ಯಾವುದೇ ಮಾರ್ಪಾಡು ಮಾಡುವುದಿಲ್ಲ ಎಂದು ಆದೇಶಿಸಿತು.

ವಿಚಾರಣೆ ವೇಳೆ ಸಿಬಿಐ ಪರ ವಕೀಲ ಪಿ.ಪ್ರಸನ್ನ ಕುಮಾರ್, ಈ ಪೀಠ ನೀಡಿರುವ ಆದೇಶವನ್ನು ಪಾಲಿಸಲು ಸಿಬಿಐ ಬದ್ಧವಾಗಿದೆ. ಆದೇಶದಲ್ಲಿ ಯಾವುದೇ ಮಾರ್ಪಾಡು ಮಾಡುವಂತೆ ನಾವು ಕೇಳುತ್ತಿಲ್ಲ. ತಮ್ಮ ಆದೇಶದ ಪ್ರಕಾರ ತನಿಖೆ ನಡೆಸುತ್ತೇವೆ. ಯಾರನ್ನೂ ಬದಲಾಯಿಸುವುದಿಲ್ಲ ಎಂದು ತಿಳಿಸಿದರು. ಇದಕ್ಕೆ ಪ್ರತಿಯಾಗಿ ರಾಜ್ಯ ಹೆಚ್ಚುವರಿ ಪ್ರಾಸಿಕ್ಯೂಟರ್ ಬಿ.ಎನ್.ಜಗದೀಶ್, ಸಿಬಿಐ ವಿವರಣೆ ಮತ್ತು ನ್ಯಾಯಪೀಠದ ಆದೇಶಕ್ಕೆ ಸಹಮತ ವ್ಯಕ್ತಪಡಿಸಿದರು.

ಈ ಹಿಂದೆ ಇದೇ ನ್ಯಾಯಪೀಠ ಈ ಕುರಿತಾದ ಅರ್ಜಿ ವಿಚಾರಣೆ ನಡೆಸಿ ಜೀವಾ ಆತ್ಮಹತ್ಯೆಯ ತನಿಖೆಗೆ ಎಸ್‌ಐಟಿ ರಚನೆ ಮಾಡಿ ಆದೇಶಿಸಿತ್ತು. ಎಸ್‌ಐಟಿಯಲ್ಲಿ ಸಿಬಿಐನ ಎಸ್.ಪಿ ವಿನಾಯಕ ವರ್ಮಾ, ಕರ್ನಾಟಕ ಗೃಹ ರಕ್ಷಕ ದಳದ ಎಸ್.ಪಿ ಹಕಾಯ ಅಕ್ಷಯ್ ಮಚ್ಛೀಂದ್ರ ಮತ್ತು ಆಂತರಿಕ ಭದ್ರತಾ ವಿಭಾಗದ ಎಸ್.ಪಿ ನಿಶಾ ಜೇಮ್ಸ್ ಸದಸ್ಯರಾಗಿ ಇರುತ್ತಾರೆ ಎಂದು ನ್ಯಾಯಪೀಠ ತಿಳಿಸಿತ್ತು.

ಈ ಆದೇಶದ ಬಗ್ಗೆ ರಾಜ್ಯ ಪ್ರಾಸಿಕ್ಯೂಷನ್ ವಿವರಣೆ ಬಯಸಿ ತಕರಾರು ವ್ಯಕ್ತಪಡಿಸಿತ್ತು. ತಂಡದ ಮೂವರೂ ಅಧಿಕಾರಿಗಳು ಎಸ್.ಪಿ ಕೇಡರ್ ಅಧಿಕಾರಿಗಳಾಗಿದ್ದು, ಒಬ್ಬರು ಮತ್ತೊಬ್ಬರ ಅಧೀನದಲ್ಲಿ ಕೆಲಸ ಮಾಡುವುದು ಹೇಗೆ ಎಂದು ಪ್ರಶ್ನಿಸಿತ್ತು. ಅಂತೆಯೇ, ತಂಡಕ್ಕೆ ಡಿಜಿ ಅಥವಾ ಡಿಐಜಿ ದರ್ಜೆಯ ಅಧಿಕಾರಿಯನ್ನು ನಿಯುಕ್ತಿಗೊಳಿಸಬೇಕು ಎಂದು ಮನವಿ ಮಾಡಿತ್ತು.

ಜಿ.ರೆಹಮತ್ತುಲ್ಲಾಗೆ ಪಿಹೆಚ್.ಡಿ



ಮೈಸೂರು: ಡಾ.ಬಿ.ಸಣ್ಣಪ್ಪ ಅವರ ಮಾರ್ಗದರ್ಶನದಲ್ಲಿ ಜಿ.ರೆಹಮತ್ತುಲ್ಲಾ ಅವರು ರೇಷ್ಮೆ ವಿಜ್ಞಾನ ವಿಷಯದಲ್ಲಿ ಸಂಶೋಧನೆ ನಡೆಸಿ ಸಾದರಪಡಿಸಿದ ಮಹಾಪ್ರಬಂಧವನ್ನು ಮೈಸೂರು ವಿಶ್ವವಿದ್ಯಾ ನಿಲಯ ಪಿಎಚ್.ಡಿ ಪದವಿಗೆ ಅಂಗೀಕರಿಸಿದೆ.

ವಾಲ್ಮೀಕಿ ನಿಗಮ ಹಗರಣದ ತನಿಖೆ ನಡೆದಿದೆ: ಹೈಕೋರ್ಟ್‌ಗೆ ಸಿಬಿಐ ಮಾಹಿತಿ

ಬೆಂಗಳೂರು: ಕರ್ನಾಟಕ ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದಲ್ಲಿನ ಹಣ ದುರ್ಬಳಕೆ ಆರೋಪಕ್ಕೆ ಸಂಬಂಧಿಸಿದಂತೆ ತನಿಖೆ ಆರಂಭಿಸಲಾಗಿದೆ ಎಂದು ಸಿಬಿಐ, ಹೈಕೋರ್ಟ್‌ಗೆ ತಿಳಿಸಿದೆ.

ಬಿಜೆಪಿ ಶಾಸಕರಾದ ಬಸನಗೌಡ ಪಾಟೀಲ ಯತ್ನಾಳ್, ರಮೇಶ ಜಾರಕಿಹೊಳಿ, ಮಾಜಿ ಶಾಸಕರಾದ ಅರವಿಂದ ಲಿಂಬಾವಳಿ ಮತ್ತು ಕುಮಾರ್ ಬಂಗಾರಪ್ಪ ಈ ಸಂಬಂಧ ಸಲ್ಲಿಸಿರುವ ರಿಟ್ ಅರ್ಜಿಯನ್ನು, ಶಾಸಕರು, ಸಂಸದರ ವಿರುದ್ಧದ ಕ್ರಿಮಿನಲ್ ಪ್ರಕರಣಗಳ ವಿಚಾರಣೆಯ ವಿಶೇಷ ನ್ಯಾಯಪೀಠದ ನ್ಯಾಯಮೂರ್ತಿ ಎಂ.ನಾಗಪ್ರಸನ್ನ ಮಂಗಳವಾರ ವಿಚಾರಣೆ ನಡೆಸಿದರು.

ವಿಚಾರಣೆ ವೇಳೆ ಸಿಬಿಐ ಪರ ವಕೀಲ ಪಿ.ಪ್ರಸನ್ನ ಕುಮಾರ್, ತನಿಖೆಯ ವಸ್ತುಸ್ಥಿತಿ ವರದಿಯನ್ನು ನ್ಯಾಯಾಲಯಕ್ಕೆ ಮುಚ್ಚಿದ ಲಕೋಟೆಯಲ್ಲಿ ಸಲ್ಲಿಸಿ, ಮೂರು ವಾರಗಳ ಬಳಿಕ ತನಿಖೆಗೆ ಸಂಬಂಧಿಸಿದಂತೆ ಸ್ಥಿತಿಗತಿ ವರದಿ ಸಲ್ಲಿಸಲಾಗುವುದು ಎಂದು ತಿಳಿಸಿದರು. ಇದನ್ನು ದಾಖಲಿಸಿಕೊಂಡ ನ್ಯಾಯಪೀಠ ವಿಚಾರಣೆಯನ್ನು 2025ರ ಜನವರಿ 16ಕ್ಕೆ ಮುಂದೂಡಿತು. ಅರ್ಜಿದಾರರ ಪರ ಹೈಕೋರ್ಟ್ ವಕೀಲ ವೆಂಕಟೇಶ್ ಪಿ.ದಳವಾಯಿ ಹಾಜರಿದ್ದರು.

ಕೋರಿಕೆ: ವಾಲ್ಮೀಕಿ ಪ್ರಕರಣಕ್ಕೆ ಸಂಬಂಧಿಸಿದ ಸಿಬಿಐ ತನಿಖೆಯನ್ನು ಹೈಕೋರ್ಟ್ ನಿಗಾದಲ್ಲಿಯೇ ನಡೆಸಬೇಕು. ಸಿಬಿಐ ಪ್ರತಿ ಹದಿನೈದು ದಿನಗಳಿಗೊಮ್ಮೆ ಪ್ರಗತಿ ವರದಿಯನ್ನು ಹೈಕೋರ್ಟ್‌ಗೆ ಸಲ್ಲಿಸಬೇಕು ಮತ್ತು ವಿಚಾರಣೆಯನ್ನು ತ್ವರಿತವಾಗಿ ಪೂರ್ಣಗೊಳಿಸಲು ಸಿಬಿಐ ವಿಶೇಷ ನ್ಯಾಯಾಲಯಕ್ಕೆ ನಿರ್ದೇಶಿಸಬೇಕು ಎಂದು ಅರ್ಜಿದಾರರು ಕೋರಿದ್ದಾರೆ.

ಮುಂದುವರೆದ ಬಾಣಂತಿಯರ ಸರಣಿ ಸಾವು

ಬಳ್ಳಾರಿ, ಬೆಳಗಾವಿ ಬಳಿಕ ಕಲಬುರಗಿಯಲ್ಲೀಗ ಬಾಣಂತಿ ಸಾವು

ಕಲಬುರಗಿ, ಡಿ.17– ರಾಜ್ಯದಲ್ಲಿ ಬಾಣಂತಿಯರ ಸರಣಿ ಸಾವು ಮುಂದುವರೆದಿದೆ.



ಬಳ್ಳಾರಿ, ಬೆಳಗಾವಿ, ರಾಯಚೂರು ಬಳಿಕ ಇದೀಗ ಕಲಬುರಗಿಯಲ್ಲಿ ಬಾಣಂತಿಯೋರ್ವರು ಸಾವನ್ನಪ್ಪಿದ್ದಾರೆ.

ಕಲಬುರಗಿ ಜಿಲ್ಲೆಯ ಆಳಂದ ತಾಲೂಕಿನ ಮಟಕಿ ಗ್ರಾಮದ ನಿವಾಸಿ ಭಾಗ್ಯಶ್ರೀ (22) ಮೃತ ಬಾಣಂತಿ. ಇಂದು ಮಗುವಿಗೆ ಜನ್ಮ ನೀಡಿದ ಬಳಿಕ ಕೊನೆಯುಸಿರೆಳೆದಿದ್ದಾರೆ.

ನಿನ್ನೆಯಷ್ಟೇ ಹೆರಿಗೆಗಾಗಿ ಅಫಜಲಪುರದ ಸರ್ಕಾರಿ ಆಸ್ಪತ್ರೆಗೆ ದಾಖಲಾಗಿದ್ದರು. ಇಂದು ಬೆಳಿಗ್ಗೆ 8 ಗಂಟೆಗೆ ಗಂಡುಮಗುವಿಗೆ ಜನ್ಮ ನೀಡಿದ್ದಾರೆ. ಬಳಿಕ ಭಾಗ್ಯಶ್ರೀ ಆರೋಗ್ಯದಲ್ಲಿ ಏರುಪೇರಾಗಿದೆ. ಹೆರಿಗೆ ಬಳಿಕ ರಕ್ತದೊತ್ತಡ ಕಡಿಮೆಯಾಗಿತ್ತು ಎಂದು ವೈದ್ಯರು ತಿಳಿಸಿದ್ದಾರೆ. ಚಿಕಿತ್ಸೆ ಫಲಕಾರಿಯಾಗದೇ ಬಾಣಂತಿ ಮೃತಪಟ್ಟಿದ್ದಾರೆ. ವೈದ್ಯರ ನಿರ್ಲಕ್ಷ್ಯದಿಂದಲೇ ಬಾಣಂತಿ ಸಾವಾಗಿದೆ ಎಂದು ಕುಟುಂಬದವರು ಆರೋಪಿಸಿದ್ದಾರೆ.

ಎರಡನೇ ವರ್ಷದ ಪುಣ್ಯಸ್ಮರಣೆ



ಶ್ರೀ ಗುರುಸಿದ್ದಶೆಟ್ಟಿ ಪಿ (ಬಿಎಸ್‌ಎನ್‌ಎಲ್)
ನಿಧನ: 18.12.2022
ಸದಾ ನಿಮ್ಮ ನೆನಪಿನಲ್ಲಿರುವ ದುಃಖತಪ್ತರು: ಪತ್ನಿ ಭಾಗ್ಯ, ಮಕ್ಕಳು ಅರುಣ್, ಆಶಾ ಹಾಗೂ ಕುಟುಂಬವರ್ಗದವರು

ಮೈಸೂರು ಮಿತ್ರ 45 ಓದುಗರ ಗಮನಕ್ಕೆ
ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತು ಲೋಪ ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
-ಜಾಹೀರಾತು ವ್ಯವಸ್ಥಾಪಕರು

7ನೇ ವರ್ಷದ ಸವಿನೆನಪು



ನೀವು ನಮ್ಮನ್ನಗಲಿ ಇಂದಿಗೆ 7 ವರ್ಷ ಕಳೆದರೂ ಸದಾ ನಿಮ್ಮ ನೆನಪಿನಲ್ಲಿರುವ
ದುಃಖತಪ್ತರು: ಮಗಳು, ಅಳಿಯ, ಮೊಮ್ಮಕ್ಕಳು ಹಾಗೂ ಕುಟುಂಬವರ್ಗದವರು
ಶ್ರೀಮತಿ ನಾಗರತ್ನಮ್ಮ
ದಿನಾಂಕ: 18.12.2017

ಹಸಿರು ನಮ್ಮ ಉಸಿರು

CHANGE OF NAME
I, VEDAVATHI W/o Mr. Shivashankara, residing at No 210/A, RN Pura Road, Hosa Badavane, Saligrama Town, Mysuru District - 571604 Have changed my name from Vedavathi Venkataramegowda to VEDAVATHI On my Own free will Sworn in before notary Anuradha J, Mysuru, Vide affidavit dated 17/12/2024.
Sd/- VEDAVATHI

ಮಾನ್ಯ ಪ್ರಧಾನ ಜಿಲ್ಲಾ ನ್ಯಾಯಾಧೀಶರ ನ್ಯಾಯಾಲಯ ಮೈಸೂರು
ಜಿ ಮತ್ತು ಡಬ್ಲ್ಯೂ ನಂ. 34/2024
ಅರ್ಜಿದಾರರು : ಶ್ರೀಮತಿ ಸುಪ್ರಿಯ ಬಿ.ಜಿ ಕೋಂ ಪ್ರಮೋದ್‌ಕುಮಾರ್ ... ಬೆಂಗಳೂರು – 560 092 ಹಾಗೂ ನಂ. ... 66, 4ನೇ ಕ್ರಾಸ್, ಕೆ.ಆರ್ ಪುರಂ, ಮೈಸೂರು
– ವಿರುದ್ಧ –
ಪ್ರತಿವಾದಿಗಳು : 1. ಅಕೌಂಟೆಂಟ್ ಜನರಲ್, ಕರ್ನಾಟಕ ಸರ್ಕಾರ ... ಬೆಂಗಳೂರು – 1, 2. ಡಿಸ್ಟ್ರಿಕ್ಟ್ ಹೆಲ್ತ್ ಆಫೀಸರ್, ಮಂಡ್ಯ, ... 3. ತಾಲೂಕು ಹೆಲ್ತ್ ಆಫೀಸರ್, ಮಂಡ್ಯ ತಾಲೂಕು, ಮಂಡ್ಯ
... 2016 ... ದಿನಾಂಕ 10 / 08 / 2023 ... ಮೆಂಟಲ್ ಹೆಲ್ತ್ ಕಾಯಿದೆ (14 / 1987) ಕಲಂ 53 ರ ಅಡಿ ಅರ್ಜಿ ಸಲ್ಲಿಸಿದ್ದು, ಸದರಿ ಅರ್ಜಿಯ ಸುನಾವಣೆಯು ಮೇಲ್ಕಂಡ ಘನ ನ್ಯಾಯಾಲಯದಲ್ಲಿ 27/1/2025 ದಿನಾಂಕದಂದು ಬೆಳಗ್ಗೆ 11.00 ಗಂಟೆಗೆ ಇರುತ್ತದೆಂದು ... ಈ ಪ್ರಕಟಣೆ.
ದಿನಾಂಕ : 16–12–2024 ರಂದು ನ್ಯಾಯಾಲಯದ ಮೊಹರಿನೊಡನೆ ಕೊಡಲ್ಪಟ್ಟಿರುತ್ತದೆ.
ಮುಖ್ಯ ಆಡಳಿತಾಧಿಕಾರಿಗಳು : ಮಾನ್ಯ ಪ್ರಧಾನ ಜಿಲ್ಲಾ ನ್ಯಾಯಾಧೀಶರ ನ್ಯಾಯಾಲಯ, ಮೈಸೂರು
ಅರ್ಜಿದಾರರ ಪರ ವಕೀಲರು : ಎಂ ಆರ್ ಸುದರ್ಶನ

ಭಾವಪೂರ್ಣ ಶ್ರದ್ಧಾಂಜಲಿ



ಶ್ರೀ. ಬಿ.ಸಿ. ತಿಮ್ಮೇಗೌಡ
ಲಯನ್ಸ್ ಕ್ಲಬ್ ಮಾಜಿ ಅಧ್ಯಕ್ಷರು. ಹಾಲಿ ಸದಸ್ಯರು. ಬನ್ನೂರು.
ಇವರು 17–12–2024ರಂದು ಮಂಗಳವಾರ ದೈವಾಧೀನರಾಗಿದ್ದು, ಮೃತರ ಆತ್ಮಕ್ಕೆ ಕೋರುತ್ತೇವೆ.
ದುಃಖತಪ್ತರು :
ಆಡಳಿತ ಮಂಡಳಿ, ಲಯನ್ಸ್ ವಿದ್ಯಾ ಸಂಸ್ಥೆ. ಶಾಲಾ ಸಿಬ್ಬಂದಿ ವರ್ಗ, ಬನ್ನೂರು.

ಮೈಸೂರು ಮಹಾನಗರ ಪಾಲಿಕೆ, ಮೈಸೂರು
ನಂ.MYS-LBPAS-28150/24-25/BP ದಿನಾಂಕ 13–12–2024
ಸಾರ್ವಜನಿಕ ಪ್ರಕಟಣೆ
ಮೈಸೂರು ನಗರ, ಜಯನಗರ, ತೊಣಚಿಕೊಪ್ಪಲು, ಕುವೆಂಪುನಗರ, 3ನೇ ಹಂತ, ಸ್ವತ್ತಿನ ಸಂಖ್ಯೆ: ಸಿ.ಎ–03 ರಲ್ಲಿ "ಶೈಕ್ಷಣಿಕ ಕಟ್ಟಡ" ನಿರ್ಮಿಸಲು ಕಾರ್ಯದರ್ಶಿ, ಪ್ರಮತಿ ಎಜುಕೇಷನಲ್ & ಕಲ್ಚರಲ್ ಟ್ರಸ್ಟ್, ಮೈಸೂರು ಇವರು ರಹದಾರಿ ಕೋರಿ ಮಹಾನಗರ ಪಾಲಿಕೆಗೆ ಅರ್ಜಿ ಸಲ್ಲಿಸಿರುತ್ತಾರೆ. ಪ್ರಸ್ತಾವಿತ ಜಾಗವು ಕರ್ನಾಟಕ ಗೃಹಮಂಡಳಿಯು ಶೈಕ್ಷಣಿಕ ಉದ್ದೇಶಕ್ಕೆ ನೀಡಿರುವ ನಾಗರೀಕ ಸೌಲಭ್ಯ ನಿವೇಶನವಾಗಿರುತ್ತದೆ. ಪ್ರಸ್ತುತ ಈ ನಿವೇಶನದಲ್ಲಿ ಉದ್ದೇಶಿಸಿರುವ ಶೈಕ್ಷಣಿಕ ಉದ್ದೇಶದ ಕಟ್ಟಡದ ಬಗ್ಗೆ ಸಾರ್ವಜನಿಕರಿಂದ ಯಾವುದೇ ಆಕ್ಷೇಪಣೆಗಳು/ಸಲಹೆಗಳಿದ್ದಲ್ಲಿ ಈ ಪ್ರಕಟಣೆಯು ಪ್ರಕಟವಾದ ದಿನದಿಂದ 15 ದಿನದೊಳಗಾಗಿ ಲಿಖಿತ ರೂಪದಲ್ಲಿ ಖುದ್ದಾಗಿ ಅಥವಾ ಅಂಚೆ ಮೂಲಕ ನಗರಯೋಜನಾಧಿಕಾರಿಗಳು, ನಗರಯೋಜನಾ ಶಾಖೆ, ಮೈಸೂರು ಮಹಾನಗರ ಪಾಲಿಕೆ, ಮೈಸೂರು ಇಲ್ಲಿಗೆ ಸಲ್ಲಿಸಬಹುದಾಗಿದೆ.
ಸಹಿ/– ಆಯುಕ್ತರು
ಮೈಸೂರು ಮಹಾನಗರ ಪಾಲಿಕೆ, ಮೈಸೂರು